

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಅಕ್ಟೋಬರ್ 31 ಮಂಗಳವಾರ 2023

ಸಂಪುಟ: 44 | ಸಂಚಿಕೆ: 195 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.co

₹4



ಚುನಾವಣಾ ಅಕ್ರಮ ಆರೋಪ: ಜೆಡಿಎಸ್ ಶಾಸಕ ರೇವಣ್ಣಗೆ ಮತ್ತೆ ಸಮನ್ಸ್



ಬೆಂಗಳೂರು: ಕಳೆದ ವಿಧಾನಸಭೆ ಚುನಾವಣೆಯಲ್ಲಿ ಹೊಳೆನರಸೀಪುರ ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ಸಾಧಿಸಿದ್ದ ಎಚ್.ಡಿ. ರೇವಣ್ಣ ಹಲವು ಅಕ್ರಮಗಳನ್ನು ನಡೆಸಿ ಆಯ್ಕೆಯಾಗಿದ್ದಾರೆ. ಹೀಗಾಗಿ ಅವರನ್ನು ಶಾಸಕ ಸ್ಥಾನದಿಂದ ಅನರ್ಹಗೊಳಿಸಬೇಕು ಎಂದು ಸಲ್ಲಿಸಿದ್ದ ಚುನಾವಣಾ ತಕರಾರು ಅರ್ಜಿಗೆ ಸಂಬಂಧಿಸಿದಂತೆ ಜೆಡಿಎಸ್ ಮುಖಂಡ ಎಚ್.ಡಿ. ರೇವಣ್ಣ ಅವರಿಗೆ ಮತ್ತೊಮ್ಮೆ ಸಮನ್ಸ್ ಜಾರಿಗೊಳಿಸಲು ಹೈಕೋರ್ಟ್ ಸೋಮವಾರ ಆದೇಶಿಸಿದೆ. ಈ ಹಿಂದೆ ವಿಚಾರಣೆ ನಡೆಸಿದ್ದ ವೇಳೆ ರೇವಣ್ಣ ಅವರಿಗೆ ವಿಧಾನಸಭೆಯ ಕಾರ್ಯದರ್ಶಿಗಳ ಮೂಲಕ ಸಮನ್ಸ್ ಜಾರಿ ಮಾಡುವಂತೆ ಹೈಕೋರ್ಟ್ ಆದೇಶಿಸಿತ್ತು. ಆದರೆ, ರೇವಣ್ಣ ಅವರಿಗೆ ಸಮನ್ಸ್ ತಲುಪಿರಲಿಲ್ಲ. ಮೇ ತಿಂಗಳಲ್ಲಿ ನಡೆದ ವಿಧಾನಸಭಾ ●6ನೇ ಪುಟಕ್ಕೆ

ಮಹಾರಾಷ್ಟ್ರ ಮಾದರಿ ರಾಜ್ಯದಲ್ಲೂ ಸರ್ಕಾರ ಪತನ

ಮಾಜಿ ಸಚಿವ ರಮೇಶ್ ಜಾರಕಿಹೊಳಿ 'ಮಹಾ ಬಾಂಬ್'



- ಕರ್ನಾಟಕದ ಏಕನಾಥ ಶಿಂಧೆ ಯಾರು? ಇದಕ್ಕೆ ಸದ್ಯಕ್ಕೆ ಮೌನ
- ಉಪಮುಖ್ಯಮಂತ್ರಿ ಸದ್ಯ ಮಾಜಿ ಆಗೋದು ಗ್ಯಾರಂಟಿ: ರಮೇಶ್
- ನಾವ್ಯಾರು ಈ ಸರ್ಕಾರ ಬೀಳಿಸುತ್ತಿಲ್ಲ; ಅದಾಗಿಯೇ ಬೀಳುತ್ತಿದೆ
- ಬೆಳಗಾವಿ ರಾಜಕೀಯವೇ ಇಂದಿನ ಸರ್ಕಾರ ಪತನಕ್ಕೆ ಕಾರಣವಂತೆ
- ಹೆಚ್‌ಡಿಕೆಯೊಂದಿಗೆ ನಾನು ಚೆನ್ನಾಗಿರುವುದನ್ನು ಡಿಕೆಶಿ ಸಹಿಸುತ್ತಿಲ್ಲ
- ಆಪರೇಷನ್ ಕಮಲ ಎಂದು ಹೇಳಿಕೊಂಡು ಬಿಜೆಪಿ ಹೆಸರು ಹಾಳು ಮಾಡಲು ಡಿಕೆಶಿ ನಾಟಕ ಮಂಡಳಿ ಯತ್ನ

ಕಾಂಗ್ರೆಸ್ ಕಾರ್ಯಕರ್ತರಿಂದ ಜಾರಕಿಹೊಳಿ ಮನೆಗೆ ಅಶ್ಲೀಲ ಪೋಸ್ಟರ್

"ಡಿ.ಕೆ.ಶಿವಕುಮಾರ್ ವಿರುದ್ಧ ಸೋಮವಾರ ಬೆಳಗ್ಗೆ ಸುದ್ದಿಗೋಷ್ಠಿ ನಡೆಸಿದ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರ ಮನೆಯ ಕಾಂಪೌಂಡ್ ಮತ್ತು ಗೋಡೆಗಳಿಗೆ ಅಶ್ಲೀಲ ಪದಗಳನ್ನೊಳಗೊಂಡ ಪೋಸ್ಟರ್‌ಗಳನ್ನು ಕಾಂಗ್ರೆಸ್ ಕಾರ್ಯಕರ್ತರು ಅಂಟಿಸುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು. ಸದಾಶಿವನಗರದಲ್ಲಿ ಡಿ.ಕೆ.ಶಿವಕುಮಾರ್ ಅವರ ಮನೆ ಹಿಂಭಾಗದಲ್ಲೇ ರಮೇಶ್ ಜಾರಕಿಹೊಳಿ ಮನೆ ಇದೆ.

ಬೆಂಗಳೂರು, ಅ.30 (ಕೆಎಂಶಿ)– ಮಹಾರಾಷ್ಟ್ರ ಮಾದರಿಯಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸಹೋದರ, ಮಾಜಿ ಸಚಿವ ಹಾಗೂ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ಇಂದಿಲ್ಲಿ ಬಾಂಬ್ ಸಿಡಿಸಿದ್ದಾರೆ.

ಕರ್ನಾಟಕದ ಏಕನಾಥ್ ಶಿಂಧೆ ಯಾರು ಎಂದು ಬಹಿರಂಗಪಡಿಸದಿದ್ದರೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಜಿ ಆಗುವುದಾಗಿ ಭವಿಷ್ಯ ನುಡಿದಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹಾಗೂ ಸತೀಶ್ ಜಾರಕಿಹೊಳಿ ನಿವಾಸದಲ್ಲಿ ಔತಣ ಕೂಟದ ಸಭೆಗಳನ್ನು ನಡೆಸಿದ ಬೆನ್ನಲ್ಲೇ ರಮೇಶ್ ಇಂತಹ ಹೇಳಿಕೆ ನೀಡಿರುವುದು ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಕೆರಳಿಸಿದೆ. ತುರ್ತು ಪತ್ರಿಕಾಗೋಷ್ಠಿ ನಡೆಸಿ ಸರ್ಕಾರ ಪತನದ ಮಾಹಿತಿ ನೀಡಿದ್ದಲ್ಲದೆ, ನಾವ್ಯಾರೂ ಈ ಸರ್ಕಾರವನ್ನು ಬೀಳಿಸುತ್ತಿಲ್ಲ. ಮಹಾರಾಷ್ಟ್ರದಲ್ಲಿ ಆದಂತೆ ಇಲ್ಲಿಯೂ ಆಗುತ್ತದೆ. ಬಿಜೆಪಿ ಆಪರೇಷನ್ ಕಮಲದಿಂದ ●9ನೇ ಪುಟಕ್ಕೆ

ನೂರು ಜನ ರಮೇಶ್ ಜಾರಕಿಹೊಳಿ ಬಂದರೂ ಡಿಕೆಶಿ ಮುಟ್ಟಲು ಆಗಲ್ಲ

ಮಂಡ್ಯ, ಅ.30(ಮೋಹನ್ ರಾಜ್)– ಮಾಜಿ ಸಚಿವ ರಮೇಶ್ ಜಾರಕಿಹೊಳಿ ಬೇಕಂತಲೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಟಾರ್ಗೆಟ್ ಮಾಡುತ್ತಿದ್ದು, ಡಿಕೆಶಿ ಜೈಲಿಗೆ ಹೋಗುತ್ತಾರೆ ಎಂದು ಹಸಿ ಹಸಿ ಸುಳ್ಳು ಹೇಳುತ್ತಾ ತಿರುಗುತ್ತಿದ್ದಾರೆ. ಕೆಲ ಪಟ್ಟಭದ್ರ ಹಿತಾಸಕ್ತಿಗಳು ಒಕ್ಕಲಿಗ ನಾಯಕತ್ವ ಕಸಿಯಲು ಪ್ರಯತ್ನಿಸುತ್ತಿವೆ. ರಮೇಶ್ ಜಾರಕಿಹೊಳಿ ಮತ್ತು ತಂಡ 7 ಜನ್ಮ ಎತ್ತಿ ಬಂದರೂ ಇದು ಸಾಧ್ಯವಿಲ್ಲ. ಅಧಿಕಾರ ಕಳೆದುಕೊಂಡ ರಮೇಶ್ ಜಾರಕಿಹೊಳಿ ಹುಚ್ಚನ ರೀತಿ ಆಡುತ್ತಿದ್ದು, ನೂರು ಜನ ರಮೇಶ್ ಜಾರಕಿಹೊಳಿ ಬಂದರೂ ಡಿಕೆಶಿ ಅವರನ್ನು ಏನೂ ಮಾಡಲು ಆಗಲ್ಲ ಎಂದು ಶಾಸಕ ಗಣಿಗ ರವಿಕುಮಾರ್ ಹೇಳಿದರು.




ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಪರೇಷನ್ ಕಮಲಕ್ಕೆ ಕೈ ಹಾಕಿಲ್ಲ ಎನ್ನುವುದಾದರೆ ಕೈ ಶಾಸಕರಿಗೆ ಆಫರ್ ಮಾಡಿದ್ದು ಯಾಕೆ? ಬೆಳಗಾವಿ ಏರ್‌ಪೋರ್ಟ್‌ನಲ್ಲಿ ಆ ಭಾಗದ ಶಾಸಕರಿಗೆ ಏನು ಆಫರ್ ಮಾಡಿದ್ದೀರಿ ಎಂದು ರಮೇಶ್ ಜಾರಕಿಹೊಳಿಗೆ ಗಣಿಗ ತಿರುಗೇಟು ನೀಡಿದರು. ನೀವು ಆಫರ್ ಮಾಡಿರುವ ದಾಖಲೆಗಳು ನನ್ನ ಬಳಿ ಇದೆ. ಸಮಯ ಬಂದಾಗ ಎಲ್ಲವನ್ನೂ ಬಹಿರಂಗ ಮಾಡುತ್ತೇವೆ. ರಮೇಶ್ ಜಾರಕಿಹೊಳಿ ಮಾತನಾಡಿರುವ ಆಷ್ಟೂ ಶಾಸಕರು ಮಾಧ್ಯಮದ ಮುಂದೆ ●9ನೇ ಪುಟಕ್ಕೆ

ಬೆಂಗಳೂರಿನ ಬಸ್ ಗ್ಯಾರೇಜ್‌ನಲ್ಲಿ ಭಾರೀ ಬೆಂಕಿ: 18 ಬಸ್‌ಗಳು ಸುಟ್ಟು ಕರಕಲು

ಬೆಂಗಳೂರು: ಬೆಂಗಳೂರಿನ ಬಸ್ ಗ್ಯಾರೇಜ್‌ನಲ್ಲಿ ಸಂಭವಿಸಿದ ಭೀಕರ ಅಗ್ನಿ ದುರಂತದಲ್ಲಿ 18 ಬಸ್‌ಗಳು ಸುಟ್ಟು ಕರಕಲಾಗಿವೆ. ಘಟನಾ ಸ್ಥಳಕ್ಕೆ ಡಿಸಿಎಂ ಡಿ.ಕೆ. ಶಿವಕುಮಾರ್ ಮತ್ತು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಬೆಂಗಳೂರಿನ ಹೊಸಕೆರೆಹಳ್ಳಿಯ ವೀರಭದ್ರ ನಗರದ ಸಮೀಪದಲ್ಲಿರುವ SV ಕೋಚ್ ಬಸ್ ಬಾಡಿಬಿಲ್ಡರ್ಸ್ ಮತ್ತು ಗ್ಯಾರೇಜ್‌ನಲ್ಲಿ ಇಂದು ಬೆಳಗ್ಗೆ ಭಾರಿ ಬೆಂಕಿ ಕಾಣಿಸಿಕೊಂಡು ನಿಂತಿದ್ದ 18 ಬಸ್‌ಗಳು ಸುಟ್ಟು ಕರಕಲಾಗಿವೆ.

ಪ್ರಾಥಮಿಕ ತನಿಖೆಯ ಪ್ರಕಾರ, ವೆಲ್ಡಿಂಗ್ ಯಂತ್ರದಿಂದ ಕಿಡಿ ಹಾರಿದ್ದು ಇದು ಬೆಂಕಿ ಅವಘಡಕ್ಕೆ ಕಾರಣವಾಯಿತು. ಬಳಿಕ ಒಂದರನಂತರ ಒಂದು ಬಸ್‌ಗೆ ಬೆಂಕಿ ವ್ಯಾಪಿಸಿದೆ ಎಂದು ನಾವು ಶಂಕಿಸಿದ್ದೇವೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಬೆಂಕಿಯನ್ನು ನಂದಿಸಲು ಹಲವಾರು ಅಗ್ನಿಶಾಮಕ ವಾಹನಗಳನ್ನು ನಿಯೋಜಿಸಲಾಗಿತ್ತು. ಸುಮಾರು 18 ಬಸ್‌ಗಳು ಸಂಪೂರ್ಣವಾಗಿ ಸುಟ್ಟುಹೋಗಿವೆ ಮತ್ತು ನಾಲ್ಕು ಭಾಗಶಃ ಹಾನಿಗೊಳಗಾಗಿವೆ. ಗ್ಯಾರೇಜ್‌ನಲ್ಲಿ 35 ಬಸ್‌ಗಳಿದ್ದವು. ಈ ಪೈಕಿ 20ಕ್ಕೂ ಹೆಚ್ಚು ಬಸ್‌ಗಳಿಗೆ ಬೆಂಕಿ ಹೊತ್ತಿಕೊಂಡಿದೆ. ●9ನೇ ಪುಟಕ್ಕೆ





ಮೇಕೆದಾಟು ವಿಚಾರದಲ್ಲಿ ರಾಜ್ಯದ ಜನತೆಗೆ ತಪ್ಪು ಮಾಹಿತಿ ನೀಡಬೇಡಿ...

● ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರ ಶೇಖಾವತ್ ತೀಕ್ಷ್ಣ ಪ್ರತಿಕ್ರಿಯೆ ● ನೆರೆರಾಜ್ಯಗಳು ಒಮ್ಮತಾಭಿಪ್ರಾಯಕ್ಕೆ ಬಾರದ ಕಾರಣ ಈ ಪ್ರಸ್ತಾಪ ವಿಳಂಬವಾಗಿದೆ ● ಕಳಸಾ ಬಂಡೂರಿ ಡಿಪಿಆರ್ ಅನುಮೋದನೆ ನೀಡಿದ್ದೇವೆ; ಕೇಂದ್ರ ಹಲವು ನೀರಾವರಿ ಯೋಜನೆಗೆ ಹಣ ಬಿಡುಗಡೆ ಆಗಿರುವುದು ನಿಮಗರಿವಿಲ್ಲವೇ?

ಬೆಂಗಳೂರು, ಅ.30(ಕೆಎಂಶಿ)–ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ತಪ್ಪು ಮಾಹಿತಿ ನೀಡುವುದನ್ನು ನಿಲ್ಲಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರಸಿಂಗ್ ಶೇಖಾವತ್ ಖಾರವಾಗಿ ತಿಳಿಸಿದ್ದಾರೆ.

ಕೇಂದ್ರ ರಾಜ್ಯಕ್ಕೆ ಮಲತಾಯಿ ಧೋರಣೆ ತೋರುತ್ತಿದೆ ಎಂದು ಮುಖ್ಯಮಂತ್ರಿ ಅವರು ಪ್ರತಿನಿತ್ಯ ಟ್ವೀಟ್ ಮಾಡುತ್ತಿರುವ ಬೆನ್ನಲ್ಲೇ, ಶೇಖಾವತ್ ಅವರು, ಕನ್ನಡ ಮತ್ತು ಇಂಗ್ಲೀಷ್‌ನಲ್ಲಿ ಪ್ರತ್ಯೇಕವಾಗಿ ಟ್ವೀಟ್ ಮಾಡಿ ತರಾಟೆಗೆ ತೆಗೆದುಕೊಂಡಿದ್ದಾರೆ. ಕೃಷ್ಣರಾಜ ಸಾಗರ ಅಣೆಕಟ್ಟೆಗೆ ಸಮಾನಾಂತರವಾಗಿ ನಿರ್ಮಾಣ ಮಾಡಲು ಉದ್ದೇಶಿಸಿರುವ ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ನಿಮಗೆ ವಿವರಣೆ ನೀಡುತ್ತಿರುವವರು ಸರಿಯಾಗಿ ಮಾಹಿತಿ ನೀಡುತ್ತಿಲ್ಲ. ಅವರ ಮಾತನ್ನೇ ಕೇಳಿ ನೀವು ಜನರಿಗೆ ಸುಳ್ಳು



ಸುದ್ದಿ ನೀಡಬಾರದು. ಇದು ಕಾಂಗ್ರೆಸ್ಸಿಗರಿಗೆ ಅಂಟಿದ ಚಟ ಎಂದು ನಮಗೆಲ್ಲರಿಗೂ ತಿಳಿದಿದೆ. ಆದರೆ ಒಬ್ಬ ಮುಖ್ಯಮಂತ್ರಿಯೇ ಖುದ್ದಾಗಿ ತಪ್ಪು ಮಾಹಿತಿಗಳನ್ನು ಬಿತ್ತಿ ಜನಮಾನಸವನ್ನು ಹಾಳುಗೆಡವಲು ಮುಂದಾಗುತ್ತಾರೆಂದು ನಾವು ಭಾವಿಸಿರಲಿಲ್ಲ ಎಂದು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

ಕೇಂದ್ರ ಸರ್ಕಾರದ ವಿರುದ್ಧ ಸತ್ಯದ ಗೋರಿ ಕಟ್ಟಿ ಸುಳ್ಳಿನ ವಿಜೃಂಭಣೆ ಮಾಡುವಾಗ ಕನಿಷ್ಠ ಆತ್ಮಸಾಕ್ಷಿಯನ್ನಾದರೂ ಪ್ರಶ್ನಿಸಿಕೊಳ್ಳಿ. ಇಲ್ಲವಾದರೆ ಸುಳ್ಳಿನ ಉಪಾಸನೆಯೇ ನಿಮ್ಮ ನಿತ್ಯಕರ್ಮವೆಂದು ಕರ್ನಾಟಕದ ಜನ ನಿಮ್ಮ ಬಗ್ಗೆ ಕನಿಕರ ಹಾಗೂ ತಿರಸ್ಕಾರವನ್ನು ತೋರಬಹುದು ಎಂದು ತಿಳಿಸಿದ್ದಾರೆ.



ಮೇಕೆದಾಟು ಯೋಜನೆಯ ಸ್ಥಿತಿ–ಗತಿ ಹಾಗೂ ವಾಸ್ತವಾಂಶ ಏನೆಂಬುದು ನಿಮಗೆ ಚೆನ್ನಾಗಿ ತಿಳಿದಿದೆ. ನಿಮಗೆ ಬ್ರೀಫಿಂಗ್ ತಂಡ ನೀಡಿದ ಅರ್ಧಂಬರ್ಧ ಮಾಹಿತಿ ಆಧರಿಸಿ ನೀವು ತಪ್ಪು ಮಾಹಿತಿಗಳ ಸರಣಿಯನ್ನೇ ಹರಿಬಿಟ್ಟಂತೆ ತೋರುತ್ತದೆ. ಹೀಗಾಗಿ ವಾಸ್ತವ ಏನೆಂಬುದನ್ನು ನಾವೇ ಹೇಳಬೇಕಾಗಿದೆ ಎಂದು ತಿರುಗೇಟು ನೀಡಿದ್ದಾರೆ. ಮೊದಲನೆಯದಾಗಿ ಸಿಡಬ್ಲ್ಯುಎಂಎಯ ಹಲವು ಸಭೆಗಳಲ್ಲಿ ಮೇಕೆದಾಟು ಯೋಜನೆಯ ಡಿಪಿಆರ್ ಕುರಿತು ಚರ್ಚೆಯನ್ನು ●6ನೇ ಪುಟಕ್ಕೆ

17 ಸರ್ಕಾರಿ ಅಧಿಕಾರಿಗಳ ಕಚೇರಿ, ಮನೆ ಮೇಲೆ ಲೋಕಾಯುಕ್ತ ದಾಳಿ; ಅಪಾರ ಪ್ರಮಾಣದ ನಗದು, ಚಿನ್ನ ವಶಕ್ಕೆ

ಬೆಂಗಳೂರು: ಸೋಮವಾರ ಬೆಳ್ಳಂಬೆಳಗ್ಗೆಯೇ ರಾಜ್ಯದ ವಿವಿಧ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ 17 ಸರ್ಕಾರಿ ಅಧಿಕಾರಿಗಳ ಕಚೇರಿ, ನಿವಾಸ ಸೇರಿದಂತೆ 70ಕ್ಕೂ ಹೆಚ್ಚು ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ದಾಳಿ ವೇಳೆ ಅಪಾರ ಪ್ರಮಾಣದ ನಗದು, ಚಿನ್ನ, ಸ್ಥಿರಾಸ್ತಿ, ಐಷಾರಾಮಿ ವಾಹನಗಳು, ಭೂಮಿ ಮೇಲಿನ ಹೂಡಿಕೆ, ಷೇರುಗಳು ಪತ್ತೆಯಾಗಿವೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.

ಬೆಂಗಳೂರು, ಮಂಡ್ಯ, ರಾಯಚೂರು, ಬೀದರ್, ಕಲಬುರಗಿ, ಚಿತ್ರದುರ್ಗ, ಬಳ್ಳಾರಿ, ತುಮಕೂರು, ಉಡುಪಿ, ಹಾಸನ, ಬೆಳಗಾವಿ, ದಾವಣಗೆರೆ ಮತ್ತು ಹಾವೇರಿ ಜಿಲ್ಲೆಗಳಲ್ಲಿ ದಾಳಿ ನಡೆಸಲಾಗಿದೆ. 17 ಮಂದಿ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಿದೆ, ಪರಿಶೀಲನೆ ಹಾಗೂ ತನಿಖೆ ಮುಂದುವರೆದಿದೆ ಎಂದು ಪೊಲೀಸ್ ಮಹಾನಿರೀಕ್ಷಕ (ಲೋಕಾಯುಕ್ತ) ಡಾ.ಎ. ಸುಬ್ರಹ್ಮಣ್ಯೇಶ್ವರ ಅವರು ಮಾಹಿತಿ ನೀಡಿದ್ದಾರೆ.



ಬೆಂಗಳೂರಿನ 11 ಕಡೆ ದಾಳಿ: ಬೆಂಗಳೂರಿನ 11 ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿದ್ದು, ಪರಿಶೀಲನೆ ನಡೆಸುತ್ತಿದೆ. ಬಿಬಿಎಂಪಿ ಹೆಗ್ಗನಹಳ್ಳಿ ವಾರ್ಡ್‌ನ ಆರ್.ಆರ್. ನಗರ ವಲಯಾಧಿಕಾರಿಗೆ ಸೇರಿದ ಕೆ.ಆರ್. ಪುರದಲ್ಲಿನ ಮನೆ ಸೇರಿದಂತೆ ಮೂರು ಕಡೆ ದಾಳಿ ಮಾಡಿ, ಶೋಧ ನಡೆಸಿದ್ದಾರೆ. ಈ ಹಿಂದೆ ಲಂಚ ಸ್ವೀಕರಿಸುತ್ತಿದ್ದ ವೇಳೆಯಲ್ಲಿ ಇವರು ಲೋಕಾಯುಕ್ತ ಬಲೆಗೆ ಬಿದ್ದಿದ್ದರು. ಅದರ ಮುಂದುವರಿದ ಭಾಗವಾಗಿ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ಮಾಡಿ, ಶೋಧ ●9ನೇ ಪುಟಕ್ಕೆ

ಇಬ್ಬರು ಇಂಜಿನಿಯರ್ ಫಾರ್ಮ್‌ಹೌಸ್; ಮನೆ ಮೇಲೆ ಲೋಕಾಯುಕ್ತ ದಾಳಿ

ಮಂಡ್ಯ: ಆದಾಯ ಮೀರಿ ಆಸ್ತಿಗಳಿಕೆ ಹಿನ್ನೆಲೆಯಲ್ಲಿ ಜಿಲ್ಲೆಯ ಎರಡು ಕಡೆ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ಮಾಡಿದ್ದು, ಇಂಜಿನಿಯರ್‌ಗಳ ಮನೆಗಳಲ್ಲಿ ದಾಖಲಾತಿ ಪರಿಶೀಲನೆ ಮಾಡಿದ್ದಾರೆ. ಮಳವಳ್ಳಿ ಮತ್ತು ಮದ್ದೂರು ತಾಲೂಕಿನಲ್ಲಿ ಸೋಮವಾರ ಲೋಕಾಯುಕ್ತ ಅಧಿಕಾರಿಗಳು ಬೆಳ್ಳಂಬೆಳಗ್ಗೆ ದಾಳಿ ಮಾಡಿದ್ದು, ಮೈಸೂರಿನ ಕೊಳಗೇರಿ ಅಭಿವೃದ್ಧಿ ಮಂಡಳಿ ●9ನೇ ಪುಟಕ್ಕೆ

ಪಶು ಆಹಾರ ಸೇವಿಸಿ ನಾಲ್ಕು ಹಸುಗಳು ಸಾವು

■ ವಿಷಪೂರಿತ ಪಶು ಆಹಾರ ಶಂಕೆ ■ ಪ್ರಯೋಗಾಲಯದ ವರದಿ ನಂತರ ಖಚಿತ



ಹುಣಸೂರು, ಅ.30–ಪಶು ಆಹಾರ ಸೇವಿಸಿದ ಕೆಲವೇ ನಿಮಿಷಗಳಲ್ಲಿ ನಾಲ್ಕು ಮಿಶ್ರತಳಿ ಹಸುಗಳು ಮೃತಪಟ್ಟಿರುವ ಘಟನೆ ಹುಣಸೂರು ತಾಲೂಕು ಕೃಷ್ಣಾಪುರ ಗ್ರಾಮದಲ್ಲಿ ಸೋಮವಾರ ಬೆಳಗ್ಗೆ ಸಂಭವಿಸಿದ್ದು, ವಿಷಪೂರಿತ ಪಶು ಆಹಾರ ಸೇವನೆಯೇ ಹಸುಗಳ ಸಾವಿಗೆ ಕಾರಣ ಎಂದು ಶಂಕಿಸಲಾಗಿದೆ.

ಗ್ರಾಮದ ಜಯಕೃಷ್ಣ, ಸುಮಾರು 3 ಲಕ್ಷ ರೂ. ಮೌಲ್ಯದ ನಾಲ್ಕು ಹಸುಗಳನ್ನು ಕಳೆದುಕೊಂಡವರಾಗಿದ್ದು, ಮೃತಪಟ್ಟ 4 ಹಸುಗಳು ಆರೋಗ್ಯವಾಗೇ ಇದ್ದವು. ಅವುಗಳಲ್ಲಿ ತೆನೆ ಹಸು ಕೂಡ ಇತ್ತು. ಜಯಕೃಷ್ಣ ಅವರು ಇಲವಾಲ ಹೋಬಳಿ ಯಾಚೇಗೌಡನ ಹಳ್ಳಿ ಗ್ರಾಮದ ಹೆಚ್‌ಎಸ್‌ಆರ್ ಗಣೇಶ್ ಗೋಲ್ಡ್ ಕಂಪನಿ ಏಜೆನ್ಸಿಯಿಂದ ಭಾನುವಾರ ರಾತ್ರಿ ತಂದಿದ್ದ ಪಶು ಆಹಾರವನ್ನು ಇಂದು ಬೆಳಗ್ಗೆ 6 ಗಂಟೆ ಸುಮಾರಿನಲ್ಲಿ ಹಾಲು ಕರೆಯುವಾಗ ಹಸುವೊಂದಕ್ಕೆ ನೀಡಿದ್ದರು. ●9ನೇ ಪುಟಕ್ಕೆ

"ಪಶು ಆಹಾರ ಸೇವನೆ ಬಳಿಕ ಹಸುಗಳು ಮೃತಪಟ್ಟಿವೆ ಎಂದು ಅವುಗಳ ಮಾಲೀಕರು ತಿಳಿಸಿದ್ದಾರೆ. ಪಶು ಆಹಾರ ಮಾರಾಟ ಮಾಡಿರುವ ಅಂಗಡಿಯವರು ಪಶು ಆಹಾರವನ್ನು ಮಿಶ್ರಣ ಮಾಡಿ ಕೊಟ್ಟಿದ್ದರು ಎಂದು ತಿಳಿಸಿದ್ದಾರೆ. ಮರಣೋತ್ತರ ಪರೀಕ್ಷೆ ವೇಳೆ ಈ ಹಸುಗಳು ವಿಷಪೂರಿತ ಆಹಾರ ಸೇವನೆಯಿಂದ ಸತ್ತಿರಬಹುದು ಎಂದು ತಿಳಿದುಬಂದಿದೆ. ಹೀಗಾಗಿ ಹಸುಗಳ ಕೆಲವು ಭಾಗಗಳನ್ನು ಲ್ಯಾಬ್‌ಗೆ ರವಾನಿಸಲಾಗಿದೆ. ಲ್ಯಾಬ್‌ನ ವರದಿ ಬಂದ ನಂತರ ಹಸುಗಳ ಸಾವು ಹೇಗೆ ಸಂಭವಿಸಿದೆ ಎಂಬುದು ಖಚಿತವಾಗಿ ತಿಳಿಯಲಿದೆ. ಅದೇ ರೀತಿ ಪಶು ಆಹಾರವನ್ನು ಕೂಡ ಲ್ಯಾಬ್‌ಗೆ ಕಳುಹಿಸಲಾಗಿದ್ದು, ಈ ಪಶು ಆಹಾರವು ಹಸುಗಳು ಸೇವಿಸಲು ಯೋಗ್ಯವಾಗಿದೆಯೇ ಎಂಬುದರ ಬಗ್ಗೆ ಕೂಡ ಲ್ಯಾಬ್‌ನ ವರದಿಯ ನಂತರ ತಿಳಿಯಲಿದೆ.



–ಡಾ.ರಾಜಶೇಖರಪ್ಪ, ಗಾವಡಗೆರೆ ಪಶು ವೈದ್ಯಾಧಿಕಾರಿ.

ಮೈಸೂರು ಮಿತ್ರ

ಮಂಗಳವಾರ 31 ಅಕ್ಟೋಬರ್ 2023

ಅಪರ ಪೊಲೀಸ್ ಮಹಾನಿರ್ದೇಶಕ ಉಮೇಶ್‌ಕುಮಾರ್‌ರಿಂದ

ಮೈಸೂರಲ್ಲಿ ದಕ್ಷಿಣ ವಲಯದ ಅಪರಾಧ ಪ್ರಕರಣಗಳ ಸ್ಥಿತಿಗತಿ ಪರಿಶೀಲನೆ

ಮೈಸೂರು ನಗರ, ಜಿಲ್ಲೆ, ದಕ್ಷಿಣ ವಲಯದ ಜಿಲ್ಲೆಗಳ ಪೊಲೀಸ್ ಅಧಿಕಾರಿಗಳು ಭಾಗಿ

ಮೈಸೂರು, ಅ. 30(ಆರ್‌ಕೆ)– ರಾಜ್ಯ ಅಪರ ಪೊಲೀಸ್ ಮಹಾನಿರ್ದೇಶಕ (ಎಡಿಜಿಪಿ) ಉಮೇಶ್‌ಕುಮಾರ್ ಮೈಸೂರಲ್ಲಿ ಇಂದು ಮೈಸೂರು ನಗರ, ಜಿಲ್ಲೆ ಹಾಗೂ ದಕ್ಷಿಣ ವಲಯ ಜಿಲ್ಲೆಗಳ ಪೊಲೀಸ್ ಅಧಿಕಾರಿಗಳೊಂದಿಗೆ ಅಪರಾಧ ಪ್ರಕರಣಗಳ ಸ್ಥಿತಿಗತಿ ಸಂಬಂಧ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಎಸ್ಪಿ ಕಚೇರಿಯಲ್ಲಿ ಆಯೋಜಿಸಿದ್ದ ಸಭೆಯಲ್ಲಿ ದಕ್ಷಿಣ ವಲಯದ ಡಿಐಜಿಪಿ ಡಾ. ಬೋರಲಿಂಗಯ್ಯ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಉಪಸ್ಥಿತರಿದ್ದರು. ಮೈಸೂರು ನಗರ ಹಾಗೂ ಜಿಲ್ಲಾ ಪೊಲೀಸ್ ವ್ಯಾಪ್ತಿಗಳ ಠಾಣೆಗಳಲ್ಲಿ ದಾಖಲಾಗಿರುವ ಅಪರಾಧ ಪ್ರಕರಣಗಳ ತನಿಖೆ ಪ್ರಗತಿ, ಪತ್ತೆ ಪ್ರಮಾಣ, ಪತ್ತೆಯಾಗದೇ ಬಾಕಿ ಉಳಿದಿರುವ ಪ್ರಕರಣಗಳ ಕುರಿತಂತೆ ಪರಿಶೀಲನೆ ನಡೆಸಿದ ಅವರು, ತನಿಖಾ ತಂಡಗಳು ಬಳಸಿಕೊಳ್ಳುತ್ತಿರುವ ತಂತ್ರಜ್ಞಾನಗಳ ಬಗ್ಗೆಯೂ ಮಾಹಿತಿ ಪಡೆದುಕೊಂಡರು.

ಕೊಲೆ, ಸುಲಿಗೆ, ದರೋಡೆ, ವಂಚನೆ, ಅಪಹರಣ, ಮನೆ ಕಳವು, ಚಿನ್ನದ ಸರ ಕಳವುಗಳಂತಹ ಅಪರಾಧಗಳು ನಡೆಯದಂತೆ ಎಚ್ಚರ ವಹಿಸುವುದು, ಮುಂಜಾಗ್ರತಾ ಕ್ರಮಗಳು, ಅಪರಾಧ ಪ್ರಕರಣಗಳು ಸಂಭವಿಸಿದಾಗ ತಕ್ಷಣ ಘಟನಾ ಸ್ಥಳಕ್ಕೆ ಧಾವಿಸಿ ಸಾಕ್ಷ್ಯ ಸಂಗ್ರಹಿಸುವ ವಿಧಾನ, ಆರೋಪಿಗಳನ್ನು ಪತ್ತೆ ಮಾಡಿ ಬಂಧಿಸಿದ ಬಳಿಕ ತನಿಖಾಧಿಕಾರಿಗಳು ಸಂಗ್ರಹಿಸಿದ ಪೂರಕ ಸಾಕ್ಷ್ಯಾಧಾರಗಳೊಂದಿಗೆ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸುವ ಮೂಲಕ ಅತೀ ಹೆಚ್ಚು ಪ್ರಕರಣಗಳಲ್ಲಿ ಶಿಕ್ಷೆಯಾಗುವಂತೆ ಮಾಡುವ ಬಗ್ಗೆಯೂ ಅಧೀನಾಧಿಕಾರಿಗಳಿಗೆ ಸಲಹೆ–ಸೂಚನೆಗಳನ್ನು ನೀಡಿದರು.

ಅತೀ ಹೆಚ್ಚು ಅಪರಾಧ ಪ್ರಕರಣಗಳು ದಾಖಲಾಗುವ ಠಾಣೆಗಳಲ್ಲಿ ಸಿಬ್ಬಂದಿಗಳನ್ನು ಎಚ್ಚರದಿಂದಿರುವಂತೆ ಪ್ರೇರೇಪಿಸುವ ಜೊತೆಗೆ ಮೇಲಧಿಕಾರಿಗಳು ಅದನ್ನು ಮೇಲ್ವಿಚಾರಣೆ ನಡೆಸಿ ಅಪರಾಧ ಕೃತ್ಯಗಳಾಗದಂತೆ ನೋಡಿಕೊಂಡು ನಾಗರಿಕರಿಗೆ ಸುರಕ್ಷತೆ ಬಗ್ಗೆ ವಿಶ್ವಾಸ ಮೂಡಿಸುವಂತೆಯೂ ಎಡಿಜಿಪಿ ಸೂಚನೆ ನೀಡಿದ್ದಾರೆ.

ಮೈಸೂರು ಜಿಲ್ಲೆಯಾದ್ಯಂತ ಎಲ್ಲಾ ಉಪ ವಿಭಾಗಗಳ ಹಾಗೂ ಸರ್ಕಲ್ ವ್ಯಾಪ್ತಿಯ ಠಾಣಾಧಿಕಾರಿಗಳು ಹಾಗೂ ಕ್ರೈಂ ತಂಡದ ಕಾರ್ಯವೈಖರಿಯನ್ನು ಪುನಶ್ಚೇತನಗೊಳಿಸಿ ತನಿಖಾ ಪ್ರಕ್ರಿಯೆಯನ್ನು ಚುರುಕುಗೊಳಿಸುವ ಮೂಲಕ ಅಪರಾಧ ತಡೆ ಮತ್ತು ಪತ್ತೆ ಕಾರ್ಯವನ್ನು ಬಲಿಷ್ಠಗೊಳಿಸಬೇಕೆಂದೂ ತಿಳಿಸಿದರು.

ದಕ್ಷಿಣ ವಲಯದ ವ್ಯಾಪ್ತಿಯ ಚಾಮರಾಜನಗರ, ಕೊಡಗು, ಹಾಸನ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಸಂಭವಿಸಿರುವ ಅಪರಾಧಗಳ ಪತ್ತೆ ಪ್ರಗತಿ, ರಾಷ್ಟ್ರೀಯ, ರಾಜ್ಯ ಹೆದ್ದಾರಿಗಳ ದರೋಡೆ, ಸುಲಿಗೆ ಪ್ರಕರಣಗಳ ನಿಗ್ರಹಕ್ಕೆ ಹೈವೇ ಪೆಟ್ರೋಲ್ ವಾಹನಗಳು, ಸಿಬ್ಬಂದಿ ಕೈಗೊಂಡಿರುವ ಕ್ರಮಗಳು, ಸಿಸಿ ಕ್ಯಾಮರಾ ಫುಟೇಜ್‌ಗಳಿಂದ ತನಿಖೆಗೆ ನೆರವಾಗಿರುವ ನಿದರ್ಶನಗಳ ಕುರಿತಂತೆಯೂ ಅವರು ಸುದೀರ್ಘವಾಗಿ ಚರ್ಚಿಸಿ ವಿವರ ಪಡೆದುಕೊಂಡರು. ಕಾನೂನು–ಸುವ್ಯವಸ್ಥೆಗೆ ಭಂಗ ಉಂಟಾಗದಂತೆ ಶಾಂತಿ ಕಾಪಾಡುವ ಜೊತೆಗೆ ಅಪರಾಧಗಳೂ ನಡೆಯದಂತೆ ನೋಡಿಕೊಂಡು ಪ್ರಕರಣಗಳನ್ನು ಪತ್ತೆ ಮಾಡುವತ್ತ ಆದ್ಯತೆ ನೀಡಿದಲ್ಲಿ ನಾಗರಿಕರು ಆತಂಕಕ್ಕೊಳಗಾಗದೇ ವಿಶ್ವಾಸದಿಂದಿರಲು ಸಾಧ್ಯ, ಹಾಗೂ ಇಲಾಖೆಗೂ ಒಳ್ಳೆ ಹೆಸರು ಬರುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ಮೈಸೂರು ನಗರ ಡಿಸಿಪಿಗಳಾದ ಎಂ.ಮುತ್ತುರಾಜ್, ಎಸ್.ಜಾಹ್ನವಿ, ಎಸ್ಪಿಗಳು, ಎಸ್ಪಿ ಸೀಮಾ ಲಾಟ್ಕರ್, ಎಎಸ್ಪಿ ನಂದಿನಿ, ಡಿವೈಎಸ್ಪಿಗಳು, ಚಾಮರಾಜನಗರ, ಕೊಡಗು, ಹಾಸನ ಮತ್ತು ಮಂಡ್ಯ ಜಿಲ್ಲಾ ಎಸ್ಪಿ, ಎಎಸ್ಪಿ ಹಾಗೂ ಡಿವೈಎಸ್ಪಿಗಳು ಪರಿಶೀಲನಾ ಸಭೆಯಲ್ಲಿ ಹಾಜರಿದ್ದರು.

ಇಂದು ರಾತ್ರಿ ಮೈಸೂರಲ್ಲೇ ವಾಸ್ತವ್ಯ ಹೂಡಿರುವ ಉಮೇಶ್‌ಕುಮಾರ್, ನಾಳೆ (ಅ.31) ಬೆಳಗ್ಗೆ ಬೆಂಗಳೂರಿಗೆ ತೆರಳುವರು ಎಂದು ಪೊಲೀಸ್ ಮೂಲಗಳು ತಿಳಿಸಿವೆ.



ಮೈಸೂರಿನ ಎಸ್ಪಿ ಕಚೇರಿ ಸಭಾಂಗಣದಲ್ಲಿ ಅಪರ ಪೊಲೀಸ್ ಮಹಾನಿರ್ದೇಶಕ ಉಮೇಶ್‌ಕುಮಾರ್ ಸೋಮವಾರ ಅಪರಾಧ ಪ್ರಕರಣಗಳ ಸ್ಥಿತಿಗತಿ ಪರಿಶೀಲನಾ ಸಭೆ ನಡೆಸಿದರು. ದಕ್ಷಿಣ ವಲಯ ಡಿಐಜಿಪಿ ಡಾ.ಬೋರಲಿಂಗಯ್ಯ ಹಾಗೂ ಮೈಸೂರು ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಇದ್ದಾರೆ.

> “ಕೇರಳ ರಾಜ್ಯದ ಕ್ರೈಸ್ತ ಸಮುದಾಯದ ಸಮಾವೇಶದಲ್ಲಿ ಸಂಭವಿಸಿದ ಸರಣಿ ಸ್ಫೋಟದಲ್ಲಿ ಮೂವರು ಸಾವನ್ನಪ್ಪಿರುವ ಪ್ರಕರಣದ ಹಿನ್ನೆಲೆಯಲ್ಲಿ ಗಡಿ ಜಿಲ್ಲೆಗಳೂ ಸೇರಿದಂತೆ ರಾಜ್ಯಾದ್ಯಂತ ಪೊಲೀಸ್ ಇಲಾಖೆ ಕಟ್ಟೆಚ್ಚರ ವಹಿಸುತ್ತಿದೆ. ದಕ್ಷಿಣ ವಲಯ ವ್ಯಾಪ್ತಿಯಲ್ಲೂ ಮುಂಜಾಗ್ರತಾ ಕ್ರಮ ವಹಿಸುವುದು ಮುಖ್ಯವಾಗಿದ್ದು, ಯಾವುದೇ ಅನುಮಾನಾಸ್ಪದ ವ್ಯಕ್ತಿಗಳು, ವಾಹನಗಳು ಕಂಡುಬಂದಲ್ಲಿ ವಿಚಾರಣೆ ನಡೆಸುವುದು ಹಾಗೂ ಕಟ್ಟೆಚ್ಚರ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.
> –ಉಮೇಶ್‌ಕುಮಾರ್, ಎಡಿಜಿಪಿ

ನಾಳೆ ಮೈಸೂರಲ್ಲಿ ಕನ್ನಡ ರಾಜ್ಯೋತ್ಸವ: ಪೊಲೀಸರ ಪಥಸಂಚಲನ ತಾಲೀಮು



ಮೈಸೂರು,ಅ.30(ಆರ್‌ಕೆ)– ಮೈಸೂರಿನ ಓವೆಲ್ ಮೈದಾನದಲ್ಲಿ ನವಂಬರ್ 1ರಂದು ನಡೆಯಲಿರುವ ಕನ್ನಡ ರಾಜ್ಯೋತ್ಸವದ ಅಂಗವಾಗಿ ಇಂದು ಪೊಲೀಸರು ಪಥಸಂಚಲನ ತಾಲೀಮು ನಡೆಸಿದರು.

ಬೆಳಗ್ಗೆ 7.30ರಿಂದ 9 ಗಂಟೆವರೆಗೆ ನಡೆದ ಪಥಸಂಚಲನ ಕಾರ್ಯಕ್ರಮದಲ್ಲಿ ನಗರ ಸಶಸ್ತ್ರ ಮೀಸಲು ಪಡೆ (ಸಿಎಆರ್) ಡಿಸಿಪಿ ಮಾರುತಿ ಪಾಲ್ಗೊಂಡು ವಂದನೆ ಸ್ವೀಕರಿಸಿದರು. ಪರೇಡ್ ಕಮಾಂಡರ್ ಶರಣಪ್ಪ ಸಾತನೂರ ಮುಂದಾಳತ್ವದಲ್ಲಿ ನಡೆದ ಪಥಸಂಚಲನದ ತಾಲೀಮಿನಲ್ಲಿ ಸಿಟಿ ಸಿವಿಲ್ ಪೊಲೀಸ್, ಅಶ್ವಾರೋಹಿ ದಳ, ಕೆಎಸ್‌ಆರ್‌ಪಿ, ಸಿಎಆರ್, ಡಿಎಆರ್, ಗೃಹ ರಕ್ಷಕ ದಳ, ಎನ್‌ಸಿಸಿ, ಸೇವಾ ದಳದ ಬಾಲಕ–ಬಾಲಕಿಯರ ತಂಡ, ಪೊಲೀಸ್ ಬ್ಯಾಂಡ್, ಪೊಲೀಸ್ ಪಬ್ಲಿಕ್ ಶಾಲೆ, ನವೋದಯ ಶಾಲೆ ವಿದ್ಯಾರ್ಥಿಗಳ ತಂಡಗಳು ಪಾಲ್ಗೊಂಡಿದ್ದವು.

ಅರಮನೆ ಭದ್ರತಾ ಪಡೆಯ ಎಸಿಪಿ ಚಂದ್ರಶೇಖರ್, ಮೀಸಲು ಪೊಲೀಸ್ ಇನ್ಸ್‌ಪೆಕ್ಟರ್ ಅಶೋಕ್‌ಕುಮಾರ್, ಆನಂದ, ಸೋಮಣ್ಣ, ಶ್ರೀನಿವಾಸ ಸೇರಿದಂತೆ ಇತರ ಪೊಲೀಸ್ ಅಧಿಕಾರಿಗಳು ಪಾಲ್ಗೊಂಡು ಆಕರ್ಷಕ ಪಥಸಂಚಲನದ ತಾಲೀಮು ನಡೆಸಿದರು.

ನಾಳೆ (ಅ.31)ಯೂ ಮತ್ತೊಮ್ಮೆ ಪರೇಡ್ ತಾಲೀಮು ನಡೆಸಲಿರುವ ಪೊಲೀಸ್ ತುಕಡಿಗಳು, ನ.1ರಂದು ಜಿಲ್ಲಾಡಳಿತದಿಂದ ನಡೆಯಲಿರುವ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪಥಸಂಚಲನ ನಡೆಸಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿರುವ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಅವರಿಗೆ ಪರೇಡ್ ಗೌರವ ವಂದನೆ ಸಲ್ಲಿಸಲಾಗುವುದು.

ಶಾಸಕರುಗಳಾದ ಕೆ. ಹರೀಶ್‌ಗೌಡ, ತನ್ವೀರ್ ಸೇಠ್, ಶ್ರೀವತ್ಸ, ಜಿ.ಟಿ. ದೇವೇಗೌಡ, ಮೇಯರ್ ಶಿವಕುಮಾರ್, ಉಪ ಮೇಯರ್ ಡಾ.ಆರ್.ರೂಪಾ, ವಿಧಾನ ಪರಿಷತ್ ಸದಸ್ಯರು, ಜಿಲ್ಲಾಧಿಕಾರಿ, ನಗರ ಪೊಲೀಸ್ ಆಯುಕ್ತ, ಎಸ್ಪಿ ಸೀಮಾ ಲಾಟ್ಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ, ಪಾಲಿಕೆ ಆಯುಕ್ತ ಅಸಾದ್ ಉರ್ ರಹಮಾನ್ ಶರೀಫ್ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಶಾಲಾ ಮಕ್ಕಳಿಂದ ಕನ್ನಡ ಭಾಷೆ, ಸಂಸ್ಕೃತಿ ಬಿಂಬಿಸುವ ನೃತ್ಯ ಪ್ರದರ್ಶನ ನಡೆಯಲಿದ್ದು, ಇದೇ ಸಂದರ್ಭದಲ್ಲಿ ಸಾಧಕರಿಗೆ ಕನ್ನಡ ರಾಜ್ಯೋತ್ಸವ ಸನ್ಮಾನ ಮಾಡಲಾಗುವುದು.

ಮನೆ ವಿತರಿಸಿ ಮೂರು ದಶಕವಾದರೂ ಹಕ್ಕುಪತ್ರ ಕೊಟ್ಟಿಲ್ಲ ನಿವಾಸಿಗಳಿಂದ ಸಿಎಂಗೆ ದೂರು

ಮೈಸೂರು, ಅ. 30– ನಗರಪಾಲಿಕೆಯಿಂದ ಮನೆ ನಿರ್ಮಿಸಿ, ವಿತರಣೆ ಮಾಡಿ ಮೂರು ದಶಕವಾದರೂ ಹಕ್ಕುಪತ್ರ ನೀಡಿಲ್ಲ ಎಂದು ನಿವಾಸಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ದೂರು ಸಲ್ಲಿಸಿದ್ದಾರೆ. 1994–95ನೇ ಸಾಲಿನಲ್ಲಿ ಐಎಎಸ್ ಅಧಿಕಾರಿ ಕೆ.ಶಿವರಾಂ ನಗರಪಾಲಿಕೆ ಆಯುಕ್ತರಾಗಿದ್ದ ವೇಳೆ ಕುಕ್ಕರಹಳ್ಳಿಯಲ್ಲಿ 13 ದಲಿತ ಕುಟುಂಬಗಳಿಗೆ ಮನೆ ನಿರ್ಮಿಸಿ, ವಿತರಣೆ ಮಾಡಲಾಗಿತ್ತು. ಆದರೆ, ಅವರಿಗೆ ಹಕ್ಕುಪತ್ರವಂತೂ ನೀಡಿಲ್ಲ. ಈ ಸಂಬಂಧ ನಿವಾಸಿಗಳು ಮಾನವ ಹಕ್ಕುಗಳ ಆಯೋಗ, ಲೋಕಾಯುಕ್ತ ಹಾಗೂ ಜನತಾ ದರ್ಶನದಲ್ಲಿ ಮುಖ್ಯಮಂತ್ರಿಗಳಿಗೆ ದೂರು ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. 2022ರಲ್ಲಿ ಈ ಮನೆಗಳಿಗೆ ಹಕ್ಕುಪತ್ರ ನೀಡಲು ನಗರಪಾಲಿಕೆಯು ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನಿಸಿತ್ತು. ನಂತರ ಅದು ಅಷ್ಟಕ್ಕೆ ಸ್ಥಗಿತಗೊಂಡಿದೆ ಎಂದಿರುವ ನಿವಾಸಿಗಳು, ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ತಮಗೆ ಹಕ್ಕುಪತ್ರ ನೀಡಬೇಕೆಂದು ಮುಖ್ಯಮಂತ್ರಿಗಳಿಗೆ ನೀಡಿರುವ ದೂರಿನಲ್ಲಿ ಕೋರಿದ್ದಾರೆ.

ರಾಜ್ಯೋತ್ಸವ: ಸರ್ಕಾರಿ ನೌಕರರ ಹಾಜರಾತಿ ಕಡ್ಡಾಯ

ಮೈಸೂರು,ಅ.30–ಜಿಲ್ಲಾಡಳಿತದ ವತಿಯಿಂದ ನ.1ರಂದು ಓವೆಲ್ ಮೈದಾನದಲ್ಲಿ 68ನೇ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ಹಮ್ಮಿಕೊಂಡಿದ್ದು, ಬೆಳಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಿ, ಭುವನೇಶ್ವರಿ ಪುತ್ಥಳಿಗೆ ಪುಷ್ಪಾರ್ಚನೆ ಹಾಗೂ ರಾಜ್ಯೋತ್ಸವ ಸಂದೇಶ ನೀಡುವರು. ಸದರಿ ಕಾರ್ಯಕ್ರಮದಲ್ಲಿ ಎಲ್ಲಾ ಸರ್ಕಾರಿ ನೌಕರರು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಹಾಜರಾಗುವಂತೆ ಜಿಲ್ಲಾಧಿಕಾರಿ ಆದೇಶಿಸಿದ್ದಾರೆ.

ಅನಿತಾ ಹಾಲಮ್ಮಗೆ ಪಿಹೆಚ್.ಡಿ



ಮೈಸೂರು, ಅ. 30–ಡಾ. ಬಿ.ಹೆಚ್. ಸುರೇಶ್ ಅವರ ಮಾರ್ಗದರ್ಶನದಲ್ಲಿ ಅನಿತಾ ಎನ್. ಹಾಲಮ್ಮ ಅವರು ವಾಣಿಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾ ಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಕೆಎಸ್‌ಒಯು ನೇಮಕಾತಿ ಪ್ರಕ್ರಿಯೆಗೆ ತಾತ್ಕಾಲಿಕ ತಡೆ

ಮೈಸೂರು: ಮೀಸಲಾತಿ ನಿಯಮ ಉಲ್ಲಂಘನೆ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಬೋಧಕ, ಬೋಧಕೇತರ ಹುದ್ದೆಗಳ ನೇರ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯುವಂತೆ ಉನ್ನತ ಶಿಕ್ಷಣ ಇಲಾಖೆ ಕಾರ್ಯದರ್ಶಿ ಶೀತಲ್ ಎಂ.ಹಿರೇಮಠ ತಾಕೀತು ಮಾಡಿದ್ದಾರೆ.

7 ಪ್ರಾಧ್ಯಾಪಕರು, 25 ಸಹ ಪ್ರಾಧ್ಯಾಪಕರು ಸೇರಿದಂತೆ 32 ಬೋಧಕರು, 32 ಬೋಧಕೇತರ ಹುದ್ದೆಗಳ ಭರ್ತಿಗೆ ವಿವಿ ಕ್ರಮ ವಹಿಸಿತ್ತು. ಆದರೆ, ಮೀಸಲಾತಿ ಉಲ್ಲಂಘನೆಯಾಗಿರುವ ಕುರಿತು ವಿಧಾನಮಂಡಲದ ಅನುಸೂಚಿತ ಜಾತಿ, ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ದೂರು ಬಂದಿದೆ. ನೇಮಕಾತಿಗೆ ಸಂಬಂಧಿಸಿದ ಮೀಸಲಾತಿ, ರೋಸ್ಟರ್ ಅನ್ನು ನಿಯಮಾನುಸಾರ ಗುರುತಿಸಿರುವ ಕುರಿತು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ಕಲ್ಯಾಣ ವರ್ಗಗಳ ಇಲಾಖೆ, ಸಿಬ್ಬಂದಿ ಆಡಳಿತ ಸುಧಾರಣೆ (ಹೈ.ಕ.ಮೀಸಲಾತಿ) ಇಲಾಖೆಗಳಿಂದ ಅಭಿಪ್ರಾಯ ಪಡೆದು ಸಹಮತ ಪಡೆದುಕೊಳ್ಳಬೇಕು. ಈ ಇಲಾಖೆಗಳು ಪರಿಶೀಲನೆ ನಡೆಸಿ ನಿಯಮಬದ್ಧವಾಗಿದೆ ಎಂದು ಅನುಮೋದನೆ ನೀಡುವವರೆಗೂ ತಾತ್ಕಾಲಿಕ, ಕಾಯಂ ಹುದ್ದೆಗಳ ನೇಮಕಾತಿಯನ್ನು ಕೂಡಲೇ ತಡೆಹಿಡಿಯಬೇಕು ಎಂದು ಪತ್ರದಲ್ಲಿ ಸೂಚಿಸಿದ್ದಾರೆ.

ನ.5, ಆರ್.ಆರ್.ನಗರದಲ್ಲಿ ಉಚಿತ ರೇಬಿಸ್ ಲಸಿಕೆ ಶಿಬಿರ

ಮೈಸೂರು, ಅ. 30– ಮೈಸೂರಿನ ಡಾಗ್ಸ್ ಪ್ರೊಟೆಕ್ಷನ್ ಟ್ರಸ್ಟ್ ವತಿಯಿಂದ ನವೆಂಬರ್ 5ರಂದು ಭಾನುವಾರ ನಗರದ ನಂದಿ ಪಾರ್ಕ್, ಬಿಇಎಂಎಲ್ ಲೇಔಟ್ ಎರಡನೇ ಹಂತ, ನಂದಿ ವೃತ್ತ, ರಾಜರಾಜೇಶ್ವರಿನಗರ ಇಲ್ಲಿ ನಾಯಿ ಮತ್ತು ಬೆಕ್ಕುಗಳಿಗೆ ಉಚಿತ ರೇಬಿಸ್ ಲಸಿಕಾ ಶಿಬಿರ ಆಯೋಜಿಸಲಾಗಿದೆ. ಮೈಸೂರಿನ ದಟ್ಟಗಳ್ಳಿ ಕಾರ್ಪೊರೇಟರ್ ಎಂ.ಲಕ್ಷ್ಮಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಈ ಶಿಬಿರವು ಬೆಳಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ 91080 21554/ 93421 46455 ಸಂಪರ್ಕಿಸಬಹುದು.

ಶೂ ವರ್ಲ್ಡ್‌ನಲ್ಲಿ ದೀಪಾವಳಿ ಪ್ರಯುಕ್ತ ಭಾರಿ ರಿಯಾಯಿತಿ ಮಾರಾಟ



ಮೈಸೂರಿನ ಬೋಗಾದಿಯಲ್ಲಿರುವ ಮರಿಯಾನಿಕೇತನ ಶಾಲೆಯ ಹಳೆಯ ವಿದ್ಯಾರ್ಥಿಗಳ ಸಂಘದ ವತಿಯಿಂದ ಗುರು ರೆಸಿಡೆನ್ಸಿಯಲ್ಲಿ ಗುರುವಂದನಾ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಶಿಕ್ಷಕಿಯರಾದ ಪುಷ್ಪ, ಪದ್ಮ, ಮಂಜುಳ, ಅಂತೋಣಮ್ಮ, ರೀತೂ ಸಂಧ್ಯಾ, ರಾಜು, ಚಂದ್ರಶೇಖರ್, ಕಾಂತರಾಜು ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಹಳೆಯ ವಿದ್ಯಾರ್ಥಿ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕರ್ನಾಟಕ ಕ್ರೀಡಾಪೋಷಕ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮೈಸೂರು,ಅ.30–ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2023–24ನೇ ಸಾಲಿನಲ್ಲಿ ಕರ್ನಾಟಕ ಕ್ರೀಡಾಪೋಷಕ ಪ್ರಶಸ್ತಿ ಯೋಜನೆಯಡಿ ಕರ್ನಾಟಕ ರಾಜ್ಯದ ಕ್ರೀಡಾ ಪೋಷಕರನ್ನು ಗುರುತಿಸಿ, ಗೌರವಿಸಿ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಯನ್ನು ನೀಡಲಾಗುವುದು.

ಕ್ರೀಡಾ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡು ಕ್ರೀಡೆಯ ಅಭಿವೃದ್ಧಿಗೆ ನೆರವು ನೀಡಿ 5 ವರ್ಷಗಳಲ್ಲಿ ರಾಜ್ಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾ ಕ್ಷೇತ್ರಗಳಲ್ಲಿ ಕೊಡುಗೆ ನೀಡಿದ ಕ್ರೀಡಾ ಪೋಷಕರು ಈ ಪ್ರಶಸ್ತಿಗೆ ಅರ್ಹರಿದ್ದು, ಕರ್ನಾಟಕ ನಿವಾಸಿಗಳಲ್ಲದ ಹಾಗೂ ರಾಜ್ಯದ ಕ್ರೀಡಾ ಕ್ಷೇತ್ರಕ್ಕೆ ತೊಡಗಿಸಿಕೊಳ್ಳದೆ ಇರುವ ಕ್ರೀಡಾ ಪೋಷಕರುಗಳು ಈ ಪ್ರಶಸ್ತಿಗೆ ಅರ್ಹರಿರುವುದಿಲ್ಲ. ಅರ್ಜಿ ಸಲ್ಲಿಸುವವರು ಕ್ರಿಮಿನಲ್ ಹಿನ್ನೆಲೆ ಇಲ್ಲ ಎಂಬ ಬಗ್ಗೆ ಪೊಲೀಸ್ ವೆರಿಫಿಕೇಶನ್ ಸರ್ಟಿಫಿಕೇಟ್ ಕಡ್ಡಾಯವಾಗಿ ಸಲ್ಲಿಸಬೇಕು. ಅರ್ಜಿಗಳನ್ನು ಭರ್ತಿ ಮಾಡಿ ನ.25ರೊಳಗೆ ಇಲಾಖೆ ಕಚೇರಿಗೆ ಸಲ್ಲಿಸಬಹುದು. ಅರ್ಜಿ ನಮೂನೆ ಮತ್ತು ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ದೂ. ಸಂ:–0821–2564179 ಸಂಪರ್ಕಿಸಬಹುದಾಗಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

31.10.2023 ಮಂಗಳವಾರ, ಮಳೆ ನಕ್ಷತ್ರ: ಸ್ವಾತಿ, 25.10.2023ರಿಂದ 06.11.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಅಶ್ವಯುಜ ಮಾಸ, ಕೃಷ್ಣ ಪಕ್ಷ, ತಿಥಿ: ತದಿಗೆ, ನಕ್ಷತ್ರ: ರೋಹಿಣಿ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಶ್ರದ್ಧೆಯ ಶಿಲ್ಪ, ಲೇಖನ ಮತ್ತು ಪ್ರಸ್ತುತಿ–ಟಿ.ಎಸ್.ಗೋಪಾಲ್, 6.40 ರೈತರಿಗೆ ಸಲಹೆ, 6.45 ಕಲ್ಯಾಣ ಕರೆದಿದೆ ಕಲ್ಯಾಣ–ಪ್ರಾಯೋಜಿತ ಕಾರ್ಯಕ್ರಮ, 7.15 ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ–ಉಮೇಶ್ ಎಸ್.ಎಸ್., 9.05 ಹಾಸನ ನಗರದ ಹಾಸನಾಂಬೆಯ ದರ್ಶನ ಕುರಿತ ಕಾರ್ಯಕ್ರಮ, 10.00 ಎಂ.ಎಲ್.ವಸಂತಕುಮಾರಿ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ–ನರಸಿಂಹನಾಯಕ, ಎಂ.ಎಸ್. ಶೀಲಾ, 12.45 ಭಾವನಾತ್ಮಕ ಬುದ್ಧಿಮತ್ತೆ–ಮಾತನಾಡುತ್ತಾರೆ ಡಾ.ಎಂ.ಆರ್.ಆಶಾ, 1.20 ಭಾವಗೀತೆಗಳು–ಎಂ.ಪ್ರಭಾಕರ್, 3.00 ನಾಮಗಿರಿ ಪೇಟ್ಟೈ ಕೃಷ್ಣನ್–ನಾಗಸ್ವರ ವಾದನ, 4.00 ಕಥಾ ಕಾಲಕ್ಷೇಪ–ಲವಕುಶ, ಪ್ರಸ್ತುತಿ–ವಿದ್ವಾನ್ ಆರ್.ಗುರುರಾಜುಲುನಾಯ್ಡು, 6.50 ಕೃಷಿರಂಗ–ತೋಟಗಾರಿಕಾ ಕ್ಷೇತ್ರ ಹಾಗೂ ನರ್ಸರಿ ನಿರ್ವಹಣೆ ಕುರಿತು ಡಾ.ಪ್ರಕಾಶ್ ಎಂ.ಸಬರದ್ ಅವರೊಂದಿಗೆ ಸಂದರ್ಶನ, 9.30 ನೇದನೂರಿ ಕೃಷ್ಣಮೂರ್ತಿ–ಹಾಡುಗಾರಿಕೆ, 10.00 ಗಮಕ ವ್ಯಾಖ್ಯಾನ, ವಾಚನ–ಗಣೇಶ ಉಡುಪ ವ್ಯಾಖ್ಯಾನ–ಜಿ.ಎಸ್.ಮಂಜುನಾಥ್, 10.30ಸವಿನೆನಪು

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರಾ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ಗಂಟೆವರೆಗೆ.

■ **ವಿವೇಕಾನಂದ ಯೂತ್ ಮೂವ್‌ಮೆಂಟ್ :** ವಿಶ್ವ ಉಪಶಮನ ಆರೈಕೆ ದಿನಾಚರಣೆ ಅಂಗವಾಗಿ ಕಾಲ್ನಡಿಗೆ ಜಾಥಾ, ಉಪಸ್ಥಿತರು: ಡಾ. ಪಿ.ಗೌತಮಿ, ಜಿಪಂ ಸಿಇಓ ಕೆ.ಎಂ. ಗಾಯತ್ರಿ, ಡಿಎಚ್‌ಓ ಡಾ. ಪಿ.ಸಿ. ಕುಮಾರಸ್ವಾಮಿ, , ಸಿಡಿ ಆಸ್ಪತ್ರೆ ಡಾ. ಸಿ. ಪ್ರಶಾಂತ್, ಎಚ್.ಆರ್. ಕೇಶವ, ಅಧ್ಯಕ್ಷತೆ : ಡಾ. ಡೆನ್ನಿಶ್ ಚೌಹಾಣ್, ಸ್ಥಳ: ಸಾಂಕ್ರಾಮಿಕ ರೋಗಗಳ ಆಸ್ಪತ್ರೆ, ಕೆ.ಆರ್.ಎಸ್. ರಸ್ತೆ, ಬೆಳಗ್ಗೆ 8ಕ್ಕೆ.

■ **ಮಹಾರಾಣಿ ಮಹಿಳಾ ಕಲಾ ಕಾಲೇಜು, ಸಾಂಸ್ಕೃತಿಕ ವೇದಿಕೆ :** ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ, ಮುಖ್ಯ ಅತಿಥಿಗಳು: ಸಹ ಪ್ರಾಧ್ಯಾಪಕರಾದ ಡಾ.ಕಲಾಶ್ರೀ, ಅಧ್ಯಕ್ಷತೆ: ಕಾಲೇಜು ಪ್ರಾಂಶುಪಾಲ ಡಾ. ಬಿ.ವಿ.ವಸಂತಕುಮಾರ್, ಉಪಸ್ಥಿತರು: ಸಾಂಸ್ಕೃತಿಕ ವೇದಿಕೆ ಕಾರ್ಯದರ್ಶಿ ನಂಜುಂಡಯ್ಯ, ಖಜಾಂಚಿ ಅಶ್ವಿನಿ, ನಾಗರತ್ನಮ್ಮ ರಕ್ಷಿತ, ಜೇನುಶ್ರೀ, ಸ್ಥಳ: ನಾಲ್ವಡಿ ಕೃಷ್ಣರಾಜ ಒಡೆಯರ್ ವೇದಿಕೆ, ಬೆಳಗ್ಗೆ 9.30ಕ್ಕೆ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಪುರಾತತ್ವ, ವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ:** ಪಾರಂಪರಿಕ ಕೂಟದ ಚಟುವಟಿಕೆ, ಸ್ವಾಗತ: ಡಾ. ಶೆಲ್ವಪಿಳ್ಳೈ ಅಯ್ಯಂಗಾರ್, ಉದ್ಘಾಟನೆ: ಕರಾಮುವಿ ಕುಲಪತಿ ಪ್ರೊ.ಶರಣಪ್ಪ ಹಲಸೆ, ಮುಖ್ಯ ಅತಿಥಿಗಳು: ಕುಲಸಚಿವ ಪ್ರೊ.ಕೆ.ಎಲ್.ಎನ್. ಮೂರ್ತಿ, ಪುರಾತತ್ವ ಆಯುಕ್ತ ಎ.ದೇವರಾಜ್, ಪತ್ರಕರ್ತ ಟಿ.ಆರ್.ಸತೀಶ್‌ಕುಮಾರ್, ಡಾ.ಎನ್. ಲಕ್ಷ್ಮಿ, ಡಾ.ಕೆ.ಬಿ.ಪ್ರವೀಣ್, ಡಾ.ಎ.ಖಾದರ್ ಪಾಷಾ, ಡಾ.ಎಂ.ರಾಮನಾಥಂನಾಯ್ಡು, ಡಾ.ಸಿ.ಎನ್. ಮಂಜುಳ, ಡಾ.ಲ.ನ.ಸ್ವಾಮಿ, ಡಾ.ಬಿ.ಸಿ.ಸುರೇಶ್, ಸ್ಥಳ: ನಳ ಸಭಾಂಗಣ, ಕರಾಮುವಿವಿ, ಬೆಳಗ್ಗೆ 9.30ಕ್ಕೆ.

■ **ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ, ಭಾರತೀಯ ಭಾಷಾ ಸಂಸ್ಥಾನ :** 15ನೇ ಶಾಸ್ತ್ರೀಯ ಕನ್ನಡ ಮಾನ್ಯತಾ ದಿನಾಚರಣೆ, ಉದ್ಘಾಟನೆ : ನಿವೃತ್ತ ಪ್ರಾಧ್ಯಾಪಕ ಪ್ರೊ. ರಾಮೇಗೌಡ, ಮುಖ್ಯ ಅತಿಥಿಗಳು : ನಿವೃತ್ತ ಪ್ರಾಧ್ಯಾಪಕರಾದ ಪ್ರೊ. ಸಂಧ್ಯಾ ರೆಡ್ಡಿ, ಅಧ್ಯಕ್ಷತೆ : ಭಾರತೀಯ ಭಾಷಾ ಸಂಸ್ಥಾನ ನಿರ್ದೇಶಕ ಪ್ರೊ. ಶೈಲೇಂದ್ರ ಮೋಹನ್, ಸ್ಥಳ: ಭಾರತೀಯ ಭಾಷಾ ಸಂಸ್ಥಾನ ಸಭಾಂಗಣ, ಬೆಳಗ್ಗೆ 10ಕ್ಕೆ.

■ **ಮಹಾರಾಜ ಕಾಲೇಜು:** 2021–22ನೇ ಸಾಲಿನ ಅನಂತಯಾತ್ರಿ ವಾರ್ಷಿಕ ಸಂಚಿಕೆ ಬಿಡುಗಡೆ ಸಮಾರಂಭ, ಅಧ್ಯಕ್ಷತೆ: ಕಾಲೇಜು ಪ್ರಿನ್ಸಿಪಾಲ್ ಡಾ.ಸಿ.ಎ.ಶ್ರೀಧರ್, ಅನಂತಯಾತ್ರಿ ಅನಾವರಣ: ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಎಸ್.ಶಿವರಾಜಪ್ಪ, ಉಪಸ್ಥಿತರು: ಆಡಳಿತಾಧಿಕಾರಿ ಪ್ರೊ. ವಿ. ಷಣ್ಮುಗಂ, ಪ್ರೊ.ಬಸವರಾಜ ಕೆ.ಬಾರಕೇರ, ಸ್ಥಳ: ಮಹಾರಾಜ ಕಾಲೇಜು ಶತಮಾನೋತ್ಸವ ಭವನ, ಬೆಳಗ್ಗೆ 10ಕ್ಕೆ.

■ **ಸೆಂಟ್ ಜೋಸೆಫ್ ಕಾಲೇಜ್ ಆಫ್ ಎಜುಕೇಷನ್:** ಪದವೀಧರರ ದಿನಾಚರಣೆ, ಅಧ್ಯಕ್ಷತೆ: ಎಂಡಿಇಎಸ್ ಕಾರ್ಯದರ್ಶಿ ವಿಜಯಕುಮಾರ್, ಮುಖ್ಯ ಅತಿಥಿಗಳು: ಪ್ರೊವಿಜಯಲಕ್ಷ್ಮಿ, ಉಪಸ್ಥಿತರು: ಮದಲೈ ಮುತ್ತು, ಆಡಳಿತಾಧಿಕಾರಿ ಅವಿನಾಶ್, ಪ್ರಾಂಶುಪಾಲ ಡಾ.ಪ್ರಿಯಾ ಮ್ಯಾಥ್ಯೂ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಕನ್ನಡ ಬೆಳಕು :** 30ನೇ ವಾರ್ಷಿಕೋತ್ಸವ, ಸಾನ್ನಿಧ್ಯ: ಶ್ರೀ ಹೊಸ ಮಠದ ಅಧ್ಯಕ್ಷರಾದ ಶ್ರೀಚಿದಾನಂದ ಸ್ವಾಮೀಜಿ, ಉದ್ಘಾಟನೆ: ಅರಣ್ಯ ಸಚಿವ ಈಶ್ವರ ಖಂಡ್ರೆ, ಅಧ್ಯಕ್ಷತೆ: ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್, ಮುಖ್ಯ ಅತಿಥಿಗಳು: ವಿಧಾನಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಯಳವರಹುಂಡಿ ಸಿದ್ದಪ್ಪ, ವಿಶೇಷ ಸಂಚಿಕೆ ಬಿಡುಗಡೆ: ಮೈಸೂರು ವಿವಿ ಗೌರವ ಡಾಕ್ಟರೇಟ್ ಪುರಸ್ಕೃತರಾದ ಡಾ.ಕೆ.ಬಿ.ಗಣಪತಿ, ಪತ್ರಿಕೆ ಕುರಿತು ಭಾಷಣ: ಶ್ರೀ ನಟರಾಜ ಪ್ರತಿಷ್ಠಾನ ಆಡಳಿತಾಧಿಕಾರಿ ಡಾ.ಶಿವರಾಜಪ್ಪ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 11ಕ್ಕೆ.

■ **ಅಖಿಲ ಭಾರತ ಟ್ರೇಡ್ ಯೂನಿಯನ್ ಕಾಂಗ್ರೆಸ್ :** ಎಐಟಿಯುಸಿ 104ನೇ ಸಂಸ್ಥಾಪನಾ ದಿನಾಚರಣೆ, ಮುಖ್ಯ ಅತಿಥಿಗಳು : ಶಾಸಕ ತನ್ವೀರ್ ಸೇಠ್, ಎಐಟಿಯುಸಿ ರಾಷ್ಟ್ರೀಯ ಉಪಾಧ್ಯಕ್ಷ ಕಾಂ. ಹೆಚ್. ಶೇಷಾದ್ರಿ, ಸ್ಥಳ:ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 11ಕ್ಕೆ.

■ **ಶಾರದಾ ವಿಲಾಸ ಕಾಲೇಜು:** ವಿದ್ಯಾರ್ಥಿ ವೇದಿಕೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನಾ ಸಮಾರಂಭ, ‘ಶಾರದೆ’ ವಾರ್ಷಿಕ ಸಂಚಿಕೆ ಬಿಡುಗಡೆ, ಮುಖ್ಯ ಅತಿಥಿಗಳು: ಸಾಹಿತಿ ಅಬ್ದುಲ್ ರಶೀದ್, ವಿಶೇಷ ಆಹ್ವಾನಿತರು: ಶಾರದಾ ವಿಲಾಸ ವಿದ್ಯಾಸಂಸ್ಥೆ ಅಧ್ಯಕ್ಷ ಡಾ.ಬಿ.ಎಂ.ಸುಬ್ರಾಯ, ಕಾರ್ಯದರ್ಶಿ ಎನ್.ಚಂದ್ರಶೇಖರ್, ಅಧ್ಯಕ್ಷತೆ: ಕಾಲೇಜು ಪ್ರಿನ್ಸಿಪಾಲ್ ಡಾ.ಎಂ.ದೇವಿಕಾ, ಸ್ಥಳ: ಶಾರದಾ ವಿಲಾಸ ಶತಮಾನೋತ್ಸವ ಭವನ, ಕೃಷ್ಣಮೂರ್ತಿಪುರಂ, ಮಧ್ಯಾಹ್ನ 12.30ಕ್ಕೆ

■ **ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ :** ಜೆಎಸ್‌ಎಸ್ ವೈದ್ಯಕೀಯ ಕಾಲೇಜು ಅಲೈಡ್ ಆರೋಗ್ಯ ವಿಜ್ಞಾನ ವಿದ್ಯಾರ್ಥಿಗಳ ಪದವೀಧರರ ದಿನಾಚರಣೆ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮುಖ್ಯ ಅತಿಥಿಗಳು : ಕೇಂದ್ರ ಸರ್ಕಾರದ ಜೈವಿಕ ತಂತ್ರಜ್ಞಾನ ಇಲಾಖೆಯ ಪ್ರಧಾನ ವಿಜ್ಞಾನಿ ಡಾ. ಸುಚೇತಾ ಬ್ಯಾನರ್ಜಿ ಕುರುಂದ್ಕರ್, ರಾಜ್ಯ ಸರ್ಕಾರದ ವೈದ್ಯಕೀಯ ಶಿಕ್ಷಣ ನಿರ್ದೇಶಕ ಡಾ. ಬಿ.ಎಲ್. ಸುಜಾತಾ ರಾಥೋಡ್, ಉಪಸ್ಥಿತರು : ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ. ಬೆಟಸೂರ ಮಠ, ಸಮಕುಲಾಧಿಪತಿ ಡಾ. ಬಿ. ಸುರೇಶ್, ಕುಲಪತಿ ಡಾ. ಸುರೀಂದರ್ ಸಿಂಗ್, ಸ್ಥಳ: ರಾಜೇಂದ್ರ ಸಭಾಂಗಣ, ಕಾಲೇಜು ಆವರಣ, ಸಂಜೆ 4ಕ್ಕೆ.

■ **ಬಿಇಎಂಎಲ್ ಎಸ್‌ಸಿ/ಎಸ್‌ಟಿ ನೌಕರರ ಕ್ಷೇಮಾಭಿವೃದ್ಧಿ ಸಂಘ :** ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 132ನೇ ಹುಟ್ಟುಹಬ್ಬದ ಸಮಾರಂಭ, ಉದ್ಘಾಟನೆ : ಬಿಇಎಂಎಲ್ ವ್ಯವಸ್ಥಾಪಕ ನಿರ್ದೇಶಕ ಶಂತನು ರಾಯ್, ಗೌರವ ಅತಿಥಿಗಳು ; ಬಿಇಎಂಎಲ್ ಪ್ರಭಾರ ನಿರ್ದೇಶಕ ಅಜಿತ್ ಕುಮಾರ್ ಶ್ರೀವಾತ್ಸವ್, ಬಿಇಎಂಎಲ್ ನಿರ್ದೇಶಕ (ಹಣಕಾಸು) ಅನಿಲ್ ಜೇರತ್, ಡಾ.ಹೆಚ್.ಎಸ್. ಅನುಪಮಾ, ಮುಖ್ಯ ಅತಿಥಿಗಳು : ಬಿಇಎಂಎಲ್ ಚೀಫ್ ಜನರಲ್ ಮ್ಯಾನೇಜರ್ ಎ.ಎಸ್. ತಮಿಳ್ ಸೆಲ್ವನ್, ಚೀಫ್ ಲೈಸನ್ ಆಫೀಸರ್ ಚನ್ನಪ್ಪ ದ್ಯಾಮಪ್ಪ ಮಾದಾರ್, ಅಧ್ಯಕ್ಷತೆ : ಬಿಇಎಂಎಲ್ ಕಾರ್ಯನಿರ್ವಾಹಕ ನಿರ್ದೇಶಕ ಬಾಸುದೇವ ಮಿಶ್ರಾ, ವಿಶೇಷ ಅತಿಥಿಗಳು : ಆರ್. ನಾಗರಾಜ, ಸಂಘದ ಅಧ್ಯಕ್ಷ ಗೋವಿಂದರೆಡ್ಡಿ, ಜಂಟಿ ಕಾರ್ಯದರ್ಶಿ ಎಸ್.ಜಿ. ಮಾದೇಗೌಡ, ಸ್ಥಳ: ಮಹಾರಾಜ ಶತಮಾನೋತ್ಸವ ಭವನ, ರಾಮಸ್ವಾಮಿ ಸರ್ಕಲ್ ಹತ್ತಿರ, ಸಂಜೆ 6ಕ್ಕೆ.

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟೆಬಲ್ ಟ್ರಸ್ಟ್ :** ವಿದ್ವಾನ್ ಜಿ.ಕೆ. ಮನಮೋಹನ ಅವರಿಂದ ಗಾಯನ, ವಿದ್ವಾನ್ ವೆಂಕಟೇಶ ಜೋಸ್ಯರ್ –ಪಿಟೀಲು, ವಿದ್ವಾನ್ ಎಸ್. ಕುಮಾರಸ್ವಾಮಿ–ಮೃದಂಗ, ವಿದ್ವಾನ್ ಎಂ.ಆರ್. ಮಂಜುನಾಥ್ –ಘಟಂ, ಸ್ಥಳ: ಶ್ರೀ ರಾಮಮಂದಿರ, ಜಯನಗರ, ಸಂಜೆ 6ಕ್ಕೆ.

■ **ಶ್ರೀ ದಿಗಂಬರ ಜೈನ ಸಮಾಜ :** ಆಳ್ವಾಸ್ ರಂಗ ಅಧ್ಯಯನ ಕೇಂದ್ರದ ಕಲಾವಿದರಿಂದ ನಾಡೋಜ ಹಂಪನಾ ರಚಿಸಿರುವ ಚಾರುವಸಂತ ನಾಟಕ ಪ್ರದರ್ಶನ, ನಿರ್ದೇಶನ : ಡಾ. ಜೀವನ್‌ರಾಂ, ಉದ್ಘಾಟನೆ : ರಾಜಮಾತೆ ಶ್ರೀಮತಿ ಪ್ರಮೋದಾದೇವಿ ಒಡೆಯರ್, ಉಪಸ್ಥಿತರು : ಧರ್ಮಸ್ಥಳದ ಹರ್ಷೇಂದ್ರಕುಮಾರ್, ಸ್ಥಳ: ಕಲಾಮಂದಿರ, ಸಂಜೆ 6.30ಕ್ಕೆ.

■ **ಲಯನ್ಸ್ ಕ್ಲಬ್ ಆಫ್ ಮೈಸೂರು ಅಂಬಾಸಡರ್ಸ್ :** ರಾಯಭಾರಿ ಜನಪದ ಗಾಯಕ ಜಿ. ಅಮ್ಮ ರಾಮಚಂದ್ರ ಅವರಿಗೆ ಪ್ರಶಸ್ತಿ ಪ್ರದಾನ ಸಮಾರಂಭ, ಅಧ್ಯಕ್ಷತೆ : ಲಯನ್ ಹೆಚ್.ಸಿ. ಕಾಂತರಾಜು, ಉಪಸ್ಥಿತರು : ಲಯನ್ ಎಸ್.ಆರ್.ರವಿ, ಲಯನ್ ಎಂ.ಆರ್. ಮನು, ಸ್ಥಳ: ಸೋಹೋ ಬೋಟಿಕ್ ಹೋಟೆಲ್, ಲಕ್ಷ್ಮೀಪುರಂ, ಸಂಜೆ 7ಕ್ಕೆ.

ಮಂಡ್ಯದಲ್ಲಿಂದು

■ **ಶ್ರೀಕ್ಷೇತ್ರ ಆದಿಚುಂಚನಗಿರಿ ಮಹಾಸಂಸ್ಥಾನ ಮಠ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಮಂಡ್ಯ ಜಿಲ್ಲಾ ಘಟಕ:** ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ತುಮಕೂರು ಹಾಗೂ ರಾಮನಗರ ಜಿಲ್ಲೆಗಳ ಕಾರ್ಯನಿರತ ಪತ್ರಕರ್ತರ ಅಂತರ ಜಿಲ್ಲಾ ಸಮ್ಮೇಳನ, ಉದ್ಘಾಟನೆ: ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧ್ಯಕ್ಷತೆ: ಸಂಘದ ಜಿಲ್ಲಾಧ್ಯಕ್ಷ ಕೆ.ಸಿ.ಮಂಜುನಾಥ, ಜೀವ ವಿಮೆ ಪಾಲಿಸಿ ವಿತರಣೆ: ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ, ಪತ್ರಕರ್ತರಿಗೆ ಹಿತನುಡಿ: ಪಬ್ಲಿಕ್ ಟಿವಿ ಮುಖ್ಯಸ್ಥ ಹೆಚ್.ಆರ್.ರಂಗನಾಥ್, ವಿಜಯ ಕರ್ನಾಟಕ ಸಂಪಾದಕ ಸುದರ್ಶನ ಚನ್ನಂಗಿಹಳ್ಳಿ, ಪ್ರಾಸ್ತಾವಿಕ ನುಡಿ: ಸಂಘದ ಕಾರ್ಯದರ್ಶಿ ಮತ್ತೀಕೆರೆ ಜಯರಾಮ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಮುಖ್ಯ ಅತಿಥಿಗಳು: ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ, ಪಿ.ರವಿಕುಮಾರ್‌ಗೌಡ, ರಮೇಶ್ ಬಂಡಿಸಿದ್ದೇಗೌಡ, ಕೆ.ಎಂ.ಉದಯ್, ಮರಿತಿಬ್ಬೇಗೌಡ, ದರ್ಶನ್ ಪುಟ್ಟಣ್ಣಯ್ಯ, ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾರ್ಯದರ್ಶಿ ಎನ್.ಜಯರಾಮ್, ಸ್ಥಳ: ಸುಮುರವಿ ಕಲ್ಯಾಣ ಮಂಟಪ, ಮಂಡ್ಯ, ಬೆಳಗ್ಗೆ 10ಕ್ಕೆ.

'ಟಚ್ ಆಫ್ ಗ್ರೇ'ಗೆ 'The 1XBET Mysore Derby(Gr.1) ಟ್ರೋಫಿ



ಮೈಸೂರು ರೇಸ್ ಕ್ಲಬ್‌ನಲ್ಲಿ ನಡೆಯುತ್ತಿರುವ ದಿ ಮೈಸೂರ್ (ಮಾನ್ಸೂನ್) ರೇಸ್‌ನ 16ನೇ ದಿನವಾದ ಅ.29ರಂದು 'The 1XBET Mysore Derby(Gr.1) ಟ್ರೋಫಿ ಗೆದ್ದ 'ಟಚ್ ಆಫ್ ಗ್ರೇ' ಕುದುರೆಯ ಜಾಕಿ ಸೂರಜ್ ನರೆಡು (ಎಡದಿಂದ) ಮಾಲೀಕ ಅನಿಲ್ ಸರಫ್, ತರಬೇತುದಾರ ಸತೀಶ್ ನರೆಡು, ಮಾಲೀಕರಾದ ಪಿ.ಅಪಣ ಸುಬ್ಬಯ್ಯ ಮತ್ತು ಯಶಿಕಾ ಅಪಣ, ಬ್ರೀಡರ್ ಗುರುಪಾಲ್ ಸಿಂಗ್ ಉಪಸ್ಥಿತರಿದ್ದಾರೆ.

'MIGHTY ZO' ಗೆ 'The Bottolana Trophy'



ದಿ ಮೈಸೂರ್(ಮಾನ್ಸೂನ್) ರೇಸ್‌ನ 15ನೇ ದಿನವಾದ ಅ.28ರಂದು 'The Bottolana Trophy' ಗೆದ್ದ ಕುದುರೆ 'MIGHTY ZO'ಗೆ ಅದರ ತರಬೇತುದಾರ ಪ್ರಸನ್ನ ಕುಮಾರ್ ಅವರಿಗೆ ಕ್ರೀತಿ ಪ್ರದೀಪ್ ಮತ್ತು ಸಿ.ಎಸ್. ಪ್ರದೀಪ್ ಅವರು ಟ್ರೋಫಿ ವಿತರಿಸಿದರು. ಕುದುರೆ ಮಾಲೀಕರಾದ ಕೆ.ಮನೋಜ್ ಕುಮಾರ್ ಮತ್ತು ಗಜಾ ಮನೋಜ್, ಜಾಕಿ ಅಕ್ಷಯ್ಯ ಕುಮಾರ್, ಎಂಆರ್‌ಸಿ ಅಧ್ಯಕ್ಷ ಕೆ.ಎಂ.ಚಂದ್ರೇಗೌಡ, ಸ್ಟೀವರ್ಡ್ಸ್, ಕಮಿಟಿ ಮೆಂಬರ್ಸ್ ಉಪಸ್ಥಿತರಿದ್ದಾರೆ.

ಮರಾಠ ಮೀಸಲಾತಿ ಹೋರಾಟ: ಎನ್‌ಸಿಪಿ ಶಾಸಕನ ಮನೆಗೆ ಬೆಂಕಿ



ಮುಂಬೈ: ಮಹಾರಾಷ್ಟ್ರದಲ್ಲಿ ಮರಾಠಿ ಮೀಸಲಾತಿ ಹೋರಾಟ ತಾರಕಕ್ಕೇರಿದ್ದು, ರಾಷ್ಟ್ರೀಯವಾದಿ ಕಾಂಗ್ರೆಸ್ ಪಕ್ಷದ (ಎನ್‌ಸಿಪಿ) ಶಾಸಕ ಪ್ರಕಾಶ್ ಸೋಲಂಕೆಯವರಿಗೆ ಸೇರಿದ ಮನೆ ಮೇಲೆ ಕಲ್ಲು ತೂರಾಟ ನಡೆಸಿ, ಬೆಂಕಿ ಹಚ್ಚಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮರಾಠಿ ಮೀಸಲಾತಿಗೆ ಒತ್ತಾಯಿಸಿ ನಡೆಯುತ್ತಿರುವ ಪ್ರತಿಭಟನೆ ತೀವ್ರಗೊಂಡಿದ್ದು, ಮರಾಠ ಮೀಸಲಾತಿ ಹೋರಾಟ ಮತ್ತು ಹೋರಾಟಗಾರ ಮನೋಜ್ ಜರಂಗೆ ಅವರ ಉಪವಾಸ ಸತ್ಯಾಗ್ರಹದ ಕುರಿತಂತೆ ಸೋಲಂಕೆ ನೀಡಿದ್ದಾರೆಂಬ ಅವಹೇಳನಕಾರಿ ಹೇಳಿಕೆ ಕುರಿತಾದ ಆಡಿಯೊ ಸಾಮಾಜಿಕ ಮಾಧ್ಯಮದಲ್ಲಿ ಹರಿದಾಡಿದ ಹಿನ್ನೆಲೆಯಲ್ಲಿ ಪ್ರತಿಭಟನೆ ಭುಗಿಲೆದ್ದಿದೆ. ಮಜಲ್ ಗಾಂವ್‌ನ ಸೋಲಂಕೆ ನಿವಾಸದ ಬಳಿ ನಿಂತಿದ್ದ ಕಾರಿಗೂ ಉದ್ರಿಕ್ತರು ಬೆಂಕಿ ಹಚ್ಚಿದ್ದಾರೆ.

ಬೆಳಿಗ್ಗೆ 11 ಗಂಟೆ ಸುಮಾರಿಗೆ ಈ ಘಟನೆ ನಡೆದಿದ್ದು, ಈ ಸಂದರ್ಭ ಶಾಸಕರು ಮನೆಯಲ್ಲಿದ್ದರೇ ಎಂಬುದು ಸ್ಪಷ್ಟವಾಗಿಲ್ಲ. ಇತರೆ ಹಿಂದುಳಿದ ವರ್ಗಗಳ(ಒಬಿಸಿ) ಅಡಿಯಲ್ಲಿ ಮರಾಠರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲಾತಿಗೆ ಒತ್ತಾಯಿಸಿ ಮರಾಠ ಸಮುದಾಯವು ಪ್ರತಿಭಟನೆ ನಡೆಸುತ್ತಿದೆ.

ಇಂದು ಶಾಸ್ತ್ರೀಯ ಕನ್ನಡ ಮಾನ್ಯತಾ ದಿನಾಚರಣೆ

ಮೈಸೂರು, ಅ.30–ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ ಹಾಗೂ ಕೇಂದ್ರ ಉನ್ನತ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಭಾರತೀಯ ಭಾಷಾ ಸಂಸ್ಥಾನದ ಸಭಾಂಗಣದಲ್ಲಿ ಮಂಗಳವಾರ ಬೆಳಗ್ಗೆ 10ಕ್ಕೆ 15ನೇ ಶಾಸ್ತ್ರೀಯ ಕನ್ನಡ ಮಾನ್ಯತಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ನಿವೃತ್ತ ಪ್ರಾಧ್ಯಾಪಕ ಪ್ರೊ.ರಾಮೇಗೌಡ ಕಾರ್ಯಕ್ರಮ ಉದ್ಘಾಟಿಸಲಿದ್ದು, ಪ್ರೊ.ಸಂಧ್ಯಾ ರೆಡ್ಡಿ, ಭಾಷಾ ಸಂಸ್ಥಾನದ ನಿರ್ದೇಶಕ ಪ್ರೊ.ಶೈಲೇಂದ್ರ ಮೋಹನ್, ಶಾಸ್ತ್ರೀಯ ಭಾಷೆಗಳ ಕೇಂದ್ರದ ಸಂಯೋಜಕ ಡಾ.ಎಲ್.ಆರ್.ಪ್ರೇಮ್ ಕುಮಾರ್ ಇನ್ನಿತರ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ನ.1 ರಾಜ್ಯೋತ್ಸವ: ಇದೇ ಸ್ಥಳದಲ್ಲಿ ನ.1ರಂದು 68ನೇ ಕನ್ನಡ ರಾಜ್ಯೋತ್ಸವ ಜರುಗಲಿದ್ದು, ಭಾಷಾ ಸಂಸ್ಥಾನದ ಅಧಿಕಾರಿಗಳ ಜೊತೆಗೆ ನಿವೃತ್ತ ಪ್ರಾಧ್ಯಾಪಕರಾದ ಪ್ರೊ.ಪಂಡಿತಾರಾಧ್ಯ, ಪಿ.ಕೆ.ರಾಜಶೇಖರ್ ಮತ್ತಿತರರು ಭಾಗವಹಿಸಲಿದ್ದಾರೆ. ಅಂದು ಜೋಗತಿ ಕುಣಿತ, ಗೀಗಿ ಹಾಗೂ ಲಾವಣಿ ಹಾಡುಗಳ ಪ್ರಸ್ತುತಿ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ ಎಂದು ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕ ಪ್ರೊ.ಎನ್.ಎಂ.ತಳವಾರ್ ತಿಳಿಸಿದ್ದಾರೆ.

ಕಾವೇರಿ ನೀರು ನಿಯಂತ್ರಣ ಪ್ರಾಧಿಕಾರದ ಆದೇಶದಂತೆ ತಮಿಳುನಾಡಿಗೆ ನೀರು ಬಿಟ್ಟರೆ ಮುಂದಿನ 15 ದಿನದಲ್ಲಿ ಕೆಆರ್‌ಎಸ್, ಕಬಿನಿಯ 3.90 ಕ್ಯೂಸೆಕ್ ನೀರು ಖಾಲಿ





ಮೈಸೂರು, ಅ.30(ಬಿಎಲ್‌ಯು)– ತಮಿಳುನಾಡಿಗೆ ಕಾವೇರಿ ನೀರು ನಿಯಂತ್ರಣ ಪ್ರಾಧಿಕಾರದ ಆದೇಶದಂತೆ ಕೃಷ್ಣರಾಜ ಸಾಗರ ಮತ್ತು ಕಬಿನಿ ಜಲಾಶಯದಿಂದ ನಿರಂತರವಾಗಿ ನೀರು ಹರಿಸಿದ್ದರಿಂದ ಈ ಎರಡೂ ಜಲಾಶಯಗಳಲ್ಲಿ ನೀರಿನ ಮಟ್ಟ ತೀವ್ರವಾಗಿ ಕುಸಿದಿದೆ.

ಕೆಆರ್‌ಎಸ್, ಕಬಿನಿ ಜಲಾಶಯದ ನೀರಿನ ಮಟ್ಟ

ಕೃಷ್ಣರಾಜ ಸಾಗರ ಅಣೆಕಟ್ಟಿನ ಗರಿಷ್ಠ ಮಟ್ಟ 124.80 ಅಡಿಗಳಾಗಿದ್ದು, ಇಂದಿನ ಮಟ್ಟ 99.48 ಅಡಿ. ಜಲಾಶಯಕ್ಕೆ 531 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, 567 ಕ್ಯೂಸೆಕ್ ನೀರು ಬಿಡಲಾಗುತ್ತಿದೆ.

ಕಬಿನಿ ಜಲಾಶಯದ ಗರಿಷ್ಠ ಮಟ್ಟ 2,284 ಅಡಿಗಳಾಗಿದ್ದು, ಇಂದಿನ ಮಟ್ಟ 2,273 ಅಡಿ. ಜಲಾಶಯಕ್ಕೆ 196 ಕ್ಯೂಸೆಕ್ ನೀರು ಹರಿದು ಬರುತ್ತಿದೆ. 300 ಕ್ಯೂಸೆಕ್ ನೀರು ಹೊರಗೆ ಬಿಡಲಾಗುತ್ತಿದೆ.

ತಮಿಳುನಾಡಿಗೆ ನವೆಂಬರ್ 1ರಿಂದ ಇನ್ನು 15 ದಿನಗಳ ಕಾಲ ಪ್ರತಿ ದಿನ 2,600 ಕ್ಯೂಸೆಕ್ಸ್ ನೀರು ಬಿಡುವಂತೆ ಪ್ರಾಧಿಕಾರ ಮತ್ತೆ ಸೋಮವಾರ ಆದೇಶ ನೀಡಿದೆ. ಈ ಆದೇಶದಂತೆ 15 ದಿನಗಳ ಕಾಲ ನೀರು ಬಿಟ್ಟರೆ, ಕೆಆರ್‌ಎಸ್ ಹಾಗೂ ಕಬಿನಿ ಜಲಾಶಯ ಎರಡರಿಂದ 3.90 ಟಿಎಂಸಿ ನೀರು ಖಾಲಿ ಯಾಗಲಿದೆ.

ಈಗಾಗಲೇ ಬೆಳೆದಿರುವ ಬೆಳೆಗೆ ನೀರಿನ ಅವಶ್ಯವಿದ್ದು, ಪ್ರತಿದಿನ 13 ಸಾವಿರ ಕ್ಯೂಸೆಕ್ಸ್ ನೀರು ಬಿಡುವಂತೆ ತಮಿಳುನಾಡು ಸರ್ಕಾರ ಪ್ರಾಧಿಕಾರದ ಮುಂದೆ ಬೇಡಿಕೆ ಇಟ್ಟಿತ್ತು. ಆದರೆ ಕರ್ನಾಟಕದ ಜಲಾಶಯಗಳಲ್ಲಿ ನೀರಿನ ಮಟ್ಟ ಕುಸಿದಿರುವ ಕಾರಣ ನೀರು ಬಿಡಲು ಕಷ್ಟವಾಗುತ್ತದೆ ಎಂದು ಕರ್ನಾಟಕದ ಪರ ಎಪಿಎಸ್ ರಾಕೇಶ್ ಸಿಂಗ್ ವಾದ ಮಂಡಿಸಿದ್ದರು. ಆದರೆ, ಪ್ರಾಧಿಕಾರ ನೀರು ಬಿಡುವಂತೆ ಆದೇಶ ನೀಡಿದೆ.

ಪ್ರತಿ ಬಾರಿಯೂ ಕಾವೇರಿ ನದಿ ನೀರು ಪ್ರಾಧಿಕಾರದ ಸಭೆಯಲ್ಲಿ ಒಂದು ಬಾರಿಯೂ ಕರ್ನಾಟಕದ ಮನವಿಯನ್ನು ಪ್ರಾಧಿಕಾರ ಪುರಸ್ಕರಿಸಿಲ್ಲ. ಪ್ರತಿ ಆದೇಶದಲ್ಲೂ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದೆ. ಕರ್ನಾಟಕದ ಜಲಾಶಯಗಳು ಬರಿದಾಗುತ್ತಿವೆ. ಪ್ರತಿ ಪ್ರಾಧಿಕಾರದ ಸಭೆಯಲ್ಲೂ ತಮಿಳುನಾಡು ಮೇಲ್ಗೈ ಸಾಧಿಸುತ್ತಿರುವುದು ಕರ್ನಾಟಕದ ಜನರಲ್ಲಿ ಹತಾಶೆ ಮೂಡಿಸಿದೆ.

ಪ್ರಾಧಿಕಾರ ನೀಡುವ ಆದೇಶವನ್ನು ಕರ್ನಾಟಕ ಸರ್ಕಾರ ಚೂಚೂ ತಪ್ಪದೆ ಪಾಲಿಸುತ್ತಾ ನೀರು ಬಿಡುಗಡೆ ಮಾಡುತ್ತಿದೆ. ಪ್ರತಿ ಬಾರಿಯ ಪ್ರಾಧಿಕಾರದ ಆದೇಶ ಹೊರ ಬಿದ್ದ ವೇಳೆ ತಮಿಳುನಾಡಿಗೆ ನೀರು ಬಿಡುಗಡೆ ಸಾಧ್ಯವಿಲ್ಲ ಎಂದು ಜಲಸಂಪನ್ಮೂಲ ಸಚಿವರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳುತ್ತಾರೆ. ಇವತ್ತು ಕೂಡ ಇದೇ ಹೇಳಿಕೆ ಪುನರುಚ್ಚರಿಸಿದ್ದಾರೆ. ಆದರೆ ನುಡಿದಂತೆ ನಡೆಯದೆ ಎಂದಿನಂತೆ ನೀರು ಬಿಡುತ್ತಿದ್ದಾರೆ.

ಎನ್‌ಎಎಸ್‌ಐ ಫೆಲೋ ಆಗಿ ವಿಜ್ಞಾನಿ ಪ್ರೊ.ಪ್ರವೀಣ್ ಸಿ.ರಾಮಮೂರ್ತಿ ಆಯ್ಕೆ



ಮೈಸೂರು, ಅ.30– ಸತೀಶ್ ಧಾವನ್ ಪ್ರಶಸ್ತಿ ವಿಜೇತರಾದ ಖ್ಯಾತ ವಿಜ್ಞಾನಿ ಪ್ರೊ.ಪ್ರವೀಣ್ ಸಿ.ರಾಮಮೂರ್ತಿ ಅವರು ನ್ಯಾಷನಲ್ ಅಕಾಡೆಮಿ ಆಫ್ ಸೈನ್ಸಸ್ ಇಂಡಿಯಾ (NASI)ದ ಫೆಲೋ ಆಗಿ ಆಯ್ಕೆಯಾಗಿದ್ದಾರೆ. ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್‌ನ ಮೆಟೀರಿಯಲ್ಸ್ ಇಂಜಿನಿಯರಿಂಗ್ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿರುವ ಪ್ರೊ. ಪ್ರವೀಣ್ ರಾಮಮೂರ್ತಿ ಅವರು ಸಾವಯವ ದ್ಯುತಿವಿದ್ಯುಜ್ಜನಕಗಳು, ಸಂವೇದಕಗಳು ಮತ್ತು ಅಲ್ಟ್ರಾ-ತೆಳುವಾದ ಇಎಂಐ (EMI) ಶೀವೆ ಲ್ಡಿಂಗ್ ಕೋಟಿಂಗ್‌ಗಳನ್ನು ಸಂಶೋಧಿಸಿ ಅಭಿವೃದ್ಧಿಪಡಿಸಿರುವ ಖ್ಯಾತಿಗೆ ಪಾತ್ರರಾಗಿದ್ದಾರೆ. ಇವರು ಮೈಸೂರಿನ ರಾಮಕೃಷ್ಣನಗರ ನಿವಾಸಿಯಾಗಿದ್ದು, ಪ್ರಸ್ತುತ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್‌ನ ಕ್ಯಾಂಪಸ್‌ನಲ್ಲಿ ನೆಲೆಸಿದ್ದಾರೆ.

ಮನೆ ಮುಂದೆ ನಿಲ್ಲಿಸಿದ ಕಾರು ಅಗ್ನಿಗಾಹುತಿ



ಮೈಸೂರು,ಅ.30(ಎಸ್‌ಬಿಡಿ)–ಮನೆ ಮುಂದೆ ನಿಲ್ಲಿಸಿದ್ದ ಕಾರು ಹೊತ್ತಿ ಉರಿದಿರುವ ಘಟನೆ ಮೈಸೂರಿನ ಆಲನಹಳ್ಳಿ ಬಡಾವಣೆಯಲ್ಲಿ ಭಾನುವಾರ ನಡೆದಿದೆ. ಆಲನಹಳ್ಳಿ ಮುಖ್ಯರಸ್ತೆ ನಿವಾಸಿ ನವೀನ್‌ಕುಮಾರ್ ಅವರ ಕಾರು ಸಂಪೂರ್ಣ ಸುಟ್ಟು ಕರಕಲಾಗಿದೆ. ಎಂದಿನಂತೆ ಮನೆ ಮುಂದೆ ನಿಲ್ಲಿಸಿದ್ದ ಕಾರಿಗೆ ಭಾನುವಾರ ಮುಂಜಾನೆ ಬೆಂಕಿ ಹೊತ್ತಿದೆ. ಮನೆಯವರು ಹೊರ ಬರುವಷ್ಟರಲ್ಲೇ ಕಾರು ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ.

ಈ ಸಂಬಂಧ ಕಾರು ಮಾಲೀಕರು ಆಲನಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸ್ಥಳ ಮಹಜರು ಮಾಡಿರುವ ಪೊಲೀಸರು, ಮುಂದಿನ ಕ್ರಮ ಕೈಗೊಂಡಿದ್ದಾರೆ. ಘಟನಾ ಸ್ಥಳ ಹಾಗೂ ಆಸುಪಾಸಿನಲ್ಲಿರುವ ಸಿಸಿ ಕ್ಯಾಮರಾ ಫುಟೇಜ್ ಪರಿಶೀಲಿಸಲಾಗುತ್ತಿದೆ. ದುಷ್ಕರ್ಮಿಗಳು ಏನಾದರೂ ಕಾರಿಗೆ ಬೆಂಕಿ ಹಾಕಿರಬಹುದೇ? ಅಥವಾ ತಾಂತ್ರಿಕ ಸಮಸ್ಯೆಯಿಂದ ಬೆಂಕಿ ಹೊತ್ತಿಕೊಂಡಿದೆಯೇ? ಎಂಬ ಆಯಾಮದಲ್ಲಿ ತನಿಖೆ ನಡೆಸಲಾಗುತ್ತಿದೆ ಎಂದು ಆಲನಹಳ್ಳಿ ಪೊಲೀಸರು ತಿಳಿಸಿದ್ದಾರೆ.

ಏಕಲವ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮೈಸೂರು,ಅ.30– ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು 2022ನೇ ಸಾಲಿನ ಏಕಲವ್ಯ ಪ್ರಶಸ್ತಿಗೆ ಅರ್ಹ ಕ್ರೀಡಾಪಟುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿದ ರಾಜ್ಯದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು. ಈ ಸಂಬಂಧ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ ನವೆಂಬರ್ 25ರೊಳಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಅಥವಾ ದೂ.ಸಂ:0821–2564179 ಅನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಹುಡುಗಿ : ಹಲೋ ಡಾಕ್ಟರ್ ನನಗೆ ತುಂಬಾ ಭಯ ಆಗ್ತಿದೆ. ಪ್ಲೀಸ್ ನಮ್ಮ ಹುಡುಗನ್ನ ಒಳಗಡೆ ಕರಿತೀರಾ?
ಡಾಕ್ಟರ್ : ಯಾಕಮ್ಮ ನನ್ನ ಮೇಲೆ ವಿಶ್ವಾಸ ಇಲ್ವಾ? ನಾನು ತುಂಬಾ ಒಳ್ಳೆಯವನು.
ಹುಡುಗಿ : ಹಾಗೇನಿಲ್ಲ ಡಾಕ್ಟರೆ ನಿಮ್ಮ ನರ್ಸ್ ಹೊರಗಡೆ ಒಬ್ಬಳೇ ಇದ್ದಾಳೆ. ನನ್ನ ಹುಡುಗನ ಮೇಲೆ ವಿಶ್ವಾಸ ಇಲ್ಲ !!

ಮೈಸೂರು ಮಿತ್ರ
ಮಂಗಳವಾರ, 31 ಅಕ್ಟೋಬರ್ 2023
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ತನಗೆ ತೋರಿದ್ದೇ ಸರಿಯಾದ ದಾರಿ ಇರಬಹುದು.
ಆದರೆ ಅದು ತನ್ನ ಹೊರತು ಇನ್ನೂ ಹತ್ತು ಜನಕ್ಕೆ ಸರಿಯಾಗಿ
ಕಂಡಿರಬೇಕು. – ವಿ.ಎಂ. ಇನಾಂದಾರ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದಾನದಾನಕ್ಕಿಂತ ಅನ್ನದಾನ ಮೇಲು

ನಿಮ್ಮ ಪತ್ರಗಳು

ಕುರಿ, ಕೋಳಿಗಳನ್ನು ಬಲಿ ಕೊಡುವುದು ಮೌಢ್ಯವಾದರೆ ಬೂದಗುಂಬಳ ಒಡೆಯುವುದೂ ಮೌಢ್ಯವಲ್ಲವೆ...!?

ಮಾನ್ಯರೆ,

ಎಲ್ಲರೂ ಅತ್ಯಂತ ಸಡಗರ ಸಂಭ್ರಮದಿಂದ ಆಯುಧ ಪೂಜಾ ಹಬ್ಬವನ್ನೇನೋ ಆಚರಿಸಿ ಸಂಭ್ರಮಿಸಿದ್ದಾಯ್ತು. ಆದರೆ ಹಬ್ಬದ ಹೆಸರಿನಲ್ಲಿ ಎಲ್ಲರೂ ಮಾಡಿದ್ದಾದರೂ ಏನು...!? ಅದರ ಬಗ್ಗೆ ಈಗ ನಾವೆಲ್ಲ ಆತ್ಮವಲೋಕನ ಮಾಡಿಕೊಳ್ಳೋಣ.

ಏಕೆಂದರೆ ಹಬ್ಬದ ಹೆಸರಲ್ಲಿ ಅಂದು ನಾವು ನಮ್ಮ ನಮ್ಮ ವಾಹನಗಳ ಮುಂದೆ, ಮನೆಗಳ ಮುಂದೆ ಪೂಜೆಯ ಹೆಸರಲ್ಲಿ ದೊಡ್ಡ ದೊಡ್ಡ ಬೂದಕುಂಬಳ ಕಾಯಿಗಳನ್ನು, ನಿಂಬೆಹಣ್ಣುಗಳನ್ನು, ಸವತೆಕಾಯಿಗಳನ್ನು ಒಡೆದು ಹಾಗೆ ಬಗೆ ಬಗೆಯ ಹೂಗಳಿಂದ ಮನೆ ಹಾಗೂ ವಾಹನಗಳನ್ನು ಅಲಂಕರಿಸಿ ಪೂಜೆ ಮಾಡಿ ಸಂಭ್ರಮಸಿದ್ದೇನೋ ಸರಿ. ಆದರೆ ಹಬ್ಬವಾದ ನಂತರ ಮರು ದಿನ ಅವುಗಳನ್ನು ಬೀದಿ ಬೀದಿಗಳಲ್ಲಿ, ರಸ್ತೆ ಬದಿಗಳಲ್ಲಿ ಹೀಗೆ ಎಲ್ಲೆಂದರಲ್ಲಿ ಬಿಸಾಡಿ ಕಸದ ರಾಶಿಯನ್ನೇ ಮಾಡಿ ಬಿಟ್ಟೆವಲ್ಲ ಅದು ಎಷ್ಟರ ಮಟ್ಟಿಗೆ ಸರಿ...!?

ಹಾಗೆಯೇ ಈ ಆಯುಧ ಪೂಜೆ ಹಬ್ಬದಲ್ಲಿ ಹಲವು ಮಂದಿ ತಮ್ಮ ತಮ್ಮ ವಾಹನಗಳಿಗೆ ಕುರಿ, ಕೋಳಿಗಳನ್ನು ಬಲಿ ಕೊಡುವುದುಂಟು. ಆದರೆ ಅದನ್ನು ಬಹುಪಾಲು ಮಂದಿ ಮೌಢ್ಯವೆಂದು ವಿರೋಧಿಸುತ್ತಾರೆ. ಆದರೆ ಅದೇ ದಿನ ಬಹುಪಾಲು ಮಂದಿ ಕುಂಬಳಕಾಯಿಗೆ ಕುಂಕುಮ ಹಾಕಿ ವಾಹನಗಳ ಮುಂದೆ ಕುಂಬಳ ಒಡೆದು ಸಂಭ್ರಮಿಸುವುದನ್ನೇಕೆ ಇವರು ಮೌಢ್ಯವೆನ್ನುವುದಿಲ್ಲ....!?

ಪ್ರಾಣಿ ಬಲಿ ಕೊಟ್ಟಾದ ಮೇಲೆ ಅದನ್ನು ಯಾರೂ ಸಹ ವ್ಯರ್ಥ ಮಾಡುವುದಿಲ್ಲ. ಬದಲಿಗೆ ಅದನ್ನ ಆಹಾರವಾಗಿ ಬಳಸುತ್ತಾರೆ. ಆದರೆ ಪೋಷಕಾಂಶಗಳ ಮಹಾ ಕಣಜದಂತಿರುವ ಬೂದ ಕುಂಬಳಕಾಯಿ, ನಿಂಬೆಹಣ್ಣು, ಹಾಗೂ ಸವತೆಕಾಯಿಗಳನ್ನು ಬೀದಿ ಬೀದಿಗಳಲ್ಲಿ, ರಸ್ತೆ ಬದಿಗಳಲ್ಲಿ ಹೀಗೆ ಎಲ್ಲೆಂದರಲ್ಲಿ ಹೊಡೆದು ಬೀಸಾಡುತ್ತಾ ಬಹು ಮುಖ್ಯ ಆಹಾರವನ್ನು ಹೀಗೆ ವ್ಯರ್ಥ ಮಾಡುತ್ತಾರಲ್ಲ ಇದಕ್ಕೆ ಏನನ್ನಬೇಕು...? ನೀವೆ ಹೇಳಿ. **–ಅಪುರಾ, ಅಗತಗೌಡನಹಳ್ಳಿ, ಗುಂಡ್ಲುಪೇಟೆ. ತಾ.**


ಕನ್ನಡದ ಮೇಲೆ ಭಾಷಾಭಿಮಾನ ಬೆಳೆಯಲಿ

ಮಾನ್ಯರೆ,

ಮೈಸೂರು ರಾಜ್ಯ ಕರ್ನಾಟಕ ಎಂದು ಮರುನಾಮಕರಣಗೊಂಡು ಸುವರ್ಣ ಮಹೋತ್ಸವವನ್ನು ಆಚರಿಸುವ ಹೊತ್ತಿನಲ್ಲಿದೆ. ಸಂಭ್ರಮದ ನಡುವೆಯೂ, ಸಮಸ್ಯೆಗಳ ಸಾಲು ನಮ್ಮ ಮುಂದಿವೆ. ಭಾಷಾವಾರು ಪ್ರದೇಶಗಳ ಮೇಲೆ ರಾಜ್ಯ ಅಸ್ತಿತ್ವಕ್ಕೆ ಬಂದಿದ್ದು, ದಶಕಗಳಿಂದಲೂ ಮಹಾರಾಷ್ಟ್ರ–ಬೆಳಗಾವಿ ಗಡಿ ಸಮಸ್ಯೆ ಇಂದಿಗೂ ಬಗೆಹರಿದಿಲ್ಲ. ಶತಮಾನಗಳಿಂದಲೂ ಕನ್ನಡಿಗರು ಕಾವೇರಿ ವಿಷಯದಲ್ಲಿ ಅನ್ಯಾಯಕ್ಕೊಳಗಾಗುತ್ತಿದ್ದಾರೆ. ಈ ವಿಚಾರದಲ್ಲಿ ಪಕ್ಷಭೇದ ಮರೆತು ಎಲ್ಲಾ ಜನಪ್ರತಿನಿಧಿಗಳು ತಾಂತ್ರಿಕವಾಗಿ ಈ ಸಮಸ್ಯೆಯನ್ನು ಬಗೆಹರಿಸಬೇಕು. ಇತ್ತೀಚಿನ ದಿನಮಾನಗಳಲ್ಲಿ ಕನ್ನಡ ಎಲ್ಲಾ ರೀತಿಯಲ್ಲೂ ನಿರ್ಲಕ್ಷ್ಯಕ್ಕೊಳಗಾಗುತ್ತಿದೆ. ಬೆಂಗಳೂರು, ದೇಶದ ಎಲ್ಲಾ ಜನರಿಗೂ ನೆಲೆ ಕೊಟ್ಟಿದೆ. ಅದೇ ಬೆಂಗಳೂರಿನಲ್ಲಿ ಇಂದು ಕನ್ನಡದ ಪರಿಸ್ಥಿತಿ ಶೋಚನಿಯವಾಗಿದೆ. ಇಂಗ್ಲಿಷ್ ಪ್ರಭಾವದಿಂದ ತನ್ನ ನೆಲದಲ್ಲೇ ಕನ್ನಡಕ್ಕೆ ಆಪತ್ತು ಬಂದೊದಗಿದೆ. ಇದರಿಂದ ಭಾಷೆಯ ಮೂಲ ಸ್ವರೂಪ ಬದಲಾಗುತ್ತಿದೆ. ಭಾಷಾಮಾಲಿನ್ಯ ಉಂಟಾಗುತ್ತಿದೆ. ಪೋಷಕರು ಇಂಗ್ಲಿಷ್ ವ್ಯಾಮೋಹದಿಂದ ತಮ್ಮ ಮಕ್ಕಳನ್ನು ದುಬಾರಿ ಶುಲ್ಕ ಪಾವತಿಸಿ ಖಾಸಗಿ ಇಂಗ್ಲಿಷ್ ಶಾಲೆಗಳಿಗೆ ಸೇರಿಸುವ ಬೆಳವಣಿಗೆ ಹೆಚ್ಚುತ್ತಾ ಹೋಗುತ್ತಿದೆ. ನಮ್ಮೆಲ್ಲರಿಗೂ ಕನ್ನಡದ ಮೇಲೆ ಭಾಷಾಭಿಮಾನ ಬೆಳೆಯಬೇಕು. ತಾಯಿಯನ್ನು ಹೇಗೆ ಗೌರವದಿಂದ ಕಾಣುತ್ತೇವೋ ಅದೇ ರೀತಿ ಕನ್ನಡ ನೆಲ, ನಾಡು, ನುಡಿಯನ್ನು ಗೌರವಿಸಬೇಕು. ಈ ಕೆಲಸ ಪ್ರತಿಯೊಬ್ಬ ಕನ್ನಡಿಗನಿಂದ ಆಗಬೇಕು.

–ಪ್ರಸಾದ್ ಜಿ.ಎಂ, ಮೈಸೂರು

ಅಭಿನಂದನೆ, ನಿಮಗೆ ಅಭಿವಂದನೆ



ಸಂಜೆ ಸೊಬಗಿನಾಕಾಶದಾ ತಾರೆಯೋ
ಬೆಳಗಿನುದಯರವಿ ಮೈಸೂರು ಮಿತ್ರನೋ
ಪರಿಮಳವಸೂಸುತ್ತ ಕಿರಣಗಳ ಬೀರುತ್ತ
ಬರಲೆಂದು ಕಾದಿಹರು ಜನ ಲಕ್ಷಾಂತರ,
ಬರಲು ತಡವಾಯ್ತೇ, ಅಥವಾ ಬರಲಿಲ್ಲವೆನೆಜನ
ಚಡಪಡಿಸುವರು ತಮ್ಮ ಚಹಾ ಕುಡಿಯದೇ...
ತಮ್ಮ ಚಹಾ ಕುಡಿಯದೇ...
Star of Mysore ಏ ಇರಲಿ, ಮೈಸೂರು ಮಿತ್ರನೇ ಇರಲಿ
ಅಭಿನಂದನೆ ನಿಮಗೆ ಅಭಿವಂದನೆ ॥

Star of Mysore ಬಂತು ಮೈಸೂರು ಮನೆ ಮನೆಗೆ
comments are free, facts are sacred ಎಂಬ
ಧ್ಯೇಯ ವಾಕ್ಯದ ಹೊತ್ತು, ಸಂಜೆ ಚಹದ ಹೊತ್ತಿಗೆ
ಸುದ್ದಿ ಗಂಪಿನ ಸ್ವಾರಸ್ಯದೊಡನೆ, ಸ್ವಾರಸ್ಯದೊಡನೆ...
ಈ ಐದು ದಶಕದಲಿ ನಡೆದ ಇತಿಹಾಸವೆಲ್ಲವನೂ
ಜನನ ಮರಣವೇ ಇರಲಿ, ಸರ್ಕಾರದೇಳು ಬೀಳಿರಲಿ
ಜನಪದವೇ ಇರಲಿ, ಜನಜಾಗೃತಿಯೇ ಇರಲಿ
ಜನವಾಣಿಯೇ ಇರಲಿ, ಎಲ್ಲವನೂ ನೀನಿತ್ತೆ ಮೈಸೂರ ತಾರೆ॥

ಎಲೆ ಮೈಸೂರ ತಾರೆ, ನಿನ್ನ ಪುಟಗಳಲಿ ತೆರೆದ ಇತಿಹಾಸವೆನಿತೋ
ಜನರು ಪೇಳಿದ ಕುಂದುಕೊರತೆಗಳೆಷ್ಟೋ
ಸುಜನರಾ ವಿಚಾರಧಾರೆಗಳ ವಿವರಗಳೆಷ್ಟೋ
ಭೋಜನದ ಸಿಹಿಯಂತೆ ಆಗೊಮ್ಮೆ ಈಗೊಮ್ಮೆ
ಮೂಡುವ abracadabra ಮತ್ತೆ...
ತೋಚಿದ್ದು, ಗೀಚಿದ್ದೆನಬಹುದಾದ ಗಣಪತಿಯ hocus focus
ಏನುಂಟು–ಏನಿಲ್ಲ ಎಲ್ಲವನು ತನ್ನ ಪುಟ್ಟಬ್ಬದಲಿ ಪೊತ್ತು
ದಿನ ಸಂಜೆ ಬರುತಾಳೆ ಮೈಸೂರು ತಾರೆ... ನಮ್ಮ ಮನೆಗೆ॥


ಪತ್ರಿಕೋದ್ಯಮದ ಈ ಅನವರತ ಸೇವೆಗೆ
ಉದ್ಯಮದ ನಿಮ್ಮ ಸಮದರ್ಶಿಭಾವಕೆ
ಜನರ ಸುಖದುಃಖ ತುಡಿತಗಳ ತಲುಪಿಸುವ ಕಾರ್ಯಕೆ
ಆಯತಪ್ಪಿದಾಡಳಿತಕೆ ವಚನದಾಛಡಿಯೇಟು ನೀಡುವಿಗೆಕೆ
ಮಾತೆ ಸರಸ್ವತಿಯು ತನ್ನೊಲವಿನಾಕೊಸಾದ ಗಣಪತಿಗೆ
ಇತ್ತಳುನ್ನತ ಪದವಿ (D. Litt) ಡಿ.ಲಿಟ್ಟನಿಂದು

ಅಭಿನಂದನೆ ನಿಮಗೆ ಅಭಿವಂದನೆ
ಗಣಪತಿಯೇ ನಿಮಗೆ ಭವನದಾನಮ್ಮೆಲ್ಲರಭಿವಂದನೆ

–ಪ್ರೊ. ಎ.ಟಿ. ಭಾಷ್ಯಂ, ಮೈಸೂರು. 28.10.2023.

ಪುಸ್ತಕ ಪರಿಚಯ

ಶ್ರೀವಿದ್ಯಾ ವಿಶಾರದ ಶ್ರೀ ಜಯಚಾಮರಾಜೇಂದ್ರ ವಾಗ್ಗೇಯ ವೈಭವ



ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ: 87627 88685/ 91108 92842


ಈಚೆಗೆ ಮಹಾರಾಜ ಜಯ ಚಾಮರಾಜ ಒಡೆಯರ ಸಂಗೀತ ಕೃತಿಗಳ ಬಗ್ಗೆ ಪುಸ್ತಕಗಳು ಬರುತ್ತಿರುವುದು ಸ್ವಾಗತಾರ್ಹ. ಇವು ಮಹಾರಾಜರ ರಚನೆಗಳ ಬಗ್ಗೆ ಆಸಕ್ತಿಯುಳ್ಳವರಿಗೆ ಮತ್ತು ಸಂಗೀತಗಾರರಿಗೆ ಹೆಚ್ಚಿನ ಸಹಾಯವಾಗುತ್ತಿದ್ದು ಈ ದಿಕ್ಕಿನಲ್ಲಿ ಇದ್ದ ಕೊರತೆಯನ್ನು ತುಂಬುತ್ತಿವೆ. ಈ ಕೃತಿಗಳ ಸಾಲಿಗೆ ಸೇರುತ್ತದೆ ವಿದ್ವಾನ್ ವಿ. ನಂಜುಂಡಸ್ವಾಮಿಯವರು ಈಚೆಗೆ ಹೊರತಂದಿರುವ "ಶ್ರೀವಿದ್ಯಾ ವಿಶಾರದ ಶ್ರೀ ಜಯಚಾಮರಾಜೇಂದ್ರ ವಾಗ್ಗೇಯ ವೈಭವ."

ಜಯಚಾಮರಾಜ ಒಡೆಯರು ಬಹುಮುಖ ವ್ಯಕ್ತಿತ್ವದ ಮಹಾರಾಜರಾಗಿದ್ದರು. ಅವರ ಪಾಂಡಿತ್ಯ ಜನಮೆಚ್ಚುಗೆ ಗಳಿಸಿತ್ತು. ಪ್ರಸಿದ್ಧ ವಿದ್ವಾಂಸರೂ ಅವರ ರಚನೆಗಳನ್ನು ಮೆಚ್ಚಿ ಹಾಡಿದ್ದಾರೆ. ಇಂದೂ ಹಾಡುತ್ತಿದ್ದಾರೆ. ಅವರ ಕೃತಿಗಳಿಗೇ ಮೀಸಲಿಟ್ಟ ಕಾರ್ಯಕ್ರಮಗಳು ನಡೆಯುತ್ತಿವೆ. ಅವರು ರಚಿಸಿರುವ 94 ಸಂಗೀತ ಕೃತಿಗಳು ಸಂಗೀತ ಕ್ಷೇತ್ರದಲ್ಲಿ ಅವರಿಗಿದ್ದ ಪರಿಣಿತಿಯ ದ್ಯೋತಕವಾಗಿವೆ. ಅವು ತಮ್ಮದೇ ಆದ ವಿಶಿಷ್ಟತೆಯನ್ನು ಪ್ರದರ್ಶಿಸುತ್ತವೆ. ಅವರ ಸಂಗೀತಶಾಸ್ತ್ರ ಜ್ಞಾನಕ್ಕೆ ಅವರ 'ಶುದ್ಧಧನ್ಯಾಸಿ' ರಾಗದ 'ಪರಿಪಾಹಿಮಾಂ ಸದಾಪರದೇವತೆ' ಕೃತಿ ಒಂದು ಉತ್ತಮವಾದ ಉದಾಹರಣೆ ಎನ್ನಬಹುದು. ಮಹಾರಾಜರಿಗೆ ಕರ್ನಾಟಕ, ಹಿಂದೂಸ್ಥಾನಿ ಮತ್ತು ಪಾಶ್ಚಾತ್ಯ ಸಂಗೀತಗಳಲ್ಲಿ ವಿಶೇಷವಾದ ಆಸಕ್ತಿ ಇತ್ತು. ಸಂಸ್ಕೃತ ಭಾಷೆಯಲ್ಲಿ ಪ್ರಾವೀಣ್ಯತೆ ಪಡೆದಿದ್ದರು. ಯೋಗ ಮತ್ತು ತತ್ವಶಾಸ್ತ್ರಗಳನ್ನು ಚೆನ್ನಾಗಿ ಬಲ್ಲವರಾಗಿದ್ದರು. ಶ್ರೀವಿದ್ಯಾ ಉಪಾಸಕರು. ವೇದ, ಉಪನಿಷತ್ತುಗಳ ಆಳವಾದ ಅಧ್ಯಯನ ಮಾಡಿದ್ದರು. ಇದರಿಂದಾಗಿ ಅದಕ್ಕೆ ಬೇಕಾಗಿದ್ದ ವಾಗ್ಗೇಯತ್ವವೂ ಅವರಿಗೆ ಸಿದ್ಧಿಸಿತ್ತು. ಇವೆಲ್ಲದರ ಪ್ರಭಾವ ಅವರ ಕೃತಿಗಳಲ್ಲಿ ಪ್ರತಿಬಿಂಬಿತವಾಗಿರುವುದನ್ನು ನಾವು ಕಾಣಬಹುದು. ಅವರ ಸಂಗೀತದ ಗುರುಗಳು ಸುಪ್ರಸಿದ್ಧ ಮೈಸೂರು ವಾಸುದೇವಾಚಾರ್ಯರು ಮತ್ತು ವೀಣಾ ವೆಂಕಟಗಿರಿಯಪ್ಪನವರು. ಮಹಾರಾಜರು ಪಿಯಾನೋ ನುಡಿಸುವುದರಲ್ಲಿಯೂ ಪ್ರವೀಣರಾಗಿದ್ದರು. ಕರ್ನಾಟಕ, ಹಿಂದೂಸ್ತಾನಿ ಮತ್ತು ಪಾಶ್ಚಾತ್ಯ ಸಂಗೀತಗಾರರಿಗೆ ನೆರವು, ಪ್ರೋತ್ಸಾಹ ನೀಡುತ್ತಿದ್ದರು. 1940ರಲ್ಲಿ ಪಟ್ಟಕ್ಕೆ ಬಂದ ಅವರು ಸೆಪ್ಟಂಬರ್ 23. 1974ರಲ್ಲಿ ದೈವಾಧೀನರಾದರು.

ಅವರ ಬಹಳಷ್ಟು ಕೃತಿಗಳು 1945ರ ಆಗಸ್ಟ್ 17 ಮತ್ತು 1947ರ ಡಿಸೆಂಬರ್ 19ರ ನಡುವೆ ರಚಿಸಿದ್ದಾಗಿವೆ. ಕೇವಲ ಎರಡು ವರ್ಷ ನಾಲ್ಕು ತಿಂಗಳ ಅಲ್ಪಾವಧಿಯಲ್ಲಿ ಇಷ್ಟು ಕೀರ್ತನೆಗಳನ್ನು ರಚಿಸಿರುವುದು ಒಂದು ಸಾಧನೆಯೇ ಸರಿ. ಅಲ್ಪಾವಧಿಯಲ್ಲಿಯೇ ಈ ಸಂಖ್ಯೆಯಲ್ಲಿ ಕೀರ್ತನೆಗಳನ್ನು ರಚಿಸಿರುವ ಮಹಾರಾಜರು ಅವರೊಬ್ಬರೇ ಎಂದು ಕಾಣುತ್ತದೆ. ಈಗ ಲಭ್ಯವಿರುವ ಅವರ 94 ಕೃತಿಗಳಲ್ಲಿ ಹತ್ತು ಹೊಸ ರಾಗಗಳದ್ದಾಗಿದ್ದು, 30 ವೈವಿಧ್ಯಮಯ ರೀತಿಯ ರಚನೆಗಳು. ಇವು ಕರ್ನಾಟಕ ಸಂಗೀತಕ್ಕೆ ವಿಶಿಷ್ಟ ಕೊಡುಗೆಯಾಗಿವೆ. ಅವರ ಎಲ್ಲ ಕೃತಿಗಳು ಸಂಸ್ಕೃತ ಭಾಷೆಯಲ್ಲಿವೆ ಎಂದು ವಿವರಿಸುತ್ತಾರೆ ಈ ಗ್ರಂಥದ ಕರ್ತೃ ವಿದ್ವಾನ್ ನಂಜುಂಡಸ್ವಾಮಿಯವರು.

ಒಡೆಯರ 94 ಕೃತಿಗಳ ಪೈಕಿ 11 ಗಣಪತಿ ಕುರಿತದ್ದಾಗಿಯೂ, 15 ಶಿವಪರವಾದದ್ದೂ, ನಾಲ್ಕು ವಿಷ್ಣುವಿನ ಪರವಾದದ್ದೂ ಆಗಿವೆ. ಸರಸ್ವತಿ ಪರ ಎರಡು, ಲಕ್ಷ್ಮೀ ಪರ ಐದು, ಹಾಗೂ ಇತರ ದೇವಿಯರ ಕುರಿತಾಗಿ 57 ಕೃತಿಗಳಿವೆ.

ವಿದ್ವಾನ್ ನಂಜುಂಡಸ್ವಾಮಿಯವರು ವೃತ್ತಿಯಲ್ಲಿ ಬ್ಯಾಂಕ್ ಅಧಿಕಾರಿಯಾಗಿದ್ದವರು. ಆದರೆ ಪ್ರವೃತ್ತಿಯಲ್ಲಿ ವೀಣಾವಾದಕರು ಹಾಗೂ



ಲೇಖಕರು : ವಿದ್ವಾನ್ ವಿ. ನಂಜುಂಡಸ್ವಾಮಿ
ಪ್ರಕಟಿತ ವರ್ಷ : 2022
ಪುಟಗಳು: 452 + 4
ಪ್ರಕಾಶಕರು : ಮಹಿಮಾ ಪ್ರಕಾಶನ, ಮೈಸೂರು

ಸಂಗೀತ ಶಾಸ್ತ್ರಜ್ಞರು. ಶ್ರೇಷ್ಠ ವಿದ್ವಾಂಸರು.

ಸಂಗೀತ ಶಾಸ್ತ್ರ ಮತ್ತು ಅದಕ್ಕೆ ಸಂಬಂಧಪಟ್ಟಂತೆ ಸುಮಾರು 50 ಪುಸ್ತಕಗಳನ್ನು ಬರೆದಿದ್ದಾರೆ. ಜಯಚಾಮರಾಜ ಒಡೆಯರ ಸಂಗೀತ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಅವರು 'ರಾಯಲ್ ಕಂಪೋಸರ್ ಶ್ರೀ ಜಯಚಾಮರಾಜೇಂದ್ರ ಒಡೆಯರ್ಸ್ ಕಂಪ್ಲೀಟ್ ಮ್ಯೂಸಿಕಲ್ ಕಾಂಪೊಸಿಷನ್ಸ್ ಅಂಡ್ ಅನಾಲಿಸಿಸ್' ಎಂಬ ಇಂಗ್ಲಿಷ್ ಗ್ರಂಥವನ್ನು 2016ರಲ್ಲಿ ಬರೆದಿದ್ದಾರೆ. ನಂಜುಂಡಸ್ವಾಮಿಯವರ ತಂದೆ ಅರಮನೆಯ ದೇವಸ್ಥಾನಗಳ ಪಾರುಪತ್ತೆ ಹುದ್ದೆಯಲ್ಲಿದ್ದರು. ಅವರ ಚಿಕ್ಕಪ್ಪ ಅರಮನೆಯ ಆಸ್ಥಾನ ವಿದ್ವಾಂಸರಾಗಿದ್ದ ಪ್ರಸಿದ್ಧ ಎಂ.ಚಲುವರಾಯಸ್ವಾಮಿ ಅವರು. ಇದರಿಂದಾಗಿ ಅರಮನೆಯ ವಾತಾವರಣ ಅವರಿಗೆ ಚೆನ್ನಾಗಿ ಮನದಟ್ಟಾಗಿತ್ತು.

ನಂಜುಂಡಸ್ವಾಮಿಯವರು ಒಡೆಯರ 94 ಕೃತಿಗಳನ್ನು ಶ್ರಮವಹಿಸಿ ಸಂಗ್ರಹಿಸಿ ಪ್ರತಿಯೊಂದನ್ನೂ ದೀರ್ಘವಾಗಿ ವಿಶ್ಲೇಷಿಸಿ ತಮ್ಮ 452 ಪುಟಗಳ ಬೃಹತ್ ಕೃತಿಗೆ ಮಹತ್ವ ನೀಡಿದ್ದಾರೆ. ಅವುಗಳ ರಾಗ, ರಚನೆಯ ದಿನಾಂಕಗಳ ವಿವರಗಳ ಜೊತೆಗೆ ಕೃತಿಗಳ ಪಲ್ಲವಿ, ಅನುಪಲ್ಲವಿ ಚರಣಗಳ ವಿಂಗಡನೆ ಮಾಡಿಕೊಟ್ಟಿದ್ದಾರೆ. ಪ್ರತಿಯೊಂದು ಕೃತಿಯ ಪ್ರಾರಂಭದಲ್ಲಿ ಅದಕ್ಕೆ ಸಂಬಂಧಪಟ್ಟ ಶ್ಲೋಕಗಳನ್ನು ನೀಡಿ ಅವುಗಳ ಮಹತ್ವವನ್ನು ಹೆಚ್ಚಿಸಿದ್ದಾರೆ. ಪ್ರತಿಯೊಂದಕ್ಕೂ ಕೃತಿಯ ಭಾವಾರ್ಥ ಅಂತರಾರ್ಥ, ರೂಪಕಾರ್ಥ, ರಹಸ್ಯಾರ್ಥ ಮತ್ತು ಧ್ವನಾರ್ಥಗಳನ್ನು ಪ್ರಸ್ತಾಪಿಸಿದ್ದಾರೆ. ಕೃತಿಗಳ ರಚನೆಗೆ ಒಡೆಯರಿಗಾದ ಪ್ರೇರಣೆ, ರಚನೆಯ ಕಾರ್ಯ, ಕಾರಣ ಇತ್ಯಾದಿ ಸಂಬಂಧಗಳನ್ನು ಊಹಿಸಿಕೊಂಡು ಪರಿಚಯಿಸಿದ್ದಾರೆ. ಈ ವಿವರಗಳು ಸಂಗೀತಗಾರರಿಗೆ, ನೃತ್ಯ ಕಲಾವಿದರಿಗೆ ಬಹಳ ಮಟ್ಟಿಗೆ ಅನುಕೂಲವಾಗಲಿದೆ ಎನ್ನಲಾಗಿದೆ.

ಒಡೆಯರ ಕೃತಿಗಳಲ್ಲಿ ಯಾವ ರಾಗವೂ ಪುನರಾವರ್ತನೆಯಾಗಿಲ್ಲ. ಅವರಿಗೆ ಅಪರೂಪ ರಾಗಗಳ ಬಗ್ಗೆ ಅಪಾರ ಒಲವು. ಕೆಲವೊಂದು ರಾಗಗಳು ಗ್ರಂಥಸ್ಥವಾಗಿದ್ದು, ಯಾರಿಂದಲೂ ಬಳಸಲ್ಪಡದೇ ಇರುವಂತಹವು. ಮತ್ತೆ ಕೆಲವು ಒಡೆಯರಿಂದಲೇ ಬಳಸಲ್ಪಟ್ಟಿರುವವು. ಅವರು ಬಳಸಿರುವ ಅಪರೂಪದ ರಾಗಗಳ ಸಂಖ್ಯೆ ಒಟ್ಟು 20. ಅವರ ಅಂಬಾ ಶ್ರೀ ರಾಜರಾಜೇಶ್ವರಿ ಕೃತಿ 'ಭೋಗವಸಂತ' ರಾಗದಲ್ಲಿದ್ದು ಹೆಸರಾಂತ ವಾಗ್ಗೇಯಕಾರರ ರಚನೆಗಳು ಈ ರಾಗದಲ್ಲಿ ಕಂಡುಬರದಿದ್ದರೂ ಲಕ್ಷಣ ಗ್ರಂಥಗಳಲ್ಲಿ ಈ ರಾಗದ ಉಲ್ಲೇಖವಿದೆ ಎಂದು ವಿದ್ವಾನ್ ನಂಜುಂಡಸ್ವಾಮಿ ಉದಾಹರಣೆ ನೀಡುತ್ತಾರೆ.

ಶ್ರೀವಿದ್ಯಾ ಉಪಾಸಕರಾಗಿ ಹೆಚ್ಚಿನ ಕೃತಿಗಳನ್ನು ದೇವಿಗೆ ಮೀಸಲಿಟ್ಟು ರಚಿಸಿದ್ದರೂ, ಶಿವಭಕ್ತರೂ ಆಗಿದ್ದರಿಂದ ಶಿವನನ್ನು ಕುರಿತ 15 ಕೃತಿಗಳನ್ನೂ ರಚಿಸಿದ್ದಾರೆ. ಉದಾಹರಣೆಗೆ ಅವುಗಳಲ್ಲಿ ಒಂದಾದ ನಾದನಾಮಕ್ರಿಯ ರಾಗದ 'ಶಿವ ಶಿವ ಶಿವ ಭೋ ಮಹಾದೇವ ಶಂಭೋ' ಒಂದು ಅತ್ಯುತ್ತಮ ರಚನೆ. ಇದನ್ನು ಖ್ಯಾತ ಡಾ.ಎಂ.ಎಸ್.ಸುಬ್ಬುಲಕ್ಷ್ಮಿ ಅವರು ವಿಶ್ವಸಂಸ್ಥೆಯಲ್ಲಿ ಹಾಡಿ ಇಡೀ ವಿಶ್ವಕ್ಕೇ ಕೃತಿಯನ್ನೂ, ಕೃತಿಕಾರರನ್ನೂ ಪರಿಚಯಿಸಿದರು. ಮಹಾರಾಜರ ವಾಗ್ಗೇಯ ಪ್ರೌಢಿಮೆ ವಿಶ್ವಕ್ಕೇ ತಲುಪುವಂತೆ ಮಾಡಿದರು. ಒಡೆಯರ್ ಅವರ ಅನರ್ಘ್ಯ ಕೃತಿರತ್ನಗಳಲ್ಲಿ ಈ ಕೃತಿಯೂ ಒಂದಾಗಿದ್ದು ಮುಖ್ಯ ಸ್ವರಾಕ್ಷರಗಳ ಸೊಗಸಾದ ಏರಿಳಿತಗಳು, ಓಂಕಾರದೊಂದಿಗೆ ಗಾಂಧಾರಸ್ವರ ಮಿಲನ, ಸಮೃದ್ಧ ಪ್ರಾಸಗಳೊಂದಿಗೆ ಕೂಡಿದ ಈ ಕೃತಿಯನ್ನು ಆಲಿಸಿದವರಿಗೆ ಆನಂದಾಮೃತ ಅನುಗ್ರಹ ನೀಡುತ್ತದೆ.

ಅವರ 94 ವಿವಿಧ ರಾಗಗಳ ಕೃತಿಗಳಲ್ಲಿ 11 ರಚನೆಗಳು ಗಣಪತಿಯನ್ನು ಕುರಿತದ್ದಾದರೆ ನಾಲ್ಕು ವಿಷ್ಣುಪರದ್ದಾಗಿವೆ ಎನ್ನುವ ಅವರು, ಮಹಾರಾಜರಿಗೆ ಅವರ ಯದುವಂಶದ ಮೂಲ ಪುರುಷ ಕೃಷ್ಣ ಎಂಬುದನ್ನು ನೆನಪಿಸುತ್ತಾರೆ. ಮಹಾರಾಜರು ದೇವಿಯನ್ನು ಕುರಿತ ಅನೇಕ ಕೃತಿಗಳಲ್ಲಿ ಸರಸ್ವತೀ, ಮಹಾಲಕ್ಷ್ಮೀ, ಚಾಮುಂಡೇಶ್ವರಿ, ಕಾಮಾಕ್ಷಿ, ಮಹಾತ್ರಿಪುರಸುಂದರಿ, ಮಾತಂಗಕನ್ಯೆ, ಗೌರಿ, ಲಲಿತೆ ಮುಂತಾದ ದೇವಿಯರನ್ನು ಸ್ತುತಿಸಿದ್ದಾರೆ. 'ಸರಸ್ವತೀಂ ಭಗವತೀಂ ನಮಾಮ್ಯಹಂ' ರಚನೆಯಲ್ಲಿ ಅವರು 'ಸರಸಗಾನ'ಲೋಲೆಯಾದ ಸರಸ್ವತಿಯನ್ನು ಲೀಲಾಜಾಲವನ್ನಾಗಿ ಓಡಾಡುವ "ಹಂಸವಿನೋದನೆ"ಯಲ್ಲಿ ಚಿತ್ರಿಸಿರುವುದು ವೈಶಿಷ್ಟ್ಯಪೂರ್ಣವಾಗಿದೆ. 'ಪಾಹಿಮಾಂ ಶ್ರೀ ವರಲಕ್ಷ್ಮೀ ಕಾಮಾಕ್ಷಿ' ರಚನೆಯಲ್ಲಿ ಒಡೆಯರ ಆಲೋಚನಾ ಲಹರಿ ಬರುವುದು ಅವರಂತಹ ಶ್ರೇಷ್ಠ ತತ್ವಜ್ಞಾನಿಗೆ ಮಾತ್ರ ಸಾಧ್ಯ.

ದೇವಿಯ ವಿವಿಧ ರೂಪಗಳಲ್ಲಿ ಒಡೆಯರು ಚಾಮುಂಡೇಶ್ವರಿ, ಕಾಮಾಕ್ಷಿ, ಮಾತಂಗಕನ್ಯೆ, ಬೃಹನ್ನಾಯಕಿ, ಗೌರಿ, ತ್ರಿಪುರಸುಂದರಿ ಇತ್ಯಾದಿ ನಾನಾ ರೂಪಗಳನ್ನು ನಮ್ಮ ಕಣ್ಣು ಮುಂದೆ ರಾಗ ತಾಳಗಳ ಚೌಕಟ್ಟಿನಲ್ಲಿ ತಮ್ಮದೇ ಆದ ಸೌಂದರ್ಯದಿಂದ ಕೂಡಿ ವಿಜೃಂಭಿಸುವಂತೆ ಮಾಡಿದ್ದಾರೆ. ಅದೇ ರೀತಿ 'ಶ್ರೀವಿದ್ಯಾಂ ಲಲಿತಾಂ ಪ್ರಣ ಮಾಮಿ' ಕೃತಿಯಲ್ಲಿ ನಾದಬ್ರಹ್ಮದ ಮೂಲಕ ಶ್ರೀವಿದ್ಯಾ ಸ್ವರೂಪಿ ಲಲಿತಾ ಮಾತೆಯನ್ನು ದರ್ಶನ ಮಾಡಿಸುವ ವಿಶಿಷ್ಟ ಕಾರ್ಯ ಮಾಡಿದ್ದಾರೆ. 'ಭುವನೇಶ್ವರೀ ಭುವನಮನೋಹರಿ' ರಚನೆಯಲ್ಲಿ ಅವರು ವಿಶಿಷ್ಟ ಪದಪ್ರಯೋಗಗಳನ್ನು ಮಾಡಿರುವುದನ್ನು ನಾವು ಕಾಣಬಹುದು. ಅದೇ ರೀತಿ 'ಮನೋನ್ಮನೀ ಮಾಮವತು' ಕೃತಿಯಲ್ಲಿ ಸುಮಾರು 13 'ಮ'ಕಾರಗಳನ್ನು ಬಳಸಿ ಸಂಗೀತದಲ್ಲಿ ಲಾಲಿತ್ಯವನ್ನು ಹೆಚ್ಚಿಸಿರುವಂತೆ ಮಾಡಿರುವುದು ಅವರ ಪದಲಾಲಿತ್ಯದ ಜಾಣ್ಮೆಗೆ ಸಾಕ್ಷಿ. 'ಶ್ರೀ ಚಕ್ರಪುರ ನಿವಾಸಿನಿ ಅಂಬ' ಕೃತಿಯಲ್ಲಿ ಅವರು ದೇಶದ ಪುಣ್ಯ ಕ್ಷೇತ್ರಗಳನ್ನು ದರ್ಶಿಸಿದ್ದರಿಂದ ಈ ಎಲ್ಲ ಪುಣ್ಯಕ್ಷೇತ್ರಗಳಲ್ಲೂ ವಾಸವಾಗಿರುವವಳು ದೇವಿ ಎಂದು ಚಿತ್ರಿಸಿದ್ದಾರೆ. 'ಬ್ರಹ್ಮಾಂಡ ವಲಯೇ ಮಾಯೇ' ಮಾಂಡ್ ರಾಗದಲ್ಲಿದ್ದು ರಾಗ ಮುದ್ರೆಯನ್ನು 'ಬ್ರಹ್ಮಾಂಡ'ದಲ್ಲಿ ಅಡಗಿಸಿಟ್ಟಿರುವ ಈ ಕೃತಿ ಒಡೆಯರನ್ನು ಹೆಚ್ಚು ಜನಪ್ರಿಯರನ್ನಾಗಿಸಿದೆ.

ಅವರ ಚಿದಂಬರ ಕೃತಿಗಳಲ್ಲಿನ ಸಾಹಿತ್ಯದಲ್ಲಿ ಗಮನಿಸಬೇಕಾದ ಒಂದು ಅಂಶ ಎಂದರೆ ಅಲ್ಲಿ ಕೇವಲ ದೇವಿ ಪರಸ್ತುತಿಯಾಗಲೀ, ಆಧ್ಯಾತ್ಮಿಕ ವಿಷಯವಾಗಲೀ ಶ್ರೀವಿದ್ಯೆಗೆ ಸಂಬಂಧಿಸಿದಂತೆ ಮಾತ್ರವೇ ಇರದೆ, ಮಧ್ಯೆ ಮಧ್ಯೆ ಇತಿಹಾಸ, ಕಲೆ ಮುಂತಾದ ವಿಷಯಗಳನ್ನು ಕೃತಿ ಯೊಡನೆ ಸೇರಿಸಿರುವುದು ಎನ್ನುತ್ತಾರೆ ವಿದ್ವಾನ್ ನಂಜುಂಡಸ್ವಾಮಿ ಅವರು.

ಒಡೆಯರ್ ಅವರ ಶ್ರೀವಿದ್ಯಾ ದೀಕ್ಷಾ ಗುರುಗಳು ಶಿಲ್ಪಿ ಸಿದ್ದಲಿಂಗಸ್ವಾಮಿಗಳು. ಒಡೆಯರ ದೀಕ್ಷಾನಾಮ ಚಿತ್ರಭಾನಂದ ರಾಜಯೋಗೀಂದ್ರ. ಮಹಾರಾಜರು ತಮ್ಮ 'ಶ್ರೀ ಮಹಾಗಣಪತಿಂ ಭಜೇಹಂ' ಕೃತಿಯಲ್ಲಿ ತಮ್ಮ ಈ ದೀಕ್ಷಾನಾಮವನ್ನು ಅಳವಡಿಸಿದ್ದು 'ಚಿತ್ರಭಾನಂದ ರಾಜಯೋಗೀಂದ್ರ ವಂದಿತಂ' ಎಂದು ಅಂತ್ಯಗೊಳಿಸುತ್ತಾರೆ. ಅಲ್ಲದೆ ಶ್ರೀವಿದ್ಯಾ ಅಂಕಿತದೊಡನೆ 'ನಾಗಲಿಂಗವರಪುತ್ರಂ' ಎಂಬ ಪರ್ಯಾಯ ಮುದ್ರೆಯನ್ನೂ ತೋರಿಸಿದ್ದಾರೆ. ಅದೇ ರೀತಿ ಇನ್ನೂ ನಾಲ್ಕು ರಚನೆಗಳಲ್ಲಿ ತಮ್ಮ ದೀಕ್ಷಾ ನಾಮವನ್ನು ಉಪಯೋಗಿಸಿದ್ದು ಅವುಗಳನ್ನು ಗಮನಾರ್ಹವಾಗಿ ಮಾಡಿದ್ದಾರೆ. ತಮ್ಮ 55 ವರ್ಷದ ಅವಧಿಯಲ್ಲಿ 94 ಅನರ್ಘ್ಯ ಕೃತಿಗಳನ್ನು ನೀಡುವುದರ ಮೂಲಕ ರಾಜಯೋಗಿ ಯಾಗಿ, ರಾಜಯೋಗೀಂದ್ರರಾಗಿ ಬಾಳಿ ಅಜಾಮರ ರಾಗಿದ್ದಾರೆ. ತಮ್ಮ ಕೃತಿರತ್ನಗಳ ಮೂಲಕ ಜೀವಂತರಾಗಿದ್ದಾರೆ, ಜಯಚಾಮರಾಜ ಒಡೆಯರು.

ವಿದ್ವಾನ್ ನಂಜುಂಡಸ್ವಾಮಿ ಅವರ "ಶ್ರೀವಿದ್ಯಾ ವಿಶಾರದ ಶ್ರೀ ಜಯಚಾಮರಾಜೇಂದ್ರ ವಾಗ್ಗೇಯ ವೈಭವ" 452 ಪುಟಗಳ ಬೃಹತ್ ಗ್ರಂಥ. ಇದರಲ್ಲಿ 310 ಪುಟಗಳನ್ನು ಒಡೆಯರ 94 ಕೃತಿಗಳಿಗೆ ಮೀಸಲಿಟ್ಟಿದ್ದಾರೆ. ಉಳಿದ ಪುಟಗಳಲ್ಲಿ ಅವರು ಅರಮನೆಗೆ ಸಂಬಂಧಪಟ್ಟ ವಿವರಗಳನ್ನು ನೀಡಿ ಕೃತಿಯ ಮಹತ್ವವನ್ನು ಹೆಚ್ಚಿಸಿದ್ದಾರೆ. ಈ 'ಅರಮನೆ ಮಾಹಿತಿ ಕಣಜ'ದಲ್ಲಿ ಒಡೆಯರಿಗೆ ಅರ್ಪಿಸಿರುವ ತಮ್ಮದೇ ಒಂದು ರಚನೆ, ಒಡೆಯರ್ ಅವರಿಗೆ ಸಂಬಂಧಿಸಿದ ಕೆಲವು ಮುಖ್ಯ ದಿನಾಂಕಗಳು ಮತ್ತು ಮಾಹಿತಿಗಳು, ಅವರ ವ್ಯಕ್ತಿತ್ವ, ಸೂಕ್ಷ್ಮತೆ, ದೈವಭಕ್ತಿ, ಶ್ರೀವಿದ್ಯಾ ಆಕರ ಗ್ರಂಥಗಳ ಅಧ್ಯಯನ, ಸರಳತನ, ವಿದೇಶ ಪ್ರವಾಸ, ನೀಡಿದ ಉಪನ್ಯಾಸಗಳು ಹಾಗೂ ಅವರು ಪ್ರಕಟಿಸಿರುವ ಗ್ರಂಥಗಳು, ಐದು ಲಕ್ಷ್ಮೀ ಪಂಚರತ್ನ ಕೃತಿಗಳು, ಅರಮನೆ ನಾಡಗೀತೆ 'ಕಾಯೌ ಶ್ರೀ ಗೌರಿ', ಧೇನುಕಾ ರಾಗದ ಪ್ರಸಂಗ, ಚಾಮುಂಡಿ ಬೆಟ್ಟದ ವಿವರ, ಅರಮನೆಯಲ್ಲಿರುವ ಸಿಂಹಾಸನ, ಮೈಸೂರು ದಸರಾ, ಅರಮನೆ ತೊಟ್ಟಿಲ ಸಂಗೀತ, ಗಂಡಭೇರುಂಡದ ಮಹಿಮೆ, ಅರಮನೆಯಲ್ಲಿ ಪೂಜಾ ಅವಧಿಯಲ್ಲಿ ಮಾಡಲಾಗುತ್ತಿದ್ದ ಘಂಟಾನಾದದ ವಿಶೇಷತೆಗಳು, ಅರಮನೆಯಲ್ಲಿ ಜರುಗುವ ಹಬ್ಬ–ಹರಿದಿನಗಳು, ವ್ಯವಹಾರಗಳ ವ್ಯವಸ್ಥೆ, ಪೂಜೆ ಮತ್ತು ನೈವೇದ್ಯ, ಅರಮನೆ ಅಂಗಳದಲ್ಲಿರುವ ದೇವಸ್ಥಾನಗಳು, ಕೋಟೆಯ ಹೊರಗಿನ ಮಂದಿರಗಳು, ಶಂಕರ ಮಠ, ನಿರಂಜನ ಮಠ, ಐತಿಹಾಸಿಕ ರಸ್ತೆಗಳು, ಅರಮನೆಗೆ ಸಂಬಂಧಿಸಿದ ಇತರೆ ವಿವರಗಳು, ಇತ್ಯಾದಿ ಗತವೈಭವಗಳ ಬಗ್ಗೆ ನಂಜುಂಡಸ್ವಾಮಿಯವರು ಮಾಹಿತಿ ಕೊಟ್ಟಿದ್ದಾರೆ.

ಇವುಗಳಲ್ಲದೆ, ಅವರು ಕೃತಿಯ ವಿಷಯ ಸೂಚಿ, ಅಪರೂಪ ರಾಗಗಳ ಪಟ್ಟಿ, ಜಯ ಚಾಮರಾಜರ ಕೃತಿಗಳು, ವಿಮರ್ಶೆ, ಶ್ರೀಸಾಮಾನ್ಯರಿಗೆ ಶ್ರೀಚಕ್ರ ದರ್ಶನ ವಿಮರ್ಶೆ, ಶ್ರೀವಿದ್ಯೆ ಮತ್ತು ಜಯಚಾಮರಾಜ ಒಡೆಯರು, ವಾಗ್ಗೇಯ ರಚನೆಗಳ ಬಗ್ಗೆ ಸ್ಥೂಲ ಪರಿಚಯ ಮತ್ತು ಸ್ಪಷ್ಟನೆ ಇತ್ಯಾದಿ ವಿಷಯಗಳನ್ನೂ ಪ್ರಸ್ತಾಪಿಸಿ ಹೆಚ್ಚಿನ ಮಾಹಿತಿ ಓದುಗರಿಗೆ ನೀಡಿ ಕೃತಿಯ ಮೌಲ್ಯವನ್ನು ಹೆಚ್ಚಿಸಿದ್ದಾರೆ.

ಜಯಚಾಮರಾಜರ ಈವರೆಗೆ ದೊರೆತಿರುವ ಎಲ್ಲ ಕೃತಿಗಳನ್ನು ವಿಸ್ತಾರವಾಗಿ ವಿವರಿಸಿರುವ ವಿದ್ವಾನ್ ನಂಜುಂಡಸ್ವಾಮಿಯವರ 'ಶ್ರೀವಿದ್ಯಾ ವಿಶಾರದ ಶ್ರೀ ಜಯಚಾಮರಾಜ ವಾಗ್ಗೇಯ ವೈಭವ' ಒಂದು ವೈಶಿಷ್ಟ್ಯ ಕೃತಿಯಾಗಿ ನಿಲ್ಲುತ್ತದೆ. ಇಂತಹ ಗ್ರಂಥದ ಅವಶ್ಯಕತೆಯನ್ನು ಅದು ತುಂಬುತ್ತದೆ.

ಕರಾಳ ದಿನಾಚರಣೆಗೆ ಸಿದ್ಧತೆ: ಮಹಾರಾಷ್ಟ್ರ ಸಂಸದ, ಸಚಿವರಿಗೆ ಪ್ರವೇಶ ನಿರ್ಬಂಧ

ಬೆಳಗಾವಿ: ಮಹಾರಾಷ್ಟ್ರದ ಮೂವರು ಸಚಿವರು ಹಾಗೂ ಒಬ್ಬ ಸಂಸದ ಬೆಳಗಾವಿ ನಗರ ಅಥವಾ ಜಿಲ್ಲೆಯ ಗಡಿ ಪ್ರವೇಶಿಸದಂತೆ ನಿರ್ಬಂಧ ಹೇರಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

ನವೆಂಬರ್ 1ರಂದು ಕರ್ನಾಟಕ ರಾಜ್ಯೋತ್ಸವಕ್ಕೆ ವಿರುದ್ಧವಾಗಿ ಎಂಇಎಸ್ ಕರಾಳ ದಿನಾಚರಣೆಗೆ ಸಿದ್ಧತೆ ನಡೆಸಿದೆ. ಇದರಲ್ಲಿ ಪಾಲ್ಗೊಳ್ಳಲು ಮಹಾರಾಷ್ಟ್ರ ಗಡಿ ಉಸ್ತುವಾರಿ ಸಚಿವರಾದ ಶಂಭುರಾಜೆ ದೇಸಾಯಿ, ಚಂದ್ರಕಾಂತ ಪಾಟೀಲ, ಸಚಿವ ದೀಪಕ ಕೇಸರಕರ ಹಾಗೂ ಸಂಸದ ಧೈರ್ಯಶೀಲ ಮಾನೆ ಅವರಿಗೆ ಆಹ್ವಾನ ನೀಡಲಾಗಿದೆ.

ಈ ನಾಯಕರು ಬೆಳಗಾವಿಗೆ ಬಂದರೆ ಪ್ರಚೋದನಕಾರಿ ಭಾಷಣ ಮಾಡುವ ಸಾಧ್ಯತೆ ಇದೆ. ಅಲ್ಲದೇ, ಕನ್ನಡ ಸಂಘಟನೆಗಳು ಮುತ್ತಿಗೆ ಹಾಕುವ ಎಚ್ಚರಿಕೆ ನೀಡಿವೆ. ರಾಜ್ಯೋತ್ಸವ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿನ್ನೆಲೆಯಲ್ಲಿ ಈ ನಾಲ್ವರ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಅ.31ರ ಬೆಳಿಗ್ಗೆ 6ರಿಂದ ನ.2ರ ಸಂಜೆವರೆಗೂ ಈ ನಾಯಕರು ಜಿಲ್ಲೆಯ ಗಡಿ ಪ್ರವೇಶಿಸುವಂತಿಲ್ಲ ಎಂದು ಆದೇಶಿಸಿದ್ದಾರೆ



ಮೈಸೂರಿನ ಮಹಾಜನ ಪ್ರೌಢಶಾಲೆಯಲ್ಲಿ ವಾಲ್ಮೀಕಿ ಜಯಂತಿ ಆಚರಿಸಲಾಯಿತು.
ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು, ಶಿಕ್ಷಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು.


ಮಹಾರಾಷ್ಟ್ರಕ್ಕೆ ಕೆಕೆಆರ್‌ಟಿಸಿ ಸಂಚಾರ ತಾತ್ಕಾಲಿಕ ಸ್ಥಗಿತ



ಕಲಬುರಗಿ: ಮಹಾರಾಷ್ಟ್ರದಲ್ಲಿ ಮೀಸಲಾತಿ ಸಂಬಂಧ ಹೋರಾಟ ನಡೆಯುತ್ತಿದ್ದು, ಸೋಮವಾರ ಕಾರ್ಯಚರಣೆಯಲ್ಲಿದ್ದ ಕರ್ನಾಟಕಕ್ಕೆ ಸೇರಿದ ಕೆಕೆಆರ್‌ಟಿಸಿ ಬಸ್ಸಿಗೆ ಬೆಂಕಿ ಹಚ್ಚಿದ ಪರಿಣಾಮ ಅಂತರ ರಾಜ್ಯ ಬಸ್ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ಕೆಕೆಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಎಂ.ರಾಚಪ್ಪ ತಿಳಿಸಿದ್ದಾರೆ

ಸೋಮವಾರ ಬೀದರ ಜಿಲ್ಲೆಯ ಭಾಲ್ಕಿಯಿಂದ ಪುಣೆಗೆ ಹೊರಟಿದ್ದ ಬಸ್ ಸಂಖ್ಯೆ ಕೆ.ಎ–38 ಎಫ್– 1201 ಬಸ್ ಮಹಾರಾಷ್ಟ್ರದ ಉಮರ್ಗಾ ಬಳಿಯ ತರುರಿ ಗ್ರಾಮದಲ್ಲಿ ಪ್ರತಿಭಟನಾಕಾರರು ಬಸ್ ತಡೆದು ಪ್ರಯಾಣಿಕರನ್ನು ಕೆಳಗಿಳಿಸಿ ಬಸ್ಸಿಗೆ ಬೆಂಕಿ ಹಚ್ಚಿದ್ದಾರೆ. ಈ ಹಿನ್ನೆಲೆಯಲ್ಲಿ ತುಳಜಾಪುರ ಯಾತ್ರೆ ಸೇರಿದಂತೆ ಮಹಾರಾಷ್ಟ್ರಕ್ಕೆ ಅಂತರ್ ರಾಜ್ಯ ಕಾರ್ಯಾಚರಣೆಯನ್ನು ತಾತ್ಕಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ಹೇಳಿದ್ದಾರೆ. ಸ್ಥಳೀಯ ಪೊಲೀಸರ ನೆರವಿನಿಂದ ಬಸ್‌ನಲ್ಲಿದ್ದ 39 ಪ್ರಯಾಣಿಕರನ್ನು ಸುರಕ್ಷಿತವಾಗಿ ಅವರ ತಲುಪುವ ಸ್ಥಳಕ್ಕೆ ಪರ್ಯಾಯ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ಇನ್ನೂ ಮಹಾರಾಷ್ಟ್ರದಲ್ಲಿ ಕಾರ್ಯಚರಣೆಯಲ್ಲಿರುವ ಬಸ್‌ಗಳನ್ನು ಹತ್ತಿರ ಪೊಲೀಸ್ ಠಾಣೆ, ಬಸ್ ಡಿಪೋಗಳಲ್ಲಿ ಪಾರ್ಕ್ ಮಾಡಲು ಸಂಸ್ಥೆ ಸಿಬಂದಿಗೆ ನಿರ್ದೇಶನ ನೀಡಲಾಗಿದೆ.

ವರುಣ್ ಬಿ.ರಾಜ್ ರಾಜ್ಯಮಟ್ಟಕ್ಕೆ ಆಯ್ಕೆ



ಮೈಸೂರು,ಅ.30(ಎಸ್‌ಪಿಎನ್)–ನಗರದ ಗುರುಕುಲ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿ ವರುಣ್ ಬಿ.ರಾಜ್ ಜಿಲ್ಲಾಮಟ್ಟದ ಲಾನ್ ಟೆನ್ನಿಸ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ನ.4ರಂದು ರಾಯಚೂರಿನಲ್ಲಿ ನಡೆಯುವ ರಾಜ್ಯಮಟ್ಟದ ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ತೆಲಂಗಾಣ ಸಂಸದ ಪ್ರಭಾಕರ್‌ಗೆ ಚಾಕು ಇರಿತ: ಆರೋಪಿ ಸೆರೆ





ಹೈದರಾಬಾದ್: ದೌಲತಾಬಾದ್‌ನ ಮಂಡಲದ ಸೂರಂಪಲ್ಲಿ ಗ್ರಾಮದಲ್ಲಿ ಪ್ರಚಾರ ನಡೆಸುತ್ತಿದ್ದ ವೇಳೆ 'ಭಾರತ ರಾಷ್ಟ್ರ ಸಮಿತಿ' (ಬಿಆರ್‌ಎಸ್) ನಾಯಕ, ಮೇದಕ್ ಲೋಕಸಭಾ ಕ್ಷೇತ್ರದ ಸಂಸದ ಪ್ರಭಾಕರ್ ರೆಡ್ಡಿ ಅವರ ಹೊಟ್ಟೆಗೆ ವ್ಯಕ್ತಿಯೊಬ್ಬರು ಚಾಕುವಿನಿಂದ ಇರಿದಿದ್ದಾರೆ.

ಪ್ರಭಾಕರ್ ರೆಡ್ಡಿ ಅವರನ್ನು ಕೂಡಲೇ ಗಜ್ವೆಲ್ ಆಸ್ಪತ್ರೆಗೆ ರವಾನಿಸಲಾಯಿತು. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಹೈದರಾಬಾದ್‌ಗೆ ಕಳುಹಿಸಲಾಗಿದೆ. ಸದ್ಯ, ರೆಡ್ಡಿಯವರ ಆರೋಗ್ಯ ಸ್ಥಿರವಾಗಿದ್ದು, ಆತಂಕಪಡುವ ಅಗತ್ಯವಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ.

ರೆಡ್ಡಿ ಮೇಲೆ ಹಲ್ಲೆ ನಡೆಸಿದ ವ್ಯಕ್ತಿಯನ್ನು ಮಿರದೊಡ್ಡಿ ಮಂಡಲದ ರಾಜು ಎಂದು ಗುರುತಿಸಲಾಗಿದೆ. ಘಟನೆ ಬೆನ್ನಲ್ಲೇ ಆತನನ್ನು ಬಿಆರ್‌ಎಸ್ ಕಾರ್ಯಕರ್ತರು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಕೈಕುಲುಕುವ ನೆಪದಲ್ಲಿ ರೆಡ್ಡಿ ಅವರ ಹೊಟ್ಟೆಗೆ ರಾಜು ಚಾಕುವಿನಿಂದ ಇರಿದಿದ್ದಾನೆ. ರೆಡ್ಡಿ ಜತೆಗಿದ್ದ ಭದ್ರತಾ ಸಿಬ್ಬಂದಿ ತಕ್ಷಣ ಆರೋಪಿ ಕೈಯಲ್ಲಿದ್ದ ಚಾಕುವನ್ನು ಕಿತ್ತುಕೊಂಡಿದ್ದಾರೆ.

ಆರೋಪಿ ಬಳಿಯಿದ್ದ ಯೂಟ್ಯೂಬರ್ ಎಂಬ ಗುರುತಿನ ಚೀಟಿಯನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಬಾರಿ ದುಬ್ಬಾಕ್ ಕ್ಷೇತ್ರದ ಬಿಆರ್‌ಎಸ್ ಅಭ್ಯರ್ಥಿಯಾಗಿ ಪ್ರಭಾಕರ್ ರೆಡ್ಡಿ ಕಣಕ್ಕಿಳಿದಿದ್ದಾರೆ. ತೆಲಂಗಾಣ ಮುಖ್ಯಮಂತ್ರಿ ಕೆ.ಚಂದ್ರಶೇಖರ್‌ರಾವ್ (ಕೆಸಿಆರ್) ನೇತೃತ್ವದ ಬಿಆರ್‌ಎಸ್, ಬಿಜೆಪಿ ಹಾಗೂ ಕಾಂಗ್ರೆಸ್ ನಡುವೆ ಪೈಪೋಟಿ ಏರ್ಪಟ್ಟಿದೆ. 119 ಸ್ಥಾನಗಳ ತೆಲಂಗಾಣ ವಿಧಾನಸಭೆಗೆ ನ.30ರಂದು ಚುನಾವಣೆ ನಡೆಯಲಿದ್ದು, ಡಿ.3ರಂದು ಮತ ಎಣಿಕೆ ನಡೆಯಲಿದೆ.

ನ.4, ಭಾರತೀಯ ಜಿಯೋಟೆಕ್ನಿಕಲ್ ಸೊಸೈಟಿಯ ರಾಷ್ಟ್ರೀಯ ಕಾರ್ಯಾಗಾರ

ಮೈಸೂರು, ಅ.30– ನವೆಂಬರ್ 4ನೇ ತಾರೀಖು ಭಾರತೀಯ ಜಿಯೋಟೆಕ್ನಿಕಲ್ ಸೊಸೈಟಿಯ (ಐಜಿಎಸ್) 75ನೇ ವರ್ಷಾಚರಣೆ ಕಾರ್ಯಕ್ರಮದ ಭಾಗವಾಗಿ, ಒಂದು ದಿನದ ರಾಷ್ಟ್ರೀಯ ಕಾರ್ಯಾಗಾರವನ್ನು ಮೈಸೂರಿನ ವಿದ್ಯಾವರ್ಧಕ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಐಜಿಎಸ್ ಸಂಸ್ಥೆಯು 1948ರಲ್ಲಿ ಸ್ಥಾಪನೆಯಾಗಿ, ಐಜಿಎಸ್ ಸಂಸ್ಥೆಯು ಅಂತಾರಾಷ್ಟ್ರೀಯ ಮಣ್ಣು ಅಧ್ಯಯನ ಮತ್ತು ಜಿಯೋಟೆಕ್ನಿಕಲ್ ಇಂಜಿನಿಯರಿಂಗ್ ಸಮಾಜದ (ಸೊಸೈಟಿ) ಮಾನ್ಯತೆ ಪಡೆದ ಸಂಸ್ಥೆಯಾಗಿದ್ದು, ಸಿವಿಲ್ ಇಂಜಿನಿಯರ್‌ಗಳು ಮತ್ತು ಭೂವಿಜ್ಞಾನಿಗಳ ನಡುವಿನ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿದೆ. ಭೂಶಾಸ್ತ್ರ, ಮಣ್ಣಿನ ರಚನೆ, ಗುಣ ಲಕ್ಷಣಗಳು, ಬಂಡೆಗಲ್ಲು, ಹಿಮಪದರ, ಮಂಜುಗಡ್ಡೆ ಪ್ರದೇಶ ಹಾಗೂ ಕಟ್ಟಡದ ಅಡಿಪಾಯ, ರಚನೆ, ಸದೃಢ ತಾಂತ್ರಿಕತೆ ಮುಂತಾದ ವಿಚಾರಗಳ ಬಗ್ಗೆ ಸಂಶೋಧನೆ ನಡೆಸಲು ಬೆಂಬಲ ನೀಡುತ್ತಾ ಬಂದಿದೆ.

ಒಂದು ದಿನದ ಕಾರ್ಯಾಗಾರದಲ್ಲಿ, ನೀರಿನ ಕೊರತೆ, ಕಟ್ಟಡ ಧ್ವಂಸ ಪ್ರಕ್ರಿಯೆಯಲ್ಲಿ ಸುಸ್ಥಿರ ಇಂಜಿನಿಯರಿಂಗ್ ಕ್ರಮಗಳು, ಬಹುಮಹಡಿ ಕಟ್ಟಡಗಳಿಗೆ ಅಡಿಪಾಯದ ತಂತ್ರಜ್ಞಾನ, ಜಿಯೋಸೆಲ್ಸ್ ಬಳಕೆ ಮೂಲಕ ಕರ್ನಾಟಕದ ರಸ್ತೆಗಳ ಅಭಿರುದ್ಧಿ, ಭೂಕಂಪನ, ಭೂ ಕುಸಿತ ಹಾಗೂ ಲ್ಯಾಂಡ್ ಫಿಲ್ (ಭೂಮಿಯ ಒಳಗೆ ಕೆಲಸಕ್ಕೆ ಬಾರದನ್ನು ತುಂಬುವ)ಗಳಿಂದ ಸಂಭವಿಸುವ ಪ್ರಕೃತಿ ವಿಕೋಪಕ್ಕೆ ಮಾರ್ಗೋಪಾಯಗಳ ಬಗ್ಗೆ ಉಪನ್ಯಾಸ ನೀಡಲು ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್ತಿನ (ಎಐಸಿಟಿಇ) ಅಧ್ಯಕ್ಷ ಡಾ.ಟಿ.ಜಿ.ಸೀತಾರಾಮ್, ಐಐಎಸ್ಸಿ, ಐಐಟಿ, ಎನ್‌ಐಟಿಯ ವಿಜ್ಞಾನಿಗಳು ಹಾಗೂ ದೇಶದ ಉನ್ನತ ಇಂಜಿನಿಯರು ಭಾಗವಹಿಸಲಿದ್ದಾರೆ ಎಂದು ಐಜಿಎಸ್ ಮೈಸೂರು ವಿಭಾಗದ ಮುಖ್ಯಸ್ಥರು ಹಾಗೂ ವಿವಿಇ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಪ್ರೊ.ಎಸ್.ಕೆ.ಪ್ರಸಾದ್ ತಿಳಿಸಿದರು. ಕಾರ್ಯಾಗಾರದಲ್ಲಿ ಸಿವಿಲ್ ಇಂಜಿನಿಯರುಗಳು, ಪ್ರಾಧ್ಯಾಪಕರು, ವಿದ್ಯಾರ್ಥಿಗಳು, ಪರಿಸರ ಪ್ರೇಮಿಗಳು ಭಾಗವಹಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನೋಂದಣಿ ಕುರಿತು ಮಾಹಿತಿಗೆ ಸಂಪರ್ಕಿಸಿ; ಪ್ರೊ.ಎಸ್.ಕೆ.ಪ್ರಸಾದ್– 9449621994

ಕರ್ನಾಟಕ ಸಂಭ್ರಮ–50

ದೇವರಾಜ ಅರಸರನ್ನು ಮರೆತ ಸರ್ಕಾರ; ಮುಖಂಡರ ಬೇಸರ



ಶ್ರೀಧರ್ ರಾಜೇ ಅರಸ್

ಮೈಸೂರು, ಅ.30(ಎಂಕೆ)– ರಾಜ್ಯಕ್ಕೆ ಕರ್ನಾಟಕವೆಂದು ನಾಮಕರಣ ಮಾಡಿ 50 ವರ್ಷಗಳಾಗಿರುವ ಸಂದರ್ಭದಲ್ಲಿ ನಾಮಕರಣಕ್ಕೆ ಕಾರಣಕರ್ತರಾದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸ್ ಅವರನ್ನು ರಾಜ್ಯ ಸರ್ಕಾರ ಕಡೆಗಣಿಸಿದೆ ಎಂದು ಕರ್ನಾಟಕ ಅರಸು ಮಹಾಮಂಡಲಿ ಟ್ರಸ್ಟ್ ಅಧ್ಯಕ್ಷ ಬಿ.ಎಸ್.ಶ್ರೀಧರ್ ರಾಜೇ ಅರಸ್ ಬೇಸರ ವ್ಯಕ್ತಪಡಿಸಿದ್ದಾರೆ.

ಮೈಸೂರು ರಾಜ್ಯಕ್ಕೆ ಕರ್ನಾಟಕವೆಂದು ನಾಮಕರಣ ಮಾಡಿ 50 ವರ್ಷಗಳಾಗಿರುವ ಹಿನ್ನೆಲೆಯಲ್ಲಿ ವರ್ಷವಿಡೀ ಕನ್ನಡ ರಾಜ್ಯೋತ್ಸವವನ್ನು ವಿಶಿಷ್ಟ ರೀತಿಯಲ್ಲಿ ಆಚರಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಸಿದ್ಧತೆ ಮಾಡಿಕೊಳ್ಳುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ಎಸ್.ತಂಗಡಗಿ ಆದೇಶ ಮಾಡಿರುವುದು ಸ್ವಾಗತಾರ್ಹ. ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ ಎಂಬ ಘೋಷವಾಕ್ಯ ಪ್ರಶಂಸನೀಯವಾದರೂ ಕರ್ನಾಟಕವೆಂದು ಹೆಸರಿಟ್ಟ ಮಹಾ ವ್ಯಕ್ತಿಯ ಹೆಸರನ್ನು ಎಲ್ಲಿಯೂ ಪ್ರಸ್ತಾಪಿಸದಿರುವುದು ವಿಷಾದನೀಯ.

ರಾಜ್ಯ ಸರ್ಕಾರ ಕೂಡಲೇ ಆಗಿರುವ ಲೋಪವನ್ನು ಸರಿಪಡಿಸಿಕೊಂಡು ಕನ್ನಡ ರಾಜ್ಯೋತ್ಸವ ಧ್ವಜ ಹಾರಿಸುವಾಗ ಕರ್ನಾಟಕ ಎಂದು ಹೆಸರಿಟ್ಟ ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ ಭಾವಚಿತ್ರವನ್ನಿಟ್ಟು ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವಿಸಬೇಕು. ಹಾಗೆಯೇ ನಾಮಕರಣದ ಸಂದರ್ಭದಲ್ಲಿ ದೇವರಾಜ ಅರಸು ಅವರು ಮಾಡಿದ ಭಾಷಣ ಪ್ರಸಾರ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಮಲಯಾಳಂ ನಟಿ ರೆಂಜೂಷಾ ಮೆನನ್ ಆತ್ಮಹತ್ಯೆ



ತಿರುವನಂತಪುರ: ಮಲಯಾಳಂ ನಟಿ ರೆಂಜೂಷಾ ಮೆನನ್ ಅವರು ಸೋಮವಾರ ತಿರುವನಂತಪುರಂನಲ್ಲಿರುವ ತಮ್ಮ ಅಪಾರ್ಟ್‌ಮೆಂಟ್‌ನಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. 35 ವರ್ಷದ ರೆಂಜೂಷಾ ತನ್ನ ಕುಟುಂಬದೊಂದಿಗೆ ಅಪಾರ್ಟ್‌ಮೆಂಟ್‌ನಲ್ಲಿ ವಾಸವಿದ್ದರು. ಸೋಮವಾರ ಬೆಳಗ್ಗೆ ಎಷ್ಟು ಹೊತ್ತಾದರೂ ರೂಮಿನ ಬಾಗಿಲು ತೆಗೆಯದ ಕಾರಣ ಮನೆಯವರಿಗೆ ಅನುಮಾನ ಬಂದಿತ್ತು. ನಂತರ ಬಾಗಿಲು ಮುರಿದು ನೋಡಿದಾಗ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಸದ್ಯ ವಿಚಾರಣೆ ನಡೆಯುತ್ತಿದ್ದು, ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. 35 ವರ್ಷದ ರೆಂಜೂಷಾ ಮೆನನ್ ಆನಂದರಾಗಂನಂತಹ ಜನಪ್ರಿಯ ಟಿವಿ ಧಾರಾವಾಹಿಗಳಲ್ಲಿ ಕಾಣಿಸಿಕೊಂಡಿದ್ದರು.ಕೆಲವು ಮಲಯಾಳಂ ಚಿತ್ರಗಳಲ್ಲೂ ನಟಿಸಿದ್ದರು. ಆತ್ಮಹತ್ಯೆಗೆ ಕಾರಣ ತಿಳಿಯಲು ಶ್ರೀಕರಿಯಂ ಪೊಲೀಸರು ತನಿಖೆ ಆರಂಭಿಸಿದ್ದಾರೆ.

ನಿಧನ



ಶತಾಯುಷಿ ಸಿದ್ದಮ್ಮ

ಮೈಸೂರು, ಅ.30– ಮೈಸೂರಿನ ಗೋಕುಲಂ ನಿವಾಸಿ, ಶತಾಯುಷಿ ಸಿದ್ದಮ್ಮ(106) ಅವರು ಇಂದು ನಿಧನರಾದರು.

ಇವರು ಮೂವರು ಪುತ್ರರು, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಗೋಕುಲಂ ರುದ್ರಭೂಮಿಯಲ್ಲಿ ಸೋಮವಾರ ಮಧ್ಯಾಹ್ನ ಅಂತ್ಯಸಂಸ್ಕಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಂಗಾಯಣ ಮಾಜಿ ನಿರ್ದೇಶಕ ಅಡ್ಡಂಡ ಕಾರ್ಯಪ್ಪ ನಿರ್ದೇಶನದ ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರ

ವೀರ ಸಾವರ್ಕರ್ ಕುರಿತ ನಾಟಕ 'ಕರಿನೀರ ವೀರ' ಯಶಸ್ವಿ ಪ್ರದರ್ಶನ

● ಅವರ ಬಾಲ್ಯ, ಜೈಲುವಾಸ, ಸ್ವಾತಂತ್ರ್ಯ ಹೋರಾಟದ ರೋಚಕ ಅಭಿನಯ ● ನ.7, 8ರಂದು ಮೈಸೂರು ಕಲಾಮಂದಿರದಲ್ಲಿ ಪ್ರದರ್ಶನ






ಪೊಲೀಸ್ ಭದ್ರತೆ

'ಕರಿನೀರ ವೀರ' ನಾಟಕ ಪೊಲೀಸ್ ಭದ್ರತೆಯೊಂದಿಗೆ ಪ್ರದರ್ಶನವಾಯಿತು. ಈ ಮೊದಲು 'ಟಿಪ್ಪು ನಿಜಕನಸುಗಳು' ನಾಟಕದ ಮೂಲಕ ಸಂಚಲನ ಸೃಷ್ಟಿಸಿದ್ದ ಅಡ್ಡಂಡ ಕಾರ್ಯಪ್ಪ ಅವರ ನಿರ್ದೇಶನದ ಮತ್ತೊಂದು ನಾಟಕವಾದ ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಕುರಿತ 'ಕರಿನೀರ ವೀರ' ನಾಟಕ ಪೊಲೀಸ್ ಭದ್ರತೆಯೊಂದಿಗೆ ಪ್ರದರ್ಶನಗೊಂಡಿತು. ಪ್ರದರ್ಶನಕ್ಕೆ ಯಾವುದೇ ತೊಂದರೆಯಾಗದಂತೆ ಸೂಕ್ತ ಭದ್ರತೆ ನೀಡಲಾಗಿತ್ತು.

ಮೈಸೂರು,ಅ.30(ಎಂಕೆ)– ಮೈಸೂರು ರಂಗಾಯಣ ಮಾಜಿ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ ಅವರ ರಚನೆ, ಪರಿಕಲ್ಪನೆ, ವಿನ್ಯಾಸ ಹಾಗೂ ನಿರ್ದೇಶನದಲ್ಲಿ ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಕುರಿತ 'ಕರಿನೀರ ವೀರ' ನಾಟಕ ರಂಗ ಪ್ರಯೋಗ ಅಪಾರ ಜನಮನ್ನಣೆಯೊಂದಿಗೆ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಮೊದಲ ಪ್ರದರ್ಶನ ಕಂಡಿತು.



ಕಲಾಮಂದಿರದ ಕಿರುರಂಗಮಂದಿರದಲ್ಲಿ ಸೋಮವಾರ ಪ್ರದರ್ಶನಗೊಂಡ 'ಕರಿನೀರ ವೀರ' ನಾಟಕದಲ್ಲಿ ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಅವರ ತ್ಯಾಗ, ಸ್ವಾತಂತ್ರ್ಯ ಹೋರಾಟ, ಬರವಣಿಗೆ, ದೇಶಾಭಿಮಾನವನ್ನು ಅನಾವರಣಗೊಳಿಸಲಾಯಿತು. ತಾಯಿ ಭಾರತಾಂಬೆಯನ್ನು ಬ್ರಿಟಿಷರಿಂದ ಮುಕ್ತಗೊಳಿಸುವಲ್ಲಿ ಜೈಲುವಾಸವೂ ಪುಣ್ಯದ ಫಲವೆಂಬಂತೆ ಕಡು ಕಷ್ಟವನ್ನು ಅನುಭವಿಸುವ ವೀರ ಸಾವರ್ಕರ್ ಅವರ ಬದುಕಿನ ಕರಾಳ ಚಿತ್ರಣವನ್ನು ಎಳೆ ಎಳೆಯಾಗಿ ತೋರಿಸಲಾಗಿದೆ.

ವೀರ ಸಾವರ್ಕರ್ ಅವರ ಬಾಲ್ಯ, ಜೈಲುವಾಸ ಹಾಗೂ ನಂತರ ನಡೆಸುವ ಸ್ವಾತಂತ್ರ್ಯ ಹೋರಾಟ ಸೇರಿದಂತೆ ಸನಾತನ ಧರ್ಮದ ಮಹತ್ವವನ್ನು ನಾಟಕದಲ್ಲಿ ತಿಳಿಸುವ ಪ್ರಯತ್ನ ಮಾಡಲಾಗಿದೆ. ಸಾವರ್ಕರ್ ಕುಟುಂಬವೇ ದೇಶಕ್ಕಾಗಿ, ದೇಶದ ಸ್ವಾತಂತ್ರ್ಯಕ್ಕಾಗಿ ಅರ್ಪಣೆ ಮಾಡಿಕೊಂಡ ಕುಟುಂಬ ಎಂಬುದನ್ನು ಅರ್ಥವತ್ತಾಗಿ ತಿಳಿಸುವುದರ ಜೊತೆಗೆ ಬ್ರಿಟಿಷರು ಸಾವರ್ಕರ್ ಅವರಿಗೆ ಜೈಲಿನಲ್ಲಿ ನೀಡುತ್ತಿದ್ದ ಹಿಂಸೆಯ ಕರಾಳತೆಯನ್ನು ಮನಮುಟ್ಟುವಂತೆ ತೋರಿಸಲಾಗಿದೆ.

ಪ್ರೇಕ್ಷಕರ ಎದೆಯಲ್ಲಿ ದೇಶಾಭಿಮಾನ: 'ಕರಿನೀರ ವೀರ' ದೇಶಭಕ್ತ ಸಾಕ್ಷಿಪ್ರಜ್ಞೆ ವೀರ ಸಾವರ್ಕರ್ ಬದುಕಿನ ಕಥಾನಕ ಪ್ರೇಕ್ಷಕರ ಎದೆಯಲ್ಲಿ ದೇಶಾಭಿಮಾನ ಮೂಡಿಸಿತು. ಸಂಪೂರ್ಣ ಭರ್ತಿಯಾಗಿದ್ದ ಕಿರುರಂಗ ಮಂದಿರದ ಇಕ್ಕೆಲಗಳಲ್ಲಿಯೂ ವಂದೇ ಮಾತರಂ, ಭಾರತ್ ಮಾತಾಕೀ ಜೈ ಘೋಷಣೆಗಳ ಜೊತೆಗೆ ಮನದುಂಬಿ ಶಿಳ್ಳೆ–ಚಪ್ಪಾಳೆಗಳ ಸುರಿಮಳೆಗೈದ ಕಲಾಭಿಮಾನಿಗಳು ಕಲಾವಿದರ ಅಮೋಘ ಅಭಿನಯಕ್ಕೆ ಮನಸೋತರಲ್ಲದೆ, ಸಾವರ್ಕರ್ ತ್ಯಾಗ ಕಂಡು ಮರುಕಪಟ್ಟರು.

ಆಕರ್ಷಕ ಅಭಿನಯ: ಸಾವರ್ಕರ್ ಪ್ರತಿಷ್ಠಾನ ಮೈಸೂರು ಹಾಗೂ ರಾಷ್ಟ್ರಭಾರತಿ ಚಾರಿಟೆಬಲ್ ಟ್ರಸ್ಟ್ ಸಹಯೋಗದೊಂದಿಗೆ ನಿರ್ಮಾಣವಾಗಿರುವ 'ಕರಿನೀರ ವೀರ' ದೇಶಭಕ್ತ ಸಾಕ್ಷಿಪ್ರಜ್ಞೆ ಸಾವರ್ಕರ್ ಬದುಕಿನ ಕಥಾನಕ ನೋಡುಗರ ಮನಗೆದ್ದಿತು. ಸಾವರ್ಕರ್ ಪಾತ್ರದಲ್ಲಿ ಕಲಾವಿದರಾದ ಹರಿಸಿಂಗ್, ತೀರ್ಥೇಶ್ ಹಾಗೂ ಕಿರಣ್ ಅಭಿನಯ ಆಕರ್ಷವಾಗಿದ್ದರೆ, ಬ್ರಿಟಿಷ್ ಅಧಿಕಾರಿ ಬೇರಿ ಪಾತ್ರದಲ್ಲಿ ಸುಜಯ್, ವಕೀಲರ ಪಾತ್ರದಲ್ಲಿ ಧನುಷ್, ಮನೋಜ್ ಹಾಗೂ ಚಂದನ್, ಗಾಂಧಿ ಪಾತ್ರದಲ್ಲಿ ಪ್ರದೀಪ್, ಯಮುನಾ ಪಾತ್ರದಲ್ಲಿ ಅನಿತಾ ಕಾರ್ಯಪ್ಪ ಸೇರಿದಂತೆ ಇನ್ನುಳಿದ ಕಲಾವಿದರ ಅಚ್ಚುಕಟ್ಟು ಅಭಿನಯ ಮೋಡಿ ಮಾಡುವಂತಿದೆ.

ಹಾಗೆಯೇ ಗಜಾನನ ನಾಯ್ಕ್ ಹಾಗೂ ಸುಬ್ರಹ್ಮಣ್ಯ, ಮೈಸೂರು ಅವರ ಸಂಗೀತ, ಮಧುಸೂದನ್ ಬೆಳಕು, ಕಾರ್ತಿಕ್ ಉಪಮನ್ಯು ಹಾಗೂ ಮಂಜುನಾಥ ಶಿಲ್ಪಿ ಸಹಕಾರ, ಅನಿತಾ ಕಾರ್ಯಪ್ಪ ಅವರ ವಸ್ತ್ರ ವಿನ್ಯಾಸ ಆಕರ್ಷಣೀಯವಾಗಿದ್ದು, ನಾಟಕ ಮೆಚ್ಚುಗೆ ಪಡೆಯಲು ಸಹಕಾರಿಯಾಗಿದೆ.

ಮೈಸೂರಲ್ಲಿ ಮೊದಲ ಪ್ರದರ್ಶನ: ಬೆಂಗಳೂರಿನ ಕಲಾಗ್ರಾಮ ರಂಗಮಂದಿರದಲ್ಲಿ ಮೊದಲ ಮೂರು ಭರ್ತಿ ಪ್ರದರ್ಶನ ಕಂಡಿರುವ ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಕುರಿತ 'ಕರಿನೀರ ವೀರ' ನಾಟಕ, ಮೈಸೂರಿನಲ್ಲಿ ಮೊದಲ ಪ್ರದರ್ಶನ ಕಂಡಿತು. ಹಾಗೆಯೇ ನ.7 ಮತ್ತು 8ರಂದು ಕಲಾಮಂದಿರದಲ್ಲಿ ನಾಟಕ ಪ್ರದರ್ಶನ ನಡೆಯಲಿದ್ದು, ಈಗಾಗಲೇ ಬಹುತೇಕ ಟಿಕೆಟ್‌ಗಳು ಮಾರಾಟವಾಗಿವೆ ಎಂದು ನಾಟಕ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಬರ: ನ.3ರಿಂದ ಬಿಜೆಪಿಯಿಂದ ರಾಜ್ಯ ಪ್ರವಾಸ



ಬೆಂಗಳೂರು: ಈ ಬಾರಿ ಮಳೆಯ ಅಭಾವದಿಂದಾಗಿ ರಾಜ್ಯದಲ್ಲಿ ಬರ ಪರಿಸ್ಥಿತಿ ನಿರ್ಮಾಣವಾಗಿದೆ. ಇನ್ನು ರಾಜ್ಯ ಸರ್ಕಾರವೇ ಬರಪೀಡಿತ ತಾಲೂಕುಗಳ ಪಟ್ಟಿ ಬಿಡುಗಡೆ ಮಾಡಿದೆ.

ಈ ಮಧ್ಯೆ ಬಿಜೆಪಿ ಬರ ಅಧ್ಯಯನಕ್ಕಾಗಿ ನ.3ರಿಂದ ನ.10ರವರೆಗೆ ರಾಜ್ಯದಾದ್ಯಂತ ಪ್ರವಾಸ ಕೈಗೊಳ್ಳಲಿದೆ. ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಬಿಜೆಪಿಯ ಪ್ರಮುಖ ನಾಯಕರ 17 ತಂಡಗಳು ಬರ ಪ್ರವಾಸ ನಡೆಸಲಿವೆ.

ಬಿ.ಎಸ್.ಯಡಿಯೂರಪ್ಪ ನೇತೃತ್ವದ ತಂಡ ತುಮಕೂರು ಮತ್ತು ಬೆಂಗಳೂರಿಗೆ ಭೇಟಿ ನೀಡಲಿದ್ದು, ಸಿ.ಟಿ.ರವಿ ನೇತೃತ್ವದ ಮತ್ತೊಂದು ತಂಡ ಕೋಲಾರ ಮತ್ತು ಚಿಕ್ಕಬಳ್ಳಾಪುರಕ್ಕೆ ಭೇಟಿ ನೀಡಲಿದೆ. ಅರವಿಂದ ಬೆಲ್ಲದ ಸದಸ್ಯರೊಂದಿಗೆ ರಾಯಚೂರು ಮತ್ತು ಯಾದಗಿರಿಗೆ ಭೇಟಿ ನೀಡಲಿದರೆ, ಕೆ.ಎಸ್.ಈಶ್ವರಪ್ಪ ನೇತೃತ್ವದ ತಂಡ ಬಳ್ಳಾರಿ ಮತ್ತು ಕೊಪ್ಪಳಕ್ಕೆ ತೆರಳಲಿದೆ. ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದಲ್ಲಿ ಮೈಸೂರು ಮತ್ತು ಚಾಮರಾಜನಗರ ತಂಡ, ಬಿವೈ ವಿಜಯೇಂದ್ರ ನೇತೃತ್ವದ ತಂಡ ಬೀದರ್ ಮತ್ತು ಕಲಬುರಗಿಗೆ ಭೇಟಿ ನೀಡಲಿದೆ. ಶ್ರೀರಾಮುಲು ತಂಡ ಹಾವೇರಿ ಮತ್ತು ಗದಗಕ್ಕೆ ಭೇಟಿ ನೀಡಲಿದ್ದು, ಅರವಿಂದ ಲಿಂಬಾವಳಿ ತಂಡ ಬೆಳಗಾವಿ, ಚಿಕ್ಕೋಡಿಗೆ ಭೇಟಿ ನೀಡಲಿದೆ.

ವಿ.ಸುನೀಲ್‌ಕುಮಾರ್ ನೇತೃತ್ವದ ತಂಡ ಶಿವಮೊಗ್ಗ ಮತ್ತು ಉತ್ತರ ಕನ್ನಡಕ್ಕೆ ತೆರಳಲಿದ್ದು, ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ತಂಡ ದಾವಣಗೆರೆ ಮತ್ತು ಚಿತ್ರದುರ್ಗಕ್ಕೆ ಭೇಟಿ ನೀಡಲಿದೆ. ಡಿ.ವಿ.ಸದಾನಂದಗೌಡ ನೇತೃತ್ವದಲ್ಲಿ ಮಂಡ್ಯ ಮತ್ತು ಹಾಸನ ತಂಡ, ಗೋವಿಂದ ಕಾರಜೋಳ ಅವರ ತಂಡ ಧಾರವಾಡ, ವಿಜಯನಗರಕ್ಕೆ ಭೇಟಿ ನೀಡಲಿದೆ. ನಳಿನ್‌ಕುಮಾರ್ ಕಟೀಲ್ ತಂಡ ವಿಜಯಪುರ, ಬಾಗಲಕೋಟೆಗೆ ಭೇಟಿ ನೀಡಲಿದ್ದು, ಆರಗ ಜ್ಞಾನೇಂದ್ರ ತಂಡ ಉಡುಪಿ, ಚಿಕ್ಕಮಗಳೂರಿಗೆ ಭೇಟಿ ನೀಡಲಿದೆ. ಆರ್.ಅಶೋಕ್ ನೇತೃತ್ವದ ತಂಡವು ಮಂಗಳೂರು ಮತ್ತು ಕೊಡಗಿನಲ್ಲಿ, ಕೋಟ ಶ್ರೀನಿವಾಸ ಪೂಜಾರಿ ಬೆಂಗಳೂರು ಗ್ರಾಮಾಂತರ, ರಾಮನಗರಕ್ಕೆ ತಂಡ ಭೇಟಿ ನೀಡಲಿದೆ.

ದಕ್ಷಿಣ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಿಗೆ ನ.6ರವರೆಗೆ ಅವಕಾಶ

ಮೈಸೂರು, ಅ.30 (ಎಸ್‌ಬಿಡಿ)– ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ ಜಿಲ್ಲೆಯನ್ನೊಳಗೊಂಡ ದಕ್ಷಿಣ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಿಗೆ ನ.6ರವರೆಗೆ ಕಾಲಾವಕಾಶವಿದೆ.

ಕ್ಷೇತ್ರದ ನಿವಾಸಿಯಾಗಿದ್ದು ನವೆಂಬರ್ 1ಕ್ಕೆ ಮೊದಲು ಆರು ವರ್ಷಗಳ ಅವಧಿಯಲ್ಲಿ ಕನಿಷ್ಠ ಒಟ್ಟು ಮೂರು ವರ್ಷ ಪ್ರೌಢಶಾಲೆಗಿಂತ ಕಡಿಮೆಯಲ್ಲದ ನಿರ್ದಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಶೈಕ್ಷಣಿಕ ಸಂಸ್ಥೆಗಳಲ್ಲಿ ಬೋಧನಾ ವೃತ್ತಿಯಲ್ಲಿ ನಿರತರಾಗಿರುವವರು ಮತದಾರರ ಪಟ್ಟಿಗೆ ನೋಂದಣಿ ಮಾಡಿಕೊಳ್ಳಬಹುದು. ಇದಕ್ಕೆ ಶಿಕ್ಷಣ ಸಂಸ್ಥೆ ಮುಖ್ಯಸ್ಥರಿಂದ ಪಡೆದ ಸೇವಾ ಪ್ರಮಾಣ ಪತ್ರ ಅಗತ್ಯವಾಗಿದೆ.

ಮತದಾರರ ನೋಂದಣಾಧಿಕಾರಿ (ಪ್ರಾದೇಶಿಕ ಆಯುಕ್ತರು), ಸಹಾಯಕ ಮತದಾರರ ನೋಂದಣಾಧಿಕಾರಿ (ಜಿಲ್ಲಾಧಿಕಾರಿ) ಸೇರಿದಂತೆ ನಿಯೋಜಿತ ಅಧಿಕಾರಿಗಳ ಕಚೇರಿಯಲ್ಲಿ ನಮೂನೆ 19 ಅರ್ಜಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ನ.6ರೊಳಗೆ ಸಲ್ಲಿಸಬೇಕು. ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಪ್ರತಿ ಚುನಾವಣೆ ಸಂದರ್ಭದಲ್ಲೂ ಹೊಸದಾಗಿ ತಯಾರಿಸಬೇಕಿರುವುದರಿಂದ ಈ ಹಿಂದಿನ ಚುನಾವಣೆಗಳಲ್ಲಿ ನೋಂದಣಿಯಾದವರೂ ಹೊಸದಾಗಿ ಅರ್ಜಿ ಸಲ್ಲಿಸಬೇಕು. ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯ ಎಲ್ಲಾ ಅರ್ಜಿಗಳನ್ನು ಒಟ್ಟಿಗೆ ಕಳುಹಿಸಬಹುದು. ಒಂದೇ ಕುಟುಂಬದಲ್ಲಿ ಹೆಚ್ಚು ಜನ ಅರ್ಹರಿದ್ದರೆ ಅವರಲ್ಲಿ ಒಬ್ಬರು ಎಲ್ಲರ ಅರ್ಜಿಗಳನ್ನು ಸಲ್ಲಿಸಬಹುದು. ಆ ವೇಳೆ ಪ್ರತಿ ಸದಸ್ಯರ ಮೂಲ ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಒಳಪಡಿಸಬೇಕು.

ಶೈಕ್ಷಣಿಕ ಸಾಲ ಯೋಜನೆ ಅರ್ಜಿ ಆಹ್ವಾನ

ಮೈಸೂರು,ಅ.30– ಕರ್ನಾಟಕ ಆರ್ಯ ವೈಶ್ಯ ಅಭಿವೃದ್ಧಿ ನಿಗಮದ ವತಿಯಿಂದ 2023–24ನೇ ಸಾಲಿನ ಶೈಕ್ಷಣಿಕ ಸಾಲ ಯೋಜನೆ ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕವಾಗಿದ್ದು, www.kacdc. karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ www. kacdc.karnataka.gov.in ಅಥವಾ ದೂರವಾಣಿ ಸಂಖ್ಯೆ:– 0821–2341194, 9448451111 ಅಥವಾ ಸಂಬಂಧಿತ ಕರ್ನಾಟಕ ಆರ್ಯ ವೈಶ್ಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರನ್ನು ಸಂಪರ್ಕಿಸಬಹುದೆಂದು ಕರ್ನಾಟಕ ಆರ್ಯ ವೈಶ್ಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ನಗೆಹಬ್ಬ

ಮೈಸೂರು, ಅ.30– ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಮೈಸೂರಿನ 'ಶ್ರೀರಾಂಪುರ ಗೆಳೆಯರ ಬಳಗ' ಸಾಂಸ್ಕೃತಿಕ ಮತ್ತು ಸೇವಾ ವೇದಿಕೆ ವತಿಯಿಂದ ಶ್ರೀರಾಂಪುರ, ಎಸ್‌ಬಿಎಂ ಬಡಾವಣೆಯ ಶಿವ ದೇವಾಲಯ ವೃತ್ತದಲ್ಲಿ ನ.1ರಂದು ಸಂಜೆ 7ಕ್ಕೆ 'ನಗೆ ಹಬ್ಬ' ಆಯೋಜಿಸಲಾಗಿದ್ದು, ಪ್ರಾಣೇಶ್ ಇನ್ನಿತರ ಹಾಸ್ಯ ಕಲಾವಿದರು ಕಾರ್ಯಕ್ರಮ ನಡೆಸಿಕೊಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಹುಲಿ ಉಗುರು ಪ್ರಕರಣ: ನಟ ಜಗ್ಗೇಶ್‌ಗೆ ಅರಣ್ಯ ಇಲಾಖೆ ನೀಡಿದ್ದ ನೋಟಿಸ್‌ಗೆ ಹೈಕೋರ್ಟ್ ತಡೆ



ಬೆಂಗಳೂರು: ಹುಲಿ ಉಗುರು ಪ್ರಕರಣದಲ್ಲಿ ರಾಜ್ಯಸಭಾ ಸದಸ್ಯ ಮತ್ತು ನಟ ಜಗ್ಗೇಶ್‌ಗೆ ಅರಣ್ಯ ಇಲಾಖೆ ಅಧಿಕಾರಿಗಳು ನೀಡಲಾಗಿದ್ದ ನೋಟಿಸ್‌ಗೆ ಹೈಕೋರ್ಟ್ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಸೋಮವಾರ ಮಧ್ಯಂತರ ತಡೆಯಾಜ್ಞೆ ನೀಡಿದೆ.

ಜಗ್ಗೇಶ್‌ಗೆ ನೋಟಿಸ್ ನೀಡಿದ ಕೆಲ ಗಂಟೆಗಳಲ್ಲೇ ಅವರ ಮನೆ ಮೇಲೆ ದಾಳಿ ಮಾಡಿ ಶೋಧ ನಡೆಸಿದ ಇಲಾಖೆಯ ಕ್ರಮವು ಪ್ರಚಾರಕ್ಕಾಗಿ ಮಾಡಿದಂತೆ ತೋರುತ್ತಿದೆ ಎಂದು ಹೈಕೋರ್ಟ್ ಹೇಳಿದೆ.

ಅ.25ರಂದು ಸಂಜೆ ಅರಣ್ಯಾಧಿಕಾರಿಗಳು ತಮ್ಮ ಮನೆಗೆ ಭೇಟಿ ನೀಡಿದ ನಂತರ ರಾಜ್ಯಸಭಾ ಸದಸ್ಯರು ನೋಟಿಸ್ ಅನ್ನು ಪ್ರಶ್ನಿಸಿ ಕರ್ನಾಟಕ ಹೈಕೋರ್ಟ್‌ಗೆ ಮೊರೆ ಹೋಗಿದ್ದರು. ಅವರ ಅನುಪಸ್ಥಿತಿಯಲ್ಲಿ ಜಗ್ಗೇಶ್ ಪತ್ನಿ ಲಾಕೆಟ್ ಅನ್ನು ಅರಣ್ಯಾಧಿಕಾರಿಗಳಿಗೆ ನೀಡಿದ್ದರು.

ನೋಟೀಸ್ ಜಾರಿ ಮಾಡಿದ ಕೇವಲ ಒಂದು ಗಂಟೆಯಲ್ಲೇ ಅಧಿಕಾರಿಗಳು ಜಗ್ಗೇಶ್ ಅವರ ನಿವಾಸದ ಮೇಲೆ ದಾಳಿ ಮಾಡಿದ ಹಿನ್ನೆಲೆಯಲ್ಲಿ ಹೈಕೋರ್ಟ್ ನೋಟಿಸ್‌ಗೆ ಮಧ್ಯಂತರ ತಡೆಯಾಜ್ಞೆ ನೀಡಿದೆ. ಅಲ್ಲದೆ ನೋಟಿಸ್‌ಗೆ ಉತ್ತರಿಸಲು ಜಗ್ಗೇಶ್‌ಗೆ ಸಮಯ ಏಕೆ ನೀಡಲಿಲ್ಲ. ಅವರ ಮನೆಗೆ ಭೇಟಿ ನೀಡಿರುವುದು ಪ್ರಚಾರಕ್ಕಾಗಿಯೇ? ಅರಣ್ಯ ಅಧಿಕಾರಿಗಳು ಜನರ ಮನೆಗಳ ಮೇಲೆ ದಾಳಿ ನಡೆಸುವ ಬದಲು ಪ್ರಚಾರ ಗಿಟ್ಟಿಸಿಕೊಳ್ಳಲು ಬೇರೆ ಮಾರ್ಗಗಳನ್ನು ಹುಡುಕಬೇಕು ಎಂದು ಕೋರ್ಟ್ ಅಭಿಪ್ರಾಯಪಟ್ಟಿದೆ.

ಜಗ್ಗೇಶ್ ಪರ ವಾದ ಮಂಡಿಸಿದ ವಕೀಲರು, ಅಕ್ಟೋಬರ್ 25ರಂದು ಅವರಿಗೆ (ಜಗ್ಗೇಶ್) ನೀಡಲಾದ ನೋಟಿಸ್‌ನಲ್ಲಿ ತಮ್ಮ ಬಳಿ ಹುಲಿ ಉಗುರು ಇದ್ದರೆ ಕೊಡಬೇಕು ಎಂದು ಸೂಚಿಸಿದ್ದರು. ಆದರೆ ಅದಾಗಿ ಒಂದು ಗಂಟೆಯೊಳಗೆ ಅವರ ಮನೆಗೆ ಭೇಟಿ ನೀಡಿ ಶೋಧ ನಡೆಸಿದ್ದರು. 40 ವರ್ಷಗಳಷ್ಟು ಹಳೆಯದಾದ ಹುಲಿ ಉಗುರಿನ ಬಗ್ಗೆ ಹಲವಾರು ವರ್ಷಗಳ ಹಿಂದೆ ನಟ ನೀಡಿದ ಸಂದರ್ಶನವನ್ನು ಆಧರಿಸಿ ನೋಟಿಸ್ ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.

ಜಗ್ಗೇಶ್ ವಿರುದ್ಧ ಸಾಕ್ಷಿಯಾಗಿರುವ ಹುಲಿ ಉಗುರನ್ನು ನಾಶಪಡಿಸಲು ಮುಂದಾಗುತ್ತಾರೆ ಎಂಬ ಮಾಹಿತಿ ಮೇರೆಗೆ ಅಧಿಕಾರಿಗಳು ಅವರ ಮನೆಗೆ ಭೇಟಿ ನೀಡಿದ್ದರು ಎಂದು ಸರ್ಕಾರಿ ವಕೀಲರು ವಾದಿಸಿದ್ದರು. ನೋಟಿಸ್ ನೀಡಿದ ಒಂದು ಗಂಟೆಯೊಳಗೆ ಇಲಾಖೆಗೆ ಇಂತಹ ಮಾಹಿತಿ ನೀಡಿದವರು ಯಾರು ಎಂದು ಅಚ್ಚರಿ ವ್ಯಕ್ತಪಡಿಸಿದ ಕೋರ್ಟ್, ಇದು ಪ್ರಚಾರಕ್ಕಾಗಿ ಮಾಡಿದಂತಿದೆ ಎಂದು ಹೇಳಿದೆ. ಯಾವುದೇ ಕಾಡುಪ್ರಾಣಿಗಳ ಭಾಗಗಳನ್ನು ಹೊಂದಿರುವುದು ಕಾನೂನುಬಾಹಿರವಾಗಿದ್ದರೂ, ಇಲಾಖೆಯ ಕ್ರಮವು ಪ್ರಶ್ನಾರ್ಹವಾಗಿದೆ ಎಂದು ನ್ಯಾಯಾಲಯ ಗಮನಿಸಿದೆ.

ಸಂಸದರು ಸಂಸತ್ ಅಧಿವೇಶನಕ್ಕೆ ಸಿದ್ಧತೆ ನಡೆಸುತ್ತಿದ್ದು, ಅವರ ಅಧಿಕೃತ ಕಾರ್ಯಕ್ರಮವನ್ನು ಸ್ಥಗಿತಗೊಳಿಸುವ ರೀತಿಯಲ್ಲಿ ಈ ಕಾರ್ಯಾಚರಣೆ ನಡೆಸಲಾಗಿದೆ ಎಂದು ಜಗ್ಗೇಶ್ ಪರ ವಕೀಲರು ಹೇಳಿದ್ದಾರೆ. ಇನ್ನು ಶೋಧ ಕಾರ್ಯದ ಹೆಸರಿನಲ್ಲಿ ಇಲಾಖೆಯ 14 ಅಧಿಕಾರಿಗಳು ತಮ್ಮ ಮನೆಗೆ ನುಗ್ಗಿದ್ದಾರೆ ಎಂದು ಜಗ್ಗೇಶ್ ಅವರು ಹೈಕೋರ್ಟ್‌ಗೆ ಸಲ್ಲಿಸಿರುವ ಅರ್ಜಿಯಲ್ಲಿ ದೂರಿದ್ದಾರೆ. ಇಲಾಖೆ ಕ್ರಮವನ್ನು ಕಾನೂನುಬಾಹಿರ ಎಂದು ಘೋಷಿಸಿ, ತನಗೆ ನೀಡಿರುವ ನೋಟಿಸ್ ರದ್ದುಗೊಳಿಸುವಂತೆಯೂ ಜಗ್ಗೇಶ್ ನ್ಯಾಯಾಲಯವನ್ನು ಕೋರಿದ್ದಾರೆ.

ಗ್ರಾಮೀಣ ವಿದ್ಯಾರ್ಥಿಗಳು ಸಂಕುಚಿತ ಮನೋಭಾವನೆ ತೊರೆದು ಪರೀಕ್ಷೆ ಎದುರಿಸಬೇಕು

ಮೈಸೂರು ಪೊಲೀಸ್ ಆಯುಕ್ತ ರಮೇಶ್ ಬಾನೊತ್ ಕಿವಿಮಾತು



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ಆಯೋಜಿಸಿದ್ದ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ 'ಮುಕ್ತ ಭಂಡಾರ' ಅಧ್ಯಯನ ಪುಸ್ತಕವನ್ನು ನಗರ ಪೊಲೀಸ್ ಆಯುಕ್ತ ರಮೇಶ್ ಬಾನೊತ್ ಬಿಡುಗಡೆಗೊಳಿಸಿದರು.

ಮೈಸೂರು, ಅ.30(ಜಿಎ)– ಗ್ರಾಮೀಣ ಪ್ರದೇಶದಿಂದ ಬರುವ ಮಕ್ಕಳಲ್ಲಿ ಸಂಕುಚಿತ ಭಾವನೆ ಇರುತ್ತದೆ. ಡಿಜಿಟಲ್ ಸಮಾಜ ನನ್ನನ್ನು ಹೇಗೆ ಸ್ವೀಕರಿಸುತ್ತದೆ ಎಂಬ ಭಯವಿರುತ್ತದೆ. ಈ ಆತಂಕದಿಂದ ಹೊರಬಂದು ಪರೀಕ್ಷೆಯ ತಯಾರಿ ಮಾಡಬೇಕಿದೆ ಎಂದು ಮೈಸೂರು ಪೊಲೀಸ್ ಆಯುಕ್ತ ರಮೇಶ್ ಬಾನೊತ್ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರವು ಆಯೋಜಿಸಿದ್ದ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ 'ಮುಕ್ತ ಭಂಡಾರ' ಅಧ್ಯಯನ ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದರು.

ಪ್ರಸ್ತುತ ಕಲಿಕೆಯ ಏಕಾಗ್ರತೆಗೆ ಭಂಗ ಮಾಡುವ ಅನೇಕ ವಿಚಾರಗಳು ನಮ್ಮ ಸುತ್ತಮುತ್ತಲು ಇವೆ. ಆ ಸವಾಲನ್ನು ಸ್ವೀಕರಿಸಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ತೇರ್ಗಡೆಯಾಗಬೇಕು. ನಾನು ತೆಲಂಗಾಣದ ಹಳ್ಳಿಯೊಂದರ ರೈತನ ಮಗ. ಏಳನೇ ತರಗತಿಯಲ್ಲಿ ವಿದ್ಯುತ್ ಕಂಡೆ. ಸಾಧಿಸಬೇಕೆಂಬ ಛಲವೇ ನನ್ನನ್ನು ಈ ಹುದ್ದೆಗೆ ತಂದು ನಿಲ್ಲಿಸಿತು ಎಂದರು.

ಸ್ಪರ್ಧಾತ್ಮಕ ಪರೀಕ್ಷೆ ಎದುರಿಸುವವರು ಒಮ್ಮೆ ಹಿನ್ನಡೆಯಾದಾಗ ಪ್ರಯತ್ನವನ್ನು ನಿಲ್ಲಿಸುತ್ತಾರೆ. ಅದಕ್ಕೆ ತಾನು ಬಂದಿರುವ ಹಿನ್ನೆಲೆಯೇ ಕಾರಣ ಎಂಬ ಭಾವನೆ ಬೆಳೆಸಿಕೊಂಡು ಬಿಡುತ್ತಾರೆ. ಆದರೆ ಯುಪಿಎಸ್‌ಸಿಯಲ್ಲಿ ತೇರ್ಗಡೆಯಾಗುವ ಹೆಚ್ಚಿನವರು ಹಳ್ಳಿಯಿಂದ ಬಂದವರು ಎಂಬುದನ್ನು ನೆನಪಿನಲ್ಲಿಟ್ಟುಕೊಳ್ಳಬೇಕು ಎಂದರು.

ಇಂದಿನ ಸಮಾಜದಲ್ಲಿ ಮಹಿಳೆಗೆ ಉತ್ತಮ ಉದ್ಯೋಗ ದೊರೆತರೆ ಒಳ್ಳೆಯ ಸ್ಥಾನಮಾನ ನೀಡುತ್ತಾರೆ. ಹೀಗಾಗಿ ಅವರು ಸರ್ಕಾರಿ ಸೇವೆಯ ಕಡೆಗೆ ಹೆಚ್ಚು ಗಮನಹರಿಸುವುದು ಒಳಿತು. ಕೆಲವು ವರ್ಷಗಳ ಕಠಿಣ ಪರಿಶ್ರಮವು ಜೀವನಪೂರ್ತಿ ಸಂತೋಷದಿಂದಿರುವಂತೆ ಮಾಡುತ್ತದೆ. ಧನಾತ್ಮಕ ಚಿಂತನೆಯೊಂದಿಗೆ ಸವಾಲುಗಳನ್ನು ಎದುರಿಸಿ ಎಂದು ಸಲಹೆ ನೀಡಿದರು.

ಅರುಣಾಚಲಪ್ರದೇಶ ಸರ್ಕಾರದ ಕಾರ್ಯದರ್ಶಿ ಅಮರನಾಥ್ ಆರ್.ತಲವಾಡೆ ಮಾತನಾಡಿ, ಪರೀಕ್ಷೆಗಳಲ್ಲಿ ನಿಮ್ಮ ಹಿನ್ನೆಲೆಯು ಲೆಕ್ಕಕ್ಕೆ ಬರುವುದಿಲ್ಲ. ಬದಲಾಗಿ ನಿಮ್ಮಲ್ಲಿರುವ ಜ್ಞಾನವಷ್ಟೇ ಕೆಲಸ ಮಾಡುತ್ತದೆ. ದೃಢ ನಿರ್ಧಾರ, ಸತತ ಪ್ರಯತ್ನ ಹಾಗೂ ಮಾಡಿದ ತಪ್ಪುಗಳನ್ನು ಮರುಕಳಿಸದೇ ಇರುವಂತೆ ಎಚ್ಚರ ವಹಿಸಿದಾಗ ಗೆಲುವು ನಮ್ಮದಾಗಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಕುಲಪತಿ ಶರಣಪ್ಪ ವಿ. ಹಲಸೆ, ಕುಲಸಚಿವ ಕೆ.ಎಲ್.ಎನ್.ಮೂರ್ತಿ, ಅಧ್ಯಯನ ವಿಭಾಗದ ಡೀನ್ ರಾಮನಾಥಂ ನಾಯ್ಡು, ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಸಂಯೋಜಕ ಜೈನಹಳ್ಳಿ ಸತ್ಯನಾರಾಯಣಗೌಡ ಉಪಸ್ಥಿತರಿದ್ದರು.

ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇ ಬಾಕಿ ಕಾಮಗಾರಿ ಪೂರ್ಣಗೊಳಿಸಲು ಎನ್‌ಹೆಚ್‌ಎಗೆ ಮಂಡ್ಯ ಜಿಲ್ಲಾಧಿಕಾರಿ ಪತ್ರ

ಮಂಡ್ಯ, ಅ.30- ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ 275ರಲ್ಲಿ ಕಾಮಗಾರಿ ಅಪೂರ್ಣಗೊಂಡಿದ್ದು, ವಾಹನ ಚಾಲಕರು ಆತಂಕದಿಂದ ವಾಹನ ಚಾಲನೆ ಮಾಡಬೇಕಿದೆ. ಕೂಡಲೇ ಅಪೂರ್ಣ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು



ಡಾ.ಕುಮಾರ್

ಎಂದು ಜಿಲ್ಲಾಧಿಕಾರಿ ಡಾ.ಕುಮಾರ್ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಹೆಚ್‌ಎ)ದ ಪ್ರಾದೇಶಿಕ ಅಧಿಕಾರಿಗಳಿಗೆ ಪತ್ರ ಬರೆದಿದ್ದಾರೆ.





ಅಪೂರ್ಣಗೊಂಡಿರುವ ಕಾಮಗಾರಿಯಿಂದ ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ಅಪಘಾತಗಳು ಸಂಭವಿಸಿ, ಸಾಕಷ್ಟು ಜೀವಹಾನಿ ಆಗುತ್ತಿದೆ. ಹಲವರು ಗಾಯಗೊಂಡಿದ್ದಾರೆ. ಅಪೂರ್ಣ ಕಾಮಗಾರಿಗಳಿಂದ ರಸ್ತೆ ಸುರಕ್ಷತೆ ಸಮಸ್ಯೆಗಳು ಉಂಟಾಗುತ್ತಿದೆ. ನಿಡಘಟ್ಟದಿಂದ ಶ್ರೀರಂಗಪಟ್ಟಣದವರೆಗೆ ಬಾಕಿ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಬೇಕು.

ಸರ್ವೀಸ್ ರಸ್ತೆಯಲ್ಲಿ ಅಪೂರ್ಣ ಚರಂಡಿ ಕಾಮಗಾರಿಯಿಂದ ತೊಂದರೆಯಾಗುತ್ತಿದೆ. ನಿಡಘಟ್ಟ, ಮದ್ದೂರು, ಗೆಜ್ಜಲಗೆರೆ, ಹನಕೆರೆ, ಬೂದನೂರು, ಉಮ್ಮಡಹಳ್ಳಿ, ಇಂಡುವಾಳು, ಸುಂಡಳ್ಳಿ, ಯಲಿಯೂರು, ಕಾಳೇನಹಳ್ಳಿ, ಕೋಡಿಶೆಟ್ಟಿಪುರ, ಗಣಂಗೂರು, ಗೌಡಹಳ್ಳಿಗಳಲ್ಲಿ ಚರಂಡಿ ಕಾಮಗಾರಿ ಪೂರ್ಣಗೊಳ್ಳದೇ ಸಾಕಷ್ಟು ಸಮಸ್ಯೆಯಾಗಿದೆ.

ರಾತ್ರಿ ವೇಳೆ ಸಮರ್ಪಕ ಬೀದಿ ದೀಪಗಳ ವ್ಯವಸ್ಥೆ ಮಾಡಬೇಕಿದೆ. ಮದ್ದೂರು ಫ್ಲೇಓವರ್ ಕೆಳಗೆ, ಸರ್ವೀಸ್ ರಸ್ತೆ ಇಕ್ಕೆಲಗಳಲ್ಲಿ ಬೀದಿ ದೀಪಗಳನ್ನು ಅಳವಡಿಸಬೇಕಾಗಿದೆ.

ವೈಜ್ಞಾನಿಕವಾಗಿ ರಸ್ತೆ ಹಂಪ್ಸ್‌ಗಳನ್ನು ಅಂಡರ್ ಪಾಸ್ ಇರುವ ಬಳಿಯೂ ಹಾಕಬೇಕಾಗಿದೆ. ಡ್ರೈನೇಜ್, ಫುಟ್‌ಬಾತ್‌ಗಳ ನಿರ್ಮಾಣ ಮಾಡಬೇಕಾಗಿದೆ. ರುದ್ರಾಕ್ಷಿಪುರ, ಅಗರತಿಂಗನದೊಡ್ಡಿ, ಗೆಜ್ಜಲಗೆರೆ, ಬೂದನೂರು, ಕಾಳೇನಹಳ್ಳಿ, ರಾಗಿಮುದ್ದನಹಳ್ಳಿ, ಸಿದ್ದಾಪುರ, ಗಣಂಗೂರು, ಗೌಡಹಳ್ಳಿ ಮತ್ತಿತರ ಅಗತ್ಯವಿರುವ ಕಡೆ ಫುಟ್‌ಪಾತ್ ಓವರ್ ಬ್ರಿಡ್ಜ್‌ಗಳನ್ನು ನಿರ್ಮಾಣ ಮಾಡಬೇಕು ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಹನಕೆರೆ ಬಳಿ ಅಂಡರ್ ಪಾಸ್ ನಿರ್ಮಾಣ, ಗಣಂಗೂರು ಟೋಲ್ ಪ್ಲಾಜಾದಲ್ಲಿ ಶೌಚಾಲಯ ಸೌಲಭ್ಯ ಕಲ್ಪಿಸಬೇಕು. ಅಪಘಾತ ತಪ್ಪಿಸಲು ನಾಮಫಲಕಗಳು, ರಸ್ತೆ ಗುರುತುಗಳನ್ನು, ಸರಾಸರಿ ಎತ್ತರ ಹೆಚ್ಚಿಸುವ ಮೂಲಕ ಅಪಘಾತಗಳಿಗೆ ಕಡಿವಾಣ ಹಾಕಬೇಕು ಎಂದು ಮನವಿ ಮಾಡಿದ್ದಾರೆ.

ಇಂದು ಮಂಡ್ಯಕ್ಕೆ ಸಿಎಂ ಸಿದ್ದರಾಮಯ್ಯ

ಮಂಡ್ಯ, ಅ.30- ಮುಖ್ಯಮಂತ್ರಿಯಾದ ಬಳಿಕ ಸಿದ್ದರಾಮಯ್ಯ ಅವರು ಎರಡನೇ ಬಾರಿಗೆ ಮಂಡ್ಯ ನಗರಕ್ಕೆ ಆಗಮಿಸುತ್ತಿದ್ದು, ನಾಳೆ (ಮಂಗಳವಾರ) ವಿವಿಧ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.



ಮಧ್ಯಾಹ್ನ 12.30ಕ್ಕೆ ನಗರದ ಕಲ್ಲಹಳ್ಳಿಯ ಸುವಾರವಿ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ಆಯೋಜಿಸಿರುವ ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ತುಮಕೂರು ಹಾಗೂ ರಾಮನಗರ ಜಿಲ್ಲೆಗಳ ಕಾರ್ಯನಿರತ ಪತ್ರಕರ್ತರ ಅಂತರ ಜಿಲ್ಲಾ ಸಮ್ಮೇಳನ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಬಳಿಕ ಮಧ್ಯಾಹ್ನ 3 ಗಂಟೆಗೆ ಜಿಪಂ ಸಭಾಂಗಣದಲ್ಲಿ ಮಂಡ್ಯ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಈ ಎರಡೂ ಕಾರ್ಯಕ್ರಮದಲ್ಲೂ ಸಿಎಂ ಜೊತೆಗೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹಾಗೂ ಜಿಲ್ಲೆಯ ಕಾಂಗ್ರೆಸ್ ಶಾಸಕರು ಉಪಸ್ಥಿತರಿರಲಿದ್ದಾರೆ.

ಕೆಡಿಪಿ ಸಭೆ ನಡೆಸುತ್ತಿರುವ ಮೂರನೇ ಸಿಎಂ: ಮಂಡ್ಯದ ಜಿಪಂ ಕಾವೇರಿ ಸಭಾಂಗಣದಲ್ಲಿ ನಡೆಯುವ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಿದ್ದರಾಮಯ್ಯ ಭಾಗಿಯಾಗಲಿದ್ದು, ಆ ಮೂಲಕ ಮಂಡ್ಯದಲ್ಲಿ ಕೆಡಿಪಿ ಸಭೆ ನಡೆಸುತ್ತಿರುವ 3ನೇ ಸಿಎಂ ಎನಿಸಿಕೊಳ್ಳಲಿದ್ದಾರೆ.

ಈ ಹಿಂದೆ 2010ರಲ್ಲಿ ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಮಂಡ್ಯ ಜಿಪಂನಲ್ಲಿ ಕೆಡಿಪಿ ಸಭೆ ನಡೆಸಿದ್ದರೆ, 2018ರಲ್ಲಿ ಹೆಚ್.ಡಿ.ಕುಮಾರಸ್ವಾಮಿ ಸಿಎಂ ಆಗಿ ಪ್ರಗತಿ ಪರೀಶಲನಾ ಸಭೆ ನಡೆಸಿದ್ದರು. ಇದೀಗ ಸಿದ್ದರಾಮಯ್ಯ ಈ ಸಭೆಯಲ್ಲಿ ಭಾಗಿಯಾಗಲಿದ್ದಾರೆ.

ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

ಮಂಡ್ಯ, ಅ.30- ಸ್ನಾತಕೋತ್ತರ ಕೋರ್ಸ್ ಓದುತ್ತಿರುವ 2023-24ನೇ ಶೈಕ್ಷಣಿಕ ವರ್ಷಕ್ಕೆ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಂದ ವಿದೇಶಿ ವಿದ್ಯಾರ್ಥಿ ವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿದಾರರು https://sevasindhu.karnataka.gov.in/sevasindhu/DepartmentServices ಆನ್‌ಲೈನ್‌ನ ಮೂಲಕ ನ.30 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಚೇರಿ, ಬೀಡಿ ಕಾಲೋನಿ ಆಟೋ ನಿಲ್ದಾಣದ ಹತ್ತಿರ, ಕೆರೆ ಅಂಗಳ, ಮಂಡ್ಯ, ಜಿಲ್ಲಾ ಕಚೇರಿ ದೂ: 08232-297240, ತಾಲ್ಲೂಕು ವಿಸ್ತರಣಾಧಿಕಾರಿ, ಮಂಡ್ಯ ವಿಭಾಗ ದೂ:7259138868, ತಾಲೂಕು ವಿಸ್ತರಣಾಧಿಕಾರಿ ಪಾಂಡವಪುರ ವಿಭಾಗ ದೂ: 8892212574 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಅರ್ಜಿ ಆಹ್ವಾನ

ಮಂಡ್ಯ, ಅ.30- ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2023-24ನೇ ಸಾಲಿಗೆ ಅರಿವು ಶೈಕ್ಷಣಿಕ ಯೋಜನೆ ಅಡಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು kacdc.karnataka.gov.in ಮೂಲಕ ನ.30 ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ: 08232-231804 ಸಂಪರ್ಕಿಸಿ.

ನ.3, ದಿಶಾ ಸಭೆ

ಮಂಡ್ಯ, ಅ.29- ಸಂಸದೆ ಸುಮಲತಾ ಅಂಬರೀಶ್ ಅವರ ಅಧ್ಯಕ್ಷತೆಯಲ್ಲಿ ನ.3ರಂದು ಮಧ್ಯಾಹ್ನ 2 ಗಂಟೆಗೆ ಜಿಲ್ಲಾ ಪಂಚಾಯಿತಿ ಕಾವೇರಿ ಸಭಾಂಗಣದಲ್ಲಿ ದಿಶಾ ಸಭೆ ನಡೆಯಲಿದೆ ಎಂದು ಜಿಪಂ ಸಿಇಓ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಂಶಿನಿ (ಐಶ್ವರ್ಯ) ನಿಧನ

ಮಂಡ್ಯ, ಅ.30- ತಾಲೂಕಿನ ತಗ್ಗಹಳ್ಳಿ ಗ್ರಾಮದ ಜಿಪಂ ಮಾಜಿ ಅಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್ ಸಹೋದರ ಸಿದ್ದೇಗೌಡ ಹಾಗೂ ಜಯಶೀಲ ದಂಪತಿ ಪುತ್ರಿ ಹಂಶಿನಿ (ಐಶ್ವರ್ಯ) (18) ಭಾನುವಾರ ರಾತ್ರಿ ನಿಧನರಾದರು.



ಮೃತರು ತಂದೆ, ತಾಯಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಸೋಮವಾರ ಮಧ್ಯಾಹ್ನ ಸ್ವಗ್ರಾಮದಲ್ಲಿ ಅಂತ್ಯಸಂಸ್ಕಾರ ನೆರವೇರಿತು.

ಸಂತಾಪ: ಮಾಜಿ ಶಾಸಕ ಎಂ.ಶ್ರೀನಿವಾಸ್, ಜಿಪಂ ಮಾಜಿ ಸದಸ್ಯ ಚಿನಕುರಳಿ ಅಶೋಕ್, ಬಿಜೆಪಿ ಮುಖಂಡ ಎಸ್. ಸಚ್ಚಿದಾನಂದ, ರೈತ ನಾಯಕಿ ಸುನಂದಾ ಜಯರಾಂ ಸೇರಿದಂತೆ ಮತ್ತಿತರು ಅಂತಿಮ ದರ್ಶನ ಪಡೆದು ಸಂತಾಪ ಸೂಚಿಸಿದರು.

ಬಲಮುರಿಯಲ್ಲಿ ವಿದ್ಯಾರ್ಥಿ ನೀರು ಪಾಲು

ಶ್ರೀರಂಗಪಟ್ಟಣ, ಅ.30- ಕಾವೇರಿ ನದಿಯಲ್ಲಿ ಈಜಲು ಹೋದ ವಿದ್ಯಾರ್ಥಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ಭಾನುವಾರ ಸಂಜೆ ತಾಲೂಕಿನ ಪ್ರವಾಸಿ ತಾಣ ಬಲಮುರಿಯಲ್ಲಿ ನಡೆದಿದೆ.

ಮೈಸೂರಿನ ಮಂಡಿ ಮೊಹಲ್ಲಾ ನಿವಾಸಿ ಇಮ್ತಿಯಾಜ್ ಪಾಷ ಅವರ ಪುತ್ರ ಹಾಗೂ ಫಾರೂಕಿಯಾ ಕಾಲೇಜಿನ ಪ್ರಥಮ ಪಿಯುಸಿ ವಿದ್ಯಾರ್ಥಿ ಮೊಹಮ್ಮದ್ ಜಯಿನ್ (17) ಮೃತಪಟ್ಟವರು. ಭಾನುವಾರ ಸಂಜೆ ನಾಲ್ವರು ಸ್ನೇಹಿತರೊಂದಿಗೆ ಬಲಮುರಿಗೆ ಆಗಮಿಸಿದ್ದ ಈತ ಕಾವೇರಿ ನದಿಯಲ್ಲಿ ಈಜಲು ಹೋದ ವೇಳೆ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾನೆ ಎನ್ನಲಾಗಿದೆ. ಈ ವಿಷಯವನ್ನು ಮೊಹಮ್ಮದ್ ಜಯಿನ್ ಸ್ನೇಹಿತ ಆತನ ಪೋಷಕರಿಗೆ ಮಾಹಿತಿ ನೀಡಿದ್ದಾನೆ. ಪೋಷಕರು ಕೆಆರ್‌ಎಸ್ ಪೊಲೀಸರಿಗೆ ತಿಳಿಸಿದ್ದು, ಸ್ಥಳಕ್ಕಾಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ಮೊಹಮದ್ ಜಯಿನ್ ಶವವನ್ನು ನದಿಯಿಂದ ಹೊರತೆಗೆದು ಮೈಸೂರಿನ ಕೆ.ಆರ್. ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಿದ್ದಾರೆ. ಈ ಸಂಬಂಧ ಕೆಆರ್‌ಎಸ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ವಿಸಿ ನಾಲೆಗೆ ಬಿದ್ದ ಕ್ಯಾಂಟರ್



ಪಾಂಡವಪುರ, ಅ.30- ಚಾಲಕನ ನಿಯಂತ್ರಣ ತಪ್ಪಿ ಕ್ಯಾಂಟರ್ ವಿಸಿ ನಾಲೆಗೆ ಬಿದ್ದಿರುವ ಘಟನೆ ತಾಲೂಕಿನ ಬನಘಟ್ಟ ಗೇಟ್ ಬಳಿ ಸೋಮವಾರ ಮುಂಜಾನೆ ಜರುಗಿದ್ದು, ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾನೆ.

ಬಳ್ಳಾರಿಯಿಂದ ಮೈಸೂರಿಗೆ ಸಿಮೆಂಟ್ ತುಂಬಿಕೊಂಡು ಹೋಗಿದ್ದ ಕ್ಯಾಂಟರ್ ಅನ್‌ಲೋಡ್ ಮಾಡಿ ವಾಪಸ್ಸಾಗುವ ವೇಳೆ ಸೋಮವಾರ ಮುಂಜಾನೆ ಚಾಲಕನ ನಿಯಂತ್ರಣ ತಪ್ಪಿ ತಾಲೂಕಿನ ಬನಘಟ್ಟ ಗ್ರಾಮದ ಗೇಟ್ ಬಳಿಯ ವಿಸಿ ನಾಲೆಗೆ ಉರುಳಿ ಬಿದ್ದಿದೆ. ಅದೃಷ್ಟವಶಾತ್ ನಾಲೆಯಲ್ಲಿ ನೀರಿಲ್ಲದ ಪರಿಣಾಮ ಚಾಲಕ ಸಣ್ಣಪುಟ್ಟ ಗಾಯಗಳೊಂದಿಗೆ ಪಾರಾಗಿದ್ದಾನೆ. ಕ್ಯಾಂಟರ್ ಅನ್ನು ಕ್ರೇನ್ ಮೂಲಕ ಮೇಲೆತ್ತಲಾಗಿದೆ. ಈ ಸಂಬಂಧ ಯಾವುದೇ ದೂರು ದಾಖಲಾಗಿಲ್ಲ.

ಮತ್ತೆ ನೀರು ಬಿಡುಗಡೆಗೆ ಆದೇಶ

ಮಂಡ್ಯದಲ್ಲಿ ಮುಂದುವರೆದ ಕಾವೇರಿ ಹೋರಾಟ



ಮಂಡ್ಯ, ಅ.30- ಮತ್ತೆ ಕಾವೇರಿ ಕೊಳ್ಳದ ಜಲಾಶಯಗಳಿಂದ ತಮಿಳುನಾಡಿಗೆ ನೀರು ಹರಿಸಬೇಕೆಂದು ಪ್ರಾಧಿಕಾರ ಸೂಚಿಸಿರುವ ಕ್ರಮ ಖಂಡಿಸಿ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಹಾಗೂ ವಿವಿಧ ಸಂಘಟನೆಗಳ ಕಾರ್ಯಕರ್ತರು ಸೋಮವಾರ ಹೋರಾಟ ಮುಂದುವರೆಸಿದರು.


ನಗರದ ಸರ್‌ಎಂವಿ ಪ್ರತಿಮೆ ಬಳಿ ಜಿಲ್ಲಾ ರೈತ ಹಿತರಕ್ಷಣಾ ಸಮಿತಿ ಜೊತೆಗೂಡಿದ ಇಂಡುವಾಳು ಗ್ರಾಮದ ಮಹಿಳಾ ಸ್ವಸಹಾಯ ಸಂಘದ ಸದ್ಯಸರು, ಕನ್ನಡ ಸೇನೆ ಹಾಗೂ ರೈತ ಸಂಘದ ಕಾರ್ಯಕರ್ತರು ನಿರಂತರ ಧರಣಿಯಲ್ಲಿ ಭಾಗಿಯಾಗಿ ಕಾವೇರಿ ಹೋರಾಟ ಬೆಂಬಲಿಸಿದರು.

ಬೆಂಗಳೂರು- ಮೈಸೂರು ಹೆದ್ದಾರಿ ತಡೆದು ಕೇಂದ್ರ, ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಕಾವೇರಿ ಕೊಳ್ಳದ ಜಲಾಶಯಗಳಿಂದ ಕಳೆದ 2 ತಿಂಗಳಿಂದ ನಿರಂತರವಾಗಿ ನೀರು ಹರಿಸುತ್ತಿರುವ ರಾಜ್ಯ ಸರ್ಕಾರ ರೈತರ ವಿಚಾರದಲ್ಲಿ ನಿರ್ಲಕ್ಷ್ಯ ಧೋರಣೆ ತಾಳಿದೆ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಕರ್ನಾಟಕಕ್ಕೆ ನ್ಯಾಯ ದೊರಕಿಸಿಕೊಡದೆ ಬೇಜವಾಬ್ದಾರಿತನ ಪ್ರದರ್ಶಿಸುತ್ತಿದ್ದಾರೆ. ಕೇಂದ್ರ ಸರ್ಕಾರ ಕರುನಾಡಿನ ಬಗ್ಗೆ ಮಲತಾಯಿ ಧೋರಣೆ ಅನುಸರಿಸುತ್ತಿದೆ. ಕಾವೇರಿ ನದಿ ನೀರು ನಿಯಂತ್ರಣ ಸಮಿತಿ ಹಾಗೂ ಪ್ರಾಧಿಕಾರ ತಾರತಮ್ಯ ನೀತಿ ಅನುಸರಿಸಿ ತಮಿಳು ನಾಡಿನ ಹಿತ ಕಾಪಾಡಲು ಮುಂದಾಗಿವೆ ಎಂದು ಕಿಡಿಕಾರಿದರು.

ಜಲಾಶಯಗಳು ಬರಿದಾಗಿದ್ದು, ರೈತರು ಬೆಳೆ ಬೆಳೆಯುವ ಪರಿಸ್ಥಿತಿ ಇಲ್ಲದಿರುವುದರಿಂದ ಜಿಲ್ಲೆ ರೈತರ ಹಿತ ಕಾಪಾಡಲು ಒಂದು ಸಾವಿರ ಕೋಟಿ ವಿಶೇಷ ಪ್ಯಾಕೇಜ್ ಘೋಷಿಸಬೇಕು. ಮೇಕೆದಾಟು ಯೋಜನೆಯನ್ನು ತಕ್ಷಣ ಆರಂಭ ಮಾಡಬೇಕು. ಜೊತೆಗೆ ಮತ್ತೆ ತಮಿಳುನಾಡಿಗೆ ನೀರು ಬಿಡಿ ಎಂದು ಪ್ರಾಧಿಕಾರ ಸೂಚಿಸಿರುವುದು ಗಾಯದ ಮೇಲೆ ಬರೆ ಎಳೆದಂತೆ ಎಂದು ಕಿಡಿಕಾರಿದರು.

ಪ್ರತಿಭಟನೆಯಲ್ಲಿ ಹೋರಾಟಗಾರರಾದ ಸುನಂದಾ ಜಯರಾಂ, ಕೆ. ಬೋರಯ್ಯ, ಬಸವರಾಜು, ಚಂದ್ರಶೇಖರ್, ಪುಟ್ಟಸ್ವಾಮಿ, ನಾರಾಯಣ್, ದಸಂಸ ಕೃಷ್ಣ, ಕನ್ನಡಸೇನೆ ಮಂಜು, ಮಂಜುನಾಥ್, ಮಹಾಂತಪ್ಪ, ರವಿ, ಶಿವರಾಮ, ಸುಧಾ, ಶೃತಿ, ಶೀಲಾ, ಮಂಜುಳಾ, ಶೈಲಜಾ, ವಸಂತ ಕುಮಾರಿ, ಭಾಗ್ಯಮ್ಮ, ದೇವಮ್ಮ, ಜಯಮ್ಮ ಭಾಗವಹಿಸಿದ್ದರು.





ಮೈಸೂರಿನ ಬೋಗಾದಿ ಉತ್ತರ 2ನೇ ಹಂತ, ವಾರ್ಡ್ ನಂ.44ರ ಉದ್ಯಾನದಲ್ಲಿ ನೂತನವಾಗಿ ನಿರ್ಮಿಸಿರುವ ಗ್ರಂಥಾಲಯವನ್ನು ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು. ಮೇಯರ್ ಶಿವಕುಮಾರ್, ನಗರಪಾಲಿಕೆ ಸದಸ್ಯೆ ಸವಿತಾ ಸುರೇಶ್, ಜೆಡಿಎಸ್ ಮುಖಂಡ ಸುರೇಶ್, ವಾರ್ಡಿನ ಅನೇಕ ನಾಗರಿಕರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಜ್ಯೋತಿಷ್ಯ ವಿದ್ವಾಂಸ ವಿ.ಕೇಶವಮೂರ್ತಿ ಅವರು ತಾವು ಬರೆದಿರುವ "ಸುವಿಚಾರ ಸೌರಭ " ಸೇರಿದಂತೆ ಹಲವು ಪುಸ್ತಕಗಳನ್ನು ಗ್ರಂಥಾಲಯಕ್ಕೆ ಕೊಡುಗೆಯಾಗಿ ನೀಡಿದರು.

ಕೇಜ್ರಿವಾಲ್‌ಗೆ ಅಬಕಾರಿ ಹಗರಣ ಸಂಕಷ್ಟ; ನ.2ಕ್ಕೆ ವಿಚಾರಣೆಗೆ ಹಾಜರಾಗಲು ಇಡಿ ಸಮನ್ಸ್

ದೆಹಲಿ, ಅ.30- ಅಕ್ರಮ ಹಣ ವರ್ಗಾವಣೆ ಮೇಲ್ನೋಟಕ್ಕೆ ಸಾಬೀತಾಗಿದೆ ಎಂದು ಸುಪ್ರೀಂಕೋರ್ಟ್ ದೆಹಲಿ ಮಾಜಿ ಉಪಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಜಾಮೀನು ಅರ್ಜಿಯನ್ನು ತಿರಸ್ಕರಿಸಿದೆ. ಇದರ ಬೆನ್ನಲ್ಲೇ ಆಮ್ ಆದ್ಮಿ ಪಾರ್ಟಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ದೆಹಲಿ ಅಬಕಾರಿ ನೀತಿಯಲ್ಲಿ ಮನೀಶ್ ಸಿಸೋಡಿಯಾ ಜೊತೆಗೆ ಸಿಎಂ ಅರವಿಂದ್ ಕೇಜ್ರಿವಾಲ್‌ಗೂ ಆತಂಕ ಹೆಚ್ಚಾಗಿದೆ. ಸಿಸೋಡಿಯಾ ಜಾಮೀನು ತಿರಸ್ಕೃತಗೊಂಡ ಬೆನ್ನಲ್ಲೇ ಇದೀಗ ಇಡಿ ಅಧಿಕಾರಿಗಳು ಅರವಿಂದ್ ಕೇಜ್ರಿವಾಲ್‌ಗೆ ನೋಟಿಸ್ ನೀಡಿದ್ದಾರೆ. ನವೆಂಬರ್ 2 ರಂದು ವಿಚಾರಣೆ ಹಾಜರಾಗಲು ಸಮನ್ಸ್ ನೀಡಲಾಗಿದೆ.



ಅಬಕಾರಿ ಹಗರಣದಲ್ಲಿ ಮನಿಶ್ ಸಿಸೋಡಿಯಾ ಮಾತ್ರವಲ್ಲ, ಆಮ್ ಆದ್ಮಿ ಪಕ್ಷವನ್ನು ಆರೋಪಿಯನ್ನಾಗಿ ಮಾಡಲು ಚಿಂತನೆ ನಡೆಸಿದೆ ಎಂದು ತನಿಖಾ ಸಂಸ್ಥೆಗಳು ಇತ್ತೀಚೆಗೆ ಸುಪ್ರೀಂ ಕೋರ್ಟ್‌ಗೆ ಹೇಳಿತ್ತು. ತನ್ನ ಅಧೀನ ವ್ಯಕ್ತಿಗಳ ಮೂಲಕ ಅಪರಾಧ ಎಸಗಿದ ಮತ್ತು ಅಕ್ರಮ ಹಣ ಕಾಯ್ದೆ ವರ್ಗಾವಣೆ ಕಾಯ್ದೆಯಡಿ ಪಕ್ಷವನ್ನೂ ಆರೋಪಿಯಾಗಿ ಪರಿಗಣಿಸಲು ಚಿಂತಿಸಲಾಗಿದೆ ಎಂದು ಮಾಹಿತಿ ತನಿಖಾ ಸಂಸ್ಥೆಗಳು ಮಾಹಿತಿ ನೀಡಿತ್ತು. ಇದೀಗ ಅರವಿಂದ್ ಕೇಜ್ರಿವಾಲ್‌ಗೂ ನೋಟಿಸ್ ನೀಡಿರುವ ಬೆಳವಣಿಗೆ ದೆಹಲಿ ರಾಜಕಾರಣದಲ್ಲಿ ಭಾರಿ ಸಂಚಲನ ಸೃಷ್ಟಿಸಿದೆ. ಅಬಕಾರಿ ಹಗರಣ ಕುರಿತು ಈಗಾಗಲೇ ಅರವಿಂದ್ ಕೇಜ್ರಿವಾಲ್‌ಗೆ ಸಿಬಿಐ ನೋಟಿಸ್ ನೀಡಿ ವಿಚಾರಣೆ ನಡೆಸಿತ್ತು ಏಪ್ರಿಲ್ 16 ರಂದು ಸಿಬಿಐ ಅಧಿಕಾರಿಗಳು ಅರವಿಂದ್ ಕೇಜ್ರಿವಾಲ್ ವಿಚಾರಣೆ ನಡೆಸಿದ್ದರು. ಇದೀಗ ಇಡಿ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ. ಇತ್ತ ಸಿಸೋಡಿಯಾ ಜಾಮೀನು ಅರ್ಜಿ ವಜಾಗೊಂಡ ಬೆನ್ನಲ್ಲೇ ಬಿಜೆಪಿ, ಆಪ್ ವಿರುದ್ಧ ಮುಗಿಬಿದ್ದಿತ್ತು ಮುಂದಿನ ಸರದಿ ಕೇಜ್ರಿವಾಲ್ ಎಂದು ಆರೋಪಿಸಿತ್ತು.

ಇತ್ತೀಚೆಗೆ ಇದೇ ಅಬಕಾರಿ ನೀತಿ ಹಗರಣದ ಕುರಿತು ಆಪ್ ಸಂಸದ ಸಂಜಯ್ ಸಿಂಗ್‌ರನ್ನು ಬಂಧಿಸಲಾಗಿದೆ. ಇಷ್ಟೇ ಅಲ್ಲ ತೆಲಂಗಾಣ ಸಿಎಂ ಕೆ.ಚಂದ್ರಶೇಖರ ರಾವ್ ಅವರ ಪುತ್ರಿ ಕೆ.ಕವಿತಾ ಅವರಿಗೆ ಜಾರಿ ನಿರ್ದೇಶನಾಲಯ (ಇ.ಡಿ) ಸಮನ್ಸ್ ನೀಡಿತ್ತು

ದಿಲ್ಲಿ ಅಬಕಾರಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ, ಆಪ್ ಮುಖಂಡ ಹಾಗೂ ಮಾಜಿ ಉಪ ಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಅವರ ಜಾಮೀನು ಅರ್ಜಿಯನ್ನು ಸುಪ್ರೀಂ ಕೋರ್ಟ್ ಸೋಮವಾರ ವಜಾಗೊಳಿಸಿದೆ. ಇದೇ ವೇಳೆ, ಈ ಪ್ರಕರಣದಲ್ಲಿ 338 ಕೋಟಿ ರು. ಹಣ ವರ್ಗಾವಣೆ ಆಗಿದ್ದು ಮೇಲ್ನೋಟಕ್ಕೆ ಸಾಬೀತಾಗಿದೆ ಎಂಬ ಮಹತ್ವದ ಅಭಿಪ್ರಾಯವನ್ನೂ ವ್ಯಕ್ತಪಡಿಸಿದೆ. ಇದರಿಂದಾಗಿ ಸಿಸೋಡಿಯಾ ಹಾಗೂ ಆಪ್‌ಗೆ ಭಾರಿ ಹಿನ್ನಡೆ ಆಗಿದೆ.

ಸಿಸೋಡಿಯಾ ಜಾಮೀನು ಅರ್ಜಿ ವಿಚಾರಣೆ ನಡೆಸಿದ ನ್ಯಾ. ಸಂಜೀವ್ ಖನ್ನಾ ನೇತೃತ್ವದ ದ್ವಿಸದಸ್ಯ ಪೀಠ, ಈ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ನಮಗೆ ಅನೇಕ ಸಂದೇಹಗಳಿವೆ. ಆದರೆ 338 ಕೋಟಿ ರೂ. ಹಣ ವರ್ಗಾವಣೆ ನಡೆದಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. ಹೀಗಾಗಿ ಸಿಸೋಡಿಯಾಗೆ ಜಾಮೀನು ನೀಡಲಾಗದು ಎಂದು ಹೇಳಿತು.

ಹಠಾತ್ ಸಾವಿಗೆ ಕೋವಿಡ್ ಲಸಿಕೆ ಕಾರಣವಲ್ಲ

ಐಸಿಎಂಆರ್ ಅಧ್ಯಯನದಿಂದ ದೃಢ

ನವದೆಹಲಿ: ಕೋವಿಡ್ ಲಸಿಕೆಯಿಂದ ದೇಶದಲ್ಲಿ 18 ರಿಂದ 45 ವರ್ಷದ ವಯೋಮಾನದವರಲ್ಲಿ ಹಠಾತ್ ಸಾವಿನ ಅಪಾಯದ ಸಾಧ್ಯತೆ ಹೆಚ್ಚಿಲ್ಲ ಎಂದು ಭಾರತೀಯ ವೈದ್ಯಕೀಯ ಸಂಶೋಧನಾ ಪರಿಷತ್‌ನ (ಐಸಿಎಂಆರ್) ಅಧ್ಯಯನ ಹೇಳಿದೆ.

ಕೊರೊನಾ ಸೋಂಕಿತರು ಆಸ್ಪತ್ರೆಗೆ ದಾಖಲಾಗುವುದಕ್ಕೂ ಮೊದಲು ಅತಿಯಾದ ಕುಡಿತ ಹಾಗೂ ಅತಿಯಾಗಿ ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದೇ ಅವರ ಸಾವಿಗೆ ಮೂಲ ಕಾರಣವಾಗಿದೆ ಎಂದು ಅಧ್ಯಯನ ಹೇಳಿದೆ. ಈ ಅಧ್ಯಯನದ ವರದಿಯು ಇನ್ನು ಪರಿಶೀಲನೆಯಲ್ಲಿದ್ದು, ಇನ್ನಷ್ಟೇ ಪ್ರಕಟವಾಗಬೇಕಾಗಿದೆ. ಅಧ್ಯಯನ ಪ್ರಕ್ರಿಯೆಯು ಇದೇ ತಿಂಗಳು ಪೂರ್ಣಗೊಂಡಿದೆ ಎಂದು ಐಸಿಎಂಆರ್‌ನ ಮೂಲಗಳು ತಿಳಿಸಿವೆ.

ಐಸಿಎಂಆರ್ ಅಧ್ಯಯನ ಉಲ್ಲೇಖಿಸಿ ಗುಜರಾತ್‌ನ ಭಾವ್‌ನಗರದಲ್ಲಿ ಭಾನುವಾರ ಪ್ರತಿಕ್ರಿಯಿಸಿದ್ದ ಕೇಂದ್ರ ಆರೋಗ್ಯ ಸಚಿವ ಮನ್‌ಸುಖ್ ಮಾಂಡವೀಯ, ಕೋವಿಡ್‌ನಿಂದ ಬಾಧಿತರಾಗಿದ್ದವರು ಕನಿಷ್ಠ ಒಂದೆರಡು ವರ್ಷ ಅತಿಯಾದ ದೈಹಿಕ ಚಟುವಟಿಕೆಯಲ್ಲಿ ತೊಡಗಿಕೊಳ್ಳಬಾರದಿತ್ತು. ಇದರಿಂದ ಹಠಾತ್ ಹೃದಯಾಘಾತ ಹಾಗೂ ಹೃದಯಸ್ತಂಭನ ತಪ್ಪಿಸಬಹುದಿತ್ತು ಎಂದು ಹೇಳಿದ್ದರು.

ಆರೋಗ್ಯವಂತ ಯುವಜನರ ಅಕಾಲಿಕ ಮರಣದ ವರದಿಗಳಿಂದಾಗಿ ಸಂಶೋಧಕರು ವಸ್ತುಸ್ಥಿತಿ ತನಿಖೆಗೆ ಮುಂದಾಗಿದ್ದರು. ಹಠಾತ್ ಸಾವುಗಳ ಕುರಿತು ಕಳವಳ ಕೇಳಿಬಂದಿದ್ದು, ಕೋವಿಡ್ ಲಸಿಕೆಯು ಕಾರಣ ಇರಬಹುದು ಎಂಬ ಶಂಕೆಯೂ ಮೂಡಿತ್ತು.

ಆರೋಗ್ಯವಂತ ಯುವಜನರ ಹಠಾತ್ ಸಾವುಗಳಿಗೆ ಕಾರಣ ತಿಳಿಯಲು ಈ ಅಧ್ಯಯನ ನಡೆಸಲಾಗಿತ್ತು. 2021ರ ಅ.1 ಮತ್ತು 2023ರ ಮಾರ್ಚ್ 31ರ ನಡುವೆ ಸಂಭವಿಸಿದ್ದ 18ರಿಂದ 45 ವರ್ಷ ವಯೋಮಾನದ, ಯಾವುದೇ ಆರೋಗ್ಯ ಸಮಸ್ಯೆಗಳಿಲ್ಲದ ವ್ಯಕ್ತಿಗಳ ಅಕಾಲಿಕ ಸಾವಿನ ಪ್ರಕರಣಗಳನ್ನು ಈ ಅಧ್ಯಯನಕ್ಕೆ ಪರಿಗಣಿಸಲಾಗಿತ್ತು.

ವಯಸ್ಸು, ಲಿಂಗ, ಸ್ಥಳ ಕುರಿತ ಅಂಶಗಳ ಆಧಾರದಲ್ಲಿ 729 ಪ್ರಕರಣಗಳಿಗೆ ಸಂಬಂಧಿಸಿದ ಮಾಹಿತಿ ಕಲೆಹಾಕಲಾಗಿತ್ತು. ಮೃತರ ವೈದ್ಯಕೀಯ ಹಿನ್ನೆಲೆ, ವರ್ತನೆ (ಧೂಮಪಾನ, ಮದ್ಯಪಾನ, ಅತಿಯಾದ ದೈಹಿಕ ಶ್ರಮ), ಕೋವಿಡ್ ಕಾರಣದಿಂದ ಆಸ್ಪತ್ರೆಗೆ ದಾಖಲಾಗಿದ್ದರೆ ಹಾಗೂ ಅವರಿಗೆ ಕೋವಿಡ್ ಲಸಿಕೆ ನೀಡಲಾಗಿತ್ತೆ ಎಂಬ ವಿವರಗಳನ್ನು ಕಲೆಹಾಕಲಾಗಿತ್ತು.

ಅಂತಿಮವಾಗಿ, ಭಾರತದಲ್ಲಿ ಈ ವಯೋಮಾನದವರಲ್ಲಿ ಹಠಾತ್ ಸಾವಿನ ಸಾಧ್ಯತೆ ಹೆಚ್ಚಳಕ್ಕೆ ಕೋವಿಡ್ ಲಸಿಕೆಯು ಕಾರಣವಾಗಿಲ್ಲ. ವಾಸ್ತವವಾಗಿ ಕೋವಿಡ್ ಲಸಿಕೆಯು ವಯಸ್ಕರಲ್ಲಿ ಸಾವಿನ ಸಾಧ್ಯತೆಗಳನ್ನು ಕುಗ್ಗಿಸಿದೆ ಎಂದು ಅಧ್ಯಯನ ವರದಿ ಅಭಿಪ್ರಾಯಪಟ್ಟಿದೆ.

ಜೀವಮಾನ ಸಾಧನೆ, ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮೈಸೂರು,ಅ.30- ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು 2022ನೇ ಸಾಲಿನಲ್ಲಿ ಹಿರಿಯ ಕ್ರೀಡಾಪಟು, ತರಬೇತುದಾರರಾಗಿ ಸಾಧನೆ ಮಾಡಿರುವ ಕರ್ನಾಟಕ ಹಿರಿಯ ಕ್ರೀಡಾಪಟುಗಳು, ತರಬೇತುದಾರರುಗಳಿಂದ ಜೀವಮಾನ ಸಾಧನೆ ಪ್ರಶಸ್ತಿ ಹಾಗೂ ಗ್ರಾಮೀಣ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡಲು ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ ನೀಡಲು ಸೇವಾ ಸಿಂಧು ಆನ್‌ಲೈನ್ ವೆಬ್‌ಸೈಟ್ https://sevasindhuservices.karnataka.gov.in ಮೂಲಕ ಅರ್ಜಿ ಆಹ್ವಾನಿಸಿದೆ.

ಅರ್ಜಿಗಳನ್ನು ನ.30 ರೊಳಗಾಗಿ ಸಲ್ಲಿಸಬೇಕಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಅಥವಾ ದೂ.ಸಂ: 0821-2564179 ಅನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ 68ನೇ ಕನ್ನಡ ರಾಜ್ಯೋತ್ಸವ ಸಮಾರಂಭ

ಮೈಸೂರು,ಅ.30- ಜಿಲ್ಲಾಡಳಿತದ ವತಿಯಿಂದ ನ.1 ರಂದು ಬೆಳಗ್ಗೆ 9 ಗಂಟೆಗೆ ನಗರದ ಓವೆಲ್ ಮೈದಾನದಲ್ಲಿ 68 ನೇ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು ಹಮ್ಮಿಕೊಂಡಿದ್ದು, ಬೆಳಗ್ಗೆ 7.45ಕ್ಕೆ ಅರಮನೆ ಆವರಣದಲ್ಲಿರುವ ಶ್ರೀ ಭುವನೇಶ್ವರಿ ದೇವಿಗೆ ಪೂಜೆಯನ್ನು ಸಲ್ಲಿಸಲಾಗುತ್ತದೆ. ಬೆಳಗ್ಗೆ 9 ಗಂಟೆಗೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ, ನಗರದ ಓವೆಲ್ ಮೈದಾನದಲ್ಲಿ ಧ್ವಜಾರೋಹಣ ನೆರವೇರಿಸುವರು. ನಂತರ ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಾಮರಾಜ ವಿಧಾನಸಭಾ ಶಾಸಕ ಕೆ.ಹರೀಶ್‌ಗೌಡ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಲೋಕಸಭಾ ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸ್ ಪ್ರಸಾದ್, ಸುಮಲತಾ ಅಂಬರೀಶ್, ಪಾಲಿಕೆ ಮೇಯರ್ ಶಿವಕುಮಾರ್ ಭಾಗವಹಿಸುವರು. ವಿಧಾನಸಭಾ ಶಾಸಕರಾದ ತನ್ವೀರ್ ಸೇಟ್, ಜಿ.ಟಿ ದೇವೇಗೌಡ, ಜಿ.ಡಿ. ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ಟಿ.ಎಸ್ ಶ್ರೀವತ್ಸ, ಸಿ.ಅನಿಲ್ ಕುಮಾರ್ ಹಾಗೂ ವಿಧಾನಪರಿಷತ್ ಶಾಸಕರಾದ ಮರಿತಿಬ್ಬೇಗೌಡ, ಎಚ್.ವಿಶ್ವನಾಥ್, ಡಾ.ಡಿ ತಿಮ್ಮಯ್ಯ, ಸಿ.ಎನ್ ಮಂಜೇಗೌಡ, ಮಧು ಜಿ.ಮಾದೇಗೌಡ, ಪಾಲಿಕೆ ಉಪ ಮೇಯರ್ ಡಾ.ಜಿ ರೂಪ ಪಾಲ್ಗೊಳ್ಳುವರು.

ಕಾರ್ಯಕ್ರಮದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಜಿಲ್ಲಾ ಮಟ್ಟದ ಸಾಧಕರಿಗೆ ಸನ್ಮಾನವನ್ನು ಹಮ್ಮಿಕೊಳ್ಳಲಾಗಿದೆ. ಸಂಜೆ 5.30 ಕರ್ನಾಟಕ ಕಲಾಮಂದಿರದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ನಗರ ಸ್ಥಳೀಯ ಮಹಿಳಾ ಚುನಾಯಿತ ಪ್ರತಿನಿಧಿಗಳಿಗೆ ತರಬೇತಿ ಕಾರ್ಯಕ್ರಮ

ಮೈಸೂರು,ಅ.30- ರಾಜ್ಯ ನಗರಾಭಿವೃದ್ಧಿ ಸಂಸ್ಥೆ, ಮೈಸೂರು ವತಿಯಿಂದ ನಗರ ಸ್ಥಳೀಯ ಮಹಿಳಾ ಚುನಾಯಿತ ಪ್ರತಿನಿಧಿಗಳಿಗೆ "ಕೆಪಾಸಿಟಿ ಬಿಲ್ಡಿಂಗ್ ಟ್ರೈನಿಂಗ್ ಪ್ರೋಗ್ರಾಮ್ ಫಾರ್ ಎಲೆಕ್ಟೆಡ್ ವುಮೆನ್ ರೆಪ್ರೆಸೆಂಟೇಟಿವ್ಸ್ ಆಫ್ ಯು.ಎಲ್.ಬಿ" ವಿಷಯ ಕುರಿತು ಮೂರು ದಿನಗಳ ತರಬೇತಿ ಕಾರ್ಯಕ್ರಮಗಳನ್ನು ನ.2 ರಿಂದ 4 ರವರೆಗೆ ಎರಡು ತಂಡಗಳಲ್ಲಿ ಮೈಸೂರು ಲಲಿತ ಮಹಲ್ ರಸ್ತೆಯಲ್ಲಿರುವ ರಾಜ್ಯ ನಗರಾಭಿವೃದ್ಧಿ ಸಂಸ್ಥೆಯ ನೇತ್ರಾವತಿ ವಸತಿ ನಿಲಯದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಮೈಸೂರು ರಾಜ್ಯ ನಗರಾಭಿವೃದ್ಧಿ ಸಂಸ್ಥೆಯ ನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಜೆಡಿಎಸ್ ಶಾಸಕ ರೇವಣ್ಣಗೆ ಮತ್ತೆ ಸಮನ್ಸ್

ಚುನಾವಣೆಯಲ್ಲಿ ರೇವಣ್ಣ ಅವರ ಆಯ್ಕೆಯನ್ನು ಪ್ರಶ್ನಿಸಿ ರೇವಣ್ಣ ಅವರ ವಿರುದ್ಧ ಸ್ಪರ್ಧಿಸಿ ಪರಾಜಿತಗೊಂಡಿರುವ ಬಿಜೆಪಿ ಅಭ್ಯರ್ಥಿ ಹೈಕೋರ್ಟ್ ವಕೀಲ ಜಿ. ದೇವರಾಜೇಗೌಡ ಅವರು ಚುನಾವಣಾ ತಕರಾರು ಅರ್ಜಿಯನ್ನು ಸಲ್ಲಿಸಿದ್ದು, ಜೆಡಿಎಸ್ ನಾಯಕ ಚುನಾವಣಾ ಅಕ್ರಮದಲ್ಲಿ ತೊಡಗಿದ್ದಾರೆ ಎಂದು ಆರೋಪಿಸಿದ್ದಾರೆ.

ಸೋಮವಾರ ಮತ್ತೆ ಅರ್ಜಿ ವಿಚಾರಣೆಗೆ ಬಂದಿದ್ದು, ಅರ್ಜಿದಾರರ ಪರ ಹಿರಿಯ ವಕೀಲರಾದ ಪ್ರಮೀಳಾ ನೇಸರ್ಗಿ ಅವರು ಪತ್ರಿಕೆಗಳಲ್ಲಿ ಜಾಹೀರಾತಿನ ಮೂಲಕ ಸಮನ್ಸ್ ನೀಡಲು ನಿರ್ದೇಶನ ನೀಡುವಂತೆ ನ್ಯಾಯಾಲಯವನ್ನು ಕೋರಿದರು.

ಆದರೆ, ಚುನಾವಣಾ ತಕರಾರು ಅರ್ಜಿಗಳನ್ನು ನಿಯಂತ್ರಿಸುವ ನಿಯಮಗಳ ಪ್ರಕಾರವೇ ಸಮನ್ಸ್ ಅನ್ನು ಮತ್ತೆ ಜಾರಿ ಮಾಡಲಾಗುವುದು ಎಂದ ಹೈಕೋರ್ಟ್ ನ್ಯಾಯಮೂರ್ತಿ ಜ್ಯೋತಿ ಮೂಲಿಮನಿ ಅವರು, ಸಮನ್ಸ್ ಜಾರಿಗೆ ಆದೇಶಿಸಿ, ವಿಚಾರಣೆಯನ್ನು ನವೆಂಬರ್ 29ಕ್ಕೆ ಮುಂದೂಡಿದ್ದಾರೆ. ರೇವಣ್ಣ ಅವರ ಬೆಂಬಲಿಗರು ಮತದಾರರಿಗೆ ತಲಾ ಎರಡು ಕೋಳಿ ಮತ್ತು ಎರಡು ಸಾವಿರ ರೂ. ನಗದು ಹಂಚಿ ಮತ ಹಾಕಿಸಿಕೊಂಡಿದ್ದಾರೆ. ಅಲ್ಲದೆ, ಅವರ ಮೇಲೆ ಪ್ರಭಾವ ಬೀರಲು ಹಿಂಸಾತ್ಮಕ ಘಟನೆಗಳಲ್ಲಿ ತೊಡಗಿದ್ದಾರೆ. ಅಲ್ಲದೆ, ರೇವಣ್ಣ ಅವರ ಪತ್ನಿ ಭವಾನಿ ರೇವಣ್ಣ ಅವರ ಆಸ್ತಿ ವಿವರಗಳಲ್ಲಿಯೂ ಅಸಮರ್ಪಕತೆ ಇದೆ ಎಂದು ಆರೋಪಿಸಲಾಗಿದೆ.

ತಪ್ಪು ಮಾಹಿತಿ ನೀಡಬೇಡಿ...

ಅಜೆಂಡಾ ವಿಷಯವಾಗಿ ಸೇರಿಸಲಾಗಿತ್ತು. ಆದರೆ, ಈ ಕಾರ್ಯಸೂಚಿಯ ಬಗ್ಗೆ ನೆರೆಯ ರಾಜ್ಯಗಳ ನಡುವೆ ಒಮ್ಮತ ಮೂಡದೇ ಇರುವುದರಿಂದ ಈ ಬಗ್ಗೆ ಚರ್ಚೆ ನಡೆಸಲು ಸಾಧ್ಯವಾಗಿಲ್ಲ. ಇದು ಕೇಂದ್ರದ ತಪ್ಪಲ್ಲ ಎಂದಿದ್ದಾರೆ.

ಕಳಸಾ ಮತ್ತು ಬಂಡೂರಿ ನಾಲೆ ಯೋಜನೆ ಡಿಪಿಆರ್‌ಗಳನ್ನು ಈಗಾಗಲೇ ಕೇಂದ್ರ ಜಲ ಆಯೋಗ (ಸಿಡಬ್ಲ್ಯೂಸಿ) ಕೆಲವು ಷರತ್ತುಗಳೊಂದಿಗೆ ಅನುಮೋದಿಸಿದೆ. ಅದನ್ನು ಕರ್ನಾಟಕ ಸರ್ಕಾರಕ್ಕೆ ಈಗಾಗಲೇ ತಿಳಿಸಲಾಗಿದೆ. ಈ ಮಾಹಿತಿಯನ್ನು ನೀವು ಉದ್ದೇಶಪೂರ್ವಕವಾಗಿ ಮುಚ್ಚಿಟ್ಟಿದ್ದೀರಲ್ಲವೇ ? ಎಂದು ಅವರು ಪ್ರಶ್ನಿಸಿದ್ದಾರೆ.

ಕಳೆದ 2017ರಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ತ್ವರಿತ ನೀರಾವರಿ ಕಾರ್ಯಕ್ರಮದ ಅಡಿಯಲ್ಲಿ ಆದ್ಯತೆ ನೀಡಲಾದ ಕರ್ನಾಟಕದ 5 ಯೋಜನೆಗಳಲ್ಲಿ ಮೂರು ಪೂರ್ಣಗೊಂಡಿವೆ. ಎರಡು ಕಾಮಗಾರಿ ಚಾಲನೆಯಲ್ಲಿವೆ. ಈ ಯೋಜನೆಗಾಗಿ ಕೇಂದ್ರದ ಪಾಲಿನ 1238.30 ಕೋಟಿ ರೂ.ಗಳ ಪೈಕಿ 1190.05 ಕೋಟಿ ರೂ. ಈಗಾಗಲೇ ಬಿಡುಗಡೆಯಾಗಿದೆ. ಇದು ರಾಜ್ಯದ ಹಣಕಾಸು ಸಚಿವಾಲಯವನ್ನೂ ನಿಭಾಯಿಸುತ್ತಿರುವ ನಿಮ್ಮ ಗಮನಕ್ಕೆ ಬಾರದಿರುವುದು ಚೋದ್ಯವಲ್ಲವೇ? ಎಂದು ಅವರು ಕೇಳಿದ್ದಾರೆ. ಅಟಲ್ ಭೂ ಜಲ ಯೋಜನೆ ಅಡಿಯಲ್ಲಿ, ಕರ್ನಾಟಕಕ್ಕೆ ಕೇಂದ್ರದಿಂದ ಈಗಾಗಲೇ 629.54 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಆದರೆ, ಅ.28ರವರೆಗೆ ಕೇವಲ 274.05 ಕೋಟಿ ರೂ. ಮಾತ್ರ ಬಳಕೆ ಮಾಡಿಕೊಂಡಿದ್ದೀರಿ ಎಂದು ಹೇಳಿದ್ದಾರೆ.

'ಕರ್ನಾಟಕ' ನಾಮಕರಣದ ಸುವರ್ಣ ವರ್ಷದ ಸಂಭ್ರಮದಲ್ಲೇ ದಸರಾ ವಸ್ತು ಪ್ರದರ್ಶನದಲ್ಲಿ

ನಾಡಿನ ಶ್ರೀಮಂತ ಪರಂಪರೆಯ ವೈಭವ–ವೈಶಿಷ್ಟ್ಯ ಅನಾವರಣ

ಕನ್ನಡನಾಡಿನ ಹಿರಿಮೆ ಪ್ರತಿಬಿಂಬಿಸುತ್ತಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಳಿಗೆ

● ಎಂ.ಬಿ.ಪವನ್‌ಮೂರ್ತಿ

ಮೈಸೂರು,ಅ.30– ಅಂದಿನ ವಿಶಾಲ ಮೈಸೂರು ರಾಜ್ಯಕ್ಕೆ 'ಕರ್ನಾಟಕ' ಎಂದು ನಾಮಕರಣಗೊಂಡ ಸುವರ್ಣ ವರ್ಷದ ಈ ಸಂಭ್ರಮದ ಸುಸಂದರ್ಭದಲ್ಲಿ ನಾಮಕರಣದ ಹಿನ್ನೆಲೆಯೂ ಒಳಗೊಂಡಂತೆ ಕನ್ನಡನಾಡಿನ ವೈಭವ–ವೈಶಿಷ್ಟ್ಯವು ಮೈಸೂರು ದಸರಾ ವಸ್ತು ಪ್ರದರ್ಶನದಲ್ಲಿ ಅನಾವರಣಗೊಂಡಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಇಲ್ಲಿ ಸ್ಥಾಪಿಸಿರುವ ಮಳಿಗೆಯಲ್ಲಿ ನಾಡು–ನುಡಿಯ ಶ್ರೀಮಂತ ಪರಂಪರೆ ಪ್ರತಿಬಿಂಬಿತಗೊಂಡಿದೆ ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ ವೆಂಕಟಪ್ಪ ಬಾವಿಯ ಮುಖಮಂಟಪದ ಮಾದರಿಯ ವಿನ್ಯಾಸದಲ್ಲಿ ಕನ್ನಡನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿ, ಐತಿಹಾಸಿಕ ಸಂಗತಿಗಳ ನೋಟ ಮೂಡಿಬಂದಿದೆ.

ಮೈಸೂರು ದಸರಾ ಮಹೋತ್ಸವ ಸಮಾಪ್ತಿಗೊಂಡರೂ ಆ ಉತ್ಸವದ ಸಂಭ್ರಮ ದಸರಾ ವಸ್ತು ಪ್ರದರ್ಶನ ಆವರಣದಲ್ಲಿ ಮುಂದುವರೆದಿದ್ದು, ನಾಡಿಗೆ ಕರ್ನಾಟಕವೆಂದು ನಾಮಕರಣಗೊಂಡು ಇದೇ ನವೆಂಬರ್ 1ಕ್ಕೆ 50 ವರ್ಷಗಳಾಗುತ್ತಿವೆ. ಈ ಸುಸಂದರ್ಭದಲ್ಲೇ ವಸ್ತು ಪ್ರದರ್ಶನದ ಈ ಮಳಿಗೆಯಲ್ಲಿ ನಾಡಿನ ಶ್ರೀಮಂತಿಕೆ ಪ್ರತಿಬಿಂಬಿತಗೊಂಡಿರುವುದು ವಿಶೇಷವಾಗಿದೆ.



ಕನ್ನಡ ಭಾಷೆ ಮಾತನಾಡುವ ಜನರಿರುವ ಪ್ರದೇಶಗಳನ್ನು ಒಂದೇ ಆಡಳಿತಕ್ಕೆ ಒಳಪಡಿಸಿ, ವಿಶಾಲ ಮೈಸೂರು ರಾಜ್ಯಕ್ಕೆ 1956ರ ನವೆಂಬರ್ 1ರಂದು ನಾಂದಿ ಹಾಡಲಾಯಿತು. ವಿಶಾಲ ಮೈಸೂರು ರಾಜ್ಯ ಘೋಷಣೆಗೆ ಅಂದಿನ ರಾಷ್ಟ್ರಪತಿ ಡಾ. ರಾಜೇಂದ್ರ ಪ್ರಸಾದ್, ರಾಜ್ಯಪಾಲ ಜಯಚಾಮರಾಜ ಒಡೆಯರ್, ಮುಖ್ಯಮಂತ್ರಿ ಎಸ್.ನಿಜಲಿಂಗಪ್ಪ ಸಾಕ್ಷಿಯಾಗಿದ್ದನ್ನೂ ಛಾಯಾಚಿತ್ರ ಸಹಿತ ಇಲ್ಲಿ ಪ್ರಕಟಿಸಲಾಗಿದೆ. ಇದಾದ 12 ವರ್ಷಗಳ ಬಳಿಕ 1973ರ ನವೆಂಬರ್ 1ರಂದು ವಿಶಾಲ ಮೈಸೂರು ರಾಜ್ಯಕ್ಕೆ 'ಕರ್ನಾಟಕ' ಎಂದು ನಾಮಕರಣ ಮಾಡಲಾಯಿತು. ಈ ಮಹತ್ವದ ಮಾಹಿತಿಯೂ ಇಲ್ಲಿನ ಫಲಕಗಳಲ್ಲಿ ಬಿತ್ತರಗೊಳಿಸಲಾಗಿದೆ. 'ಕರ್ನಾಟಕ' ನಾಮಕರಣ ಸಮಾರಂಭದಲ್ಲಿ ಅಂದಿನ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರು ರಾಜ್ಯದ ನೂತನ ಹೆಸರು ಅನಾವರಣಗೊಳಿಸುತ್ತಿರುವ ಛಾಯಾಚಿತ್ರವೂ ಇಲ್ಲಿದೆ.

ಏಕೀಕರಣದ ಮೊದಲು ಕನ್ನಡ ಭಾಷಿಗರಿರುವ ಭೂಪಟ ಹಾಗೂ ಏಕೀಕರಣದ ನಂತರದಲ್ಲಿ ಕರ್ನಾಟಕದ ಭೂಪಟದ ಚಿತ್ರಗಳೂ ಇಲ್ಲಿವೆ. ನಾಡಿನ ಜಾನಪದ ಕಲೆಗಳ ಬಗ್ಗೆಯೂ ಇಲ್ಲಿ ಪರಿಚಯಿಸಿದ್ದು, ಯಾವ್ಯಾವ ಪ್ರದೇಶದಲ್ಲಿ ಯಾವ್ಯಾವ ರೀತಿಯ ಜಾನಪದ ಕಲೆಗಳು ರೂಢಿಯಲ್ಲಿದೆ ಎಂಬುದನ್ನು ಚಿತ್ರಸಮೇತ ವಿವರಿಸಲಾಗಿದೆ. ನಾಡಿನ ಅರಣ್ಯ ಪ್ರದೇಶಗಳ ವಿವರ ಹಾಗೂ ಅಲ್ಲಿರುವ ವನ್ಯಜೀವಿಗಳ ಮಾಹಿತಿಯನ್ನೂ ಪ್ರತಿಬಿಂಬಿಸಲಾಗಿದೆ.



ನಾಲ್ವಡಿ ಸ್ಮರಣೆ...

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ರಾಜ ಗಾಂಭೀರ್ಯದಲ್ಲಿ ಆಸೀನರಾಗಿರುವ ಅವರ ಚಿತ್ರದೊಂದಿಗೆ ಅವರ ಕೊಡುಗೆಗಳನ್ನು ಇಲ್ಲಿನ ಫಲಕವೊಂದರಲ್ಲಿ ಅಕ್ಷರ ರೂಪದಲ್ಲಿ ಅನಾವರಣಗೊಳಿಸಲಾಗಿದೆ. ಅವರ ಬಾಲ್ಯ, ಆಡಳಿತ, ಕೊಡುಗೆ, ಸಾಮಾಜಿಕ ಸುಧಾರಣೆಗಳ ಪಟ್ಟಿಯನ್ನು ನೀಡಿ ಅವರ ಮೇರು ವ್ಯಕ್ತಿತ್ವವನ್ನು ಇಲ್ಲಿ ಸ್ಮರಿಸಲಾಗಿದೆ.

ಏನಿದು ವೆಂಕಟಪ್ಪ ಬಾವಿ (ವೆಂಕಟಪತಿ ಬಾವಿ)


ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ ವೆಂಕಟಪ್ಪ ಬಾವಿಯು ವಿಜಯನಗರ ಆಳ್ವಿಕೆಯಲ್ಲಿ ವೆಂಕಟಪ್ಪ ನಾಯಕರಿಂದ ನಿರ್ಮಿಸಲ್ಪಟ್ಟ ಸ್ನಾನ ಮಾಡುವ ಬಾವಿಯಾಗಿದೆ. ಈ ಬಾವಿಗೆ ನಾಲ್ಕು ಪ್ರವೇಶ ದ್ವಾರಗಳಿದ್ದು, ಇದು ಮೂರು ಕಡೆ ಹಜಾರದಿಂದ ಆವೃತವಾಗಿದೆ. ವೆಂಕಟಪ್ಪ ಬಾವಿಯನ್ನು 'ಕ್ವೀನ್ಸ್ ಬಾತ್' ಎಂದೂ ಕರೆಯಲಾಗಿದೆ. ಕಲಾತ್ಮಕತೆಯ ಕಂಬಗಳು ಈ ನಿರ್ಮಾಣದ ವೈಶಿಷ್ಟ್ಯದಲ್ಲೊಂದು.

ನಾಡಿನ ಐತಿಹಾಸಿಕ ಸ್ಮಾರಕಗಳ ವಾಸ್ತುಶಿಲ್ಪ ಶೈಲಿಯ ಸಂಕ್ಷಿಪ್ತ ವಿವರಗಳನ್ನು, ಚಿತ್ರಸಹಿತ ನೀಡಲಾಗಿದೆ. ವಿಜಯನಗರ ವಾಸ್ತುಶಿಲ್ಪ ಹಾಗೂ ಗಂಗರ ವಾಸ್ತುಶಿಲ್ಪ ಸೇರಿದಂತೆ ಇಡೀ ನಾಡಿನ ವಿವಿಧ ಭಾಗಗಳಲ್ಲಿನ ಐತಿಹಾಸಿಕ ನಿರ್ಮಾಣಗಳ ವೈವಿಧ್ಯತೆಯ ಮಾಹಿತಿ ಇಲ್ಲಿ ದೊರೆಯುವಂತಾಗಿದೆ. ಕನ್ನಡ ಮೊಟ್ಟ ಮೊದಲ ಹಲ್ಮಿಡಿ ಶಾಸನದ ಬಗ್ಗೆಯೂ ವಿಶಿಷ್ಟ ಫಲಕದಲ್ಲಿ ಮಾಹಿತಿ ಬಿತ್ತರಿಸಲಾಗಿದೆ.

'ಕನ್ನಡದ ಮೊದಲ ಹೆಮ್ಮೆ' ಶೀರ್ಷಿಕೆಯಡಿ ಮಹತ್ವದ ಅಂಶಗಳನ್ನು ದಾಖಲಿಸಲಾಗಿದೆ. 'ಮಯೂರವರ್ಮ' ಕನ್ನಡದ ಮೊದಲ ದೊರೆ, 'ಕದಂಬರು' ಕರ್ನಾಟಕವನ್ನು ಆಳಿದ ಮೊದಲ ರಾಜವಂಶ, 'ಹಲ್ಮಿಡಿ' ಕನ್ನಡದ ಮೊದಲ ಶಾಸನ, 'ಪಂಪ' ಕನ್ನಡದ ಮೊದಲ ಕವಿ, 'ಅಕ್ಕಮಹಾದೇವಿ' ಕನ್ನಡದ ಮೊದಲ ಕವಯಿತ್ರಿ ಎಂಬ ಪ್ರಾಮುಖ್ಯತೆಯಿಂದ ಕೂಡಿದ ಮಾಹಿತಿಗಳನ್ನು ಉಲ್ಲೇಖಿಸಲಾಗಿದೆ.

ಕನ್ನಡ ನಾಡನ್ನು ಆಳ್ವಿಕೆ ಮಾಡಿದ ರಾಜಮನೆತನಗಳ ರಾಜಲಾಂಛನಗಳ ಬಗ್ಗೆ ಚಿತ್ರಸಹಿತ ಮಾಹಿತಿ ಒದಗಿಸಲಾಗಿದೆ. 'ಕವಿಗಳ ಕಂಡ ನಾಡು' ಶೀರ್ಷಿಕೆಯಡಿ ನಾಡಿನ ಮಹಾನ್ ಕವಿಗಳನ್ನು ಅವರ ಭಾವಚಿತ್ರ ಸಹಿತ ಅನಾವರಣಗೊಳಿಸಲಾಗಿದೆ. ಅಲ್ಲದೆ, 'ಕರ್ನಾಟಕ ರತ್ನ' ಪ್ರಶಸ್ತಿ ಪುರಸ್ಕೃತರು, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ನಾಡಿನ ಕವಿಗಳು ಹಾಗೂ ಭಾರತರತ್ನ ಪುರಸ್ಕಾರಕ್ಕೆ ಭಾಜನರಾದ ಕನ್ನಡದ ಮಹನೀಯರ ಬಗ್ಗೆಯೂ ಇಲ್ಲಿ ಮಾಹಿತಿ ಒದಗಿಸಲಾಗಿದೆ. ಕ್ರೀಡೆ, ಸಂಗೀತ ಸೇರಿದಂತೆ ಮೊದಲಾದ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರ ವಿವರಗಳನ್ನು ಬಿತ್ತರಿಸಿ ನಾಡಿನ ಹಿರಿಮೆಯನ್ನು ಎತ್ತಿಹಿಡಿಯಲಾಗಿದೆ.

ಬೆಂಗಳೂರಿನ ಪ್ರತಿರೂಪಿ ಸಂಸ್ಥೆಯು ಇಲಾಖೆಯಿಂದ ಗುತ್ತಿಗೆ ಪಡೆದು ಈ ವಿಶಿಷ್ಟಶೈಲಿಯ ಮಳಿಗೆಗೆ ಐತಿಹಾಸಿಕ ನಿರ್ಮಾಣವಾದ 'ವೆಂಕಟಪ್ಪ ಬಾವಿ'ಯ ಪ್ರತಿರೂಪ ನೀಡುವ ಜೊತೆಗೆ ನಾಡಿನ ಸಿರಿವಂತಿಕೆಯನ್ನು ಪ್ರತಿಬಿಂಬಿಸಿದೆ. 15 ದಿನಗಳಲ್ಲಿ ಈ ಮಳಿಗೆಗೆ ರೂಪ ನೀಡಿದ್ದು, ಫೈಬರ್ ಸಾಮಗ್ರಿಗಳ ಮೂಲಕ ಮಳಿಗೆಗೆ 'ವೆಂಕಟಪ್ಪ ಬಾವಿ'ಯ ಪ್ರತಿಕೃತಿ ಮೂಡಿಸಲಾಗಿದೆ.





ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಅನುಷ್ಠಾನಕ್ಕೆ ಅಧಿಸೂಚನೆ

ಟೊಮೆಟೋಗೆ ವಿಮಾ ಮೊತ್ತ ಹೆಚ್ಚಳ

ಮೈಸೂರು, ಅ.30(ಎಂಕೆ)– 2023–24ನೇ ಸಾಲಿನ ಹಿಂಗಾರು ಹಾಗೂ ಬೇಸಿಗೆ ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ(ವಿಮಾ) ಯೋಜನೆ ಅನುಷ್ಠಾನಕ್ಕೆ ಅಧಿಸೂಚನೆ ಹೊರಡಿಸಲಾಗಿದ್ದು, ಟೊಮೆಟೋ ಬೆಳೆಗೆ ಹೆಚ್ಚಿನ ವಿಮಾ ಮೊತ್ತ ನಿಗದಿಪಡಿಸಲಾಗಿದೆ.

ಮೈಸೂರು ಜಿಲ್ಲೆಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ (ವಿಮಾ) ಯೋಜನೆಯಡಿ 9 ಬೆಳೆಗಳನ್ನು ನಿಗದಿಪಡಿಸಲಾಗಿದ್ದು, ಮಳೆಯಾಶ್ರಿತ 4, ನೀರಾವರಿ 2, 1 ತರಕಾರಿ ಬೆಳೆ ಮತ್ತು ಬೇಸಿಗೆ ಹಂಗಾಮಿಗೆ 2 ನೀರಾವರಿ ಬೆಳೆಗಳನ್ನು ಆಯ್ಕೆ ಮಾಡಲಾಗಿದೆ. ವಾಣಿಜ್ಯ ವಿಮಾ ಕಂತಿನ ದರ ಹಾಗೂ ರೈತರು ಕಟ್ಟಬೇಕಾಗಿರುವ ವಿಮಾ ಕಂತಿನ ದರದಲ್ಲಿನ ವ್ಯತ್ಯಾಸದ ಮೊತ್ತದ ತಲಾ ಶೇ.50ರಷ್ಟು ಹಣವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ 'ಫ್ಯೂಚರ್ ಜನರಲಿ ಇನ್ಶುರೆನ್ಸ್' ಕಂಪನಿ ಮೂಲಕ ನಿಯಮಾನುಸಾರ ಪಾವತಿ ಮಾಡಲಾಗುವುದು.

ಒಂದು ಎಕರೆ ಮುಸುಕಿನ ಜೋಳ (ನೀರಾವರಿ)ಕ್ಕೆ 26,103.15 ರೂ.ವಿಮಾ ಮೊತ್ತವಿದ್ದು, ರೈತರು 391.55 ರೂ. ವಿಮಾ ಕಂತು ಹಣವನ್ನು ಡಿ.15ರೊಳಗೆ ಪಾವತಿಸಬೇಕಾಗಿದೆ. ಹಾಗೆಯೇ ಮುಸುಕಿನ ಜೋಳ(ಮಳೆಯಾಶ್ರಿತ)ಕ್ಕೆ 22,865.55 ರೂ. ವಿಮಾ ಮೊತ್ತವಿದ್ದು, ವಿಮಾ ಕಂತು 342.98 ರೂ., ರಾಗಿ(ನೀರಾವರಿ)ಗೆ 20,538.53 ರೂ. ವಿಮಾ ಮೊತ್ತ ನಿಗದಿಪಡಿಸಿದ್ದು, ರೈತರು 308.08 ರೂ. ವಿಮಾ ಕಂತು ಹಣವನ್ನು ಡಿ.15ರೊಳಗೆ ಪಾವತಿಸಬೇಕಾಗಿದೆ.

ರಾಗಿ(ಮಳೆಯಾಶ್ರಿತ)ಗೆ 17,199.75 ರೂ.ವಿಮಾ ಮೊತ್ತವಿದ್ದು, ರೈತರು 258 ರೂ. ಹಾಗೂ ಹುರಳಿ(ಮಳೆಯಾಶ್ರಿತ)ಗೆ 8,296.35 ರೂ.ವಿಮಾ ಮೊತ್ತವಿದ್ದು, ರೈತರು 124.45 ರೂ. ವಿಮಾ ಕಂತು ಹಣವನ್ನು ಡಿ.1 ರೊಳಗೆ ಪಾವತಿಸಬೇಕಿದೆ. ಅದೇ ರೀತಿ ಕಡಲೆ (ಮಳೆಯಾಶ್ರಿತ) ಬೆಳೆಗೆ 14,063.33 ರೂ. ವಿಮಾ ಮೊತ್ತವಿದ್ದು, ರೈತರು 210.95 ರೂ. ಕಂತು ಹಣ ಪಾವತಿಸಬೇಕಿದೆ.

ಟೊಮ್ಯಾಟೋ ಬೆಳೆಗೆ ವಿಮೆ: ಹಿಂಗಾರು ಹಂಗಾಮಿನಲ್ಲಿ ಟೊಮ್ಯಾಟೋ ಬೆಳೆಗೆ ಹೆಚ್ಚಿನ ವಿಮಾ ಮೊತ್ತ ನಿಗದಿಪಡಿಸಲಾಗಿದೆ. ಎಕರೆಗೆ 57,265.05 ರೂ.ಗಳಿದ್ದು, ರೈತರು 2,863.25 ರೂ. ವಿಮಾ ಕಂತು ಹಣವನ್ನು ಡಿ.15 ರೊಳಗೆ ಪಾವತಿಸಬೇಕಾಗಿದೆ. ಬೇಸಿಗೆ ಹಂಗಾಮಿನಲ್ಲಿ ಭತ್ತ(ನೀರಾವರಿ)ಕ್ಕೆ 37,738.28 ರೂ. ವಿಮಾ ಮೊತ್ತವಿದ್ದು, ರೈತರು 566.07 ರೂ, ಹಾಗೂ ರಾಗಿ(ನೀರಾವರಿ)ಗೆ 20,538.53 ರೂ. ವಿಮಾ ಮೊತ್ತಕ್ಕೆ ರೈತರು 308.08 ರೂ.ವಿಮಾ ಕಂತಿನ ಹಣವನ್ನು 2024ರ ಫೆ.28 ರೊಳಗೆ ಪಾವತಿಸಲು ಸೂಚಿಸಲಾಗಿದೆ



ಜಿಲ್ಲೆಯಲ್ಲಿ 82,660.75 ಹೆಕ್ಟರ್ ಬೆಳೆ ನಾಶ...!

ಮುಂಗಾರು ಹಾಗೂ ಹಿಂಗಾರು ಮಳೆ ಕೊರತೆಯಿಂದಾಗಿ ಮೈಸೂರು ಜಿಲ್ಲೆಯಲ್ಲಿ 82,660.75 ಹೆಕ್ಟರ್ ಪ್ರದೇಶದಲ್ಲಿನ ಬೆಳೆ ನಾಶವಾಗಿದೆ. ಹೆಚ್.ಡಿ.ಕೋಟೆ ತಾಲೂಕು ವ್ಯಾಪ್ತಿಯಲ್ಲಿ 20,775 ಹೆಕ್ಟರ್ ಪ್ರದೇಶದಲ್ಲಿ ಬೆಳೆ ನೀರಿಲ್ಲದೆ ಒಣಗಿದರೆ, ಸರಗೂರು ತಾಲೂಕಿನಲ್ಲಿ 8,845, ಹುಣಸೂರು ತಾಲೂಕಿನಲ್ಲಿ 7,130, ಸಾಲಿಗ್ರಾಮ ತಾಲೂಕಿನಲ್ಲಿ 5,090, ಪಿರಿಯಾಪಟ್ಟಣ ತಾಲೂಕಿನಲ್ಲಿ 13,543, ಮೈಸೂರು ತಾಲೂಕು ವ್ಯಾಪ್ತಿಯಲ್ಲಿ 3,028, ನಂಜನಗೂಡು ತಾಲೂಕಿನಲ್ಲಿ 15,677, ತಿ.ನರಸೀಪುರ ತಾಲೂಕಿನಲ್ಲಿ 1,071 ಹಾಗೂ ಕೆ.ಆರ್.ನಗರ ತಾಲೂಕಿನಲ್ಲಿ 7,500 ಹೆಕ್ಟರ್ ಪ್ರದೇಶದಲ್ಲಿ ಬೆಳೆದಿದ್ದ ಬೆಳೆಗಳು ನೀರಿಲ್ಲದೆ ಬತ್ತಿಹೋಗಿವೆ.

ವಿರಾಟ್ ಹುಟ್ಟುಹಬ್ಬದಂದು ವಿಶ್ವಕಪ್ ಪಂದ್ಯ: 70,000 'ಕೊಹ್ಲಿ ಮಾಸ್ಕ್' ವಿತರಣೆ

ಕೋಲ್ಕತ್ತ: ಭಾರತ ಕ್ರಿಕೆಟ್ ತಂಡದ ಖ್ಯಾತ ಕ್ರಿಕೆಟಿಗ ವಿರಾಟ್ ಕೊಹ್ಲಿ ನವೆಂಬರ್ 5ರಂದು 35ನೇ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿದ್ದು, ಅಂದೇ ದಕ್ಷಿಣ ಆಫ್ರಿಕಾ ವಿರುದ್ಧ ಭಾರತ ತಂಡ ಏಕದಿನ ವಿಶ್ವಕಪ್ ಕ್ರಿಕೆಟ್ ಟೂರ್ನಿಯ ಪಂದ್ಯವನ್ನು ಆಡಲಿದೆ.

ಕೋಲ್ಕತ್ತದ ಈಡನ್ ಗಾರ್ಡನ್ ಮೈದಾನದಲ್ಲಿ ನಡೆಯುವ ಈ ಪಂದ್ಯದ ಸಂದರ್ಭ ರನ್ ಮೆಷಿನ್ ವಿರಾಟ್ ಕೊಹ್ಲಿ ಅವರಿಗೆ ಚಿಯರ್ ಮಾಡಲು ಮೈದಾನಕ್ಕೆ ಬರುವ 70,000 ಅಭಿಮಾನಿಗಳಿಗೆ ಉಚಿತವಾಗಿ 'ವಿರಾಟ್ ಕೊಹ್ಲಿ ಮಾಸ್ಕ್'ವಿತರಿಸಲು ನಿರ್ಧರಿಸಲಾಗಿದೆ.

ಕಿಂಗ್ ಕೊಹ್ಲಿ ಅವರ ಹುಟ್ಟುಹಬ್ಬವನ್ನು ಸ್ಮರಣೀಯಗೊಳಿಸುವ ಉದ್ದೇಶದಿಂದ ಪಶ್ಚಿಮ ಬಂಗಾಳ ಕ್ರಿಕೆಟ್ ಮಂಡಳಿಯು(ಸಿಎಬಿ) ಈ ಯೋಜನೆ ಮಾಡಿಕೊಂಡಿದೆ. ಪಂದ್ಯದ ಎಲ್ಲಾ ಟಿಕೆಟ್‌ಗಳು ಈಗಾಗಲೇ ಸೋಲ್ಡ್ ಔಟ್ ಆಗಿದ್ದು, ಕ್ರೀಡಾಂಗಣ ಕ್ರಿಕೆಟ್ ಅಭಿಮಾನಿಗಳಿಂದ ತುಂಬಿ ತುಳುಕುವುದು ಪಕ್ಕಾ ಆಗಿದೆ.

ಮಾಸ್ಕ್‌ಗಳ ವಿತರಣೆ ಜೊತೆಗೆ ಪಂದ್ಯ ಆರಂಭಕ್ಕೂ ಮುನ್ನ ಕೇಕ್ ಕತ್ತರಿಸುವ ಮತ್ತು ಮೆಮೆಂಟೊ ವಿತರಣೆ ಕಾರ್ಯಕ್ರಮವನ್ನೂ ಸಿಎಬಿ ಹಮ್ಮಿಕೊಂಡಿದೆ. ಇದಕ್ಕೆ ಐಸಿಸಿಯಿಂದ ಒಪ್ಪಿಗೆ ಸಿಗುವ ವಿಶ್ವಾಸವಿದೆ. ವಿರಾಟ್ ಕೊಹ್ಲಿಗೆ ಈ ದಿನವನ್ನು ಅವಿಸ್ಮರಣೀಯಗೊಳಿಸಲು ನಾವು ಇಚ್ಛಿಸುತ್ತೇವೆ ಎಂದು ಸಿಎಬಿ ಅಧ್ಯಕ್ಷರಾದ ಸ್ನೇಹಸಿಶ್ ಗಂಗೂಲಿ ಹೇಳಿದ್ದಾರೆ.

ವಿರಾಟ್ ಕೊಹ್ಲಿ ಮೈದಾನಕ್ಕೆ ನಡೆದು ಬರುವಾಗ ಕ್ರೀಡಾಂಗಣದಲ್ಲಿರುವ ಪ್ರತಿಯೊಬ್ಬ ಅಭಿಮಾನಿ ಕೊಹ್ಲಿ ಮಾಸ್ಕ್ ಧರಿಸಬೇಕೆಂಬುದು ನಮ್ಮ ಆಶಯವಾಗಿದೆ. ಅದಕ್ಕಾಗಿ ನಾವು ಉಚಿತವಾಗಿ 70,000 ಮಾಸ್ಕ್ ವಿತರಣೆಗೆ ನಿರ್ಧರಿಸಿದ್ದೇವೆ ಎಂದೂ ಅವರು ಹೇಳಿದರು.



ಪಾಕ್, ಇಂಗ್ಲೆಂಡ್ ಬಳಿಕ ಶ್ರೀಲಂಕಾಗೂ ಅಫ್ಘಾನ್ ಶಾಕ್

ಪುಣೆ, ಅ.30– ಪ್ರಸಕ್ತ ವಿಶ್ವಕಪ್‌ನಲ್ಲಿ ಹಾಲಿ ಚಾಂಪಿಯನ್ ಇಂಗ್ಲೆಂಡ್ ಹಾಗೂ ಪಾಕಿಸ್ತಾನವನ್ನು ಮಣಿಸಿದ್ದ ಅಫ್ಘಾನಿಸ್ತಾನ ಇದೀಗ ಶ್ರೀಲಂಕಾಕ್ಕೂ ಶಾಕ್ ನೀಡಿದೆ.

ಬೌಲಿಂಗ್ ಹಾಗೂ ಬ್ಯಾಟಿಂಗ್‌ನಲ್ಲಿ ಭರ್ಜರಿ ಆಟವಾಡಿದ ಅಫ್ಘಾನಿಸ್ತಾನ ಶ್ರೀಲಂಕಾ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿತು. ಈ ಗೆಲುವಿನೊಂದಿಗೆ ಸೆಮೀಸ್ ಹಾದಿ ಜೀವಂತವಾಗಿರಿಕೊಂಡಿದೆ.

ಇಲ್ಲಿನ ಮಹಾರಾಷ್ಟ್ರ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿ ಶ್ರೀಲಂಕಾ ನೀಡಿದ 242 ರನ್ ಗುರಿ ಬೆನ್ನತ್ತಿದ ಅಫ್ಘಾನಿಸ್ತಾನ 45.2 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ ಗುರಿ ತಲುಪಿತು. ತಂಡದ ಪರ ಇನ್ನಿಂಗ್ಸ್ ಆರಂಭಿಸಿದ ರಹಮಾನ್ ವುಲ್ಲಾ ಗುರ್ಬಾಜ್ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು. ನಂತರ ಜೊತೆಯಾದ ಇಬ್ರಾಹಿಂ ಜದ್ರಾನ್ ಹಾಗೂ ರಹಮತ್ ಶಾ 73ರನ್‌ಗಳ ಜೊತೆಯಾಟವಾಡಿ ತಂಡಕ್ಕೆ ಚೇತರಿಕೆ ನೀಡಿದರು. ಆದರೆ ಈ ವೇಳೆ 39 ರನ್ ಗಳಿಸಿದ್ದ ಇಬ್ರಾಹಿಂ ಜದ್ರಾನ್ ವಿಕೆಟ್ ಒಪ್ಪಿಸಿದರು. ಮಧ್ಯಮ ಕ್ರಮಾಂಕದಲ್ಲಿ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶನ ತೋರಿದ ರಹಮತ್ ಶಾ 62 ರನ್ ಗಳಿಸಿದರೆ, ನಾಯಕ ಹಷ್ಮತ್ ವುಲ್ಲಾ ಶಾಹಿದಿ ಅಜೇಯ 58 ರನ್ ಗಳಿಸಿದರು. ಇನ್ನು ಕೊನೆಯವರೆಗೂ ಬ್ಯಾಟ್ ಮಾಡಿದ ಅಝುಮತ್‌ವುಲ್ಲಾ ಓಮರ್‌ಝೈ ಅಜೇಯ 73 ರನ್ ಸಿಡಿಸಿದರು. ಮುರಿಯದ 4ನೇ ವಿಕೆಟ್‌ಗೆ ನಾಯಕ ಹಶ್ಮತುಲ್ಲಾ ಶಾಹಿದಿ ಮತ್ತು ಅಜ್ಮತುಲ್ಲಾ 104 ಎಸೆತಗಳಲ್ಲಿ 111 ರನ್ ಜೊತೆಯಾಟವಾಡಿ ತಂಡಕ್ಕೆ ಗೆಲುವು ತಂದುಕೊಟ್ಟರು. ಶ್ರೀಲಂಕಾ ಪರ ದಿಲ್ಶಾನ್ ಮಧುಶಂಕ 2, ಕಸುನ್ ರಜಿತ 1 ವಿಕೆಟ್ ಕಬಳಿಸಿದರು.

ಇದಕ್ಕೂ ಮುನ್ನ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಶ್ರೀಲಂಕಾ ಫಝುಲಕ್ ಫಾರೂಖಿ ಮಾರಕ ದಾಳಿಗೆ ತತ್ತರಿಸಿ 49.3 ಓವರ್‌ಗಳಲ್ಲಿ 241ರನ್‌ಗೆ ಆಲೌಟಾಯಿತು. ಲಂಕಾ ಪರ ಪಾತುಂ ನಿಸ್ಸಾಂಕ 46, ನಾಯಕ ಕುಸಲ್ ಮೆಂಡಿಸ್ 39, ಸಮರವಿಕ್ರಮ 36, ಚರಿತಾ ಅಸಲಂಕಾ 22, ದಿಮುತ್ ಕರುಣಾರತ್ನೆ 15, ಧನಂಜಯ್ ಡಿ ಸಿಲ್ವಾ 14 ಹಾಗೂ ಏಂಜೆಲೊ ಮ್ಯಾಥ್ಯೂಸ್ 23, ಮಹೇಶ್ ತಿಕ್ಷಣ 29 ರನ್ ಗಳಿಸಿದರು.

ಅಫ್ಘಾನಿಸ್ತಾನ ಪರ ಫಜಲ್ಹಕ್ ಫಾರೂಕಿ 4, ಮುಜಿಬ್ ಉರ್ ರಹಮಾನ್ 2, ರಶೀದ್ ಖಾನ್ ಮತ್ತು ಮೊಹಮ್ಮದ್ ನಬಿ ತಲಾ ಒಂದೊಂದು ವಿಕೆಟ್ ಕಿತ್ತರು. ಫಜಲ್ಹಕ್ ಫಾರೂಕಿ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಸೆಮೀಸ್ ಹಾದಿ ಜೀವಂತವಾಗಿರಿಸಿಕೊಂಡ ಅಫ್ಘಾನಿಸ್ತಾನ



ಭಾರತದ ಹೆಸರಿಗೆ ಜಿ–20 ಶೃಂಗಸಭೆ ನಂತರ ಮತ್ತಷ್ಟು ಬಲ ಬಂದಿದೆ

● ಆರ್‌ಎಸ್‌ಎಸ್ ಹಿರಿಯ ಮುಖಂಡ ಸು.ರಾಮಣ್ಣ ಹರ್ಷಾಭಿಪ್ರಾಯ ● ಹಿರಿಯ ಪ್ರಚಾರಕ ಹರಿಭಾವು ವಝೆಯವರ 'ಚರಿತಾರ್ಥ' ಕೃತಿ ಬಿಡುಗಡೆ



ಮೈಸೂರು, ಅ.30(ಎಸ್‌ಪಿಎನ್)– ಪ್ರಧಾನ ಮಂತ್ರಿ ನರೇಂದ್ರ ಮೋದಿ ಅಧಿಕಾರಕ್ಕೆ ಬಂದ ಮೇಲೆ 'ಭಾರತ'ದ ಹೆಸರಿಗೆ ಪ್ರಪಂಚದಲ್ಲಿ ಹೆಚ್ಚು ಮಾನ್ಯತೆ ದೊರಕುತ್ತಿದೆ ಅದರಲ್ಲೂ ಜಿ–20 ದೇಶಗಳ ಶೃಂಗಸಭೆ ನಡೆದ ಮೇಲೆ ಇದಕ್ಕೆ ಮತ್ತಷ್ಟು ಬಲ ಬಂದಿರುವುದು ಸ್ವಾಗತಾರ್ಹ ಎಂದು ರಾಷ್ಟ್ರೀಯ ಸ್ವಯಂ ಸೇವಾ ಸಂಘದ ಹಿರಿಯ ಮುಖಂಡ ಸು.ರಾಮಣ್ಣ ಅಭಿಪ್ರಾಯಪಟ್ಟರು.

ಮೈಸೂರು ಝಾನ್ಸಿರಾಣಿ ಲಕ್ಷ್ಮೀಬಾಯಿ ರಸ್ತೆಯಲ್ಲಿರುವ ಮಾಧವಾ ಕೃಪಾದಲ್ಲಿ ಇಂದು ಭಾರತೀಯ ಸಂಕಲನ ಸಮಿತಿ ಕರ್ನಾಟಕ ವತಿಯಿಂದ ಹೊರತಂದಿರುವ ಆರ್‌ಎಸ್‌ಎಸ್ ಹಿರಿಯ ಪ್ರಚಾರಕ ಹರಿಭಾವು ವಝೆ ಅವರ ಹೆಜ್ಜೆಗಳು ಕುರಿತಾದ 'ಚರಿತಾರ್ಥ' ಕೃತಿ ಬಿಡುಗಡೆ ಸಮಾರಂಭದಲ್ಲಿ ಆಶಯ ಭಾಷಣದಲ್ಲಿ ತಿಳಿಸಿದರು.

ನಮ್ಮ ದೇಶದ ಹೆಸರು ಇಲ್ಲಿಯವರೆಗೆ 'ಇಂಡಿಯಾ' ಎಂದು ಕರೆಯಲ್ಪಡುತ್ತಿತ್ತು. ಈಗ ಜಿ–20 ದೇಶಗಳ ಮುಖ್ಯಸ್ಥರ ಸಭೆ ನಡೆದ ನಂತರ 'ಭಾರತ' ಮುನ್ನೆಲೆಗೆ ಬಂದಿರುವುದು ಸ್ವಾಗತಾರ್ಹ. ಇದಕ್ಕೆ ಸಂಘದ ಕಾರ್ಯಕರ್ತರಾದ ನಮಗೆ ಹೆಮ್ಮೆ ತರುವ ವಿಷಯ ಅಲ್ಲವೇ ಎಂದು ಸಭಾಂಗಣದಲ್ಲಿದ್ದ ಕಾರ್ಯಕರ್ತರತ್ತ ಸು.ರಾಮಣ್ಣ ಅಭಿಪ್ರಾಯ ಕೇಳಿದಾಗ, 'ಭಾರತ್ ಮಾತಾಕೀ ಜೈ' ಘೋಷಣೆ ಕೂಗುವ ಮೂಲಕ ಸಮ್ಮತಿ ಸೂಚಿಸಿದರು.

ಮುಂದುವರೆದು, ನಾನು ಕ್ರಿಕೆಟ್ ಅನ್ನು ಹೆಚ್ಚಾಗಿ ನೋಡುವುದಿಲ್ಲ. ಆದರೂ ನಿನ್ನೆ (ಭಾನುವಾರ) ನಡೆದ ಇಂಗ್ಲೆಂಡ್ ಮತ್ತು ಭಾರತ ನಡುವಿನ ಪಂದ್ಯವನ್ನು ವೀಕ್ಷಿಸಿದೆ. ನನಗೆ ಗೊತ್ತಿಲ್ಲದೆ ಭಾರತ ಗೆಲ್ಲಲಿ ಎಂದು ಪ್ರಾರ್ಥಿಸಿದೆ. ನನ್ನ ಪ್ರಾರ್ಥನೆ ಫಲಿಸಿ, ಭಾರತ ತಂಡ ಆ ಪಂದ್ಯದಲ್ಲಿ ಗೆದ್ದೇ ಬಿಟ್ಟಿತು. ಆಗ ನನಗಾದ ಸಂತೋಷ ಅಷ್ಟಿಷ್ಟಲ್ಲ ಎಂದ ಅವರು, 'ಇಂಡಿಯಾ' ಎಂಬ ವಿಕೃತಿ ಮಾಯವಾಗಿ 'ಭಾರತ' ಎಂಬ ಸುಜ್ಞಾನ ಬೇಗ ಜನರಲ್ಲಿ ಬರಲಿ ಎಂದು ಆಶಿಸಿದರು.

ರಾಷ್ಟ್ರೀಯ ಸ್ವಯಂ ಸೇವಾ ಸಂಘದಲ್ಲಿ ವ್ಯಕ್ತಿ ಅಶಾಶ್ವತ. ವ್ಯಕ್ತಿತ್ವ ಶಾಶ್ವತ. ಹಾಗಾಗಿ ಇಂದಿನ ಆರ್‌ಎಸ್‌ಎಸ್ ಕಾರ್ಯಕರ್ತರಿಗೆ ಕಳೆದ 97 ವರ್ಷಗಳಲ್ಲಿ ಯಾವ ಯಾವ ಆರ್‌ಎಸ್‌ಎಸ್ ಜೇಷ್ಠ ಕಾರ್ಯಕರ್ತರು ಹೇಗೆ ನಡೆದುಕೊಂಡಿದ್ದಾರೆ ಎಂಬುದನ್ನು ಹಿರಿಯ ಪ್ರಚಾರಕ್ 'ಹರಿಭಾವು ವಝೆ' ವ್ಯಕ್ತಿತ್ವ ನೆನಪಿಸಲು 'ಚರಿತಾರ್ಥ' ಪುಸ್ತಕ ಪ್ರಸ್ತುತವಾಗಿದೆ ಎಂದರು.

ಕಾರ್ಯಕ್ರಮ ನಿರೂಪಣೆ ಮಾಡುತ್ತಿದ್ದ ನಿರೂಪಕರು, ವಿಧಾನಪರಿಷತ್ ಸದಸ್ಯ ಶಾಂತರಾಮ ಸಿದ್ಧಿ ಅವರು ಕೃತಿ ಕುರಿತು ಮಾತನಾಡಲಿದ್ದಾರೆ ಎಂದಾಗ ಆರ್‌ಎಸ್‌ಎಸ್ ಮುಖಂಡ ಸು.ರಾಮಣ್ಣ ಮಧ್ಯ ಪ್ರವೇಶಿಸಿ, ಶಾಂತರಾಮ ಸಿದ್ಧಿ ಅವರ ಎಂಎಲ್‌ಸಿ ಪದನಾಮ ಹೊರಗಡೆ, ಸಂಘದಲ್ಲಿ ಅವೆಲ್ಲಾ ನಗಣ್ಯ. ಹಾಗಾಗಿ ಶಾಂತರಾಮ ಸಿದ್ಧಿ ಅವರು, ಪುಸ್ತಕ ಕುರಿತು ಮಾತನಾಡುತ್ತಾರೆ ಎಂದಷ್ಟೇ ಹೇಳಿ ಎಂದರು.

ಗುಜರಾತ್‌ನಲ್ಲಿ ಆರ್‌ಎಸ್‌ಎಸ್ ಮುಖಂಡರೊಬ್ಬರಿಗೆ 80 ವರ್ಷ ತುಂಬಿತ್ತು ಪ್ರಚಾರಕರಾಗಿ 67 ವರ್ಷ ತುಂಬಿತ್ತು. ಅವರ 80 ವರ್ಷದಾಚರಣೆ ಸಂದರ್ಭದಲ್ಲಿ ಅವರಿಗೆ ಗೌರವ ಸೂಚಿಸುವ ಸಂದರ್ಭ ಬಂದಾಗ ಎಲ್ಲರೂ ಸಿಕ್ಕಾಪಟ್ಟೆ ವ್ಯಕ್ತಿಗತವಾಗಿ ಹೊಗಳುತ್ತಿದ್ದರು. ಆಗ ಅವರೇ ಎದ್ದು ನಿಂತು ನನ್ನ ಶ್ರದ್ಧಾಂಜಲಿ ಸಂದರ್ಭಕ್ಕೂ ಸ್ವಲ್ಪ ಸಾಧನೆಯ ಪಟ್ಟಿಯನ್ನು ಇಟ್ಟುಕೊಳ್ಳಿ ಎಂದು ಹಾಸ್ಯದ ಮೂಲಕ ಹೇಳಿದ ಪ್ರಸಂಗವನ್ನು ತಿಳಿಸಿದರು. ಈ ಮಾತನ್ನು ನಾನೇಕೆ ಇಲ್ಲಿ ಉಲ್ಲೇಖಿಸಿದೆ ಅಂದರೆ, ಸಂಘದ ಕಾರ್ಯ ಚಟುವಟಿಕೆಗಳು ಸಮಾಜ ಸೇವೆಗೆ ಮುಡುಪು ಎನ್ನುವ ಸಂಗತಿ ಇಂದಿನ ಪೀಳಿಗೆಗೆ ತಿಳಿಸಿಕೊಡುವ ಉದ್ದೇಶವಿದೆ ಎಂದರು.

ಖ್ಯಾತ ಗಾಯಕಿ ಲತಾ ಮಂಗೇಶ್ವರ್ ಅವರನ್ನು ಜನರು ಗುರುತಿಸುವುದು ಅವರ ಗಾಯನ ಕ್ಷೇತ್ರದಲ್ಲಿ ಮಾಡಿರುವ ಸಾಧನೆ ಮೂಲಕವೇ ಹೊರತು ಅವರ ಬಾಹ್ಯ ಸೌಂದರ್ಯದಿಂದಲ್ಲ. ಅವರ ಗಾಯನವನ್ನು ಕಿರಿಯರು, ಹಿರಿಯರು ಸೇರಿದಂತೆ ಎಲ್ಲಾ ವಯೋಮಾನದವರೂ ಕೇಳಬೇಕು ಅನಿಸುತ್ತದೆ. ಹಾಗಾಗಿ ಅವರಿಗೆ ಕೇಂದ್ರ ಸರ್ಕಾರ 'ಭಾರತ ರತ್ನ' ಪ್ರಶಸ್ತಿ ನೀಡಿ ಗೌರವಿಸಿದೆ ಎಂದು ತಿಳಿಸಿದರು.

ಹಿಂದೂ ಸಮಾಜದ ಕೌಟುಂಬಿಕ ಪದ್ಧತಿಯನ್ನು ಗಟ್ಟಿಗೊಳಿಸುವುದು ಆರ್‌ಎಸ್‌ಎಸ್‌ನ ಪ್ರಮುಖ ಉದ್ದೇಶಗಳಲ್ಲೊಂದು. ಹಾಗಾಗಿ ಆರ್‌ಎಸ್‌ಎಸ್ ಪ್ರಚಾರಕರು ಎಲ್ಲವನ್ನು ತ್ಯಜಿಸಿ, ಸಮಾಜಕ್ಕಾಗಿ ಕೆಲಸ ಮಾಡಬೇಕು. ಈ ಅಂಶವನ್ನು ಹೆಡಗೆವಾರ್ ಸೇರಿದಂತೆ ಎಲ್ಲಾ ಆರ್‌ಎಸ್‌ಎಸ್ ಜೇಷ್ಠ ಸರಸಂಘ ಚಾಲಕರು ಹೇಳಿದ್ದಾರೆ. ಹಾಗೆಯೇ ಹರಿಭಾವುಜೀ ಅವರು ತಮ್ಮ ಜೀವನವನ್ನು ಸಂಘದ ಚಟುವಟಿಕೆಗಳಿಗೆ ಮುಡುಪಾಗಿಟ್ಟ ಕೆಲ ಪ್ರಸಂಗವನ್ನು ಎಳೆಎಳೆಯಾಗಿ ಬಿಚ್ಚಿಟ್ಟರು.

ಈ ವೇಳೆ ರಾಷ್ಟ್ರೀಯ ಸ್ವಯಂ ಸೇವಾ ಸಂಘದ ವಿಭಾಗ ಸಂಚಾಲಕರು ಹಾಗೂ ಹಿರಿಯ ವೈದ್ಯ ಡಾ.ವಾಮನರಾವ್ ಬಾಪಟ್, ಭಾರತೀಯ ಇತಿಹಾಸ ಸಂಕಲನ ಸಮಿತಿಯ ಕೃಷ್ಣಮೂರ್ತಿ, ಪುಸ್ತಕದ ಪ್ರಧಾನ ಸಂಪಾದಕ ಡಾ.ವಿ.ರಂಗನಾಥ್ ಉಪಸ್ಥಿತರಿದ್ದರು.

ಮೊದಲು ಸ್ವಾತಂತ್ರ್ಯ ಹೋರಾಟ ನಡೆಸಿದವರು ವನವಾಸಿಗಳು

ಮೈಸೂರು: ಬ್ರಿಟಿಷರ ವಿರುದ್ಧ ಮೊದಲು ಸ್ವಾತಂತ್ರ್ಯ ಹೋರಾಟ ನಡೆಸಿದ್ದವರು ವನವಾಸಿಗಳು. ಅಂತಹವರ ಬಗ್ಗೆ ನಮ್ಮ ಇತಿಹಾಸಕಾರರು ಬೆಳಕು ಚೆಲ್ಲಿಲ್ಲ ಎಂದು ವಿಧಾನಪರಿಷತ್ ಸದಸ್ಯ ಶಾಂತರಾಮ ಸಿದ್ಧಿ ಬೇಸರ ವ್ಯಕ್ತಪಡಿಸಿದರು.

ಹರಿಭಾವು ವಝೆ ಅವರು ತಮ್ಮ ಜೀವಿತಾವಧಿಯವರೆಗೂ ಕಾರ್ಯಕರ್ತರ ವಿಶ್ವಾಸ ಕುಗ್ಗಿಸುವ ಮಾತುಗಳನ್ನಾಡಿಲ್ಲ. ಅವರು, ವೈಯಕ್ತಿಕ ಜೀವನಕ್ಕೂ, ಸಂಘದ ಚಟುವಟಿಕೆಗಳಿಗೂ ಅಂತರ ಕಾಯ್ದುಕೊಂಡು ಸಂಘದ ಕೆಲಸ ಮಾಡಿರುವ ಸಂದರ್ಭಗಳನ್ನು ಎಳೆಎಳೆಯಾಗಿ ವಿವರಿಸಿದರಲ್ಲದೆ, ವನವಾಸಿ ಕ್ಷೇತ್ರದಲ್ಲಿ ಹರಿಭಾವುಜೀ ಅವರ ಕಾರ್ಯವನ್ನು ವಿವರಿಸಿದರು.


ಬ್ರಿಟಿಷರ ವಿರುದ್ಧ ಮೊದಲ ಸ್ವಾತಂತ್ರ್ಯ ಹೋರಾಟ ನಡೆಸಿದವರು ವನವಾಸಿ ಹೋರಾಟಗಾರರು. ಮಹಾತ್ಮ ಗಾಂಧೀಜಿಗಿಂತ ನೂರು ವರ್ಷ ಮೊದಲೇ ವನವಾಸಿ ವೀರರು ಸ್ವಾತಂತ್ರ್ಯ ಹೋರಾಟ ನಡೆಸಿದ್ದರು. ಇಂದಿನ ತಿರುಚಿದ ಇತಿಹಾಸದಿಂದ ಆ ವೀರರ ಹೆಸರನ್ನು ಇತಿಹಾಸ ಪುಟದಿಂದ ಕೈ ಬಿಟ್ಟಿರುವುದು ಬೇಸರದ ಸಂಗತಿ ಎಂದರು.

ಈ ಕುರಿತು ಹಲವು ಹೋರಾಟ ನಂತರ 75 ಸ್ವಾತಂತ್ರ್ಯ ಹೋರಾಟಗಾರರ ವಿವರಗಳನ್ನು ಇತಿಹಾಸಕ್ಕೆ ಸೇರಿಸಲಾಗಿದೆ. ಈ ಸ್ವಾತಂತ್ರ್ಯ ಹೋರಾಟಗಾರ ಇತಿಹಾಸವನ್ನು ದೇಶದ್ಯಾಂತ 100 ವಿವಿಗಳಲ್ಲಿ ಕಾರ್ಯಕ್ರಮ ನಡೆಸಿ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿರುವ ವಿಷಯ ತಿಳಿಸಿದರು.

ಬೇಳೂರು ಮಠದ ಜಮೀನಿನಲ್ಲಿ ಅಕ್ರಮ ಸಾಗುವಳಿ

ಮಠಕ್ಕೆ ಭೂಮಿ ಹಿಂತಿರುಗಿಸದಿದ್ದರೆ ಕಾನೂನು ಕ್ರಮ

ಮಠದ ಆಡಳಿತಾಧಿಕಾರಿಯೂ ಆದ ನ್ಯಾಯಾಧೀಶೆ ರೇಖಾ ಎಚ್ಚರಿಕೆ



ಮಡಿಕೇರಿ, ಅ.30– ಬೇಳೂರು ಮಠದ ಆಸ್ತಿಯಲ್ಲಿ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವವರು ಭೂಮಿಯನ್ನು ಮಠಕ್ಕೆ ಹಿಂದಿರುಗಿಸಿ, ಇಲ್ಲವಾದಲ್ಲಿ ಕಾನೂನು ಕ್ರಮ ಕೈಗೊಳ್ಳುವುದಾಗಿ ಚಿತ್ರದುರ್ಗ ಬೃಹನ್ಮಠದ ಆಡಳಿತಾಧಿಕಾರಿಗಳು ಹಾಗೂ ಚಿತ್ರದುರ್ಗ ಜಿಲ್ಲಾ ನ್ಯಾಯಾಧೀಶರಾದ ರೇಖಾ ಅವರು ಎಚ್ಚರಿಸಿದ್ದಾರೆ.

ಸೋಮವಾರಪೇಟೆ ಬಳಿಯ ಬೇಳೂರು ಗ್ರಾಮದಲ್ಲಿ ಚಿತ್ರದುರ್ಗ ಬೃಹನ್ಮಠಕ್ಕೆ ಸೇರಿದ ಮಠದ ಆವರಣದಲ್ಲಿ ಆಯೋಜಿಸಲಾಗಿದ್ದ ಮಠ, ಮಠದ ಆಸ್ತಿಯ ಕುಂದುಕೊರತೆ ಹಾಗೂ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಾರ್ವಜನಿಕರೊಂದಿಗೆ ಚರ್ಚೆ ನಡೆಸಿ ಮಾತನಾಡಿದ ಅವರು, ಹಿಂದೆ ಕೊಡಗಿನ ಅರಸರು ಮಠಕ್ಕೆ ನೀಡಿರುವ ಆಸ್ತಿ ಸಾರ್ವಜನಿಕ ಆಸ್ತಿಯಾಗಿದೆ. ಅದು ಯಾರ ವೈಯಕ್ತಿಕ ಸೊತ್ತಾಗಲು ಸಾಧ್ಯವಿಲ್ಲವೆಂದು ತಿಳಿಸಿದರು.

ಬೃಹನ್ಮಠದ ಆಸ್ತಿಯನ್ನು ಸಂರಕ್ಷಿಸಲು ಹಾಗೂ ಕಾನೂನು ಹೋರಾಟ ನಡೆಸಲು ಹಿರಿಯ ಹಾಗೂ ಅನುಭವಿ ವಕೀಲರನ್ನು ಒಳಗೊಂಡ ತಂಡವನ್ನು ರಚಿಸಲಾಗಿದೆ. ಮಠದ ಆಸ್ತಿ ಪ್ರಸ್ತುತ ಪರಿಸ್ಥಿತಿಗೆ ಸಂಬಂಧಿಸಿದಂತೆ ಕೆಂಪು, ಹಳದಿ ಹಾಗೂ ಹಸಿರು ವಲಯಗಳನ್ನಾಗಿ ವಿಭಜಿಸಿ ಕಾನೂನು ಘಟಕ ಕ್ರಮಕೈಗೊಳ್ಳಲು ಸಿದ್ಧವಾಗಿದೆ. ಆದ್ದರಿಂದ ಅಕ್ರಮವಾಗಿ ಮಠದ ಆಸ್ತಿಯನ್ನು ಬಳಸಿಕೊಳ್ಳುತ್ತಿರುವವರು ನೀವಾಗಿಯೇ ಹಿಂತಿರುಗಿಸಿದರೆ ಉತ್ತಮ ಎಂದು ತಿಳಿಸಿದರು.

ಮಠದ ಆಸ್ತಿ, ಮರಗಳ ಹನನ ಸೇರಿದಂತೆ ಇನ್ನಿತರ ದೂರಿನ ಹಿನ್ನೆಲೆಯಲ್ಲಿ ತನಿಖೆ ನಡೆಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ ಅವರು, ಮಠಗಳಲ್ಲಿ ದಾಸೋಹಕ್ಕೆ ಮೊದಲ ಆದ್ಯತೆ ನೀಡಲಾಗುತ್ತದೆ. ಆದರೆ ಇಲ್ಲಿ ಅದಾವುದೂ ನಡೆಯುತ್ತಿಲ್ಲ. ಆದ್ದರಿಂದ ನಾಳೆಯಿಂದಲೇ ಬೇಳೂರು ಮಠದಲ್ಲಿ ದಾಸೋಹ ಆರಂಭಿಸಲು ವ್ಯವಸ್ಥಾಪಕ ಶಶಿಧರ್ ಅವರಿಗೆ ಆದೇಶಿಸಿದರು.

ಬೇಳೂರು ಮಠ, ಅಬ್ಬಿಮಠ, ಗುತ್ತಿ ಮಠ, ಸೋಮವಾರಪೇಟೆ ವಿರಕ್ತ ಮಠ, ಹಾಗೂ ಚಂಗಡ ಹಳ್ಳಿ ಮಠಗಳ ಅಭಿವೃದ್ಧಿಯೊಂದಿಗೆ ಎಲ್ಲಾ ಮಠಗಳಿಗೂ ಸ್ವಾಮೀಜಿಗಳನ್ನು ನೇಮಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಈ ಸಂದರ್ಭ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಶಿವಪ್ಪ, ಕಾರ್ಯದರ್ಶಿ ಸಾಂಬಾ ಶಿವಮೂರ್ತಿ, ಮಹಿಳಾ ಘಟಕದ ಅಧ್ಯಕ್ಷೆ ಮಮತಾ ಸತೀಶ್, ತಾಲೂಕು ಅಧ್ಯಕ್ಷ ಹಾಲಪ್ಪ, ಮಾಜಿ ಜಿಲ್ಲಾಧ್ಯಕ್ಷ ಡಿ.ಬಿ.ಧರ್ಮಪ್ಪ, ಗ್ರಾಮಸ್ಥ ಪ್ರಜ್ವಲ್, ವೀರಶೈವ ಮುಖಂಡರುಗಳಾದ ಶಾಂತ್ವೇರಿ ವಸಂತ್, ಚಂಗಡಹಳ್ಳಿಯ ಹಾಲಪ್ಪ, ಸಂತೋಷ್ ಕೊಡ್ಲಿಪೇಟೆ, ನಿರ್ಮಲ ನಾಗರಾಜ್ ಅವರುಗಳು ಮಾತನಾಡಿ, ಕೊಡಗಿನ ಅರಸರು ಸುಮಾರು 3 ಸಾವಿರ ಎಕರೆಗಳಿಗಿಂತ ಹೆಚ್ಚಿನ ಭೂಮಿಯನ್ನು ಮುರುಘಾ ಮಠಕ್ಕೆ ನೀಡಿದ್ದಾರೆಂದು ಹೇಳಲಾಗಿದೆ. ಆದರೆ ಪ್ರಸ್ತುತ 550 ಎಕರೆಗೆ ಬಂದು ನಿಂತಿದೆ. ಆದರೆ ಉಳಿದ ಭೂಮಿ ಎಲ್ಲಿಗೆ ಹೋಯಿತು. ಇಂದು ಬಹುತೇಕ ಭೂಮಿ ಅಕ್ರಮವಾಗಿ ಬಳಕೆಯಾಗುತ್ತಿದೆ. ಅವುಗಳನ್ನು ವಾಪಸ್ ಪಡೆಯಬೇಕು. ಅದು ಸಮಾಜದ ಆಸ್ತಿಯಾಗಿ ಉಳಿಯಬೇಕೆಂದು ಹೇಳಿದರು. ಮಠದ ವ್ಯವಸ್ಥಾಪಕರು ಹಲವರಿಗೆ ತೋಟ ಮಾಡಲು ಕೊಟ್ಟಿದ್ದಾರೆ. ತೋಟದ ಒಳಗೆ ಇದ್ದ ಮರಗಳನ್ನು ಕಡಿದು ಮಾರಲಾಗಿದೆ. ಇದರ ಹಣ ಮಠಕ್ಕೆ ಸೇರಿದೆಯೇ ಎಂದು ಪ್ರಶ್ನಿಸಿದರು. 200 ಎಕರೆ ತೋಟವನ್ನು ಹೊರ ರಾಜ್ಯದ ವ್ಯಕ್ತಿಗಳಿಗೆ ಅತ್ಯಂತ ಕಡಿಮೆ ಹಣಕ್ಕೆ ಗುತ್ತಿಗೆ ನೀಡಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದು ಆರೋಪಿಸಿದರು. ಇಲ್ಲಿನ ಮಠಗಳಿಗೆ ಸ್ವಾಮೀಜಿಗಳು ಇಲ್ಲದೆ ಧಾರ್ಮಿಕ ಚಟುವಟಿಕೆಗಳು ನಡೆಯದೆ ಪಾಳು ಬಿದ್ದಿವೆ ಎಂದು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಎಲ್ಲಾ ಆರೋಪಗಳನ್ನು ಗಂಭೀರವಾಗಿ ಪರಿಗಣಿಸಿದ ಆಡಳಿತಾಧಿಕಾರಿಗಳು ವ್ಯವಸ್ಥಾಪಕ ಶಶಿಧರ್‌ಗೆ ಎಚ್ಚರಿಕೆ ನೀಡಿ, ಮನುಷ್ಯ ತಪ್ಪು ಮಾಡುವುದು ಸಹಜ. ಆದರೆ ಅದನ್ನು ತಿದ್ದಿ ನಡೆಯಬೇಕು. ಈಗ ಒಂದು ಅವಕಾಶ ನೀಡೋಣ. ಮುಂದೆ ಹೀಗಾದರೆ ಕ್ರಮ ಅನಿವಾರ್ಯವಾಗಲಿದೆ. ಪಾರದರ್ಶಕವಾಗಿ ಕರ್ತವ್ಯ ನಿರ್ವಹಿಸುವಂತೆ ತಿಳಿಸಿದ ಅವರು, ನಿಮ್ಮೆಲ್ಲಾ ದೂರಿನ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವ ಬಗ್ಗೆ ಭರವಸೆ ನೀಡಿದರು.

ಬೃಹನ್ಮಠದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಕುಮಾರ್, ಮಾನವ ಸಂಪನ್ಮೂಲ ಅಧಿಕಾರಿ ವಿಜಯ, ಕಾನೂನು ಸಲಹೆಗಾರ ಹಿರಿಯ ವಕೀಲ ವಿಶ್ವನಾಥ, ವೃತ್ತ ನಿರೀಕ್ಷಕ ರಾಮಚಂದ್ರ ನಾಯಕ್ ವೇದಿಕೆಯಲ್ಲಿದ್ದರು. ಬೇಳೂರು, ಶನಿವಾರಸಂತೆ, ಕೊಡ್ಲಿಪೇಟೆ, ಚಂಗಡಹಳ್ಳಿ ಸುತ್ತಮುತ್ತಲ ಕೆಲವು ಗ್ರಾಮಸ್ಥರು ಮತ್ತು ವೀರಶೈವ ಮುಖಂಡರು ಹಾಜರಿದ್ದರು. ಈ ಸಂದರ್ಭ ಮಠದ ಆವರಣದಲ್ಲಿ ಎಸ್‌ಐ ರಮೇಶ್ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು.

ವಿರಾಜಪೇಟೆ ತಾಲೂಕು ಕೆದಮುಳ್ಳೂರು ಗ್ರಾಮ

ಆದಿವಾಸಿ ಕುಟುಂಬಗಳ ಮನೆ ನಿರ್ಮಾಣದ ಕಾಮಗಾರಿ ಪರಿಶೀಲಿಸಿದ ಶಾಸಕ ಪೊನ್ನಣ್ಣ



ಮಡಿಕೇರಿ, ಅ.30– ವಿರಾಜಪೇಟೆ ತಾಲ್ಲೂಕಿನ ಕೆದಮುಳ್ಳೂರು ಗ್ರಾ.ಪಂ. ವ್ಯಾಪ್ತಿಯ ಕೆದಮುಳ್ಳೂರು ಗ್ರಾಮದ ಸರ್ವೆ ನಂಬರ್ 370/1 ರ 7.50 ಎಕರೆ ಜಾಗದಲ್ಲಿ 129 ಮನೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು, ಪ್ರಥಮ ಹಂತದಲ್ಲಿ 60 ಮನೆಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು, ವಿದ್ಯುತ್ ಮತ್ತು ಕುಡಿಯುವ ನೀರು ಸಂಪರ್ಕ ಕಲ್ಪಿಸದೆ ಅರ್ಧಕ್ಕೆ ನಿಂತಿರುವ ಹಿನ್ನೆಲೆ ಈ ಕಾಮಗಾರಿಗಳ ಸಂಬಂಧ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಎ.ಎಸ್.ಪೊನ್ನಣ್ಣ ಅವರು ಸೋಮವಾರ ಭೇಟಿ ನೀಡಿ ಪರಿಶೀಲಿಸಿದರು.

ಈಗಾಗಲೇ 60 ಮನೆಗಳ ನಿರ್ಮಾಣ ಕಾಮಗಾರಿ ನಡೆದಿದ್ದು, ಅರ್ಧಕ್ಕೆ ನಿಂತು ಹೋಗಿದೆ. ಈ ಸಂಬಂಧ ಸರ್ಕಾರದ ಗಮನಕ್ಕೆ ತಂದು ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿಸಿ ಕಾಮಗಾರಿಯನ್ನು ಆದಷ್ಟು ಶೀಘ್ರ ಪೂರ್ಣಗೊಳಿಸಲಾಗುವುದು ಎಂದು ಎ.ಎಸ್.ಪೊನ್ನಣ್ಣ ತಿಳಿಸಿದರು.

ಈಗಾಗಲೇ ನಿರ್ಮಾಣ ಹಂತದಲ್ಲಿರುವ ಮನೆಗಳನ್ನು ಪೂರ್ಣಗೊಳಿಸುವ ಸಂಬಂಧ ಮುಖ್ಯಮಂತ್ರಿ ಅವರ ಗಮನಕ್ಕೆ ತಂದು ಆದಷ್ಟು ಶೀಘ್ರ ಪೂರ್ಣಗೊಳಿಸಲಾಗುವುದು.


ಜಿಲ್ಲಾಧಿಕಾರಿ ಡಾ.ವೆಂಕಟ್ ರಾಜಾ ಅವರು ಮಾತನಾಡಿ, ಮನೆಗಳ ನಿರ್ಮಾಣಕ್ಕೆ ಹಣ ಬಿಡುಗಡೆ ಸಂಬಂಧ ಪತ್ರ ವ್ಯವಹಾರ ಆಗಿದ್ದು, ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು. ಈ ಸಂಬಂಧ ಇಲಾಖೆಯ ನಿರ್ದೇಶಕರ ಜೊತೆ ಚರ್ಚಿಸಲಾಗುವುದು ಎಂದರು. ಐಟಿಡಿಪಿ ಇಲಾಖಾ ಅಧಿಕಾರಿ ಹೊನ್ನೇಗೌಡ ಮಾಹಿತಿ ನೀಡಿ, ಸರ್ಕಾರದ ಆದೇಶದಲ್ಲಿ 5 ಲಕ್ಷ ರೂ. ತಲಾ ಘಟಕ ವೆಚ್ಚದಲ್ಲಿ 129 ಮನೆಗಳನ್ನು ನಿರ್ಮಾಣ ಮಾಡಲು 645 ಲಕ್ಷ ರೂ. ಅನುದಾನ ಬಿಡುಗಡೆ ಮಾಡಲು ಆದೇಶಿಸಲಾಗಿತ್ತು. ಅದರಂತೆ ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯದಿಂದ ಶೇ.50 ರಷ್ಟು 322.50 ಲಕ್ಷ ರೂ. ಅನುದಾನ ಬಿಡುಗಡೆ ಆಗಿ, ಕೆಆರ್‌ಐಡಿಎಲ್ ಮೂಲಕ 5 ಲಕ್ಷ ರೂ. ಘಟಕ ವೆಚ್ಚಕ್ಕೆ ಸಿದ್ಧಪಡಿಸಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ದೊರತಿದೆ ಎಂದು ಹೇಳಿದರು.

ಮೊದಲ ಹಂತದಲ್ಲಿ 40 ಮನೆಗಳನ್ನು ನಿರ್ಮಾಣ ಮಾಡಲು ಕಾರ್ಯಾದೇಶ ನೀಡಿ ಕಾಮಗಾರಿ ನಿರ್ವಹಿಸಲು ಶೇ.25 ರಷ್ಟು 150 ಲಕ್ಷ ರೂ. ಅನುದಾನವನ್ನು ಕಾರ್ಯಪಾಲಕ ಅಭಿಯಂತರರು ಕೆಆರ್ ಐಡಿಎಲ್ ಹುಣಸೂರು ಅವರಿಗೆ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.

ಆಡಳಿತಾತ್ಮಕ ಮಂಜೂರಾತಿ ದೊರೆತಿರುವ 5 ಲಕ್ಷ ರೂ. ಘಟಕ ವೆಚ್ಚದ ಅಂದಾಜು ಪಟ್ಟಿಯಲ್ಲಿ ವಿದ್ಯುತ್ ಮತ್ತು ಕುಡಿಯುವ ನೀರು ಪೂರೈಕೆ ಒಳಗೊಂಡಿಲ್ಲದೆ ಇರುವುದರಿಂದ ಪ್ರಸ್ತುತ ಸಾಮಾಗ್ರಿಗಳ ದರ ಮತ್ತು ಎಸ್.ಆರ್ ದರ ಹೆಚ್ಚಾಗಿರುವುದರಿಂದ ಅಂದಾಜು ಪಟ್ಟಿಯಂತೆ ಅವಶ್ಯಕ ಕಾಮಗಾರಿ ಕೈಗೊಳ್ಳಲು ಹೆಚ್ಚಿನ ಅನುದಾನ ಬಿಡುಗಡೆ ಮಾಡುವಂತೆ ಕೋರಲಾಗಿದೆ ಎಂದು ಎಸ್.ಹೊನ್ನೇಗೌಡ ಅವರು ತಿಳಿಸಿದರು. ಸದ್ಯ ಗ್ರಾಮ ಪಂಚಾಯಿತಿಯಿಂದ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ಗ್ರಾ.ಪಂ.ಪ್ರಮುಖರು ಮಾಹಿತಿ ನೀಡಿದರು.

ಕೆಆರ್‌ಐಡಿಎಲ್ ಕಾರ್ಯಪಾಲಕ ಎಂಜಿನಿಯರ್ ಸುರೇಶ್, ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಕೆ.ಎಸ್.ಪ್ರಮೋದ್, ನಿರ್ಮಿತಿ ಕೇಂದ್ರ ಯೋಜನಾ ನಿರ್ದೇಶಕ ಸಚಿನ್, ಗ್ರಾ.ಪಂ. ಅಧಿಕಾರಿಗಳು ಇತರರು ಇದ್ದರು.

ಇಂದು ಸುಬೇದಾರ್ ಗುಡ್ಡೆಮನೆ ಅಪ್ಪಯ್ಯಗೌಡರ ಸಂಸ್ಮರಣೆ



ಮಡಿಕೇರಿ, ಅ.30– ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಇವರ ಸಹಯೋಗದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಸುಬೇದಾರ್ ಗುಡ್ಡೆಮನೆ ಅಪ್ಪಯ್ಯಗೌಡ ಅವರ ಹುತಾತ್ಮ ದಿನಾಚರಣೆಯ ಪ್ರಯುಕ್ತ ಅ.31 ರಂದು ಬೆಳಗ್ಗೆ 9.30 ಗಂಟೆಗೆ ನಗರದ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ವೃತ್ತದಲ್ಲಿರುವ ಗುಡ್ಡಮನೆ ಅಪ್ಪಯ್ಯ ಗೌಡರ ಸ್ಮಾರಕದಲ್ಲಿ ಪುಷ್ಪ ನಮನ ಸಲ್ಲಿಸುವ ಕಾರ್ಯಕ್ರಮ ನಡೆಯಲಿದೆ. ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಭೋಸರಾಜು, ಶಾಸಕರಾದ ಡಾ.ಮಂಥರ್ ಗೌಡ, ಎ.ಎಸ್.ಪೊನ್ನಣ್ಣ, ಸಂಸದ ಪ್ರತಾಪ್ ಸಿಂಹ, ವಿಧಾನಪರಿಷತ್ ಸದಸ್ಯರಾದ ಎಂ.ಪಿ.ಸುಜಾ ಕುಶಾಲಪ್ಪ, ಎಸ್.ಎಲ್. ಭೋಜೇಗೌಡ, ನಗರಸಭೆ ಅಧ್ಯಕ್ಷೆ ಎನ್.ಪಿ. ಅನಿತಾ, ಜಿಲ್ಲಾಧಿಕಾರಿ ವೆಂಕಟ್ ರಾಜಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಜಿ.ಪಂ.ಸಿಇಓ ವರ್ಣಿತ್ ನೇಗಿ, ಕೊಡಗು ಗೌಡ ಸಮಾಜಗಳ ಒಕ್ಕೂಟದ ಅಧ್ಯಕ್ಷ ಸೂರ್ತಲೆ ಸೋಮಣ್ಣ, ಮೈಸೂರು ವಿಭಾಗದ ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ, ಆಡಳಿತಾಧಿಕಾರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ, ಪಾಲ್ಗೊಳ್ಳಲಿದ್ದಾರೆ.

ಸಾರ್ವಜನಿಕ ಸ್ಥಳದಲ್ಲಿ ತ್ಯಾಜ್ಯ ಸುರಿದವನಿಗೆ ದಂಡ

ಮಡಿಕೇರಿ, ಅ.30– ಸುಂಟಿಕೊಪ್ಪ ಪಟ್ಟಣದ ಸಾರ್ವಜನಿಕ ಸ್ಥಳದಲ್ಲಿ ವಾಹನವೊಂದರಲ್ಲಿ ತ್ಯಾಜ್ಯ ತಂದು ಸುರಿಯುತ್ತಿದ್ದ ವ್ಯಕ್ತಿಗೆ ಸುಂಟಿಕೊಪ್ಪ ಗ್ರಾಮ ಪಂಚಾಯ್ತಿ ದಂಡ ವಿಧಿಸಿದ ಘಟನೆ ನಡೆದಿದೆ.

ಸುಂಟಿಕೊಪ್ಪ ಪಟ್ಟಣದ ಹೃದಯಭಾಗದಲ್ಲಿರುವ ಅಯ್ಯಪ್ಪ ದೇವಸ್ಥಾನದ ಮುಂಭಾಗದಲ್ಲಿ ಸ್ಥಳೀಯರೊಬ್ಬರು ವಾಹನವೊಂದರಲ್ಲಿ ತ್ಯಾಜ್ಯವನ್ನು ತಂದು ಸುರಿಯುತ್ತಿರುವುದನ್ನು ಗಮನಿಸಿದ ಸುಂಟಿಕೊಪ್ಪ ವಿಭಾಗದ ಹೆಚ್.ಎ.ರಾಹುಲ್ ಎಂಬವರು ಗ್ರಾಮ ಪಂಚಾಯ್ತಿಗೆ ವಿಷಯ ತಿಳಿಸಿದ್ದಾರೆ. ಕೂಡಲೇ ಸ್ಥಳಕ್ಕಾಗಮಿಸಿದ ಗ್ರಾಮ ಪಂಚಾಯ್ತಿ ಅಧ್ಯಕ್ಷ ಸುನೀಲ್ ಕುಮಾರ್, ಉಪಾಧ್ಯಕ್ಷೆ ಶಿವಮ್ಮ, ಅಭಿವೃದ್ಧಿ ಅಧಿಕಾರಿ ಲೋಕೇಶ್ ಅವರು, ಕಸತಂದು ಸುರಿಯುತ್ತಿದ್ದ ವ್ಯಕ್ತಿಯನ್ನು ತರಾಟೆಗೆತ್ತಿಕೊಂಡರಲ್ಲದೇ, ಕಸ ಸುರಿಯುತ್ತಿದ್ದ ವ್ಯಕ್ತಿಗೆ ದಂಡವನ್ನು ವಿಧಿಸಿ, ಸಾರ್ವಜನಿಕ ಸ್ಥಳದಲ್ಲಿ ಕಸ ತಂದು ಸುರಿಯದಂತೆ ಎಚ್ಚರಿಕೆ ನೀಡಲಾಯಿತು. ಬಳಿಕ ಅದೇ ವಾಹನದಲ್ಲಿ ತ್ಯಾಜ್ಯವನ್ನು ತುಂಬಿಸಿ, ಗ್ರಾಮ ಪಂಚಾಯ್ತಿ ಕಸವಿಲೇವಾರಿ ಘಟಕಕ್ಕೆ ಕೊಂಡೊಯ್ಯಲಾಯಿತು. ಈ ಸಂದರ್ಭ ಮಾತನಾಡಿದ ಗ್ರಾಮ ಪಂಚಾಯ್ತಿ ಅಧ್ಯಕ್ಷ ಸುನೀಲ್‌ಕುಮಾರ್ ಮತ್ತು ಪಿಡಿಓ ಲೋಕೇಶ್ ಅವರುಗಳು ಸಾರ್ವಜನಿಕ ಸ್ಥಳದಲ್ಲಿ ಕಸ ಸುರಿಯುತ್ತಿರುವುದನ್ನು ಗಮನಿಸಿ, ಸ್ಥಳೀಯರು ಮಾಹಿತಿ ನೀಡಿದ ಮೇರೆಗೆ ಕಸ ಸುರಿಯುತ್ತಿದ್ದ ವ್ಯಕ್ತಿಗೆ ದಂಡ ವಿಧಿಸಿ ಎಚ್ಚರಿಕೆ ನೀಡಲಾಗಿದೆ. ಸುಂಟಿಕೊಪ್ಪ ಪಟ್ಟಣವನ್ನು ಕಸಮುಕ್ತಗೊಳಿಸಿ, ಸ್ವಚ್ಛ ಪಟ್ಟಣವನ್ನಾಗಿಸುವ ನಿಟ್ಟಿನಲ್ಲಿ ಸಾರ್ವಜನಿಕರು ಗ್ರಾಮ ಪಂಚಾಯ್ತಿಯೊಂದಿಗೆ ಕೈಜೋಡಿಸಬೇಕೆಂದು ಮನವಿ ಮಾಡಿದರು.



ನ.2, 'ಮರ್‌ಂಜ ಪಾಳೆ' ಪುಸ್ತಕ ಬಿಡುಗಡೆ

ಮಡಿಕೇರಿ, ಅ.30– ಕೊಡವ ಮಕ್ಕಡ ಕೂಟದ ವತಿಯಿಂದ ನ.2ರಂದು ಲೇಖಕಿ ತೆನ್ನೀರ ಟೀನಾ ಚಂಗಪ್ಪ ಬರೆದಿರುವ 'ಮರ್‌ಂಜ ಪಾಳೆ' ಕೊಡವ ಪುಸ್ತಕ ಬಿಡುಗಡೆ ಕಾರ್ಯಕ್ರಮ ನಡೆಯಲಿದೆ. ಅಂದು ಮಧ್ಯಾಹ್ನ 2 ಗಂಟೆಗೆ ನಗರದ ಪತ್ರಿಕಾ ಭವನದ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು 'ಬ್ರಹ್ಮಗಿರಿ' ವಾರಪತ್ರಿಕೆಯ ಸಂಪಾದಕ ಡಾ. ಉಳ್ಳಿಯಡ ಎಂ.ಪೂವಯ್ಯ ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ಕೊಡವ ಮಕ್ಕಡ ಕೂಟದ ಅಧ್ಯಕ್ಷ ಬೊಳ್ಳಜಿರ ಬಿ.ಅಯ್ಯಪ್ಪ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ 'ಶಕ್ತಿ' ದಿನಪತ್ರಿಕೆಯ ಸಲಹಾ ಸಂಪಾದಕ ಬಿ.ಜಿ.ಅನಂತಶಯನ, ಸಾಹಿತಿ ಉಳ್ಳಿಯಡ ಡಾಟಿ ಪೂವಯ್ಯ, ಮರ್‌ಂಜ ಪಾಳೆ ಪುಸ್ತಕದ ಬರಹಗಾರ್ತಿ ತೆನ್ನೀರ ಟೀನಾ ಚಂಗಪ್ಪ, ಸಮಾಜ ಸೇವಕರಾದ ಚಿಲ್ಲವಂಡ ಕಾವೇರಪ್ಪ, ಕಳುವಂಡ ಮಣಿ ಜೋಯಪ್ಪ, ಮುಕೋಡ್ಲು ವ್ಯಾಲಿ ಡ್ಯೂನ ಅಧ್ಯಕ್ಷ ಹಂಚೆಟ್ಟಿರ ಮನು ಮುದ್ದಪ್ಪ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮಕ್ಕೆ ಸಾಹಿತ್ಯಾಸಕ್ತರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವಂತೆ ಕೊಡವ ಮಕ್ಕಡ ಕೂಟದ ಅಧ್ಯಕ್ಷ ಬೊಳ್ಳಜಿರ ಬಿ.ಅಯ್ಯಪ್ಪ ಮನವಿ ಮಾಡಿದ್ದಾರೆ.

ಮ.ಬೆಟ್ಟಕ್ಕೆ ಕೋಟೆ ಶಿವಣ್ಣ ಭೇಟಿ, ವಿಶೇಷ ಪೂಜೆ



ಹನೂರು, ಅ.30– ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಪ್ರಬಲ ಬಿಜೆಪಿ ಟಿಕೆಟ್ ಆಕಾಂಕ್ಷಿ ಕೋಟೆ ಶಿವಣ್ಣ ಅವರು ಕುಟುಂಬ ಸಮೇತರಾಗಿ ಮಲೆ ಮಹದೇಶ್ವರ ಬೆಟ್ಟಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಪತ್ನಿ ದೇವಿಕಾ, ಪುತ್ರಿ ಸೌಜನ್ಯ ಮೋಹನ್ ಕುಮಾರ್, ಕೋಮಲ ಅವರೊಂದಿಗೆ ಭೇಟಿ ನೀಡಿದ ಕೋಟೆ ಶಿವಣ್ಣ ಮಾದಪ್ಪನ ದರ್ಶನ ಪಡೆದು ಚಿನ್ನದ ರಥೋತ್ಸವದಲ್ಲಿ ಭಾಗಿಯಾಗಿ ನಂತರ ಶ್ರೀಸಾಲೂರು ಮಠಕ್ಕೆ ಭೇಟಿ ನೀಡಿ ಶ್ರೀಶಾಂತ ಮಲ್ಲಿಕಾರ್ಜುನ ಸ್ವಾಮಿಗಳ ಆಶೀರ್ವಾದ ಪಡೆದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದುವರೆಗೆ ಪಕ್ಷ ನೀಡಿರುವ ಎಲ್ಲಾ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದೇನೆ. ಹಗಲಿರುಳು ಪಕ್ಷ ಸಂಘಟಿಸಿ ಸ್ಥಳೀಯ ಸಂಸ್ಥೆಗಳು ಹಾಗೂ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ್ದೇನೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷನಾಗಿ ನನ್ನ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿಭಾಯಿಸಿದ್ದೇನೆ. ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಪೌರ ಕಾರ್ಮಿಕರ ಹಲವು ಬೇಡಿಕೆಗಳನ್ನು ಈಡೇರಿಸಿದ್ದೇನೆ. ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದವರಿಗೆ ಖಾಯಂ ಮಾಡಲು ಅಗತ್ಯ ಕ್ರಮ ಕೈಗೊಂಡಿದ್ದೇನೆ. ಇದರಿಂದ ಸಾವಿರಾರು ಕುಟುಂಬಗಳಿಗೆ ಅನುಕೂಲವಾಗಿದೆ ಎಂದರು.

ಈ ಹಿಂದೆ ಚಾಮರಾಜನಗರ ಮೀಸಲು ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿರುವ ಅನುಭವವಿದೆ. ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರಗಳ ಮುಖಂಡರು, ಕಾರ್ಯಕರ್ತರಗಳ ಜೊತೆ ನಿಕಟ ಸಂಪರ್ಕ ಹೊಂದಿದ್ದೇನೆ. ಈಗಾಗಲೇ ಒಂದು ಬಾರಿ ಎಲ್ಲಾ ಮುಖಂಡರನ್ನು ಭೇಟಿಯಾಗಿದ್ದೇನೆ. ಪಕ್ಷದಿಂದ ಟಿಕೆಟ್ ಸಿಗುವ ವಿಶ್ವಾಸವಿದೆ. ಎಂಟು ವಿಧಾನಸಭಾ ಕ್ಷೇತ್ರಗಳ ಮುಖಂಡರ ಮಾರ್ಗದರ್ಶನದಲ್ಲಿ ಲೋಕಸಭಾ ಚುನಾವಣೆ ಎದುರಿಸಲು ಸಿದ್ಧನಿದ್ದೇನೆ. ಈಗಾಗಲೇ ಹಲವು ಮುಖಂಡರು ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡು ಸಂಘಟನೆ ಮಾಡಿ ಎಂದು ಒತ್ತಡ ಹಾಕುತ್ತಿದ್ದಾರೆ. ಅವರ ಪ್ರೀತಿ ವಿಶ್ವಾಸ ಅಭಿಮಾನಕ್ಕೆ ಚಿರಋಣಿ ಎಂದರು. ಈ ವೇಳೆ ಕೋಟೆ ಶಿವಣ್ಣ ಅಭಿಮಾನಿಗಳು ಹಾಗೂ ಆಪ್ತ ಸಹಾಯಕ ಪ್ರಕಾಶ್ ಹಾಜರಿದ್ದರು.

ಕರ್ನಾಟಕ ರಾಜ್ಯೋತ್ಸವ

ಚಾಮರಾಜನಗರ, ಅ.30– ಜಿಲ್ಲಾಡಳಿತದಿಂದ ಕರ್ನಾಟಕ ರಾಜ್ಯೋತ್ಸವವನ್ನು ನ.1ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವ ಸಂದೇಶ ನೀಡುವರು. ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸುವರು. ಸಂಸದ ವಿ.ಶ್ರೀನಿವಾಸ ಪ್ರಸಾದ್, ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಎಂ.ಆರ್.ಮಂಜುನಾಥ, ಹೆಚ್.ಎಂ. ಗಣೇಶ್ ಪ್ರಸಾದ್ ಇತರರು ಭಾಗವಹಿಸುವರು.

ಸಮಾಜಕ್ಕೆ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಕೊಡುಗೆ ಅಪಾರ

ಗೋವಾ ರಾಜ್ಯಪಾಲ ಟಿ.ಎಸ್.ಶ್ರೀಧರನ್ ಪಿಳ್ಳೆ



ಚಾಮರಾಜನಗರ, ಅ.30– ಸಮಾಜಕ್ಕೆ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಕೊಡುಗೆ ಅಪಾರ ಎಂದು ಗೋವಾ ರಾಜ್ಯಪಾಲ ಟಿ.ಎಸ್.ಶ್ರೀಧರನ್ ಪಿಳ್ಳೆ ತಿಳಿಸಿದರು.

ಜಿಲ್ಲೆಯ ಮಲೆ ಮಹದೇಶ್ವರಸ್ವಾಮಿ ಬೆಟ್ಟದ ಸಾಲೂರು ಮಠದಲ್ಲಿ ಮೈಸೂರು–ಚಾಮರಾಜನಗರ ಜಿಲ್ಲಾ ವೀರಶೈವ ಲಿಂಗಾಯತ ಮಠಾಧಿಪತಿಗಳ ಗೋಷ್ಠಿಯಿಂದ ಹಮ್ಮಿಕೊಳ್ಳಲಾಗಿದ್ದ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ 108ನೇ ಜಯಂತಿ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ದೀಕ್ಷಾ ಸಂಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸುತ್ತೂರು ಮಠದ ಹಿರಿಯ ಶ್ರೀಗಳಾದ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಶಿಕ್ಷಣವೇ ಶಕ್ತಿ ಎಂದು ನಂಬಿದ್ದರು. ಪ್ರತಿಯೊಬ್ಬರೂ ವಿದ್ಯಾವಂತರಾಗಬೇಕು ಎಂಬ ಕನಸು ಕಂಡಿದ್ದರು. ದೇಶದ ಉದ್ದಗಲಕ್ಕೂ ಶೈಕ್ಷಣಿಕ ಕೇಂದ್ರಗಳನ್ನು ಸ್ಥಾಪನೆ ಮಾಡಿ ಎಲ್ಲರಿಗೂ ಶಿಕ್ಷಣ ಕೊಡಿಸಲು ಶ್ರಮಿಸಿದ್ದರು. ಇದೀಗ ಅವರ ಕನಸು ಈಡೇರುತ್ತಿದ್ದು, ದೇಶದ ಬಹುತೇಕ ಕಡೆ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು ನಡೆಯುತ್ತಿವೆ ಎಂದರು.

12ನೇ ಶತಮಾನದಲ್ಲಿ ಬಸವಣ್ಣನವರು ಸಮಾಜದ ಸುಧಾರಣೆಗಾಗಿ ಶ್ರಮಿಸಿದ್ದಾರೆ. ಸಮಾನತೆ ತರುವುದಕ್ಕಾಗಿ ಹೋರಾಟ ಮಾಡಿದ್ದರು. ಇಂದಿನ ಯುವ ಜನರು ಅವರನ್ನು ಅನುಸರಿಸಿ ಅವರ ಸಿದ್ಧಾಂತ ತತ್ವಗಳನ್ನು ಪಾಲಿಸಿಕೊಂಡು ಜೀವನವನ್ನು ರೂಪಿಸಿಕೊಂಡರೆ ಸಮಾಜದಲ್ಲಿ ಸಮಾನತೆ ಕಾಪಾಡಬಹುದು ಎಂದರು.

ಬಸವಣ್ಣನವರ ವಚನ ಹಾಗೂ ಅವರು ನಡೆದು ಬಂದ ಹಾದಿ ನಮಗೆಲ್ಲ ತಿಳಿದಿದೆ ಅದೇ ಹಾದಿಯಲ್ಲಿ ಇಂದು ಶಿವಾತ್ರಿ ದೇಶಿಕೇಂದ್ರ ಸ್ವಾಮೀಜಿ ನಡೆಯುತ್ತಿದ್ದು, ಬಡ ಜನರಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ ಎಂದರು.

ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿ ಮಾತನಾಡಿ, ರಾಜ್ಯಪಾಲ ಶ್ರೀಧರನ್ ಪಿಳ್ಳೆಯವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದು, ತುಂಬಾ ಸಂತಸ ತಂದಿದೆ. ರಾಜ್ಯಪಾಲರು ಅಷ್ಟೇ ಅಲ್ಲ. ಅವರು ಉತ್ತಮ ವಕೀಲರೂ ಹೌದು. ಸಸ್ಯ ಸಂಪತ್ತಿನ ಬಗ್ಗೆ ಸಂಶೋಧನಾ ಗ್ರಂಥ ಬರೆದಿದ್ದಾರೆ. ಅಧ್ಯಯನಕ್ಕೆ ಇದು ಉತ್ತಮವಾದ ಆಕರವಾಗಿದೆ ಎಂದರು.

ಹನೂರು ಶಾಸಕ ಎಂ.ಆರ್. ಮಂಜುನಾಥ್ ಮಾತನಾಡಿ, ಸುತ್ತೂರು ಮಠದಿಂದ ಮೈಸೂರು ಹಾಗೂ ಚಾಮರಾಜನಗರ ಗಡಿ ಜಿಲ್ಲೆಯಲ್ಲಿ ಅನ್ನ ಹಾಗೂ ಅಕ್ಷರ ದಾಸೋಹ ನಡೆಯುತ್ತಿದೆ. ಸಂಸ್ಥೆಯು ಎಲ್ಲ ಕ್ಷೇತ್ರಗಳಲ್ಲೂ ಮುಂಚೂಣಿಯಲ್ಲಿದೆ ಎಂದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಟಿ.ಜೆ. ಉದೇಶ, ಉಪ ವಿಭಾಗಾಧಿಕಾರಿ ಮಹೇಶ್, ತಹಸೀಲ್ದಾರ್ ಗುರುಪ್ರಸಾದ್, ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ್, ಮಾಜಿ ಶಾಸಕರಾದ ಪರಿಮಳಾ ನಾಗಪ್ಪ, ಗ್ರಾಮ ಆಡಳಿತ ಅಧಿಕಾರಿ ವಿನೋದ್ ಇದ್ದರು.

ಹಳ್ಳಿಗಳಲ್ಲಿ ಬಡ ಮಕ್ಕಳಿಗೂ ಶಿಕ್ಷಣ

ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಮಾತನಾಡಿ, ಪ್ರಪಂಚದಾದ್ಯಂತ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳಲ್ಲಿ ಲಕ್ಷಾಂತರ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡಿ ಉನ್ನತ ಸ್ಥಾನಕ್ಕೇರಿದ್ದಾರೆ. ಹಳ್ಳಿಗಳಲ್ಲಿಯೂ ಬಡ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸಕ್ಕೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರು ಪ್ರಾಥಮಿಕ ಶಾಲೆಯಿಂದ ಹಿಡಿದು ಉನ್ನತ ಶಿಕ್ಷಣದವರೆಗೆ ಎಲ್ಲಾ ರೀತಿಯ ಸೌಲಭ್ಯ ಸಿಗುವಂತೆ ಮಾಡಿದ್ದರು. ಅವರು ಮಾಡಿದ್ದ ಕೆಲಸಗಳನ್ನು ಇಂದು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಯವರು ಮುಂದುವರಿಸಿಕೊಂಡು ಬಂದಿರುವುದು ಸಂತಸದ ವಿಚಾರ ಎಂದರು.

ಕರಡು ಮತದಾರರ ಪಟ್ಟಿ ಪ್ರಕಟ; ಜಿಲ್ಲೆಯಲ್ಲಿ 8,64,774 ಮತದಾರರು: ಎಡಿಸಿ ಗೀತಾ ಹುಡೇದ



ಚಾಮರಾಜನಗರ, ಅ.30– ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದ್ದು, ಜಿಲ್ಲೆಯಲ್ಲಿ ಒಟ್ಟು 8,64,774 ಮತದಾರರಿದ್ದಾರೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಭಾವಚಿತ್ರವಿರುವ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಸಂಬಂಧ ಕರಡು ಮತದಾರರ ಪಟ್ಟಿ ಪ್ರಕಟಿಸಿರುವ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ವಿವರ ನೀಡಿದರು.

ಜಿಲ್ಲೆಯ 4 ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ಅ.27ರಂದು ಪ್ರಕಟಿಸಲಾಗಿದೆ. ಕರಡು ಮತದಾರರ ಪಟ್ಟಿಯಂತೆ ಒಟ್ಟು 4,27,599 ಪುರುಷರು, 4,37,110 ಮಹಿಳೆಯರು, 65 ಇತರರು ಸೇರಿದಂತೆ ಒಟ್ಟಾರೆ 8,64,774 ಮತದಾರರು ಇದ್ದಾರೆ. ಹನೂರು ಕ್ಷೇತ್ರದಲ್ಲಿ 112334 ಪುರುಷರು, 1,10,324 ಮಹಿಳೆಯರು, 16 ಇತರರು ಸೇರಿ 2,22,674 ಮತದಾರರಿದ್ದಾರೆ. ಕೊಳ್ಳೇಗಾಲ ಕ್ಷೇತ್ರದಲ್ಲಿ 1,07,159 ಪುರುಷರು, 1,10,141 ಮಹಿಳೆಯರು, 17 ಇತರರು ಸೇರಿ 2,17,317 ಮತದಾರರಿದ್ದಾರೆ. ಚಾಮರಾಜನಗರ ಕ್ಷೇತ್ರದಲ್ಲಿ 1,03,032 ಪುರುಷರು, 1,07,632 ಮಹಿಳೆಯರು, 15 ಇತರರು ಸೇರಿ 2,10,679 ಮತದಾರರಿದ್ದಾರೆ. ಗುಂಡ್ಲುಪೇಟೆ ಕ್ಷೇತ್ರದಲ್ಲಿ 1,05,074 ಪುರುಷರು, 1,09,013 ಮಹಿಳೆಯರು, 17 ಇತರರು ಸೇರಿ 2,14,104 ಮತದಾರರಿದ್ದಾರೆ ಎಂದರು. ಪುನರ್ ವಿಂಗಡಣೆ ಪೂರ್ವದಲ್ಲಿ ಒಟ್ಟಾರೆ 982 ಮತಗಟ್ಟೆಗಳಿದ್ದವು. ಪುನರ್ ವಿಂಗಡಣೆ ನಂತರ 983 ಮತಗಟ್ಟೆಗಳಿವೆ. ಹನೂರು ಕ್ಷೇತ್ರದಲ್ಲಿ ಪುನರ್ ವಿಂಗಡಣೆ ಪೂರ್ವದಲ್ಲಿ 253 ಮತಗಟ್ಟೆಗಳಿದ್ದು ಪುನರ್ ವಿಂಗಡಣೆ ನಂತರ 254 ಮತಗಟ್ಟೆಗಳಿವೆ.ಉಳಿದಂತೆ ಕೊಳ್ಳೇಗಾಲದಲ್ಲಿ 241, ಚಾಮರಾಜನಗರ ಕ್ಷೇತ್ರದಲ್ಲಿ 239, ಗುಂಡ್ಲುಪೇಟೆ ಕ್ಷೇತ್ರದಲ್ಲಿ 249 ಮತಗಟ್ಟೆಗಳಿವೆ ಎಂದರು.

ಕರಡು ಮತದಾರರ ಪಟ್ಟಿ ಸಂಬಂಧ ಆಯಾ ತಾಲೂಕಿನ ಮತಗಟ್ಟೆಗಳಲ್ಲಿ ಬಿಎಲ್‌ಒ. ಮೂಲಕ ಹಾಗೂ ಆಯಾ ತಾಲೂಕು ಕಚೇರಿಯಲ್ಲಿ ನ.9 ವರೆಗೂ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸ್ವೀಕರಿಸಲಾಗುತ್ತದೆ. ಈ ಅವಧಿಯಲ್ಲಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ಬಿಡತಕ್ಕವು, ತಿದ್ದುಪಡಿ ಮತ್ತು ಸ್ಥಳಾಂತರಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು ಸಂಬಂಧಿಸಿದ ಮತಗಟ್ಟೆ ಮಟ್ಟದ ಅಧಿಕಾರಿ (ಬಿಎಲ್‌ಒ) ಮೂಲಕ ಅಥವಾ ಉಪವಿಭಾಗಾಧಿಕಾರಿಗಳ ಕಚೇರಿ, ತಹಸೀಲ್ದಾರ್ ಕಚೇರಿಗಳಲ್ಲಿ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಬಹುದಾಗಿದೆ. ಡಿ.26ರಂದು ಹಕ್ಕು ಮತ್ತು ಆಕ್ಷೇಪಣೆಗಳನ್ನು ಇತ್ಯರ್ಥಪಡಿಸಲಾಗುತ್ತದೆ. 2024ರ ಜ.5ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ ಎಂದರು.

ಚುನಾವಣಾ ಆಯೋಗ ಹಿಂದಿನ ಸಾಲುಗಳಲ್ಲಿ 1ನೇ ಜನವರಿಯನ್ನು ಅರ್ಹತಾ ದಿನಾಂಕವೆಂದು ಪರಿಗಣಿಸಿ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯ ಕೈಗೊಳ್ಳುತ್ತಿತ್ತು. ಪ್ರಸ್ತುತ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿಕೊಳ್ಳಲು ತ್ರೈಮಾಸಿಕವಾಗಿ ವರ್ಷಕ್ಕೆ 4 ಅವಕಾಶ ನೀಡಲಾಗಿದೆ. 1ನೇ ಜನವರಿ, 1ನೇ ಏಪ್ರಿಲ್, 1ನೇ ಜುಲೈ, 1ನೇ ಅಕ್ಟೋಬರ್ ಅನ್ನು ಮತದಾರರಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಅರ್ಹತಾ ದಿನಾಂಕವಾಗಿ ಪರಿಗಣಿಸಲಾಗಿದೆ. ಈ ಯಾವುದೇ ದಿನಾಂಕದಂದು ಅಥವಾ ಅದಕ್ಕೂ ಮೊದಲು 18 ವರ್ಷ ಪೂರೈಸಿದ್ದರೆ ಹಾಗೂ 17 ವರ್ಷ ತುಂಬಿರುವ ಯುವ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ಅರ್ಜಿ ಆಹ್ವಾನಿಸಲಾಗಿದೆ. ಸಂಬಂಧಪಟ್ಟ ಬಿಎಲ್‌ಒ ಮೂಲಕ ಅಥವಾ ವಿಎಚ್‌ಎ ಆಪ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ ಎಂದರು.

18 ವರ್ಷ ತುಂಬಿದವರು ಮತದಾರರ ಪಟ್ಟಿಗೆ ಸೇರ್ಪಡೆಯಾಗದಿದ್ದಲ್ಲಿ ಅಂತಹವರಿಂದ ನಮೂನೆ 6ರಲ್ಲಿ ಅರ್ಜಿ ಪಡೆದು ಹೆಸರು ಸೇರ್ಪಡೆಗೊಳಿಸಲು ಕ್ರಮವಹಿಸಲಾಗುತ್ತದೆ. ಅಲ್ಲದೇ ಸಾರ್ವಜನಿಕರು ವೋಟರ್ ಹೆಲ್ಪ್ ಲೈನ್ ಆಪ್ ಮುಖಾಂತರವು ಸಹ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಬಹುದಾಗಿದೆ.

ಅರ್ಹ ಮತದಾರರು ಮತದಾನದಿಂದ ಹೊರಗುಳಿಯದಂತೆ ಎಚ್ಚರಿಕೆ ವಹಿಸಿ ಶೇ.100ರಷ್ಟು ದೋಷರಹಿತ ಮತದಾರರ ಪಟ್ಟಿ ತಯಾರಿಸಬೇಕಾಗಿರುವುದರಿಂದ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಮತದಾರರ ಪಟ್ಟಿ ತಯಾರಿಕೆಗೆ ಸಹಕರಿಸಬೇಕೆಂದು ಮನವಿ ಮಾಡಿದರು. ಇದೇ ವೇಳೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಮತದಾರರ ಪಟ್ಟಿಯನ್ನು ಹೆಚ್ಚುವರಿ ಜಿಲ್ಲಾಧಿಕಾರಿ ವಿತರಿಸಿದರು. ಚುನಾವಣಾ ಶಿರಸ್ತೇದಾರ್ ಬಸವರಾಜು, ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಎಸ್.ಬಾಲಸುಬ್ರಹ್ಮಣ್ಯ, ಎಂ.ಚಿಕ್ಕಮಹದೇವ, ಎನ್.ನಾಗಯ್ಯ, ಎಸ್.ಮಹೇಶ್ ಗೌಡ, ಬ್ಯಾಡಮೂಡ್ಲು ಬಸವಣ್ಣ, ಹರೀಶ್.ಕೆ ಇತರರು ಸಭೆಯಲ್ಲಿದ್ದರು.

> ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ನ.18, 19 ಹಾಗೂ ಡಿ.2 ಮತ್ತು 3ರಂದು ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗಿದೆ. ವಿಶೇಷ ಆಂದೋಲನ ದಿನದಂದು ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಮತಗಟ್ಟೆಗಳಲ್ಲಿ ಬೆಳಗ್ಗೆ 9 ರಿಂದ ಸಂಜೆ 5 ಗಂಟೆವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳು ಹಾಜರಿರುತ್ತಾರೆ. ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ಬಿಡತಕ್ಕವು, ತಿದ್ದುಪಡಿ, ಸ್ಥಳಾಂತರಕ್ಕೆ ಸಂಬಂಧಿಸಿದಂತೆ ಆಯಾ ಮತಗಟ್ಟೆಗಳಲ್ಲಿ ಸಾರ್ವಜನಿಕರು ಅರ್ಜಿ ಸಲ್ಲಿಸಬಹುದಾಗಿದೆ.
>
> – ಗೀತಾ ಹುಡೇದ, ಹೆಚ್ಚುವರಿ ಜಿಲ್ಲಾಧಿಕಾರಿ

ಒಂದನೇ ಪುಟದಿಂದ

ರಾಜ್ಯದಲ್ಲೂ ಸರ್ಕಾರ ಪತನ

ಕುಮಾರಸ್ವಾಮಿ ನೇತೃತ್ವದ ಜೆಡಿಎಸ್–ಕಾಂಗ್ರೆಸ್ ಸರ್ಕಾರ ಪತನವಾಗಲಿಲ್ಲ. ಶಿವಕುಮಾರ್ ಅವರ ದುರಹಂಕಾರದ ವರ್ತನೆ ಪ್ರಭುತ್ವಕ್ಕೆ ಹೊರಬಂದ ಕಾರಣ ಅಂದು ಸರ್ಕಾರ ಪತನಗೊಂಡಿತು. ಬೆಳಗಾವಿ ರಾಜಕೀಯವೇ ಇಂದಿನ ಸರ್ಕಾರದ ಪತನಕ್ಕೂ ಮೂಲ ಕಾರಣ ವಾಗುತ್ತದೆ ಎಂದ ರಮೇಶ್, ಯಾವಾಗ, ಏನಾಗಲಿದೆ ಎಂಬುದನ್ನು ಮಾತ್ರ ಬಹಿರಂಗಪಡಿಸಲಿಲ್ಲ. ಕುಮಾರಸ್ವಾಮಿ ಅವರ ಆತ್ಮೀಯನಾಗಿರುವುದಕ್ಕೆ ಡಿಕೆಶಿ ನನ್ನ ವಿರುದ್ಧ ಹುನ್ನಾರ ನಡೆಸುತ್ತಿದ್ದಾರೆ. ನಿತ್ಯ ಡಿಕೆಶಿ ನಾಟಕ ಮಂಡಳಿ ಆಪರೇಷನ್ ಕಮಲ ಮಾಡುತ್ತಿರುವ ಬಗ್ಗೆ ಮಾತನಾಡುತ್ತಿದೆ.

ಮೈತ್ರಿ ಸರ್ಕಾರ ಬಿದ್ದಾಗ ಬಿಜೆಪಿಯೇನೂ ನಮ್ಮನ್ನು ಆಪರೇಷನ್ ಮಾಡಿ ರಲಿಲ್ಲ. ನಾವೇ ಮೈತ್ರಿ ಸರಕಾರ ತೆಗೆದು ಬಿಜೆಪಿಗೆ ಸೇರಿದೆವು. ಈಗ ಬಿಜೆಪಿ ಹೆಸರು ಕೆಡಿಸಲು ಡಿಕೆಶಿ ನಾಟಕ ಮಂಡಳಿ ಹೆಣಗಾಡುತ್ತಿದೆ. ಬಿಜೆಪಿ ಹೆಸರು ಕೆಡಿಸಲು ಡಿಕೆಶಿ ನಾಟಕ ಮಂಡಳಿ ನಿರಂತರವಾಗಿ ಕೆಲಸ ಮಾಡುತ್ತಿದೆ ಎಂದು ಅವರು ದೂರಿದರು. ಸುಳ್ಳು ಗ್ಯಾರಂಟಿ ನೀಡಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಎಲ್ಲ ರಂಗದಲ್ಲೂ ಫೇಲ್ ಆಗಿದೆ. ಸರ್ಕಾರ ಪತನ ಆಗುವುದು ಬೇಡ, ಮುಂದುವರೆಯಲಿ. ಕಾಂಗ್ರೆಸ್ ಶಾಸಕರೇ ಸರಕಾರದ ವಿರುದ್ಧ ಮಾತನಾಡುತ್ತಿದ್ದಾರೆ. ಡಿಕೆಶಿ ಇರುವ ಸರಕಾರ ಯಾವಾಗಲೂ ಡೇಂಜರ್. ಡಿಕೆಶಿ ಅಧಿಕಾರ ಇದ್ದಾಗ ಒಂದು ರೀತಿ ಇರುತ್ತಾರೆ, ಪ್ರತಿಪಕ್ಷದಲ್ಲಿದ್ದಾಗ ಇನ್ನೊಂದು ರೀತಿ ಇರುತ್ತಾರೆ. ಡಿಕೆಶಿಯೇ ಸಿಡಿ ಮಾಸ್ಟರ್, ಅದೇ ಅವರ ಶಕ್ತಿ. ಸಿಡಿ ಇಟ್ಟುಕೊಂಡೇ ರಾಜಕಾರಣ ಮಾಡುತ್ತಾರೆ ಎಂದು ಆರೋಪಿಸಿದರು. ಸಿಡಿ ಇಟ್ಟುಕೊಂಡು ನೆಲಮಂಗಲ ಮಾಜಿ ಶಾಸಕ ನಾಗರಾಜ್‌ಗೆ ಡಿಕೆಶಿ ಬ್ಲ್ಯಾಕ್ ಮೇಲ್ ಮಾಡಿದ್ದಾರೆ. ನನ್ನ ಹಾಗೂ ರಮೇಶ್ ಜಾರಕಿಹೊಳಿದು ಬಹಳಷ್ಟಾಗಿದೆ. ಎಸ್‌ಐಟಿ ಕ್ಲೋಸ್ ಮಾಡಿ ಮರು ತನಿಖೆಗೆ ಆದೇಶಿಸುವ ಬೆದರಿಕೆ ಹಾಕುತ್ತಿದ್ದಾರೆ ಎಂದು ಸ್ಫೋಟಕ ಹೇಳಿಕೆ ನೀಡಿದರು. ಎಷ್ಟೇ ಸಿಡಿ ಬಂದರೂ ನಾನು ಹೆದರಲ್ಲ. ಮರು ತನಿಖೆ ಆದರೆ ಸಿಬಿಐನಿಂದ ಆಗಲಿ ಎಂದು ನಾನು ಕೋರ್ಟ್ ಮೊರೆ ಹೋಗುವೆ ಎಂದು ಅವರು ಡಿಕೆಶಿ ಮೇಲೆ ವಾಗ್ದಾಳಿ ನಡೆಸಿದರು.

ವಿನಾಕಾರಣ ನನ್ನ ಮೇಲೆ ಡಿಕೆಶಿ ಹಗೆತನ ಸಾಧಿಸುತ್ತಿದ್ದಾರೆ. ಹೆಚ್‌ಡಿಕೆ ಜತೆಗೆ ಆಪ್ತನಾಗಿರುವುದಕ್ಕೆ ಡಿಕೆಶಿ ನನ್ನ ವಿರುದ್ಧ ಹುನ್ನಾರ ಮಾಡುತ್ತಿದ್ದಾರೆ. ಒಂದೇ ರಾತ್ರಿಯಲ್ಲಿ ಬೆಳವಣಿಗೆ ಆಗಿ ಸರಕಾರ ಪತನವಾಗಲಿದೆ ಎಂದರು.

ರಮೇಶ್ ಜಾರಕಿಹೊಳಿ ಹೇಳಿಕೆ ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸುತ್ತಿದ್ದಂತೆ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್, ರಾಜ್ಯದ ಜನ ಚುನಾವಣೆಯಲ್ಲಿ ಏನು ತೀರ್ಪು ನೀಡಬೇಕೋ ನೀಡಿದ್ದಾರೆ. ನಮಗೆ ಮಾಡಲು ಅನೇಕ ಕೆಲಸಗಳಿವೆ. ಆ ಕೆಲಸ ಮಾಡುತ್ತಿದ್ದೇವೆ ಎಂದಷ್ಟೇ ತಿಳಿಸಿದರು. ಹೆಚ್ಚಿನ ಪ್ರತಿಕ್ರಿಯೆ ನೀಡಲು ಆಸಕ್ತಿ ತೋರಲಿಲ್ಲ.

ಡಿಕೆಶಿ ಮುಟ್ಟಲು ಆಗಲ್ಲ

ಬರುತ್ತಾರೆ. ಅವರಿಗೆ ಬಂದ ಆಫರ್ ಬಗ್ಗೆ ಅವರೇ ಮಾಧ್ಯಮಗಳಿಗೆ ಉತ್ತರ ನೀಡ್ತಾರೆ. ನೂರು ಕೋಟಿ ಕೊಟ್ಟರೂ ನಮ್ಮ ಶಾಸಕರು ಹೋಗಲ್ಲ. ಬಿಜೆಪಿಯವರು ನಿರುದ್ಯೋಗಿ ಗಳು, ಸರ್ಕಾರ ಬೀಳಿಸುವ ಕನಸು ಕಾಣುತ್ತಿದ್ದಾರೆ ಎಂದರು. ಡಿಕೆಶಿ ಸಿಡಿ ಇಟ್ಟುಕೊಂಡು ಬ್ಲಾಕ್‌ಮೇಲ್ ಮಾಡುತ್ತಾರೆ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ರಮೇಶ್ ಜಾರಕಿಹೊಳಿ ವಿಡಿಯೋವನ್ನು ರಾಜ್ಯದ ಜನರೇ ನೋಡಿದ್ದಾರೆ. ಈ ರೀತಿ ಮಾತನಾಡಿಯೇ ಅವರು ಅಧಿಕಾರ ಕಳೆದುಕೊಂಡದ್ದು. ಸರ್ಕಾರ ಪತನ, ಡಿಕೆಶಿ ಜೈಲಿಗೆ ಕಳುಹಿಸುವ ತಿರುಕನ ಕನಸನ್ನು ಅವರು ಬಿಡಬೇಕು. ಬಿಜೆಪಿ ಸರ್ಕಾರ ಇದ್ದಾಗ ಯಾರೂ ನೆಮ್ಮದಿಯಿಂದ ಇರಲಿಲ್ಲ. ಬೆಳಿಗ್ಗೆ ಎದ್ದರೆ ಕೋಮುಗಲಭೆ ನಡೆಯುತ್ತಿತ್ತು. ಈಗ ಕಾಂಗ್ರೆಸ್ ರಾಜ್ಯವನ್ನು ರಾಮರಾಜ್ಯ ಮಾಡಿದೆ ಎಂದು ಹೇಳಿದರು. ಮಹಾರಾಷ್ಟ್ರ ಮಾದರಿ ರಾಜ್ಯದಲ್ಲಿ ಕಾಂಗ್ರೆಸ್ ಪತನವಾಗಲಿದೆ ಎಂಬ ಜಾರಕಿಹೊಳಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ರಮೇಶ್ ಪತನ ಆಗಬೇಕು ಅಷ್ಟೇ, ನಮ್ಮ ಸರ್ಕಾರವಲ್ಲ. ತಾಕತ್ತು, ಧಮ್ಮು ಇದ್ದರೆ ಕೈ ಶಾಸಕರಿಗೆ ಆಫರ್ ಮಾಡಿದರ ಬಗ್ಗೆ ಒಪ್ಪಿಕೊಳ್ಳಲಿ. ಡಿಕೆಶಿ ಜೈಲಿಗೆ ಹೋಗುತ್ತಾರೆ ಎನ್ನಲು ಕೇಂದ್ರ ಸರ್ಕಾರದ ಏಜೆನ್ಸಿಗಳು ರಮೇಶ್ ಜಾರಕಿಹೊಳಿ ಕೈಯಲ್ಲಿದ್ಯಾ? ಕಾಂಗ್ರೆಸ್‌ನಲ್ಲಿ ಯಾವುದೇ ಅಸಮಾಧಾನ ಇಲ್ಲ. ಎಲ್ಲರೂ ಒಗ್ಗಟ್ಟಾಗಿದ್ದೇವೆ ಎಂದು ಹೇಳಿದರು.

ಪಶು ಆಹಾರ ಸೇವಿಸಿ ನಾಲ್ಕು ಹಸುಗಳು ಸಾವು

ಈ ಆಹಾರ ಸೇವಿಸಿದ ಕೆಲವೇ ನಿಮಿಷಗಳಲ್ಲಿ ಹಸು ಒದ್ದಾಡಿ ಸತ್ತಿದೆ. ಆದರೆ, ಹಸುವಿನ ಮಾಲೀಕರು ಪೈಶಾಚಿಕ ವಿಪತ್ತಿನಿಂದ ಹಸು ಸತ್ತಿದೆ ಎಂದು ಭಾವಿಸಿ ತಕ್ಷಣವೇ ಅದನ್ನು ಗುಂಡಿ ತೆಗೆದು ಹೂತು ಹಾಕಿದ್ದರು. ನಂತರ ಅದೇ ಪಶು ಆಹಾರವನ್ನು ಉಳಿದ 3 ಹಸುಗಳಿಗೆ ನೀಡಿದ್ದಾರೆ. ಈ ಹಸುಗಳು ಕೂಡ ಆ ಆಹಾರ ಸೇವಿಸಿದ ಕೆಲವೇ ಒದ್ದಾಡಿ ನಿಮಿಷಗಳಲ್ಲಿ ಸಾವನ್ನಪ್ಪಿವೆ. ಹೀಗಾಗಿ ಪಶು ಆಹಾರದಿಂದಲೇ ಹಸುಗಳು ಸಾವನ್ನಪ್ಪಿವೆ ಎಂಬ ನಿರ್ಧಾರಕ್ಕೆ ಬಂದ ಅವರು, ಪಶು ವೈದ್ಯಾಧಿಕಾರಿಗಳಿಗೆ ವಿಷಯ ಮುಟ್ಟಿಸಿದ್ದಾರೆ. ಸ್ಥಳಕ್ಕೆ ಧಾವಿಸಿದ ಗಾವಡಗೆರೆ ಪಶು ವೈದ್ಯಾಧಿಕಾರಿ ಡಾ. ರಾಜಶೇಖರಪ್ಪ ಮತ್ತು ಸಹಾಯಕ ಪಶು ವೈದ್ಯಾಧಿಕಾರಿ ಡಾ. ಶಶಿಧರ್ ಅವರುಗಳು ಹಸುಗಳ ಮರಣೋತ್ತರ ಪರೀಕ್ಷೆ ನಡೆಸಿದ್ದಾರೆ.

ಹಸುಗಳು ವಿಷಪೂರಿತ ಆಹಾರ ಸೇವನೆಯಿಂದ ಮೃತಪಟ್ಟಿರಬಹುದು ಎಂದು ಮರಣೋತ್ತರ ಪರೀಕ್ಷೆ ವೇಳೆ ತಿಳಿದುಬಂದ ಹಿನ್ನೆಲೆಯಲ್ಲಿ ಡಾ. ರಾಜಶೇಖರಪ್ಪ ಅವರು ಹಸುಗಳ ಕೆಲವು ಭಾಗಗಳನ್ನು ಹಾಗೂ ಅವು ಸೇವಿಸಿದ್ದ ಪಶು ಆಹಾರವನ್ನು ಲ್ಯಾಬ್‌ಗೆ ರವಾನಿಸಿದ್ದಾರೆ. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಕೆ.ಎಸ್. ಅಣ್ಣಯ್ಯ ನಾಯಕ್, ನಾಗೇಗೌಡ, ಮಲ್ಲೇಶ್, ಕೆ.ಸಿ. ನಟರಾಜ್, ಶಿವಣ್ಣ, ರಾಜು, ಕೃಷ್ಣಚಾರಿ, ಕೆ.ಎಸ್. ಸೋಮಶೇಖರ್ ಇನ್ನಿತರರಿದ್ದರು.

ಅಪಾರ ಪ್ರಮಾಣದ ನಗದು, ಚಿನ್ನ ವಶಕ್ಕೆ

ಕಾರ್ಯ ಮುಂದುವರಿಸಿದೆ. ಕೈಗಾರಿಕಾ ಮತ್ತು ಸುರಕ್ಷತಾ ಇಲಾಖೆಯ ಡೆಪ್ಯೂಟಿ ಡೈರೆಕ್ಟರ್ ಮನೆ ಮೇಲೆಯೂ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿದೆ.

ಸದ್ಯ ದಾವಣಗೆರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಯ ಬೆಂಗಳೂರಿನ ಉಪಕಾರ್ ಲೇಔಟ್, ಅದ್ದಹಳ್ಳಿ ಹಾಗೂ ಚಾಮರಾಜನಗರದ ಕೊಳ್ಳೆಗಾಲದಲ್ಲಿರುವ ಮನೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳ ಪರಿಶೀಲಿಸುತ್ತಿದ್ದಾರೆ.

ದಾಳಿಗೆ ಒಳಗಾದ ಅಧಿಕಾರಿಗಳಿವರು: ಮಂಜುನಾಥ್, ರೆವೆನ್ಯೂ ಇನ್‌ಸ್ಪೆಕ್ಟರ್ (ಬಳ್ಳಾರಿ), ನಾಗೇಂದ್ರಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಶಿರಾದ ಸಹಾಯಕ ಎಂಜಿನಿಯರ್ (ತುಮಕೂರು), ಶರಣಬಸವ ಪಟ್ಟೆದ್, ಕ್ಯಾಶ್ಯುಟೆಕ್ ಅಧಿಕಾರಿ (ರಾಯಚೂರು), ಬಾಲರಾಜು, ಕೊಳಚೆ ಅಭಿವೃದ್ಧಿ ಮಂಡಳಿ ಕಾರ್ಯಪಾಲಕ ಎಂಜಿನಿಯರ್ (ಮಂಡ್ಯ), ಶಶಿಕುಮಾರ್, ಕೆಐಎಡಿಬಿ ಎಂಜಿನಿಯರ್ (ಮಂಡ್ಯ), ರಾಣೆಬೆನ್ನೂರಿನ ವಲಯ ಅರಣ್ಯಾಧಿಕಾರಿ ಮಹಾಂತೇಶ್ ಅವರ ಪತ್ನಿ ಹೇಮಾವತಿ (ವಿಜಯನಗರ ಜಿಲ್ಲೆ), ಕೃಷ್ಣಮೂರ್ತಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ (ಚಿತ್ರದುರ್ಗ), ನಾಗೇಂದ್ರ ನಾಯ್ಕ್, ಸಹಾಯಕ ಅರಣ್ಯ ಅಧಿಕಾರಿ (ಚಿತ್ರದುರ್ಗ), ಎಂ.ಎಸ್.ಬಿರಾದಾರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ (ಬೆಳಗಾವಿ), ಅಪ್ಪಾಸಾಬ್ ಕಾಂಬಳೆ, ನಗರ ಹಾಗೂ ಗ್ರಾಮೀಣ ಯೋಜನಾ ಜಂಟಿ ನಿರ್ದೇಶಕ (ಕಲಬುರಗಿ), ತಿಪ್ಪಣ್ಣಗೌಡ, ಕೃಷ್ಣಾ ಭಾಗ್ಯ ಜಲ ನಿಗಮ (ಕೆಬಿಜೆಎನ್‌ಎಲ್–ಭೀಮರಾಯನಗುಡಿ)ದ ಕಾರ್ಯಪಾಲಕ ಎಂಜಿನಿಯರ್ (ಕಲಬುರಗಿ), ಬಸವರಾಜ, ವಲಯ ಅರಣ್ಯಾಧಿಕಾರಿ (ಬೀದರ್), ಎ.ಎಸ್. ಕಾಂಬಳೆ, ನಗರ ಯೋಜನಾ ಶಾಖೆಯ ಜಂಟಿ ನಿರ್ದೇಶಕ (ಬೆಳಗಾವಿ), ಶ್ರೀನಿವಾಸ್, ನಗರ ಹಾಗೂ ಸತ್ತೇಗಾಲ ಗ್ರಾಮದಲ್ಲಿರುವ ಬೆಂಗಳೂರಿನ ಕಾರ್ಮಿಕ ಇಲಾಖೆಯ ಉಪನಿರ್ದೇಶಕ (ಚಾಮರಾಜನಗರ), ಎಚ್.ಇ.ನಾರಾಯಣ, ಕೆಪಿಟಿಸಿಎಲ್ ಜೂನಿಯರ್ ಎಂಜಿನಿಯರ್ (ಹಾಸನ), ರಾಜೇಶ ಹಮ್ಮಣ್ಣ ನಾಯಕ, ವಾಣಿಜ್ಯ ತೆರಿಗೆ ಇಲಾಖೆ ಸಹಾಯಕ ಆಯುಕ್ತ (ಕಾರವಾರ), ಎಸ್. ಆರ್.ಶ್ರೀನಿವಾಸ್, ಬಾಯ್ಲರ್ಸ್‌ಗಳ ಉಪ ನಿರ್ದೇಶಕಯ (ದಾವಣಗೆರೆ).

ಮನೆ ಮೇಲೆ ಲೋಕಾಯುಕ್ತ ದಾಳಿ

ಇಂಜಿನಿಯರ್ ಬಾಲರಾಜು ಮತ್ತು ಬೆಂಗಳೂರು ನಗರಾಭಿವೃದ್ಧಿ ಇಲಾಖೆಯ ಇಂಜಿನಿಯರ್ ಶಶಿಕುಮಾರ್ ಎಂಬುವರ ಮನೆಗಳಲ್ಲಿ ಶೋಧ ನಡೆಸಿದರು. ಇಂಜಿನಿಯರ್ ಬಾಲರಾಜು ಸ್ವಗ್ರಾಮ ಮಳವಳ್ಳಿ ತಾಲೂಕಿನ ನಂಜೇಗೌಡನದೊಡ್ಡಿಯ ಫಾರ್ಮ್‌ಹೌಸ್ ಮೇಲೆ ಲೋಕಾಯುಕ್ತ ಅಧಿಕಾರಿ ಸುಚಿತ್ ನೇತೃತ್ವದ ತಂಡ ದಾಳಿ ನಡೆಸಿ ದಾಖಲಾತಿ ಪರಿಶೀಲಿಸಿದರು. ಮದ್ದೂರು ತಾಲೂಕಿನ ತೈಲೂರು ಗ್ರಾಮದಲ್ಲಿ ಬೆಂಗಳೂರು ನಗರಾಭಿವೃದ್ಧಿ ಇಲಾಖೆಯ ಇಂಜಿನಿಯರ್ ಶಶಿಕುಮಾರ್ ಅವರ ನಿವಾಸದ ಮೇಲೆ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳ ತಂಡ ದಾಖಲೆಗಳ ಪರಿಶೀಲನೆ ಮಾಡಿದರು.

18 ಬಸ್‌ಗಳು ಸುಟ್ಟು ಕರಕಲು

ಗ್ಯಾರೇಜ್ ಅನ್ನು ತೆರೆದ ಜಾಗದಲ್ಲಿ ಇರಿಸಲಾಗಿದ್ದರಿಂದ ಬೆಂಕಿ ಕಾಣಿಸಿಕೊಂಡಾಗ ಅದರಲ್ಲಿದ್ದ ಜನರು ಬೇಗನೆ ಹೊರಬರಲು ಸಾಧ್ಯವಾಯಿತು. ಇದರಿಂದ ಯಾವುದೇ ರೀತಿಯ ಪ್ರಾಣಾಪಾಯವಾಗಿಲ್ಲ. ಬೆಂಕಿಯಲ್ಲಿ ಯಾರೂ ಗಾಯಗೊಂಡಿಲ್ಲ, ಬೆಂಕಿಯ ನಿಖರವಾದ ಕಾರಣ ಸಂಬಂಧ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಡಿಸಿಎಂ ಡಿಕೆ ಶಿವಕುಮಾರ್, ಸಚಿವ ರಾಮಲಿಂಗಾ ರೆಡ್ಡಿ ಭೇಟಿ: ಇನ್ನು ದುರಂತ ನಡೆದ ಗ್ಯಾರೇಜ್‌ಗೆ ಇಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು, ಬಳಿಕ ಅಧಿಕಾರಿಗಳೊಂದಿಗೆ ಘಟನೆಯ ಕುರಿತು ಮಾಹಿತಿ ಪಡೆದು, ಬಸ್ ಮಾಲೀಕರೊಂದಿಗೆ ನಷ್ಟದ ಕುರಿತು ಮಾಹಿತಿ ಪಡೆದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ಸಿದ್ದರಾಮಯ್ಯ, ಡಿಕೆಶಿ ಹೆಗಲಿಗೆ

——ಕ್ಷೇತ್ರದ ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಒಮ್ಮತದ ತೀರ್ಮಾನ——



ಮೈಸೂರು,ಅ.30(ಎಂಟಿವೈ)– ಲೋಕ ಸಭಾ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್‌ನಲ್ಲಿ ಟಿಕೆಟ್ ಆಕಾಂಕ್ಷಿಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆಯ್ಕೆಯ ಸಂಪೂರ್ಣ ಅಧಿಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವ ಕುಮಾರ್ ಅವರಿಗೆ ನೀಡಲು ಪಕ್ಷದ ಮುಖಂಡರ ಸಭೆಯಲ್ಲಿ ನಿರ್ಧರಿಸಲಾಯಿತು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಮೈಸೂರು ನಗರ ಮತ್ತು ಗ್ರಾಮಾಂತರ ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಪದಾಧಿಕಾರಿಗಳ ಸಭೆಯಲ್ಲಿ ಲೋಕಸಭಾ ಚುನಾವಣೆ ಸಂಬಂಧ ಪಕ್ಷ ಸೂಚಿಸುವ ಅಭ್ಯರ್ಥಿಗೆ ಪೂರ್ಣ ಪ್ರಮಾಣದ ಬೆಂಬಲ ನೀಡುವುದು. ಸಾಮೂಹಿಕ ನಾಯಕತ್ವದಲ್ಲಿ ಅಭ್ಯರ್ಥಿ ಗೆಲುವಿಗೆ ಶ್ರಮಿಸುವುದು ಸೇರಿದಂತೆ ಪ್ರಮುಖ 9 ನಿರ್ಣಯವನ್ನು ಒಮ್ಮತದಿಂದ ಅಂಗೀಕರಿಸಲಾಯಿತು.

ಸಭೆಯಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಚಂದ್ರಮೌಳಿ ಮಾತನಾಡಿ, ಬಿಜೆಪಿ ನಾಯಕರು ಪ್ರಧಾನಿ ನರೇಂದ್ರ ಮೋದಿ ಮುಖ ತೋರಿಸಿ ಚುನಾವಣೆಯಲ್ಲಿ ಗೆಲ್ಲುತ್ತಿದ್ದಾರೆ. ಆದರೆ, ಇತ್ತೀಚಿನ ವರ್ಷಗಳಲ್ಲಿ ಮೋದಿ ಅವರು ಚುನಾವಣೆ ಪ್ರಚಾರ ನಡೆಸಿದ ರಾಜ್ಯದಲ್ಲಿ ಬಿಜೆಪಿ ನೆಲಕಚ್ಚಿದೆ. ಪ್ರಸ್ತುತ ರಾಜ್ಯದಲ್ಲಿ ಕಾಂಗ್ರೆಸ್ ಪರವಾದ ಒಲವು ವ್ಯಕ್ತವಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಜನಪರ ಪಂಚ ಗ್ಯಾರಂಟಿ ಯೋಜನೆಗಳನ್ನು ಜನತೆಗೆ ಮನವರಿಕೆ ಮಾಡಿಕೊಟ್ಟು ರಾಜ್ಯದಲ್ಲಿ 20 ಸ್ಥಾನ ಗೆಲ್ಲುವಂತೆ ಶ್ರಮಿಸಬೇಕು. ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಿದರೆ ಮಾತ್ರ ಇದು ಸಾಧ್ಯವಾಗಲಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜಕೀಯ ನಿವೃತ್ತಿ ಹೊಂದುವ ಮಾತುಗಳನ್ನಾಡುತ್ತಿದ್ದಾರೆ. ಸೈದ್ಧಾಂತಿಕ ಬದ್ಧತೆ ಹೊಂದಿರುವ ಸಿದ್ದರಾಮಯ್ಯ ಅವರ ನಂತರ ಯಾರಿದ್ದಾರೆ ಎಂಬ ಪ್ರಶ್ನೆ ಮೂಡುತ್ತದೆ. ಇದರಿಂದಾಗಿ ಅವರಂತೆ ಇರುವ ಕನಿಷ್ಠ 10 ಮಂದಿಗಾದರೂ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ನೀಡಿ ಹೊಸ ನಾಯಕರನ್ನು ಹುಟ್ಟಿ ಹಾಕಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ, ಕಳೆದ 10 ವರ್ಷಗಳಿಂದ ಪ್ರತಿದಿನ ಕಿಡಿ ಹೊತ್ತಿಸುತ್ತಿರುವ ಹಾಲಿ ಸಂಸದರನ್ನು ಸೋಲಿಸಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕ್ಷೇತ್ರವನ್ನು ಪ್ರತಿಷ್ಠೆಯಾಗಿ ಪರಿಗಣಿಸಿದ್ದು, ಅವರಿಗೆ ಗೌರವ ತಂದು ಕೊಡುವ ನಿಟ್ಟಿನಲ್ಲಿ ಅಭ್ಯರ್ಥಿ ಗೆಲ್ಲಿಸಬೇಕು ಎಂದು ಅಭಿಪ್ರಾಯಪಟ್ಟರು.

ಕೆಪಿಸಿಸಿ ಉಪಾಧ್ಯಕ್ಷ ಸೂರಜ್ ಹೆಗಡೆ ಮಾತನಾಡಿ, ಕಾಂಗ್ರೆಸ್‌ನ ಜನಪರ ಗ್ಯಾರಂಟಿ ಯೋಜನೆಗಳಿಂದ ತತ್ತರಿಸಿ ಜೆಡಿಎಸ್, ಇದೀಗ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿದೆ. ಹೀಗಾಗಿ ಈ ಚುನಾವಣೆ ಜಿದ್ದಾಜಿದ್ದಿಗೆ ಕಾರಣವಾಗಿದೆ. ಕಾರ್ಯಕರ್ತರ ಆಶಯದಂತೆ ಪಕ್ಷದಲ್ಲಿ ದುಡಿದವರಿಗೆ ಟಿಕೆಟ್ ಕೊಡಬೇಕು ಎನ್ನುವ ಮಾತಿಗೆ ನನ್ನ ಸಹಮತವಿದೆ. ಆದರೆ, ವರಿಷ್ಠರು ತೀರ್ಮಾನಿಸಿ ಯಾರಿಗೆ ಟಿಕೆಟ್ ಕೊಟ್ಟರೂ ಅವರನ್ನು ಗೆಲ್ಲಿಸಿಕೊಂಡು ಬರಲು ಸಜ್ಜಾಗಬೇಕು ಎಂದು ಹೇಳಿದರು.

ಸಭೆಯಲ್ಲಿ ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್, ಕೊಡಗು ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಬಸವರಾಜು, ಮಾಜಿ ಮೇಯರ್‌ಗಳಾದ ಅನಂತು, ಬಿ.ಕೆ.ಪ್ರಕಾಶ್, ದಕ್ಷಿಣಾ ಮೂರ್ತಿ, ಅಯೂಬ್ ಖಾನ್, ಆರೀಫ್ ಹುಸೇನ್, ಪುಷ್ಪಲತಾ ಚಿಕ್ಕಣ್ಣ, ಮೋದಾಮಣಿ, ಎಂ.ಸಿ.ರಾಜೇಶ್ವರಿ ಪುಟ್ಟಸ್ವಾಮಿ, ಪುಷ್ಪಲತಾ ಜಗನ್ನಾಥ್, ಮಾಜಿ ಉಪ ಮೇಯರ್ ಪುಷ್ಪವಲ್ಲಿ, ಪಾಲಿಕೆ ಸದಸ್ಯೆ ಶೋಭಾ ಸುನೀಲ್, ಗ್ರಾಮಾಂತರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾ ಸಿದ್ದಶೆಟ್ಟಿ, ಮಾಜಿ ಸದಸ್ಯರಾದ ಶಿವಣ್ಣ, ಸುನೀಲ್, ಮುಖಂಡರಾದ ಶಿವಮಾದು, ಜಿ.ಪಂ. ಮಾಜಿ ಅಧ್ಯಕ್ಷ ಬಿ.ಎಂ.ರಾಮು ಸೇರಿದಂತೆ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಸಭೆಯಲ್ಲಿ ಕೈಗೊಂಡ ನಿರ್ಣಯಗಳು

- ಕ್ಷೇತ್ರವನ್ನು ಶತಾಯಗತಾಯ ಕಾಂಗ್ರೆಸ್ ಗೆಲ್ಲಲೇಬೇಕು. ಅದಕ್ಕಾಗಿ ಸಾಮೂಹಿಕವಾಗಿ ಪ್ರಾಮಾಣಿಕ ಹೋರಾಟ ಮಾಡಬೇಕು.
- ಪಕ್ಷಕ್ಕಾಗಿ ದೀರ್ಘಾವಧಿಯಿಂದ ಪ್ರಾಮಾಣಿಕವಾಗಿ ದುಡಿದವರಿಗೆ ಮಾತ್ರ ಮನ್ನಣೆ ನೀಡಬೇಕು.
- ರಾಜಸ್ಥಾನದ ಉದಯಪುರದಲ್ಲಿ ಎಐಸಿಸಿಯು ಘೋಷಿಸಿರುವಂತೆ ಪಕ್ಷದಲ್ಲಿ ಕನಿಷ್ಠ 5 ವರ್ಷ ಸೇವೆ ಸಲ್ಲಿಸಿದ ನಂತರವೇ ಮುಂದಿನ ಅಧಿಕಾರಕ್ಕೆ ಚಿಂತನೆ ಮಾಡಬೇಕು.
- ಈಗಾಗಲೇ ಅಭ್ಯರ್ಥಿ ಎಂದು ಅನಧಿಕೃತವಾಗಿ ಘೋಷಣೆ ಮಾಡಿಕೊಂಡು ಆಮಿಷ ಒಡ್ಡುತ್ತಿರುವವರ ವಿರುದ್ಧ ಕೆಪಿಸಿಸಿಗೆ ದೂರು.
- ಕಾಂಗ್ರೆಸ್ ಕಚೇರಿಗೆ ಅಂತವರನ್ನು ನಿಷೇಧಿಸಿ ಎಚ್ಚರ ವಹಿಸಬೇಕು.
- ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ದೀರ್ಘಾವಧಿ ಪಕ್ಷಕ್ಕಾಗಿ ದುಡಿದವರಿಗೆ ನಿಗಮ ಮಂಡಳಿಗಳಿಗೆ ನಿಯೋಜಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಸಲ್ಲಿಸುವುದು.
- ಚುನಾವಣೆಯ ಸಿದ್ಧತೆಗಾಗಿ ಶೀಘ್ರದಲ್ಲೇ ಅಭ್ಯರ್ಥಿಯ ಘೋಷಣೆ ಮಾಡಬೇಕು.

ಕೊಡಗಲ್ಲಿ ಇಂದಿಗೂ ಮೋದಿ ಹವಾ

ಕೊಡಗು ಜಿಲ್ಲೆಯಲ್ಲಿ ಇಂದಿಗೂ ಪ್ರಧಾನಿ ನರೇಂದ್ರ ಮೋದಿಯವರ ಹವಾ ಇದೆ. ಆದರೂ ವಿಧಾನಸಭಾ ಚುನಾವಣೆಯಲ್ಲಿ ಕೊಡಗಿನ 2 ಕ್ಷೇತ್ರದಲ್ಲೂ ಕಾಂಗ್ರೆಸ್ ಗೆದ್ದಿರುವುದು ಜನರ ಮನಸ್ಥಿತಿ ಬದಲಾಗಿರುವ ಸೂಚನೆ ನೀಡಿದೆ. ಅದರ ಲಾಭವನ್ನು ಲೋಕಸಭಾ ಚುನಾವಣೆಯಲ್ಲೂ ಪಡೆದುಕೊಳ್ಳಬೇಕು. ಕಾಂಗ್ರೆಸ್‌ನಿಂದ ಗೆಲ್ಲುವ ಸಾಮರ್ಥ್ಯವಿರುವ ಅಭ್ಯರ್ಥಿಗೆ ಟಿಕೆಟ್ ನೀಡಬೇಕು. ಕಾರ್ಯಕರ್ತರು ಜನರ ಬಳಿ ಹೋಗಿ ಜನರ ನಾಡಿ ಮಿಡಿತ ತಿಳಿದು ಅದಕ್ಕನುಗುಣವಾಗಿ ಕೆಲಸ ಮಾಡಬೇಕು.

-ಸಿ.ಎಸ್.ಅರುಣ್ ಮಾಚಯ್ಯ, ಕಾಂಗ್ರೆಸ್ ಮುಖಂಡ

ಗ್ಯಾರಂಟಿ ಯೋಜನೆಯಿಂದ ಗೆಲ್ಲುವ ಭ್ರಮೆ ಬೇಡ

ಚುನಾವಣೆಗೆ ಪಕ್ಷದ ಪದಾಧಿಕಾರಿಗಳು ಸೂಚಿಸಿದವರನ್ನೇ ಅಭ್ಯರ್ಥಿಯಾಗಿ ಘೋಷಣೆ ಮಾಡಬೇಕು. ಗ್ಯಾರಂಟಿ ಯೋಜನೆಗಳಿಂದಲೇ ಗೆಲ್ಲುತ್ತೇವೆಂಬ ಭ್ರಮೆಯಿಂದ ಹೊರ ಬರಬೇಕು. ಏಕೆಂದರೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು ವಿವಿಧ ಯೋಜನೆ ಜಾರಿಗೊಳಿಸಿದ್ದರೂ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನ ಗ್ಯಾರಂಟಿ ಯೋಜನೆಗಳನ್ನು ಜನ ಮೆಚ್ಚಿಕೊಂಡರು. ಈ ಹಿನ್ನೆಲೆಯಲ್ಲಿ ಲೋಕಸಭಾ ಚುನಾವಣೆಯಲ್ಲಿಯೂ ನಾವು ನೀಡುವ ಭರವಸೆಗಳೇ ಅಧಿಕಾರಕ್ಕೆ ಬರಲು ಸಹಾಯ ಆಗಲಿದೆ.

-ಡಾ.ರವೀಂದ್ರ, ಕೆಪಿಸಿಸಿ ಸದಸ್ಯ

ಬ್ರಾಹ್ಮಣ ಮಹಾಸಭಾದಿಂದ ಶತಕೋಟಿ ರಾಮತಾರಕ ಮಹಾಯಜ್ಞ



ಮೈಸೂರು,ಅ.30(ಎಂಟಿವೈ)– ಅಯೋಧ್ಯೆಯಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಶ್ರೀರಾಮ ಮಂದಿರದಲ್ಲಿ ಜ.22ರಂದು ನಡೆಯುವ ರಾಮಚಂದ್ರ ಮೂರ್ತಿ ಪುನರ್ ಪ್ರತಿಷ್ಠಾಪನಾ ಕಾರ್ಯಕ್ರಮದ ಅಂಗವಾಗಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ವತಿಯಿಂದ ರಾಜ್ಯದ ಎಲ್ಲ ಜಿಲ್ಲೆ, ತಾಲೂಕುಗಳಲ್ಲಿ ಶತಕೋಟಿ ರಾಮತಾರಕ ಮಹಾಯಜ್ಞ ಹಾಗೂ ರಾಮ ತಾರಕ ಮಹಾಯಾಗ ಹಮ್ಮಿಕೊಳ್ಳಲಾಗಿದೆ ಎಂದು ಬ್ರಾಹ್ಮಣ ಮಹಾಸಭಾ ಜಿಲ್ಲಾಧ್ಯಕ್ಷ ಡಿ.ಟಿ. ಪ್ರಕಾಶ್ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಹಿಂದು ಸಮುದಾಯ ಆಶಯದಂತೆ ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ನಿರ್ಮಾಣ ಕಾಮಗಾರಿ ಪೂರ್ಣಗೊಳ್ಳುತ್ತಿದ್ದು, 2024ರ ಜ.22ರಂದು ರಾಮಚಂದ್ರ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗುತ್ತಿದೆ. ಈಗಾಗಲೇ ದೇಶದಾದ್ಯಂತ ವಿವಿಧ ಧಾರ್ಮಿಕ ಕಾರ್ಯಗಳು ಜರುಗುತ್ತಿವೆ. ಈ ಹಿನ್ನೆಲೆಯಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಸಭಾ ಅಧ್ಯಕ್ಷ ಅಶೋಕ್ ಹಾರನಹಳ್ಳಿ ಅವರ ಸೂಚನೆ ಮೇರೆಗೆ ರಾಜ್ಯದಲ್ಲಿ ಶತಕೋಟಿ ರಾಮತಾರಕ ನಾಮಜಪ ಮಹಾಯಜ್ಞ ಹಾಗೂ ಶ್ರೀರಾಮ ಮಹಾಯಾಗ ನಡೆಸಲಾಗುತ್ತಿದೆ. ಅ.24ರಿಂದ ಈ ಯಾಗ ಆರಂಭವಾಗಿದೆ. ಸನಾತನ ಧರ್ಮದಲ್ಲಿ ಶ್ರೀರಾಮಚಂದ್ರನಿಗೆ ಮಹತ್ವದ ಪಾತ್ರವಿದ್ದು, ಹಾಗಾಗಿ ಯಾಗ ನಡೆಸಲಾಗುತ್ತಿದೆ. ಈ ಯಾಗದಲ್ಲಿ ಯಾವುದೇ ಜಾತಿ, ಮತ, ಭೇದವಿಲ್ಲದೇ ಎಲ್ಲರೂ ತಮ್ಮ ಮನೆಯಲ್ಲಿಯೇ ಜಪ ಮಾಡಬಹುದಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಧಾರ್ಮಿಕ ಚಿಂತಕ ಡಾ. ಭಾನುಪ್ರಕಾಶ್ ಶರ್ಮ, ಬ್ರಾಹ್ಮಣ ಮಹಾಸಭಾ ಪದಾಧಿಕಾರಿಗಳಾದ ಗೋಪಾಲ್ ರಾವ್, ಹರೀಶ್, ಎಂ.ಆರ್. ಬಾಲಕೃಷ್ಣ, ಜ್ಯೋತಿ ಹಾಗೂ ಜಯಸಿಂಹ ಇದ್ದರು.



ಮೈಸೂರಿನ ಬೋಗಾದಿ ರಸ್ತೆಯ ಹರ್ಷ ಬಾರ್ ಹತ್ತಿರ 50 ಲಕ್ಷ ರೂ. ವೆಚ್ಚದ ಸೇತುವೆ ಅಗಲೀಕರಣ ಕಾಮಗಾರಿಗೆ ಶಾಸಕ ಜಿ.ಟಿ.ದೇವೇಗೌಡರು ಸೋಮವಾರ ಗುದ್ದಲಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮೇಯರ್ ಶಿವಕುಮಾರ್, ನಗರಪಾಲಿಕೆ ಸದಸ್ಯೆ ಸವಿತಾ ಸುರೇಶ್, ಉಮಾಶಂಕರ್, ಕೆ.ಚಂದ್ರಶೇಖರ್, ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸುರೇಶ್, ಟೆಂಟ್ ಕುಮಾರ್, ಟೆಲಿಕಾಂ ಬಡಾವಣೆಯ ನಿವಾಸಿಗಳ ಸಂಘದ ಸದಸ್ಯರು ಹಾಗೂ ವಾರ್ಡಿನ ಮುಖಂಡರು ಹಾಜರಿದ್ದರು.

ಮಹಾ ಟ್ಯಾಲೆಂಟ್ ಸ್ಕಾಲರ್‌ಶಿಪ್ ಪರೀಕ್ಷೆ

ಮೈಸೂರು,ಅ.30(ಎಂಟಿವೈ)– ಮಹಾಜನ ಶಿಕ್ಷಣ ಸಂಸ್ಥೆಗೆ ಸೇರಿದ ಮೈಸೂರು–ಕೆಆರ್‌ಎಸ್ ರಸ್ತೆಯಲ್ಲಿರುವ ಆರ್‌ವಿಪಿಬಿ ಪದವಿ ಪೂರ್ವ ಕಾಲೇಜಿನಲ್ಲಿ ನ.5ರಂದು ಬೆಳಗ್ಗೆ 10 ರಿಂದ 11 ಗಂಟೆ ವರೆಗೆ 'ಮಹಾ ಟ್ಯಾಲೆಂಟ್ ಸ್ಕಾಲರ್‌ಶಿಪ್' ಪರೀಕ್ಷೆ ಆಯೋಜಿಸಲಾಗಿದೆ ಎಂದು ಕಾಲೇಜಿನ ಪ್ರಾಂಶುಪಾಲ



ಕೆ.ಎಂ.ಮಹೇಂದ್ರ ತಿಳಿದ್ದಾರೆ. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅರ್ಹ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವ ನಿಟ್ಟಿನಲ್ಲಿ ಈ ಪರೀಕ್ಷೆ ನಡೆಸಲಾಗುತ್ತಿದ್ದು, ಸಿಇಟಿ, ನೀಟ್, ಜೆಇಇ ಒಳಗೊಂಡಂತೆ 20 ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಮತ್ತು ಸಿಎ, ಸಿಪಿಟಿ ಒಳಗೊಂಡಂತೆ 10 ಮಂದಿ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು ನೀಡಲು ಈ ಪರೀಕ್ಷೆ ಆಯೋಜಿಸಲಾಗಿದೆ. ಈ ಪರೀಕ್ಷೆಯಲ್ಲಿ ರಾಜ್ಯ ಪಠ್ಯಕ್ರಮ, ಸಿಬಿಎಸ್‌ಇ, ಐಸಿಎಸ್‌ಇಯ ಹತ್ತನೇ ತರಗತಿಯ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದಾಗಿದೆ. ಈ ಟ್ಯಾಲೆಂಟ್ ಪರೀಕ್ಷೆಯು ಬಹು ಆಯ್ಕೆಯ 40 ಪ್ರಶ್ನೆಯನ್ನು ಒಳಗೊಂಡಿದ್ದು, 80 ಅಂಕಗಳಿಗೆ ಪರೀಕ್ಷೆ ನಡೆಸಲಾಗುತ್ತದೆ. ಆಸಕ್ತರು ನ.4ರಂದು ಸಂಜೆ 6ಗಂಟೆಯೊಳಗೆ ಹೆಸರು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗೆ ದೂ. 0821– 4009640 ಸಂಪರ್ಕಿಸುವಂತೆ ಅವರು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಕಾಲೇಜಿನ ಶೈಕ್ಷಣಿಕ ಸಲಹೆಗಾರ ಎಂ. ಶ್ರೀಧರಮೂರ್ತಿ ಇದ್ದರು.

ಹಮಾಸ್ ವಿರುದ್ಧ ಮುಂದುವರೆದ ಇಸ್ರೇಲ್ ದಾಳಿ: ಗಾಜಾಪಟ್ಟಿಯಲ್ಲಿ 8 ಸಾವಿರಕ್ಕೂ ಹೆಚ್ಚು ಸಾವು

ದೇರ್ ಅಲ್–ಬಲಾಹ್: ಹಮಾಸ್ ವಿರುದ್ಧ ಇಸ್ರೇಲ್ ದಾಳಿ ಮತ್ತಷ್ಟು ತೀವ್ರಗೊಂಡಿದ್ದು, ಈ ಯುದ್ಧದಲ್ಲಿ ಇದುವರೆಗೂ ಪ್ಯಾಲಸ್ತೈನ್‌ನಲ್ಲಿ ಸುಮಾರು 8ಸಾವಿರಕ್ಕೂ ಹೆಚ್ಚು ಮಂದಿ ಬಲಿಯಾಗಿದ್ದಾರೆ.

ಗಾಜಾಪಟ್ಟಿ ಮೇಲೆ ಇಸ್ರೇಲ್ ಬಾಂಬ್ ದಾಳಿಯನ್ನು ಮುಂದುವರೆಸಿದ್ದು, ಹಮಾಸ್ ನೆಲೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗುತ್ತಿದೆ. ಹಮಾಸ್‌ನ ಮೆಟ್ರೋ ಸುರಂಗಗಳನ್ನು ಟಾರ್ಗೆಟ್ ಮಾಡಿರುವ ಇಸ್ರೇಲ್ ಪಡೆಗಳು ವಾಯು ದಾಳಿಯ ಜತೆ ಎಚ್ಚರಿಕೆಯ ಭೂ ದಾಳಿ ನಡೆಸುತ್ತಿದೆ ಪರಿಣಾಮ 8ಸಾವಿರಕ್ಕೂ ಹೆಚ್ಚು ಪ್ಯಾಲಸ್ತೈನಿಯನ್ನರು ಪ್ರಾಣ ಕಳೆದುಕೊಂಡಿದ್ದಾರೆಂದು ಗಾಜಾ ಆರೋಗ್ಯ ಸಚಿವಾಲಯ ಮಾಹಿತಿ ನೀಡಿದೆ.

ಹಮಾಸ್ ದಾಳಿಯಲ್ಲಿ 1400 ಇಸ್ರೇಲಿಗಳು ಮೃತಪಟ್ಟಿದ್ದಾರೆ. ಒಟ್ಟಾರೆ ಈ ಯುದ್ಧದಲ್ಲಿ ಇದುವರೆಗೂ ಅಂದಾಜು 10 ಸಾವಿರ ಪ್ರಾಣಗಳು ಬಲಿಯಾಗಿವೆ. ಈ ಸಂಖ್ಯೆ ಇನ್ನಷ್ಟು ಹೆಚ್ಚುವ ಸಾಧ್ಯತೆಗಳಿವೆ ಎಂದು ವರದಿಗಳು ತಿಳಿಸಿವೆ. ತುರ್ತು ಕದನ ವಿರಾಮ ಘೋಷಣೆ ಮಾಡುವಂತೆ ವಿಶ್ವಸಂಸ್ಥೆ ನಿರ್ಣಯ ಅಂಗೀಕರಿಸಿದ್ದರೂ ಇದಕ್ಕೆ ಬಗ್ಗದ ಇಸ್ರೇಲ್, ಹಮಾಸ್ ವಿರುದ್ಧ ಯುದ್ಧವನ್ನು ಮುಂದುವರೆಸಿದೆ ಇಸ್ರೇಲ್ ಗಾಜಾಪಟ್ಟಿಗೆ ಇರುವ ಎಲ್ಲ ಸಂಪರ್ಕಗಳನ್ನು ತೆಗೆದು ಹಾಕುವ ದಾಳಿಯನ್ನು ಮುಂದುವರೆಸಿದೆ. ಈ ನಡುವೆ ಹೆಚ್ಚಿನ ಗಾಜಾ ನಿವಾಸಿಗಳು ಯುದ್ಧದಿಂದಾಗಿ ಗಾಜಾದ ದಕ್ಷಿಣ ಭಾಗಕ್ಕೆ ಪಲಾಯನ ಮಾಡಿದ್ದಾರೆ ಎಂದು ಇಸ್ರೇಲ್ ಹೇಳಿದೆ.

ಲೈಫ್ ಸೈನ್ಸ್, ಮೆಡಿಕಲ್ ಸೈನ್ಸ್ ಸೇರಿ ಸಂಶೋಧನೆ ನಡೆಸಿದರೆ ಉತ್ತಮ ಫಲಿತಾಂಶ

ಅಮೆರಿಕಾದ ಬ್ಯಾಪಿಸ್ಟ್ ಹೆಲ್ತ್ ಫ್ಲೋರಿಡಾದ ಮಿಯಾಮಿ ಕ್ಯಾನ್ಸರ್ ಸಂಸ್ಥೆ ನಿರ್ದೇಶಕ ಡಾ. ಮುರುಗೇಶನ್ ಮನೋಹರ್ ಸಲಹೆ



ಮೈಸೂರು, ಅ.30(ಬಿಎಲ್‌ಯು)– ಇತ್ತೀಚಿನ ವರ್ಷಗಳಲ್ಲಿ ಮನುಷ್ಯನಲ್ಲಿ ಹಲವು ವಿಧದ ಕ್ಯಾನ್ಸರ್ ಕಾಣಿಸಿಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಆಳವಾದ ಅಧ್ಯಯನದ ಮೂಲಕ ಪರಿಣಾಮಕಾರಿ ಔಷಧಿ ಸಂಶೋಧಿಸಬೇಕಿದೆ ಎಂದು ಅಮೆರಿಕಾದ ಬ್ಯಾಪಿಸ್ಟ್ ಹೆಲ್ತ್ ಫ್ಲೋರಿಡಾದ ಮಿಯಾಮಿ ಕ್ಯಾನ್ಸರ್ ಇನ್ಸ್ಟಿಟ್ಯೂಟ್‌ನ ನಿರ್ದೇಶಕ ಡಾ.ಮುರುಗೇಶನ್ ಮನೋಹರನ್ ಸಲಹೆ ನೀಡಿದ್ದಾರೆ.

ಮೈಸೂರಿನ ಶ್ರೀಶಿವರಾತ್ರೀಶ್ವರ ನಗರದ ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನಲ್ಲಿ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಆಯೋಜಿಸಿದ್ದ ಜೆನೆಟಿಕ್ಸ್ ಅಂಡ್ ಎಪಿಜೆನೆಟಿಕ್ಸ್ ಆಫ್ ಕ್ಯಾನ್ಸರ್ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಲೈಫ್ ಸೈನ್ಸ್ ಮತ್ತು ಮೆಡಿಕಲ್ಸ್ ಸೈನ್ಸ್ ಸೇರಿ ಸಂಶೋಧನೆ ಮಾಡಿದರೆ ಉತ್ತಮ ಫಲಿತಾಂಶ ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಹೀಗೆ ಸಂಶೋಧಿತ ಔಷಧಿಗಳು ಪರಿಣಾಮಕಾರಿಯಾಗಿರುತ್ತವೆ. ಕ್ಯಾನ್ಸರ್‌ನಿಂದ ಬಳಲುತ್ತಿರುವ ರೋಗಿಗಳಿಗೆ ಇದರಿಂದ ಬಹಳ ಅನುಕೂಲವಾಗುತ್ತದೆ ಈ ಹಿನ್ನೆಲೆಯಲ್ಲಿ ಜೆಎಸ್‌ಎಸ್ ಸಂಸ್ಥೆಯು ಸಂಶೋಧನಾ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಪ್ರಶಂಸಿಸಿದರು.

ಈ ವೇಳೆ ಮಾತನಾಡಿದ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಸಮ ಕುಲಾಧಿಪತಿ ಡಾ.ಸುರೇಶ್ ಬೋಜರಾಜ್, ಭಾರತದಿಂದ ಅಮೆರಿಕಾಗೆ ಹೋಗಿ ಸಂಶೋಧನಾ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಡಾ.ಮುರುಗೇಶನ್ ಮನೋಹರನ್ ಅವರ ಚಿಂತನೆ ಹಲವು ರೀತಿಯಲ್ಲಿ ಪ್ರಯೋಜನಕಾರಿಯಾಗಿದೆ. ಈ ಕಾರಣದಿಂದಲೇ ಅಮೆರಿಕಾದಲ್ಲಿ ಅವರು ಗಟ್ಟಿಯಾಗಿ ನೆಲೆಗೊಳ್ಳಲು ಸಾಧ್ಯವಾಗಿದೆ ಎಂದು ಹೇಳಿದರು.

ತರುವಾಯ ಮಾತನಾಡಿದ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಉಪ ಕುಲಪತಿ ಡಾ. ಸುರೀಂಧರ್ ಸಿಂಗ್, ಲೈಫ್ ಸೈನ್ಸ್‌ನಲ್ಲಿ ಸಂಶೋಧನೆ ಮಾಡುವವರಿಗೆ ಜೆಎಸ್‌ಎಸ್ ಸಂಸ್ಥೆ ಹೆಚ್ಚಿನ ಉತ್ತೇಜನ ನೀಡುತ್ತಿದೆ. ಈಗಾಗಲೇ ನಾಲ್ವರು ವಿದ್ಯಾರ್ಥಿಗಳಿಗೆ ಫೆಲೋಶಿಪ್ ಕೊಟ್ಟು ವಿದೇಶಕ್ಕೆ ಕಳುಹಿಸಲಾಗಿದೆ ಈ ಮೂಲಕ ಸಂಶೋಧನಾ ಕಾರ್ಯ ಕೈಗೊಳ್ಳುವವರಿಗೆ ಸಂಸ್ಥೆ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಭರವಸೆ ನೀಡಿದರು.

ಅಕಾಡೆಮಿಯ ಸ್ಕೂಲ್ ಆಫ್ ಲೈಫ್ ಸೈನ್ಸ್ ಡೀನ್ ಡಾ.ಕೆ.ಎ.ರವೀಶ, ಸಹ ಸಂಚಾಲಕ ಡಾ.ಎಂವಿಎಸ್‌ಎಸ್ ಟಿ ಸುಬ್ಬರಾವ್, ಡಾ.ಡಿ.ಗುರುಕುಮಾರ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.



ಮೈಸೂರು ಶ್ರೀ ಸುತ್ತೂರು ಮಠಕ್ಕೆ ವಿಜಯದಶಮಿಯಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ ನೀಡಿ, ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಗಳ ಆಶೀರ್ವಾದ ಪಡೆದರು.



ಮೈಸೂರಿನ ಚಾಮುಂಡಿಬೆಟ್ಟದ ಪಾದದಲ್ಲಿರುವ ಚಾಮುಂಡೇಶ್ವರಿ ಯುವಕರ ಸಂಘದ ವತಿಯಿಂದ ಪುನೀತ್ ರಾಜಕುಮಾರ್ ಪುಣ್ಯಸ್ಮರಣೆ ಅಂಗವಾಗಿ ಅನ್ನ ಸಂತರ್ಪಣೆ ಮಾಡಲಾಯಿತು. ಈ ವೇಳೆ ಯುವ ಮುಖಂಡ ಯದುನಂದನ್, ಸ್ನೇಕ್ ಮಂಜು, ನಿಶ್ಚಿತ್, ಶ್ರೀಕಾಂತ್, ಅನಂತ್, ರಮೇಶ್, ವೆಂಕಟೇಶ್, ಜಿ.ಜಿ.ಹರೀಶ್ ಗೌಡ, ಸಂತೋಷ್‌ಗೌಡ, ಪ್ರಸನ್ನ ಮತ್ತಿತರರಿದ್ದಾರೆ.



ಡಾ.ಪುನೀತ್ ರಾಜಕುಮಾರ್ ಯುವ ಸೇನೆ, ದತ್ತ ನಗರ ಮೈಸೂರು ಆಶ್ರಯದಲ್ಲಿ ದಿವಂಗತ ಡಾ.ಪುನೀತ್ ರಾಜಕುಮಾರ್ ಅವರ ಪುಣ್ಯಸ್ಮರಣೆ ಅಂಗವಾಗಿ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಲಾಯಿತು. ನಂತರ ಸಾವಿರಾರು ಅಭಿಮಾನಿಗಳಿಗೆ ಅನ್ನ ಸಂತರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಸಮಾಜ ಸೇವಕ ಶಿವರಾಜು, ಎಪಿಎಂಸಿ ಮಾಜಿ ಅಧ್ಯಕ್ಷ ಬಸವರಾಜು, ಆಯೋಜಕರಾದ ನಾಗರಾಜು, ನಾಗೇಂದ್ರ, ಮಹೇಶ್ ಪ್ರಸನ್ನ, ಪೆಂಡಾಲ್ ಮಹೇಶ್, ಪವನ್, ಸ್ವಾಮಿ, ಬಾಬಣ್ಣ ಪ್ರಜ್ವಲ್, ಅನಿಲ್, ವಿನು, ಪುನೀತ್ ಹೋಟೆಲ್ ಕುಮಾರ್, ಸರ್ವೇಶ್ ಮತ್ತಿತರರು ಉಪಸ್ಥಿತರಿದ್ದರು.

ದಿನೇ ದಿನೇ ಅಧಿಕಗೊಳ್ಳುತ್ತಿರುವ ಅಗ್ನಿ ದುರಂತಗಳು

● ಅಗತ್ಯ ಕ್ರಮಕ್ಕೆ ಕಂದಾಯ ಸಚಿವ ಕೃಷ್ಣ ಭೈರೇಗೌಡ ಸೂಚನೆ ● ಅಗ್ನಿಶಾಮಕ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಂತರ ಕಟ್ಟಾದೇಶ



ಬೆಂಗಳೂರು, ಅ.30(ಕೆಎಂಶಿ) – ನಗರದಲ್ಲಿ ಅಗ್ನಿ ದುರಂತಗಳಿಂದ ಪ್ರಾಣಾಪಾಯಗಳು ಹೆಚ್ಚುತ್ತಿದೆ. ಜನಸಾಮಾನ್ಯರಲ್ಲೂ ಆತಂಕ ಮನೆ ಮಾಡಿವೆ. ಅಗ್ನಿ ದುರಂತಗಳು ಸಂಭವಿಸದಂತೆ ಮುನ್ನೆಚ್ಚರಿಕಾ ಕ್ರಮ ವಹಿಸಬೇಕು, ಅಗ್ನಿ ಶಾಮಕದಳವನ್ನೂ ಉನ್ನತೀಕರಣಗೊಳಿಸಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಸೂಚಿಸಿದರು.

ವಿಕಾಸಸೌಧದಲ್ಲಿ ಅಗ್ನಿ ಶಾಮಕದಳ ಪೊಲೀಸ್ ಮಹಾ ನಿರ್ದೇಶಕ ಕಮಲ್ ಪಂತ್ ಅವರ ಜೊತೆಗಿನ ಸಭೆಯಲ್ಲಿ ಮಾತನಾಡಿದ ಅವರು, ಕಳೆದ 20 ದಿನಗಳ ಅವಧಿಯಲ್ಲಿ ಬೆಂಗಳೂರಿನಲ್ಲೇ ಮೂರು ಕಡೆಗಳಲ್ಲಿ ಅಗ್ನಿ ಅನಾಹುತಗಳು ಸಂಭವಿಸಿವೆ. ನಗರ ಭಾಗಗಳೂ ಸೇರಿದಂತೆ ರಾಜ್ಯಾದ್ಯಂತ ಅಗ್ನಿ ದುರಂತಗಳು ಸಂಭವಿಸದಂತೆ ಅಗ್ನಿಶಾಮಕ ದಳ ತಡೆಯುವಂತಾಗಬೇಕು ಎಂದು ಸಲಹೆ ನೀಡಿದರು.



ಅತ್ತಿಬೆಲೆ ಪಟಾಕಿ ಗೋದಾಮಿನ ದುರಂತದಲ್ಲಿ ತಮಿಳುನಾಡು ಮೂಲದ 13 ಕಾರ್ಮಿಕರು ಮೃತಪಟ್ಟಿದ್ದರು. ಅ.19 ರಂದು ಕೋರಮಂಗಲದ ಮಡ್‌ಪೈಪ್ ಅನ್ನೋ ರೆಸ್ಟೋಕೆಫೆ ಅಗ್ನಿ ದುರಂತಕ್ಕೆ ಈಡಾಗಿತ್ತು. ಈ ದುರಂತದಲ್ಲಿ ಇಬ್ಬರು ಮೃತಪಟ್ಟಿದ್ದರೆ, ಹಲವರು ಗಾಯಾಳುಗಳಾಗಿದ್ದರು. ಇದರ ಬೆನ್ನಿಗೆ ಕಳೆದ ಶನಿವಾರ ಹಜ್ ಭವನವೂ ಬೆಂಕಿಗೆ ಆಹುತಿಯಾಗಿದ್ದು ಕನಿಷ್ಠ 3 ಕೋಟಿ ನಷ್ಟವಾಗಿದೆ. ಇಂತಹ ದುರಂತಗಳಿಗೆ ಕಾರಣವೇನು? ಇದನ್ನು ತಡೆಯಲು ತೆಗೆದುಕೊಳ್ಳಬೇಕಾದ ಕ್ರಮಗಳೇನು? ಎಂಬ ಕುರಿತು ಅಗ್ನಿಶಾಮಕ ದಳ ಚಿಂತನೆ ನಡೆಸಬೇಕಿದೆ ಎಂದರು.

ಅಲ್ಲದೆ, ಅಗ್ನಿಶಾಮಕ ದಳದ ಉನ್ನತೀಕರಣಗಳ ಬಗ್ಗೆಯೂ ಗಮನಹಿಸಬೇಕಿದೆ. ಇದರ ಜೊತೆಗೆ ಹೊಸ ಕಟ್ಟಡಗಳ ನಿರ್ಮಾಣಕ್ಕೆ ಅನುಮತಿ ನೀಡುವಾಗಲೇ ಅಗ್ನಿ ದುರಂತ ತಡೆಗೆ ತೆಗೆದುಕೊಳ್ಳಲಾಗಿರುವ ಕ್ರಮಗಳ ಬಗ್ಗೆಯೂ ಪರಿಶೀಲಿಸಿ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಅಗ್ನಿಶಾಮಕ ದಳದ ಉನ್ನತೀಕರಣ ಹಾಗೂ ಹೊಸ ಅಗ್ನಿಶಾಮಕ ದಳಗಳನ್ನು ಸ್ಥಾಪಿಸುವ ಕುರಿತ ಕ್ರಿಯಾ ಯೋಜನೆ ಮಂಡಿಸಿದ ಅಗ್ನಿಶಾಮಕ ದಳ ಪೊಲೀಸ್ ಮಹಾ ನಿರ್ದೇಶಕ ಕಮಲ್ ಪಂತ್, ಉಡುಪಿ ಜಿಲ್ಲೆಯ ಮಣಿಪಾಲ್, ದಾವಣಗೆರೆಯ–ನ್ಯಾಮತಿ, ವಿಜಯಪುರ ಜಿಲ್ಲೆಯ ನಿಡಗುಂದಿ–ಬಬಲೇಶ್ವರ್, ರಾಯಚೂರಿನ ಮಸ್ಕಿ ಬೆಳಗಾವಿಯ ಮುದಲಗಿ, ಬಳ್ಳಾರಿಯ ಕಂಪ್ಲಿ ಹಾಗೂ ಕಲಬುರಗಿ ಷಹಾಬಾದ್ ಭಾಗದಲ್ಲಿ ನೂತನ ಅಗ್ನಿಶಾಮಕ ದಳ ಸ್ಥಾಪಿಸುವ ಪ್ರಸ್ತಾವವನ್ನು ಮಂಡಿಸಿದರು.

ಬೆಂಗಳೂರು ಸೇರಿದಂತೆ ನಗರ ಭಾಗದಲ್ಲಿ ಸಂಭವಿಸುತ್ತಿರುವ ಅಗ್ನಿ ಅವಘಡಗಳ ತಡೆಗೆ ಏನೆಲ್ಲಾ ಕ್ರಮಗಳನ್ನು ತೆಗೆದುಕೊಳ್ಳಬಹುದು? ಎಂಬ ಕುರಿತು ಶೀಘ್ರದಲ್ಲೇ ಇಲಾಖೆಗೆ ವರದಿ ನೀಡುವುದಾಗಿಯೂ ಅವರು ತಿಳಿಸಿದರು.



ನವರಾತ್ರಿಯ ಅಂಗವಾಗಿ ಶೃಂಗೇರಿಯ ಶಂಕರ ಮಠದಲ್ಲಿ ಶಾರದಾ ಪರಮೇಶ್ವರಿಗೆ ಗಾಯತ್ರಿ ದೇವಿ ವಿಶೇಷ ಅಲಂಕಾರ, ಹೋಮ, ಅಭಿಷೇಕ, ಪ್ರಸಾದ ವಿನಿಯೋಗ ಏರ್ಪಡಿಸಲಾಗಿತ್ತು. ಇದರೊಂದಿಗೆ ನವರಾತ್ರಿ ಉತ್ಸವ ಸಂಪನ್ನಗೊಂಡಿತು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿ ಕೃಪೆಗೆ ಪಾತ್ರರಾದರು.

ಅದ್ದೂರಿ ಕನ್ನಡ ರಾಜ್ಯೋತ್ಸವಕ್ಕೆ ಬೆಂಬಲಿಸಿ: ಶಾಸಕ ಹರೀಶ್‌ಗೌಡ ಮನವಿ

ಮೈಸೂರು, ಅ. 30– ಕರ್ನಾಟಕ ಎಂದು ನಾಮಕರಣಗೊಂಡು ಐವತ್ತು ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಈ ಬಾರಿ ಕನ್ನಡ ರಾಜ್ಯೋತ್ಸವವನ್ನು ವಿಶೇಷವಾಗಿ ಆಚರಿಸಲಾಗುವುದು ಎಂದು ಶಾಸಕ ಹರೀಶ್‌ಗೌಡ ಹೇಳಿದರು.

ಕರ್ನಾಟಕ ಹಿತರಕ್ಷಣಾ ವೇದಿಕೆಯ ಸದಸ್ಯರೊಂದಿಗೆ ಕನ್ನಡ ರಾಜ್ಯೋತ್ಸವದ 50ನೇ ವರ್ಷದ ಸಂಭ್ರಮದ ಹಿನ್ನೆಲೆಯಲ್ಲಿ ಮೈಸೂರಿನ ಡಿ ದೇವರಾಜ ಅರಸು ರಸ್ತೆಯಲ್ಲಿ ಪ್ರತಿ ಅಂಗಡಿಗಳಿಗೆ ಕನ್ನಡ ಬಾವುಟ ನೀಡಿ ಪ್ರತಿಯೊಬ್ಬರೂ ಈ ಕನ್ನಡ ಹಬ್ಬದಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಶಾಸಕರು, ಮಾಜಿ ಮುಖ್ಯಮಂತ್ರಿ, ರಾಜ್ಯ ಕಂಡ ಧೀಮಂತ ನಾಯಕ, ಮುತ್ಸದ್ದಿ ರಾಜಕಾರಣಿ ಡಿ. ದೇವರಾಜ ಅರಸು ಅವರು ಕರ್ನಾಟಕ ಎಂದು ಘೋಷಿಸಿ ಇಲ್ಲಿಗೆ 50 ವರ್ಷ ತುಂಬಿದೆ. ಹಾಗಾಗಿ ಈ ಬಾರಿ ರಾಜ್ಯೋತ್ಸವವನ್ನು ವಿಶೇಷವಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಇಲ್ಲಿನ ಪ್ರತಿ ಅಂಗಡಿಗಳಿಗೂ ಕನ್ನಡತಾಯಿ ಭುವನೇಶ್ವರಿ ಚಿತ್ರ ಇರುವ ಬಾವುಟ ಹಾಗೂ



ಮತ್ತು ಕನ್ನಡದ ಶಲ್ಯವನ್ನು ನೀಡಿ ಎಲ್ಲರೂ ರಾಜ್ಯೋತ್ಸವದಲ್ಲಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದ್ದೇವೆ ಎಂದು ಹೇಳಿದರು.

ರಾಜಸ್ಥಾನ, ಗುಜರಾತಿ ಹೀಗೆ ಹೊರ ರಾಜ್ಯಗಳಿಂದ ಬಂದಿರುವ ವ್ಯಾಪಾರಗಾರರು, ಮುಸಲ್ಮಾನರು, ಸ್ಥಳೀಯರು ಎಲ್ಲರೂ ಸೇರಿ ಜಾತ್ಯಾತೀತವಾಗಿ, ಪಕ್ಷಾತೀತವಾಗಿ ಧರ್ಮಾತೀತವಾಗಿ ಕನ್ನಡ ರಾಜ್ಯೋತ್ಸವವನ್ನು ಅದ್ದೂರಿಯಾಗಿ, ವಿಶೇಷವಾಗಿ ಆಚರಿಸಬೇಕೆಂದು ಹರೀಶ್‌ಗೌಡ ಕೋರಿದರು.

ಪ್ರತಿ ಅಂಗಡಿಯವರಿಗೂ ಕನ್ನಡದ ಧ್ವಜ ಕೊಡುತ್ತಿದ್ದೇವೆ. ಎಲ್ಲರೂ ಈ ಬಾರಿಯ ವಿಶೇಷ ರಾಜ್ಯೋತ್ಸವಕ್ಕೆ ಬೆಂಬಲ ನೀಡಬೇಕೆಂದು ಅವರು ಮನವಿ ಮಾಡಿದರು.

ಈ ವೇಳೆ ಕರ್ನಾಟಕ ಹಿತರಕ್ಷಣಾ ವೇದಿಕೆಯ ಅಧ್ಯಕ್ಷ ವಿನಯ್ ಕುಮಾರ್, ಗೌರವಾಧ್ಯಕ್ಷ ವೀರಣ್ಣಗೌಡ, ಕಾರ್ಯದರ್ಶಿ ರವಿ, ಮುಡಾ ಮಾಜಿ ಸದಸ್ಯ ನವೀನ್ ಕುಮಾರ್, ಪ್ರಮೋದ್ ಗೌಡ, ಗುರುರಾಜ್ ಶೆಟ್ಟಿ, ರವಿಚಂದ್ರ, ನಿತಿನ್, ನಂಜುಂಡಿ, ಸಂತೋಷ್, ಕಾಂತಿಲಾಲ್ ಜೈನ್, ಶರವಣ, ನವೀನ, ಮತ್ತಿತರರು ಹಾಜರಿದ್ದರು.

ಹೊಸ ತಳಿಗಳ ತ್ವರಿತ ಬೀಜ ವಿತರಣೆ ಸಂಬಂಧ ರಾಜ್ಯ ಬೀಜ ನಿಗಮ–ಹೈದರಾಬಾದ್ ಸಂಸ್ಥೆ ಒಡಂಬಡಿಕೆ

ಬೆಂಗಳೂರು, ಅ.30(ಕೆಎಂಶಿ)– ವಿವಿಧ ಬೆಳೆಗಳ ಹೊಸ ತಳಿಗಳ ತ್ವರಿತ ಬೀಜ ವಿತರಣೆ ವಿಷಯಗಳ ಕುರಿತು ಇಂದು ಕರ್ನಾಟಕ ರಾಜ್ಯ ಬೀಜ ನಿಗಮ ಮತ್ತು ಹೈದರಾಬಾದಿನ ಅಂತಾರಾಷ್ಟ್ರೀಯ ಬೆಳೆ ಸಂಶೋಧನಾ ಸಂಸ್ಥೆ ಮಹತ್ವದ ಒಡಂಬಡಿಕೆಗೆ ಸಹಿ ಮಾಡಿವೆ.

ಕೃಷಿ ಸಚಿವ ಚಲುವರಾಯಸ್ವಾಮಿ ಸಮ್ಮುಖದಲ್ಲಿ ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರಾದ ಹೆಚ್.ಎಸ್.ದೇವರಾಜ ಮತ್ತು ಹೈದರಾಬಾದ್‌ನ ICRISATನ ಉಪ ಮಹಾ ನಿರ್ದೇಶಕರಾದ ಡಾ. ಅರವಿಂದ ಕುಮಾರ್ ಅವರು ಈ ಒಡಂಬಡಿಕೆಗೆ ಸಹಿ ಹಾಕಿದರು.

ಕರ್ನಾಟಕ ರಾಜ್ಯ ಬೀಜ ನಿಗಮವು ರಾಜ್ಯ ಸರ್ಕಾರದ ಅಂಗ ಸಂಸ್ಥೆಯಾಗಿದ್ದು, ರೈತರಿಗೆ ಗುಣಮಟ್ಟದ ಬೀಜ ಪೂರೈಕೆ ಮಾಡುವಲ್ಲಿ ರಾಜ್ಯದಲ್ಲಿ ಮುಂಚೂಣಿ ಸ್ಥಾನದಲ್ಲಿದೆ. ವರ್ಷಕ್ಕೆ ಸರಾಸರಿ ಮೂರೂವರೆ ಲಕ್ಷ ಕ್ವಿಂಟಲ್ ಬೀಜ ಸರಬರಾಜು ಮಾಡುತ್ತಿದ್ದು, ಉತ್ತಮ ಗುಣಮಟ್ಟದ ಬೀಜ ಪೂರೈಕೆ ಸೌಲಭ್ಯಗಳನ್ನು ಹೊಂದಿದೆ.

ICRISAT ಒಂದು ಅಂತಾರಾಷ್ಟ್ರೀಯ ಬೆಳೆ ತಳಿ ಸಂಶೋಧನಾ ಕೇಂದ್ರವಾಗಿದ್ದು ಹೊಸ ತಂತ್ರಜ್ಞಾನದ ಮೂಲಕ ಅರೆ ಶುಷ್ಕ ವಾತಾವರಣಕ್ಕೆ ಹೊಂದಿಕೊಳ್ಳುವ ಹೊಸ ತಳಿಗಳನ್ನು ಅಭಿವೃದ್ಧಿಪಡಿಸಿ ರೈತರಿಗೆ ಪರಿಚಯಿಸುತ್ತಿದೆ. ಈಗಾಗಲೇ ಈ ಸಂಸ್ಥೆಯು ಅಭಿವೃದ್ಧಿಪಡಿಸಿದ ಶೇಂಗಾ, ತೊಗರಿ, ಜೋಳ, ಕಡಲೆ ಮತ್ತು ಸಜ್ಜೆ ತಳಿಗಳು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಪ್ರಚಲಿತದಲ್ಲಿವೆ. ಈ ಒಡಂಬಡಿಕೆಯಿಂದ ಕರ್ನಾಟಕ ರಾಜ್ಯ ಬೀಜ ನಿಗಮಕ್ಕೆ ICRISATನ ಹೊಸ ತಳಿಗಳು ಲಭ್ಯವಾಗಲಿದ್ದು ಸಂಸ್ಥೆಯ ಉತ್ಪನ್ನಗಳ ಪಟ್ಟಿ ಬಲಿಷ್ಠವಾಗುತ್ತದೆ. ಇದರಿಂದ ರೈತರಿಗೆ ತೊಗರಿ, ಕಡಲೆ, ಜೋಳ, ಸಜ್ಜೆ, ಮತ್ತು ಸಿರಿಧಾನ್ಯಗಳಲ್ಲಿ ಹೊಸ ಶಕ್ತಿ ವರ್ಧಕ ತಳಿಗಳನ್ನು ಪರಿಚಯಿಸಲು ಅನುಕೂಲವಾಗುತ್ತದೆ.

ಈ ಹೊಸ ತಳಿಗಳನ್ನು ಕೆಎಸ್‌ಎಸ್‌ಸಿಯ ತಳಿ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರ ಧಾರವಾಡದಲ್ಲಿ ಹಾಗೂ ಕೃಷಿ ವಿಶ್ವವಿದ್ಯಾಲಯಗಳ ಸಹಯೋಗದಲ್ಲಿ ಮೌಲ್ಯವೀಕರಣ ಮಾಡಿ ವಿವಿಧ ಬೆಳೆಗಳಲ್ಲಿ ಹೊಸ ತಳಿ ಬಿಡುಗಡೆ ಮಾಡಲು ಸಹಾಯವಾಗುತ್ತದೆ. ಒಟ್ಟಾರೆ ಮೂರು ವರ್ಷಗಳ ಒಡಂಬಡಿಕೆಯ ಅವಧಿಯಲ್ಲಿ, ಬರ ಮತ್ತು ರೋಗ ನಿರೋಧಕ ತಳಿಗಳನ್ನು ರಾಜ್ಯದ ರೈತರಿಗೆ ತ್ವರಿತವಾಗಿ ತಲುಪಿಸಲು ಉಪಯೋಗವಾಗುತ್ತದೆ. ಹಾಗೂ ಈ ಬೆಳೆಗಳಲ್ಲಿ ರಾಜ್ಯದ ಸರಾಸರಿ ಉತ್ಪಾದಕತೆಯನ್ನು ಹೆಚ್ಚಿಸಲು ಅನುಕೂಲವಾಗುತ್ತದೆ.

ನೊಂದವರ ಸಂತೈಸುವ ಔಷಧದಂತೆ ಸಾಹಿತ್ಯ ಕೆಲಸ ಮಾಡಲಿ...

ಸಾಹಿತಿ ಡಾ.ಕೆ.ಷರೀಫಾರಿಂದ ಮಾನವೀಯ ಸಂದೇಶ



ಮೈಸೂರು: ಸಾಹಿತ್ಯ ನೊಂದವರನ್ನು ಸಂತೈಸುವ ಔಷಧದಂತೆ ಕೆಲಸ ಮಾಡಬೇಕು ಎಂದು ಸಾಹಿತಿ ಡಾ.ಕೆ.ಷರೀಫಾ ಹೇಳಿದರು. ಸ್ವಜನ್ಯ ಕಲಾ ವೇದಿಕೆ ವತಿಯಿಂದ ಬೋಗಾದಿಯ ಧ್ವನ್ಯಾಲೋಕದಲ್ಲಿ ಆಯೋಜಿಸಿದ್ದ ಗಿರಿಜಾಶಾಸ್ತ್ರಿ ಅವರ 'ಸಿದ್ಧಮಾದರಿಗಳಾಚೆಗೆ' ಕೃತಿ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಾಹಿತ್ಯ ಇದೀಗ ಮನರಂಜನಾ ವಸ್ತುವಾಗುವ ಅಪಾಯಕ್ಕೆ ಸಿಲುಕಿಕೊಂಡಿದೆ. ಇಂತಹ ಸಂದಿಗ್ಧದಲ್ಲಿ ಸತ್ಯ ಹೇಳುವ ಧೈರ್ಯ ಪ್ರವೃತ್ತಿ ಕಡಿಮೆಯಾಗಿದೆ. ಕೋಮುವಾದ, ಮೂಲಭೂತವಾದ ವಿಜೃಂಭಿಸುತ್ತಿವೆ. ಇಂತಹ ಸಂದರ್ಭದಲ್ಲಿ ನೊಂದವರನ್ನು ಸಂತೈಸುವ, ಸಾಮಾಜಿಕ ಆರೋಗ್ಯ ಕಾಯ್ದುಕೊಳ್ಳುವ ಕೆಲಸವನ್ನು ಸಾಹಿತ್ಯ ಮಾಡಬೇಕಿದೆ ಎಂದರು.

ಜಾಗತೀಕರಣದಲ್ಲಿ ಶತ್ರು ಕಾಣುತ್ತಿಲ್ಲ: ಬಂಡಾಯ ಸಾಹಿತ್ಯ ಕಾಲಘಟ್ಟದಲ್ಲಿ ಶತ್ರು ಎದುರಿಗೆ ಕಾಣುತ್ತಿದ್ದರು. ನೇರವಾಗಿ ಆತನೊಂದಿಗೆ ಸೆಣಸಾಟ ಮಾಡುತ್ತಿದ್ದೆವು. ಆದರೀಗ ಜಾಗತೀಕರಣದಲ್ಲಿ ಶತ್ರು ಕಾಣುತ್ತಿಲ್ಲ. ರಾಜಕೀಯ ಆಟದ ಮಧ್ಯೆ ಅಡಗಿ ಕುಳಿತುಕೊಂಡಿದ್ದಾನೆ. ಈ ಅಗೋಚರ ಶತ್ರುಗಳೆಲ್ಲ ಒಂದಾಗಿದ್ದಾರೆ. ಯಾರೊಂದಿಗೆ ಹೋರಾಟ ಮಾಡಬೇಕೆಂಬುದೇ ಗೊತ್ತಾಗುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದರು.

ಸಾಹಿತ್ಯ ಚರಿತ್ರೆಯಲ್ಲಿ ಲೇಖಕಿಯರು ನಿರ್ಲಕ್ಷ್ಯಕ್ಕೆ ಒಳಪಟ್ಟಿದ್ದಾರೆ. ಕವಯಿತ್ರಿ ವಿಜಯದಬ್ಬೆ ಮಹಿಳಾ ಸಾಹಿತ್ಯ ಚರಿತ್ರೆ ರಚಿಸುವ ಪ್ರಯತ್ನ ಮಾಡಿದ್ದರು. ಇವರ ದಾರಿಯಲ್ಲೇ ಲೇಖಕಿ ಗಿರಿಜಾಶಾಸ್ತ್ರಿ ಸಾಗುತ್ತಿದ್ದಾರೆ. ಮುಂಬೈನಲ್ಲಿದ್ದು ಕನ್ನಡದ ನಂಟು ಬೆಸೆದ ಗಿರಿಜಾಶಾಸ್ತ್ರಿ ಪಾರಂಪರಿಕ ದಾರಿ ಬಿಟ್ಟು ತಮ್ಮದೇ ಹೊಸ ದಾರಿಯಲ್ಲಿ ನಡೆಯುವ ಧೈರ್ಯ ಪ್ರದರ್ಶಿಸಿದ್ದಾರೆ. ಇದು ಈಗಿನ ಸಾಹಿತ್ಯಕ್ಕೆ ಹೊಸ ತಿರುವು ನೀಡಬಹುದು. ವೈಚಾರಿಕ ಸ್ಪಷ್ಟತೆ, ಮೊನಚು, ಆರ್ದ್ರವಾದ ಹೃದಯ ಶ್ರೀಮಂತಿಕೆ ಇವರ ಬರಹದಲ್ಲಿ ಎದ್ದುಕಾಣುತ್ತದೆ ಎಂದರು. ಗಿರಿಜಾಶಾಸ್ತ್ರಿ ಅವರ ಬರಹಗಳು ಪಾರಂಪರಿಕವಾಗಿ ರೂಪುಗೊಂಡ ಸ್ಥಾಪಿತ ಮೌಲ್ಯ ಧಿಕ್ಕರಿಸುತ್ತವೆ. ಇವರ ಬರಹಗಳು ಯುವ ಜನರಿಗೆ ಅಗತ್ಯವಾಗಿವೆ. ಆದ್ದರಿಂದ ಯುವ ಮನಸ್ಸುಗಳು ಇವರ ಕೃತಿಗಳನ್ನು ಓದಬೇಕು ಎಂದರು. ನಿವೃತ್ತ ಕನ್ನಡ ಪ್ರಾಧ್ಯಾಪಕ ಎ.ವಿ.ನಾರಾಯಣಸ್ವಾಮಿ ಮಾತನಾಡಿ, ಜನರು ಜಾತಿ, ಧರ್ಮ, ಕುಲ–ಗೋತ್ರವನ್ನು ಬದಿಗಿಟ್ಟು ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸೌಹಾರ್ದತೆಯಿಂದ ಬಾಳಬೇಕಿದೆ. ಇದುವೇ ಮನುಷ್ಯ ಗುಣ ಎಂದರು.

ಶಿವಮೊಗ್ಗ ಜಿಲ್ಲೆ ಸಾಗರ ತಾಲೂಕಿನ ಆನಂದಪುರದಲ್ಲಿ ಮೊಹರಂ ಹಬ್ಬವನ್ನು ಹಿಂದುಗಳು ಆಚರಿಸುತ್ತಾರೆ. ಉತ್ತರ ಭಾರತದ ಹಳ್ಳಿಯೊಂದರ ಮಸೀದಿಯಲ್ಲಿ ನಮಾಜ್ ಮಾಡುವ ಸಂದರ್ಭದಲ್ಲಿ ಹಿಂದುಗಳು ಆಝಾನ್ ಕೂಗುತ್ತಾರೆ. ಹಿಂದುಗಳು ಸಾಮೂಹಿಕ ಪ್ರಾರ್ಥನೆಯನ್ನೂ ಮಾಡುತ್ತಾರೆ. ಕೊರೊನಾ ಕಾಲದಲ್ಲಿ ಮುಸ್ಲಿಂ ಯುವಕರು ಹಿಂದು ವ್ಯಕ್ತಿಯ ಉತ್ತರಕ್ರಿಯಾದಿ ನಡೆಸಿದರು. ಇದು ಸೌಹಾರ್ದತೆ ಪ್ರತೀಕ. ಇದನ್ನು ನೋಡಿ ಕಲಿಯುವುದು ಬಹಳಷ್ಟು ಇದೆ ಎಂದರು. ಸಾಹಿತಿ ಡಾ.ಕಾಳೇಗೌಡ ನಾಗವಾರ, ಲೇಖಕಿ ಗಿರಿಜಾಶಾಸ್ತ್ರಿ, ಪ್ರಕಾಶಕ ಯು.ಎಸ್.ಮಹೇಶ್, ವೇದಿಕೆಯ ಅಧ್ಯಕ್ಷ ಎಸ್.ಶಿಶಿರಂಜನ್ ಇದ್ದರು.



ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ವತಿಯಿಂದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಹಾಗೂ ರಾಷ್ಟ್ರಪಿತ ಮಹಾತ್ಮ ಗಾಂಧಿಯವರ ಜಯಂತಿಯನ್ನು ಆಚರಿಸಲಾಯಿತು. ಅಧ್ಯಕ್ಷರಾದ ಪಿ.ರಾಜೇಶ್ವರಿ, ಉಪಾಧ್ಯಕ್ಷ ಹೆಚ್.ಹರೀಶ್ ಕುಮಾರ್, ನಿರ್ದೇಶಕರಾದ ಕೆ.ಉಮಾಶಂಕರ್, ಎಂ.ರಾಮಕೃಷ್ಣ, ಆರ್.ರವಿಕುಮಾರ್, ಕಾರ್ಯದರ್ಶಿ ಹರ್ಷಿತ್‌ಗೌಡ ಮತ್ತಿತರರಿದ್ದರು.

ಕರ್ನಾಟಕದ ಕ್ರೀಡಾಪಟುಗಳಿಗೆ ನಗದು ಬಹುಮಾನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು, ಅ.30– 2021 ಮತ್ತು 22 ನೇ ಸಾಲಿನಲ್ಲಿ ರಾಷ್ಟ್ರಮಟ್ಟದಲ್ಲಿ ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಿ ಪದಕ ಪಡೆದ ಕರ್ನಾಟಕದ ಕ್ರೀಡಾಪಟುಗಳು ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತವನ್ನು ಪ್ರತಿನಿಧಿಸಿ ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿ ರಾಷ್ಟ್ರಕ್ಕೆ ಕೀರ್ತಿ ತಂದ ಕರ್ನಾಟಕದ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದ ವತಿಯಿಂದ ನಗದು ಪುರಸ್ಕಾರವನ್ನು ನೀಡಲಾಗುತ್ತಿದ್ದು, ಭಾರತ ಸರ್ಕಾರದಿಂದ ಅಂಗೀಕೃತವಾಗಿರುವ ಅಂತರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಭಾರತ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದ್ದಲ್ಲಿ, ಪದಕ ವಿಜೇತರಾಗಿದ್ದಲ್ಲಿ 50 ಸಾವಿರ ರೂ.ಗಳ ನಗದು ಪುರಸ್ಕಾರವನ್ನು ನೀಡಲಾಗುವುದು.

ಕ್ರೀಡಾಕೂಟಗಳಲ್ಲಿ ಪದಕ ಪಡೆಯುವ ಕ್ರೀಡಾಪಟುಗಳಿಗೆ ವಾರ್ಷಿಕ ಗರಿಷ್ಠ 5 ಲಕ್ಷ ಅಥವಾ ವಾರ್ಷಿಕ ಅತ್ಯುತ್ತಮ ಎರಡು ಸಾಧನೆಗಳನ್ನು ಪರಿಗಣಿಸಿ, ಯಾವುದು ಕಡಿಮೆಯೋ ಆ ಮೊತ್ತಕ್ಕೆ ನಗದು ಬಹುಮಾನವನ್ನು ನೀಡಲಾಗುವುದು. ಅದರಂತೆ ಕರ್ನಾಟಕವನ್ನು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಅಧಿಕೃತವಾಗಿ ಪ್ರತಿನಿಧಿಸಿ ಪದಕ ಪಡೆದ ಮತ್ತು ಭಾರತವನ್ನು ಅಧಿಕೃತವಾಗಿ ಪ್ರತಿನಿಧಿಸಿ ಅಂತರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಿದ ಕರ್ನಾಟಕದ ಅರ್ಹ ಕ್ರೀಡಾಪಟು ಗಳು ನ.25 ರೊಳಗೆ ಅರ್ಜಿಯನ್ನು ಕಚೇರಿಗೆ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಅಥವಾ ದೂ.ಸಂ: 0821–2564179 ಅನ್ನು ಸಂಪರ್ಕಿಸಬಹುದು ಎಂದು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಚಾಮುಂಡೇಶ್ವರಿ ದೇವಸ್ಥಾನದ ಪ್ರಧಾನ ಅರ್ಚಕರು ಹಾಗೂ ಧಾರ್ಮಿಕ ಮುಖಂಡರಾದ ಡಾ. ಶಶಿಶೇಖರ ದೀಕ್ಷಿತ್ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಚಾಮರಾಜ ಕ್ಷೇತ್ರದ ಇಂದಿರಾ ಬ್ಲಾಕ್ ಉಪಾಧ್ಯಕ್ಷ ರವಿ ಮಂಜೇಗೌಡನ ಕೊಪ್ಪಲು, ಸುನೀಲ್, ಪ್ರಶಾಂತ್, ಹರ್ಷ ಕಿರಂಗೂರು ಕುಮಾರ್ ಇನ್ನಿತರರು ಹೂಗುಚ್ಛ ನೀಡಿ, ಶುಭಾಶಯ ಕೋರಿದರು.

ಥಟ್ ಅಂತ ಉತ್ತರಿಸಿ ವಚನ ಸಾಹಿತ್ಯ ರಸಪ್ರಶ್ನೆ

ಚಿತ್ರದುರ್ಗ ಶಾಂತಮ್ಮಗೆ ಬಹುಮಾನ



ಮೈಸೂರು: ಶರಣು ವಿಶ್ವವಚನ ಫೌಂಡೇಷನ್ ವತಿಯಿಂದ ವಚನ ಸಾಹಿತ್ಯಕ್ಕೆ ಸಂಬಂಧಿಸಿದಂತೆ ಅಂತರ್ಜಾಲದ ಮೂಲಕ ನಡೆದ ಥಟ್ ಅಂತ ಉತ್ತರಿಸಿ 73ನೇ ವಚನ ಸಾಹಿತ್ಯ ರಸಪ್ರಶ್ನೆ ಕಾರ್ಯಕ್ರಮ ನಡೆಯಿತು. ಚಿತ್ರದುರ್ಗದ ಕೆ.ಟಿ ಶಾಂತಮ್ಮ ಎಲ್ಲಾ ಪ್ರಶ್ನೆಗಳಿಗೆ ಉತ್ತರಿಸುವುದರ ಮೂಲಕ ಬಹುಮಾನಕ್ಕೆ ಭಾಜನರಾಗಿದ್ದಾರೆ ಎಂದು ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕಿ ರೂಪ ಕುಮಾರಸ್ವಾಮಿ ತಿಳಿಸಿದ್ದಾರೆ.

'ಪರೀಕ್ಷಾ ಪೇ ಚರ್ಚಾ ಪ್ರಬಂಧ'; ಪ್ರಧಾನ ಮಂತ್ರಿಯವರಿಂದ ಸುತ್ತೂರು ಜೆಎಸ್‌ಎಸ್ ಶಾಲೆಯ ಶಿಕ್ಷಕ ವಿನೋದ್‌ಕುಮಾರ್‌ಗೆ ಪ್ರಶಂಸೆ



ಸುತ್ತೂರು, ಅ.30– ಸುತ್ತೂರಿನ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ವಿ.ವಿನೋದ್‌ಕುಮಾರ್, 'ಪರಿಕ್ಷಾ ಪೇ ಚರ್ಚಾ' ಸಂಬಂಧ ಪ್ರಬಂಧವನ್ನು ಪ್ರಧಾನಮಂತ್ರಿಗಳ ಕಚೇರಿಗೆ ಕಳುಹಿಸಿದ್ದರು. ಅವರನ್ನು ಪ್ರಧಾನ ಮಂತ್ರಿಗಳು ಅಭಿನಂದಿಸಿ, ಪ್ರಶಂಸಾ ಪತ್ರ ಕಳುಹಿಸಿದ್ದಾರೆ. ಈ ಪ್ರಬಂಧದಲ್ಲಿ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ಶಿಕ್ಷಣ ಹಾಗೂ ಪಠ್ಯಕ್ರಮದಲ್ಲಿ ಆಗಬೇಕಾದ ಬದಲಾವಣೆ, ತಂತ್ರಜ್ಞಾನ ಆಧಾರಿತ ಬೋಧನೆ, ಪ್ರಶ್ನೆಪತ್ರಿಕೆ ತಯಾರಿಕೆ ಮತ್ತು ವಿದ್ಯಾರ್ಥಿಗಳಲ್ಲಿ ಉತ್ತಮ ಕಲಿಕೆಯ ಜೊತೆಗೆ ಭವಿಷ್ಯದ ಸವಾಲುಗಳನ್ನು ಎದುರಿಸಲು ಮನೋಸ್ಥೈರ್ಯ ತುಂಬುವಂತಹ ಶಿಕ್ಷಣವನ್ನು ವಿದ್ಯಾರ್ಥಿಗಳಿಗೆ ನೀಡುವ ಕುರಿತು ಸಾವಿರ ಪದಗಳಲ್ಲಿ ಒಂದು ಪ್ರಬಂಧವನ್ನು ರಚಿಸಿ, ಪ್ರಧಾನ ಮಂತ್ರಿಗಳ ಕಚೇರಿಗೆ ಕಳುಹಿಸಲಾಗಿತ್ತು. ಈ ಸಂಬಂಧ ಪ್ರಧಾನಮಂತ್ರಿ ಯವರ ಕಚೇರಿಯಿಂದ ಪ್ರಶಂಸಾ ಪತ್ರವನ್ನು ವಿನೋದ್‌ಕುಮಾರ್ ಅವರಿಗೆ ಕಳುಹಿಸಲಾಗಿದೆ.

ದಸರಾ ಅಂಗವಾಗಿ ನಡೆದ ಯುವತಿಯರು, ಮಹಿಳೆಯರು, ಮಕ್ಕಳ ವೇಷಭೂಷಣ ಸ್ಪರ್ಧೆ

ಮೈಸೂರು, ಅ.30– ಮೈಸೂರಿನ ವಿಶ್ವೇಶ್ವರ ನಗರದಲ್ಲಿರುವ ಮಹರ್ಷಿ ಪಬ್ಲಿಕ್ ಶಾಲೆಯಲ್ಲಿ ಶ್ರೀ ದುರ್ಗಾ ಫೌಂಡೇಶನ್ ಹಾಗೂ ಮೇಕ್ ಸೊಸೈಟಿ ಸ್ಟೈಲ್ ಫೌಂಡೇಶನ್ ವತಿಯಿಂದ ದಸರಾ ಅಂಗವಾಗಿ ನಡೆದ ಯುವತಿಯರು, ಮಹಿಳೆಯರು ಮತ್ತು ಮಕ್ಕಳ ವೇಷಭೂಷಣ ಸ್ಪರ್ಧೆಯಲ್ಲಿ ಭಾಗವಹಿಸುವ ಮೂಲಕ ಗಮನ ಸೆಳೆದರು.



ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷರಾದ ರೇಖಾ ಶ್ರೀನಿವಾಸ್, ವೇಗವಾಗಿ ಬದಲಾಗುತ್ತಿರುವ ಇಂದಿನ ಜಗತ್ತಿಗೆ ಹೊಂದಿಕೊಂಡು ನಮ್ಮ ಸಂಸ್ಕೃತಿ, ಪರಂಪರೆಯನ್ನು ಸಂರಕ್ಷಿಸಿ ಮುಂದೆ ಸಾಗಬೇಕಾದ ಅನಿವಾರ್ಯತೆ ಮಹಿಳೆಯರಿಗಿದೆ. ಎಲ್ಲಿ ನಾರಿಯರನ್ನು ಗೌರವಿಸಲಾಗುತ್ತದೋ ಅಲ್ಲಿ ದೇವರು ವಾಸಿಸುತ್ತಾನೆ ಎಂಬುದು ಭಾರತೀಯರ ನಂಬಿಕೆ. ಹೀಗಾಗಿ ಮಹಿಳೆಯರು ಅಭಿಮಾನ ಪಡಬೇಕು. ಇಂತಹ ಕಾರ್ಯಕ್ರಮಗಳು ರೂಪ ಪಡೆದು ಜನಾಕರ್ಷಣೆಗೆ ಒಳಗಾಗಬೇಕು. ಮಹಿಳೆಯರೆಲ್ಲಾ ಸ್ವ–ಇಚ್ಛೆಯಿಂದ ಸ್ವಯಂ ಪ್ರೇರಿತರಾಗಿ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತಾಗಬೇಕು ಎಂದು ಮನವಿ ಮಾಡಿದರು.

ನಂತರ ವಿಜೇತರಿಗೆ ಬಹುಮಾನ ಹಾಗೂ ಸ್ಪರ್ಧಿಸಿದ ಎಲ್ಲಾ ಸ್ಪರ್ಧಾಳುಗಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಮಾಣ ಪತ್ರ ವಿತರಿಸಿದರು. ಈ ವೇಳೆ ಸೆಂಟ್ ಮೈಕಲ್ ಪದವಿ ಪೂರ್ವ ಕಾಲೇಜಿನ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಸಾಜೀಯಾ ಸುಲ್ತಾನ್, ಎನ್.ಎಸ್. ಮಹರ್ಷಿ ಪಬ್ಲಿಕ್ ಶಾಲೆಯ ಭವಾನಿ ಶಂಕರ್, ಚಾಮುಂಡಿಬೆಟ್ಟದ ಶ್ರೀ ಮಹಾಬಲಾದ್ರಿ ವಿವಿಧೋದ್ದೇಶ ಸಹಕಾರ ಸಂಘದ ನಿರ್ದೇಶಕರಾದ ಮಂಜುಳಾ ಸೋಮಣ್ಣ, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕರಾದ ಗಿರೀಶ್, ಮುತ್ತಣ್ಣ, NIE ಕಾಲೇಜು ಪ್ರಾಧ್ಯಾಪಕ ಹಾಗೂ ಸಮಥ್ವಂ ಫೌಂಡೇಶನ್ ಅಧ್ಯಕ್ಷರಾದ ಡಾ.ವನಮಾಲ ಸಿ.ಕೆ, ರೂಪದರ್ಶಿ, ಶೋಭರಾಣಿ, ನಗರ ಪಾಲಿಕೆ ಸದಸ್ಯರಾದ ಪ್ರಮೀಳಾ ಭರತ್, ಶ್ರೀ ದುರ್ಗಾ ಫೌಂಡೇಶನ್ ಅಧ್ಯಕ್ಷರಾದ ರೇಖಾ ಶ್ರೀನಿವಾಸ್, ಮೇಕ್ ಸೊಸೈಟಿ ಸ್ಟೈಲ್ ಫೌಂಡೇಶನ್ ಅಧ್ಯಕ್ಷರಾದ ರಂಜಿತಾ ಸುಬ್ರಹ್ಮಣ್ಯ, ಸೀಮಾ ಸೆರಾವ್, ಶಿವಮೊಗ್ಗ ಬ್ಯೂಟಿಷಿಯನ್ ಅಸೋಸಿಯೇಷನ್ ಅಧ್ಯಕ್ಷೆ ಅಶ್ವಿನಿ ಪಿ.ಗೌಡ ಇನ್ನಿತರರು ಭಾಗವಹಿಸಿದ್ದರು.

ನ.22 ರಂದು ಶ್ರೀ ಸುತ್ತೂರು ಕ್ಷೇತ್ರದಲ್ಲಿ ಸಾಮೂಹಿಕ ವಿವಾಹ

ಸುತ್ತೂರು, ಅ. 30– ನಂಜನಗೂಡು ತಾಲೂಕಿನ ಶ್ರೀ ಸುತ್ತೂರು ಕ್ಷೇತ್ರದಲ್ಲಿ ನ. 22 ರಂದು ಸಾಮೂಹಿಕ ವಿವಾಹ ಏರ್ಪಡಿಸಲಾಗಿದೆ. ವಿವಾಹದಲ್ಲಿ ಭಾಗವಹಿಸುವ ವರನಿಗೆ 21 ವರ್ಷ, ವಧುವಿಗೆ 18 ವರ್ಷ ಪೂರ್ಣಗೊಂಡಿರಬೇಕು. ಅರ್ಜಿ ನಮೂನೆಯಲ್ಲಿ ವರ ಮತ್ತು ವಧುವಿನ ಭಾವಚಿತ್ರಗಳನ್ನು ಲಗತ್ತಿಸಿರಬೇಕು. ಜಾತಿ ದೃಢೀಕರಣ ಪತ್ರ ವಧುವರರ ವಯಸ್ಸಿನ ಬಗ್ಗೆ ಶಾಲೆಯಿಂದ ಪಡೆದ ದಾಖಲಾತಿ ಪತ್ರ ಪಡೆದ ದೃಢೀಕರಣ ಪತ್ರ ಲಗತ್ತಿಸಿರಬೇಕು. ಬಾಲ್ಯವಿವಾಹಕ್ಕೆ ಅವಕಾಶವಿರುವುದಿಲ್ಲ. ಆಸಕ್ತರು 8 ದಿನಗಳ ಮುಂಚಿತವಾಗಿ ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಸುತ್ತೂರು ಇವರನ್ನು ನೇರವಾಗಿ ಅಥವಾ ದೂರವಾಣಿ: 08221–232217, 232033, 9741342222, 9449030588 ಸಂಪರ್ಕಿಸಲು ಕೋರಲಾಗಿದೆ.

ರಾಷ್ಟ್ರಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಗೌತಮ್ ಆಯ್ಕೆ



ಹೆಚ್.ಡಿ.ಕೋಟೆ, ಅ.30–ತಾಲೂಕಿನ ಬೀಚನಹಳ್ಳಿ ಗ್ರಾಮದ ನಿವಾಸಿ ಎಂ.ಕೆ. ಕೃಷ್ಣ ಅವರ ಮೊಮ್ಮಗ ಜಿ.ಗೌತಮ್ ರಾಷ್ಟ್ರಮಟ್ಟದ ಕ್ರಿಕೆಟ್ ಪಂದ್ಯಾವಳಿಗೆ ಆಯ್ಕೆಯಾಗಿದ್ದಾನೆ.

ಈತ ಮೈಸೂರಿನ ಕುವೆಂಪುನಗರದ ಕರ್ನಾಟಕ ಪಬ್ಲಿಕ್ ಶಾಲೆಯ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಉಡುಪಿಯ ಬ್ರಹ್ಮಾವರದಲ್ಲಿ ನಡೆದ ವಿಭಾಗ ಮಟ್ಟದ ಕ್ರಿಕೆಟ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದು ನಂತರ ಚಿಕ್ಕೋಡಿಯ ಮೂಡಲಗಿಯಲ್ಲಿ ನಡೆದ ರಾಜ್ಯ ಮಟ್ಟದ ಪಂದ್ಯಾವಳಿಯಲ್ಲಿ ಉತ್ತಮವಾಗಿ ಆಟವಾಡಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಬಿಜೆಪಿ ಸರ್ಕಾರವಿದ್ದಾಗ ವರುಣಕ್ಕೆ ಅನುದಾನ ಬಂದಿಲ್ಲ: ಡಾ.ಯತೀಂದ್ರ

ತಿ.ನರಸೀಪುರ, ಅ.30– ಬಿಜೆಪಿ ಸರ್ಕಾರ ಇದ್ದಂತಹ ಅವಧಿಯಲ್ಲಿ ವರುಣ ಕ್ಷೇತ್ರಕ್ಕೆ ಯಾವುದೇ ಅನುದಾನ ಬಂದಿಲ್ಲದಿರುವುದರಿಂದ ಸಮಸ್ಯೆಗಳು ಹೆಚ್ಚಾಗಿದ್ದು ಮುಖ್ಯಮಂತ್ರಿ ಸಿದ್ಧರಾಮಯ್ಯರವರ ಗಮನಕ್ಕೆ ತಂದು ಎಲ್ಲಾ ಸಮಸ್ಯೆಗಳನ್ನು ಹಂತ ಹಂತವಾಗಿ ಬಗೆಹರಿಸುವುದಾಗಿ ವರುಣ ಕ್ಷೇತ್ರದ ಮಾಜಿ ಶಾಸಕ ಹಾಗೂ ಆಶ್ರಯ ಸಮಿತಿ ಅಧ್ಯಕ್ಷ ಡಾ. ಯತೀಂದ್ರ ಸಿದ್ಧರಾಮಯ್ಯ ತಿಳಿಸಿದರು.

ವರುಣ ಕ್ಷೇತ್ರದ ರಂಗಸಮುದ್ರ ಹಿಟ್ಟುವಳ್ಳಿ, ಕುಪ್ಯ, ಭಟ್ಟಳ್ಳಿಹುಂಡಿ, ಬೊಮ್ಮನಾಯಕನಹಳ್ಳಿ, ಅಗಸ್ತ್ಯಾಪುರ, ತುಂಬಲ ಗ್ರಾಮಗಳಿಗೆ ಭೇಟಿ ನೀಡಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಕುಪ್ಯದಲ್ಲಿ ಮಾತನಾಡಿದ ಅವರು ಅಧಿಕಾರಿಗಳು ಕಂದಾಯ ಅದಾಲತ್, ಪಿಂಚಣಿ ಅದಾಲತ್, ಸ್ವತ್ತು ಅದಾಲತ್‌ಗಳನ್ನು ಪ್ರತಿ ಗ್ರಾಮಕ್ಕೆ ಬಂದು ಅರ್ಜಿಗಳನ್ನು ಸ್ವೀಕರಿಸಿ ಸಮಸ್ಯೆಯನ್ನು ಬಗೆಹರಿಸಬೇಕು.



ವಿಧವಾ ವೇತನ, ಮಾಸಾಶನ ಯಾರಿಗೆ ಬರುತ್ತಿಲ್ಲ ಅರ್ಜಿಕೊಡಿ, ಎಲ್ಲಾ ಕಡೆ ಗೃಹಲಕ್ಷ್ಮಿ ಯೋಜನೆ ಬಗ್ಗೆ ದೂರುಗಳು ಬರುತ್ತಿದ್ದು ಈ ಸಮಸ್ಯೆ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಬಗೆಹರಿಸುವುದಾಗಿ ತಿಳಿಸಿದರು.

ಕುಪ್ಯ ಗ್ರಾಮದ ಮುಖ್ಯರಸ್ತೆ ಹದಗೆಟ್ಟಿದ್ದು ಈಗಾಗಲೇ ಪಿಡಬ್ಲ್ಯೂಡಿ ಇಲಾಖೆಗೆ ಸೇರಿಸಲಾಗಿದೆ. ಬಸ್ ಸರಿಯಾಗಿ ಬರುತ್ತಿಲ್ಲ ಎಂದಾಗ ತಕ್ಷಣ ಕೆಎಸ್‌ಆರ್‌ಟಿಸಿ ಜಿಲ್ಲಾ ಅಧಿಕಾರಿ ಜೊತೆ ಫೋನಿನಲ್ಲಿ ಮಾತನಾಡಿ ಸಮಸ್ಯೆ ಬಗೆಹರಿಸಲು ತಿಳಿಸಿದರು. ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿ, ಸಿಬ್ಬಂದಿ ಇಲ್ಲ ಪದವಿ ಪೂರ್ವ ಕಾಲೇಜು ಬೇಕು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮಾಡಿಕೊಡಿ, ಜಮೀನಿಗೆ ಹೋಗುವ ರಸ್ತೆ ಅಭಿವೃದ್ಧಿಪಡಿಸಿ, ಕನಕ ಭವನಕ್ಕೆ ಅನುದಾನ ನೀಡಿ, ಹೊಸ ಬಡಾವಣೆಗೆ ಬೀದಿ ದೀಪ ಹಾಕಿಸಿ, ನಾಲೆಗೆ ಡಕ್‌ಗಳನ್ನು ನಿರ್ಮಿಸಿ ಕೊಡಿ ಎಂದು ಗ್ರಾಮಸ್ಥರು ಮನವಿ ಮಾಡಿದರು. ಈ ಎಲ್ಲಾ ಸಮಸ್ಯೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಪರಿಹರಿಸುವುದಾಗಿ ಡಾ. ಯತೀಂದ್ರ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷರಾದ ಯಶೋದಮ್ಮ, ರಾಮನಂಜಯ್ಯ, ಚಂದ್ರಮ್ಮ, ಮಾಜಿ ಅಧ್ಯಕ್ಷರಾದ ರಘು, ಕೆಂಪಯ್ಯನಹುಂಡಿ ಅರುಣ್, ಕುಪ್ಯ ಭಾಗ್ಯಮ್ಮ, ಗವಿಸಿದ್ದಯ್ಯ, ಶಿವರಾಂ, ತಹಶೀಲ್ದಾರ್ ಸುರೇಶಾಚಾರ್, ತಾಪಂ ಇಓ ಕೃಷ್ಣ ಬಿಇಓ ಶೋಭಾ, ಎಪಿಎಂಸಿ ಮಾಜಿ ಅಧ್ಯಕ್ಷ ಅನಿಲ್ ಕುಮಾರ್, ಜಿಪಂ ಮಾಜಿ ಸದಸ್ಯ ಕೆ.ಮಹದೇವ್, ಡೇರಿ ಅಧ್ಯಕ್ಷ ಪ್ರಭಾಕರ್, ತಾಲೂಕು ಕುರುಬರ ಸಂಘದ ಅಧ್ಯಕ್ಷ ಮನ್ನೆಹುಂಡಿ ಮಹೇಶ್, ಮಾಜಿ ಅಧ್ಯಕ್ಷ ಪ್ರಶಾಂತ್ ಬಾಬು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುದ್ದೇಗೌಡ, ಪುರಸಭಾ ಮಾಜಿ ಅಧ್ಯಕ್ಷರಾದ ಟಿ.ಎಂ.ನಂಜುಂಡಸ್ವಾಮಿ, ಎನ್.ಸೋಮು, ಸದಸ್ಯ ತುಂಬಲಾ ಪ್ರಕಾಶ್ ಮತ್ತಿತರರು ಇದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ



ಪದ್ಮ ಚಿತ್ರಮಂದಿರ	**(ದೂ: 2521923)**
ಲಿಯೋ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಘೋಸ್ಟ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಲಿಯೋ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಲಿಯೋ (ಕ)	2 ಪ್ರದರ್ಶನಗಳು
ಲಿಯೋ (ತ)	2 ಪ್ರದರ್ಶನಗಳು
ಗಾಯಿತ್ರಿ	
ಘೋಸ್ಟ್ (ಕ)	4 ಪ್ರದರ್ಶನಗಳು
ರಾಜಕಮಲ್	
ಭಗವಂತ್ ಕೇಸರಿ (ತೆ)	4 ಪ್ರದರ್ಶನಗಳು
ಸಂಗಂ	
ಟಗರುಪಲ್ಯ(ಕ)	4 ಪ್ರದರ್ಶನಗಳು
ಲಿಡೋ	
ಲಿಯೋ (ಕ)	2 ಪ್ರದರ್ಶನಗಳು
ಲಿಯೋ (ತ)	2 ಪ್ರದರ್ಶನಗಳು
ತಿಬ್ಬಾದೇವಿ	
ಲಿಯೋ(ತ)	4 ಪ್ರದರ್ಶನಗಳು
ಪ್ರಭಾ	
ರೋಣಿ (ಕ)	2 ಪ್ರದರ್ಶನಗಳು
ಇನಾಮ್‌ದಾರ್(ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಲಿಯೋ (ತ): ಬೆ.10ಕ್ಕೆ, ಸಂ.4ಕ್ಕೆ, ರಾ.10ಕ್ಕೆ, ಘೋಸ್ಟ್ (ಕ): ಮ.1.10ಕ್ಕೆ, ರಾ.7.10ಕ್ಕೆ.
ಸ್ಕ್ರೀನ್ 2	ದಸರಾ ಚಿತ್ರಗಳು: ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ಗಣಪತ್ (ಹಿಂ): ರಾ.10.20ಕ್ಕೆ.
ಸ್ಕ್ರೀನ್ 3	ಯಾರಿಯನ್ 2 (ಹಿಂ): ಬೆ.10.05ಕ್ಕೆ, ಗಣಪತ್ (ಹಿಂ): ಮ.1ಕ್ಕೆ, ಟೈಗರ್ ನಾಗೇಶ್ವರ್ ರಾವ್ (ತೆ): ಮ.3.35ಕ್ಕೆ, ರಾ.7ಕ್ಕೆ, ಭಗವಂತ್ ಕೇಸರಿ (ತೆ): ರಾ.10.25ಕ್ಕೆ.
ಸ್ಕ್ರೀನ್ 4	ಘೋಸ್ಟ್ (ಕ): ಬೆ.10.15ಕ್ಕೆ, ಸಂ.4.10ಕ್ಕೆ, ರಾ.10.10ಕ್ಕೆ, ಲಿಯೋ (ತ): ಮ.1ಕ್ಕೆ, ರಾ.7ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಲಿಯೋ (ತ): ಬೆ.9.35ಕ್ಕೆ, ಮ.3.55ಕ್ಕೆ, ಘೋಸ್ಟ್ (ಕ): ಮ.1ಕ್ಕೆ, ರಾ.7.20ಕ್ಕೆ, ಗಣಪತ್ (ಹಿಂ): ರಾ.10.15ಕ್ಕೆ.
ಸ್ಕ್ರೀನ್ 2	ಲಿಯೋ (ತ): ರಾ.10.20ಕ್ಕೆ.
ಸ್ಕ್ರೀನ್ 3	ಭಗವಂತ್ ಕೇಸರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ಟೈಗರ್ ನಾಗೇಶ್ವರ್ ರಾವ್ (ತೆ): ರಾ.10.10ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪರಿಶುದ್ಧಂ (ಕ): ಬೆ.10.30ಕ್ಕೆ, ಹನಿಮೂನ್ ಇನ್ ಬ್ಯಾಂಕಾಕ್(ಕ): ಮ.1.30ಕ್ಕೆ, ಧ್ವಂಧ್ವ (ಕ): ಸಂ.4.20ಕ್ಕೆ, ಬನ್ ಟೀ (ಕ): ಸಂ.6.45ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಜವಾನ್ (ಹಿಂ): ಸಂ.4.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ದಿ ನನ್ 2 (ಇಂ): ಸಂ.4.45ಕ್ಕೆ, ಜವಾನ್ (ಹಿಂ): ರಾ.7ಕ್ಕೆ.
ಸ್ಕ್ರೀನ್ 4	ಜವಾನ್ (ಹಿಂ): ಬೆ.10.30ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ಮ.1.45ಕ್ಕೆ, ಸಂ.4.45ಕ್ಕೆ, ದಿ ನನ್ 2 (ಇಂ): ರಾ.7.35ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಭಗವಂತ್ ಕೇಸರಿ (ತೆ): ಮ.1.05ಕ್ಕೆ, ಮ.3.20ಕ್ಕೆ, ರಾ.10.30ಕ್ಕೆ, ಗಣಪತ್ (ಹಿಂ): ಬೆ.9.20ಕ್ಕೆ, ಮ.12.20ಕ್ಕೆ, ಮ.3.20ಕ್ಕೆ, ಸಂ.6.45ಕ್ಕೆ, ರಾ.9.45ಕ್ಕೆ, ಘೋಸ್ಟ್ (ಕ): ಬೆ.9.30ಕ್ಕೆ, ಮ.12.25ಕ್ಕೆ, ಸಂ.4.30ಕ್ಕೆ, ರಾ.7.25ಕ್ಕೆ, ರಾ.10.20ಕ್ಕೆ, ಲಿಯೋ (ಕ): ಮ.12.15ಕ್ಕೆ, ಲಿಯೋ (ತ): ಬೆ.8.20ಕ್ಕೆ, ಮ.11.45ಕ್ಕೆ, ಮ.3.10ಕ್ಕೆ, ಸಂ.6.15ಕ್ಕೆ, ಸಂ.6.35ಕ್ಕೆ, ರಾ.10ಕ್ಕೆ, ಲಿಯೋ (ತ): ಬೆ.8.50ಕ್ಕೆ, ಮ.12.15ಕ್ಕೆ, ಮ.3.40ಕ್ಕೆ, ರಾ.7.05ಕ್ಕೆ, ರಾ.10.30ಕ್ಕೆ, ಟೈಗರ್ ನಾಗೇಶ್ವರ್ ರಾವ್ (ತೆ): ಬೆ.8.35ಕ್ಕೆ, ಮ.3.40ಕ್ಕೆ, ರಾ.9.40ಕ್ಕೆ, ಯಾರಿಯನ್ 2 (ಹಿಂ): ಬೆ.9.55ಕ್ಕೆ, ರಾ.7.20ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಶಾಲೆ ಪಕ್ಕ ತ್ಯಾಜ್ಯ ಸುರಿದು ಅನೈರ್ಮಲ್ಯ ನಿರ್ಮಾಣ



ಹುಣಸೂರು, ಅ.30–ನಗರದ ಹುಣಸೂರು–ಹೆಚ್.ಡಿ.ಕೋಟೆ ಮುಖ್ಯರಸ್ತೆಯ ಚಿಕ್ಕಹುಣಸೂರು ಬಡಾವಣೆಯ ಪ್ರೌಢಶಾಲೆ ಪಕ್ಕದ ಖಾಲಿ ನಿವೇಶನದಲ್ಲಿ ತ್ಯಾಜ್ಯ ಸುರಿದು ಅನೈರ್ಮಲ್ಯ ನಿರ್ಮಾಣ ಮಾಡಲಾಗುತ್ತಿದೆ.

ಈ ಶಾಲೆಯಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 220 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಶಾಲೆಯ ಪಶ್ಚಿಮ ಭಾಗದಲ್ಲಿ ಕೆರೆ ಇದೆ. ದಕ್ಷಿಣಕ್ಕೆ ಪಾರ್ಕ್ ನಿರ್ಮಾಣಕ್ಕೆ ಬಿಟ್ಟಿರುವ ಖಾಲಿ ಜಾಗವಿದೆ. ಪೂರ್ವಕ್ಕೆ ಮುಖ್ಯರಸ್ತೆ ಹಾಗೂ ಉತ್ತರಕ್ಕೆ ಹಳೇ ಚಿಕ್ಕಹುಣಸೂರಿಗೆ ಹೋಗುವ ರಸ್ತೆ ಇದೆ. ಆದರೆ, ಪಾರ್ಕ್ ನಿರ್ಮಾಣದ ಖಾಲಿ ನಿವೇಶನದಲ್ಲಿ ಎಂಸ್ಯಾಂಡ್, ಜೆಲ್ಲಿ ಹಾಗೂ ತ್ಯಾಜ್ಯವನ್ನು ಸುರಿಯಲಾಗುತ್ತಿದೆ.

ಬಡಾವಣೆಯ ಕೆಲವರು ಶಾಲೆಯ ಕಾಂಪೌಂಡ್ ಪಕ್ಕದಲ್ಲಿ ಕೊಟ್ಟಿಗೆಯ ಕಸ ಹಾಕುತ್ತಿದ್ದಾರೆ. ಆದರೆ, ನಗರ ಪಾಲಿಕೆ ಮತ್ತು ಗೋವಿಂದನಹಳ್ಳಿ ಗ್ರಾಮ ಪಂಚಾಯಿತಿಯ ನಿರ್ವಹಣೆಯ ಕೊರತೆ ಹಾಗೂ ಶಾಲೆಯ ಪಕ್ಕದ ಖಾಲಿ ಜಾಗದಲ್ಲಿ ಪಾರ್ಕ್ ನಿರ್ಮಿಸದೇ ಇರುವುದರಿಂದ ಅನೈರ್ಮಲ್ಯ ಸೃಷ್ಟಿಯಾಗುತ್ತಿದೆ.

ಶಾಲೆಯ ಗೋಡೆಗಳ ಮೇಲೆ ಪರಿಸರ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದ ಚಿತ್ರ ಬಿಡಿಸಲು ಬೆಂಗಳೂರಿನ ತಂಡವೊಂದು ಶಾಲೆಗೆ ಬಂದು ಪರಿಶೀಲಿಸಿದಾಗ ಕಾಂಪೌಂಡ್ ಸುತ್ತ ಕಸದ ರಾಶಿ, ಗಿಡಗಂಟಿ ಬೆಳೆದಿರುವುದರಿಂದ ಚಿತ್ರಕಲೆ ಮತ್ತು ಗೋಡೆ ಬರಹ ಸಾಧ್ಯವಿಲ್ಲ. ಮೊದಲು ನಿಮ್ಮ ಶಾಲಾ ಪರಿಸರವನ್ನು ಸ್ವಚ್ಛಗೊಳಿಸಿ ಎಂದು ಹೇಳಿ ಹೋಗಿದೆ.

ಆದ್ದರಿಂದ ಶಾಲಾ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸಿ ಹಾಗೂ ಕಸ ಸುರಿಯದಂತೆ ಎಚ್ಚರಿಕೆ ನೀಡುವಂತೆ ಮುಖ್ಯ ಶಿಕ್ಷಕ ಧನಂಜಯ, ಶಾಲಾ ಸಮಿತಿಯ ಅಧ್ಯಕ್ಷೆ ಶಕುಂತಲಾ ಮತ್ತು ಸದಸ್ಯರು ಇತ್ತೀಚೆಗೆ ನಗರ ಠಾಣೆ ಪೊಲೀಸ್ ಅಧಿಕಾರಿ ದೇವೆಂದ್ರ ಹಾಗೂ ನಗರಸಭೆಗೆ ಮನವಿ ಸಲ್ಲಿಸಿದ್ದಾರೆ.



ಹುಣಸೂರು ತಾಲೂಕಿನ ಗಾವಡಗೆರೆ ಹೋಬಳಿಯ ಹಿರಿಕ್ಯಾತನಹಳ್ಳಿ ಗ್ರಾಮದ ಹೈಸ್ಕೂಲ್ ಬಡಾವಣೆಯ ನಾಯಕ ಯುವಸೇನೆ ವತಿಯಿಂದ ವಾಲ್ಮೀಕಿ ಜಯಂತಿ ಆಚರಿಸಲಾಯಿತು. ಗ್ರಾಪಂ ಸದಸ್ಯ ಸುರೇಶ್, ಸೇನೆಯ ಯುವಕರು ಇದ್ದರು.

ಕೆ.ಎಸ್. ವೀಣಾಗೆ ಪಿಎಚ್.ಡಿ



ಮೈಸೂರು, ಅ. 30– ಡಾ. ವಾಸುದೇವಮೂರ್ತಿ ಅವರ ಮಾರ್ಗದರ್ಶನದಲ್ಲಿ ಕೆ.ಎಸ್. ವೀಣಾ ಅವರು ಸಾರ್ವಜನಿಕ ಜಾನಪದ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಅಕ್ರಮ ಗಣಿಗಾರಿಕೆ ತಕ್ಷಣ ಸ್ಥಗಿತಗೊಳಿಸಿ



ಬೆಟ್ಟದಪುರ, ಅ.30–ಪಿರಿಯಾಪಟ್ಟಣ ತಾಲೂಕಿನ ಮಂಟಿಬಿಳಗುಲಿ ಹಾಗೂ ದೇಪೂರ ಗ್ರಾಮದ ಬಳಿ ಅಕ್ರಮವಾಗಿ ನಡೆಯುತ್ತಿರುವ ಕಲ್ಲು ಗಣಿಗಾರಿಕೆಯನ್ನು ತಕ್ಷಣ ಸ್ಥಗಿತಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಪಶು ಸಂಗೋಪನೆ ಹಾಗೂ ರೇಷ್ಮೆ ಸಚಿವ ಕೆ.ವೆಂಕಟೇಶ್ ಸೂಚಿಸಿದರು.

ಸಮೀಪದ ಹಲಗನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಪುರ, ಸುರಗಹಳ್ಳಿ, ಹುಣಸೆಕೊಪ್ಪಲು, ರಾಜನಬಿಲಗುಲಿ, ಸುಬ್ಬಯ್ಯನಕೊಪ್ಪಲು, ಮೂಡಲಕೊಪ್ಪಲು ಗ್ರಾಮಗಳಲ್ಲಿ ಸೋಮವಾರ ನಡೆದ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರು ಸುತ್ತಮುತ್ತಲ ಪ್ರದೇಶಗಳಲ್ಲಿ ಅನಧಿಕೃತವಾಗಿ ಕಲ್ಲು ಗಣಿಗಾರಿಕೆ ಹೆಚ್ಚುತ್ತಿದೆ. ಇದನ್ನು ತಡೆಯಬೇಕು ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಕಂದಾಯ ಇಲಾಖೆ ಅಧಿಕಾರಿಗಳಿಗೆ ಸರ್ವೇ ಕಾರ್ಯ ನಡೆಸಲು ಅನುಮತಿ ನೀಡಲಾಗಿದೆ. ಅನಧಿಕೃತವಾಗಿ ನಡೆಸುತ್ತಿರುವ ಕಲ್ಲು ಗಣಿಗಾರಿಕೆಯನ್ನು ತಕ್ಷಣ ಸ್ಥಗಿತಗೊಳಿಸುವಂತೆ ತಿಳಿಸಿದರು.

ಹಲಗನಹಳ್ಳಿ ಗ್ರಾಮದಿಂದ ಹಾಸನ ಮತ್ತು ಮೈಸೂರಿಗೆ ನೇರವಾಗಿ ಬಸ್ ಸೌಕರ್ಯ ಒದಗಿಸಲು ಸಾರಿಗೆ ಸಂಸ್ಥೆ ಅಧಿಕಾರಿಗೆ ಸೂಚಿಸಿದರು. ಅಲ್ಲದೆ, ಗ್ರಾಮದಲ್ಲಿ ನೂತನವಾಗಿ ಹಲವಾರು ಬಡಾವಣೆಗಳು ನಿರ್ಮಾಣವಾಗಿದ್ದು, ಅವುಗಳಿಗೆ ಚರಂಡಿ ಮತ್ತು ಕಾಂಕ್ರೀಟ್ ರಸ್ತೆ ನಿರ್ಮಿಸಬೇಕು, ಗ್ರಾಮದ ಸಾರ್ವಜನಿಕ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಬೇಕು, ಅಂತೆಮಾಳದಲ್ಲಿ ವ್ಯಾಪಾರಿಗಳಿಗೆ ಶೆಡ್ ನಿರ್ಮಿಸಬೇಕು ಎಂದು ಗ್ರಾಮ ಪಂಚಾಯಿತಿ ಸದಸ್ಯ ಸೋಹಿಲ್ ಪಾಷಾ, ಮುಖಂಡರಾದ ಜಾವೇದ್ ಹಾಗೂ ಸೈಯದ್ ಸುಹೇಲ್ ಇದೇ ವೇಳೆ ಸಚಿವರಿಗೆ ಮನವಿ ಮಾಡಿದರು.

ಸಭೆಯಲ್ಲಿ ತಾಲೂಕು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ಬೆಟ್ಟದಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಹಮತ್ ಜಾನ್ ಬಾಬು, ಗ್ರಾಮ ಪಂಚಾಯಿತಿ ಅಧ್ಯಕ್ಷೆ ವೀಣಾ ವೆಂಕಟೇಶ್, ಉಪಾಧ್ಯಕ್ಷೆ ಮೀನಾಕ್ಷಿ, ಪಿಡಿಓ ರವಿ, ಜಾಮಿಯಾ ಮಸೀದಿ ಅಧ್ಯಕ್ಷ ನಫೀದ್ ಖಾನ್, ಕಾರ್ಯದರ್ಶಿ ಸೈಯದ್ ಸುಹೇಲ್, ಕಾರ್ಯದರ್ಶಿ ಶಫಿವುಲ್ಲಾ, ತಾಲೂಪಂ ಮಾಜಿ ಸದಸ್ಯ ಶಂಕರೇಗೌಡ, ತಹಶೀಲ್ದಾರ್ ಕುಂಞ ಅಹಮದ್, ಇಓ ಸುನಿಲ್ ಕುಮಾರ್, ಜಿಪಂ ಎಇಇ ಮಲ್ಲಿಕಾರ್ಜುನ್, ವಸತಿ ಇಲಾಖೆಯ ಸೋಮಶೇಖರ್, ಸಚಿವರ ಆಪ್ತ ಕಾರ್ಯದರ್ಶಿ ಮಹೇಂದ್ರ, ಸಾರಿಗೆ ಇಲಾಖೆಯ ದರ್ಶನ್ ಹಾಜರಿದ್ದರು.

ಕೆ.ಆರ್.ನಗರ ತಾಲೂಕು ಪತ್ರಕರ್ತರ ಸಂಘಕ್ಕೆ ವಿನಯ್ ಅಧ್ಯಕ್ಷ



ಕೆ.ಆರ್.ನಗರ, ಅ.30– ಕೆ.ಆರ್.ನಗರ ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ವಿನಯ್ ದೊಡ್ಡಕೊಪ್ಪಲು ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಭೇರ್ಯ ಮಹೇಶ್ ಆಯ್ಕೆಯಾದರು.

ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಕಚೇರಿಯಲ್ಲಿ ಶುಕ್ರವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ವಿನಯ್ ದೊಡ್ಡಕೊಪ್ಪಲು ಮತ್ತು ಪಂಡಿತ್ ನಾಟೀಕರ್ ತಲಾ 12 ಮತ ಪಡೆದರು ಹಾಗೂ ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಸ್ಪರ್ಧಿಸಿದ್ದ ಭೇರ್ಯ ಮಹೇಶ್ ಹಾಗೂ ಕೆ.ಶಂಕರ್ ತಲಾ 12 ಮತ ಪಡೆದಿದ್ದರು. ನಂತರ ಲಾಟರಿ ಮೂಲಕ ವಿನಯ್ ದೊಡ್ಡಕೊಪ್ಪಲು ಮತ್ತು ಭೇರ್ಯ ಮಹೇಶ್ ಆಯ್ಕೆಯಾದರು.

ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಸಿ.ಸಿ. ಮಹದೇವ್ 14 ಮತ ಪಡೆದು ಆಯ್ಕೆಯಾದರೆ, ಸಾಲಿಗ್ರಾಮ ಹರೀಶ್ 9 ಮತ ಪಡೆದು ಪರಾಭವಗೊಂಡರು. ಕಾರ್ಯದರ್ಶಿಯಾಗಿ ಆನಂದ್ ಹೊಸೂರು ಅವಿರೋಧವಾಗಿ ಆಯ್ಕೆಯಾದರು. ಖಜಾಂಚಿ ಸ್ಥಾನಕ್ಕೆ ನಾಗೇಗೌಡ 13 ಮತ ಪಡೆದು ಆಯ್ಕೆಯಾದರೆ, ಪ್ರತಿಸ್ಪರ್ಧಿ ಎ.ಚೈತನ್ಯಾ 11 ಮತ ಪಡೆದು ಪರಾಭವಗೊಂಡರು. ಕಾರ್ಯಕಾರಿ ಸಮಿತಿ ಸದಸ್ಯರಾಗಿ ಸ್ಪಿನ್ ಕೃಷ್ಣಮೂರ್ತಿ, ಚುಂಚನಕಟ್ಟೆ ಮಧು, ಡಿ.ಜಿ.ರೋಜಾ ಮಹೇಶ್, ಮಹಮದ್ ಸಬೀರ್ ಖಾನ್, ರಾಮಕೃಷ್ಣೇಗೌಡ, ಕೆ.ಆರ್. ಶ್ರೀನಿವಾಸ್, ಎಸ್.ಯೋಗಾನಂದ್ ಆಯ್ಕೆಯಾಗಿದ್ದಾರೆ. ಚುನಾವಣಾಧಿಕಾರಿಯಾಗಿ ಬನ್ನೂರು ರಾಜು ಕಾರ್ಯ ನಿರ್ವಹಿಸಿದರು. ಸಂಘದ ಜಿಲ್ಲಾಧ್ಯಕ್ಷ ಎಸ್.ಟಿ. ರವಿಕುಮಾರ್, ತಾಲೂಕು ನಿಕಟಪೂರ್ವ ಅಧ್ಯಕ್ಷ ವಿ.ಸಿ.ಶಿವರಾಮು, ಜಿಲ್ಲಾ ಸಂಘದ ನಾಗೇಶ್, ವಿಶ್ವಾಸ್ ಇದ್ದರು.

ತಿ.ನರಸೀಪುರದಲ್ಲಿ ಸವಿನೆನಪು ಕಾರ್ಯಕ್ರಮ



ತಿ.ನರಸೀಪುರ, ಅ.30–ಇತ್ತೀಚೆಗೆ ನಿಧನರಾದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಕೆ.ಎಚ್.ಮಹದೇವಯ್ಯ, ಮಹಿಳಾ ಉಪಾಧ್ಯಕ್ಷೆ ನಾಗರತ್ನಮ್ಮ ಹಾಗೂ ಖಜಾಂಚಿ ಸ್ವಾಮಿ ಅವರ ಸವಿನೆನಪು ಕಾರ್ಯಕ್ರಮವನ್ನು ವಿಶ್ವ ಹಿಂದೂ ಪರಿಷತ್ ಹಾಗೂ ಹಿರಿಯ ನಾಗರಿಕರ ವೇದಿಕೆ ವತಿಯಿಂದ ಪಟ್ಟಣದ ಮಾಡ್ರಹಳ್ಳಿಯ ಶ್ರೀ ಗುರು ಚನ್ನಮಲ್ಲಿಕಾರ್ಜುನ ಶಿಕ್ಷಣ ಸಂಸ್ಥೆಯಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕಸಾಪ ನಿಕಟಪೂರ್ವ ಅಧ್ಯಕ್ಷ ಎಂ.ರಾಜು, ಇವರು ತಾಲೂಕಿನ ಕನ್ನಡ ಸಾಹಿತ್ಯ ಪರಿಷತ್ ಬೆಳವಣಿಗೆಗೆ ತಮ್ಮದೆ ಕೊಡುಗೆ ನೀಡಿದ್ದರು. ಇವರ ನಿಧನದಿಂದ ಕಸಾಪಗೆ ತುಂಬಲಾರದ ನಷ್ಟ ಉಂಟಾಗಿದೆ ಎಂದರು.


ವಾಟಾಳು ಮಠದ ಶ್ರೀ ಡಾ.ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ ಬೃಹದಾಕಾರ ಬೆಳವಣಿಗೆಗೆ ನಮ್ಮನ್ನು ಅಗಲಿರುವ ಈ ಮೂವರ ಸೇವೆ ಅಪಾರವಾಗಿದೆ. ಇಂತಹವರ ಶ್ರದ್ಧಾಂಜಲಿ ಕಾರ್ಯಕ್ರಮ ನಡೆಯುತ್ತಿರುವುದು ಅವರ ಸೇವೆಗೆ ನೀಡಿದ ಗೌರವ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾಡ್ರಹಳ್ಳಿ ಮಠದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ಉಪನ್ಯಾಸಕ ಮೂಗೂರು ಕುಮಾರಸ್ವಾಮಿ, ವಿಶ್ವ ಹಿಂದೂ ಪರಿಷತ್ ಅಧ್ಯಕ್ಷ ಬನ್ನೂರು ನಾಗರಾಜು, ಕನ್ನಡ ಸಾಹಿತ್ಯ ಪರಿಷತ್‌ನ ಮಹದೇವ್ ಶೆಟ್ಟಿ, ಜಯಲಕ್ಷ್ಮೀ, ಮಹದೇವಮ್ಮ, ಜಾನಕಿ, ಗೋವಿಂದೇಗೌಡ, ಬನ್ನೂರು ಸಿದ್ದೇಗೌಡ, ಮಲ್ಲೇಶ್, ಕಿರುಗಸೂರು ಗ್ರಾಪಂ ಅಧ್ಯಕ್ಷ ಚಂದ್ರಮ್ಮ, ಮಡಿವಾಳರ ಸಂಘದ ಅಧ್ಯಕ್ಷ ನಾಗರಾಜು, ಹೇಮಂತ್ ಕುಮಾರ್, ವಿನಯ್ ಕುಮಾರ್, ವಕೀಲ ಜ್ಞಾನೇಂದ್ರ ಮೂರ್ತಿ, ಶರಣ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ತೋಂಟೇಶ್, ತ್ರಿವೇಣಿ ನಗರ ಮಹದೇವಮ್ಮ, ನಿಂಗರಾಜು, ನಾಗರಾಜು ಮತ್ತಿತರರು ಇದ್ದರು.



ಹೆಚ್.ಡಿ.ಕೋಟೆ ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಬೀಚನಹಳ್ಳಿ ಮಂಜುನಾಥ್ ಸರಗೂರಿನ ಪಡುವಲು ವಿರಕ್ತ ಮಠಕ್ಕೆ ಭೇಟಿ ನೀಡಿ, ಶ್ರೀ ಮಹದೇವಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು. ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಆರ್.ನಾಗರಾಮ್, ಪತ್ರಕರ್ತರಾದ ಕನ್ನಡ ಪ್ರಮೋದ್, ರವಿಕುಮಾರ್, ಚಂದ್ರು, ರಘುರಾಮ್ ಇದ್ದರು.

ಸಮಸ್ಯೆ ಪರಿಹರಿಸುವುದು ಜನಪ್ರತಿನಿಧಿಗಳ ಕರ್ತವ್ಯ



ನಂಜನಗೂಡು, ಅ.30–ಜನರ ಸಂಕಷ್ಟ ಆಲಿಸಿ, ಅವರ ಸಮಸ್ಯೆ ಪರಿಹರಿಸುವುದು ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ಕರ್ತವ್ಯವಾಗಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ಹೇಳಿದರು.

ನಗರದ ತಾಲೂಕು ಪಂಚಾಯಿತಿ ಕಟ್ಟಡದ ಶಾಸಕರ ಕಚೇರಿಯಲ್ಲಿ ಸೋಮವಾರ ಸಾರ್ವಜನಿಕರ ಕುಂದುಕೊರತೆ ಆಲಿಸಿ, ಅಹವಾಲು ಸ್ವೀಕರಿಸಿ ಮಾತನಾಡಿದ ಅವರು, ನಾನು ಶಾಸಕನಾಗಿ ಆಯ್ಕೆಯಾದ ನಂತರ ಇಡೀ ಕ್ಷೇತ್ರದ ಎಲ್ಲಾ ಗ್ರಾಮಗಳಿಗೂ ಭೇಟಿ ನೀಡಿ ಜನರ ಸಮಸ್ಯೆಗಳನ್ನು ನೇರವಾಗಿ ನೋಡಿದ್ದೇನೆ. ಯಾವ ಗ್ರಾಮಗಳಲ್ಲಿ ಯಾವ ಸಮಸ್ಯೆಗಳಿವೆ ಎಂಬುದರ ಬಗ್ಗೆ ನನಗೆ ಈಗಾಗಲೇ ಸಾಕಷ್ಟು ಅರಿವಿದೆ. ಜನರ ಸಮಸ್ಯೆಗಳನ್ನು ಪರಿಹರಿಸಿ, ಸವಲತ್ತುಗಳನ್ನು ಒದಗಿಸುವುದು ಜನಪ್ರತಿನಿಧಿಗಳ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಜನರು ಸರ್ಕಾರಿ ಕಚೇರಿಗಳಿಗೆ ಅಲೆಯಬೇಕಿಲ್ಲ. ಅಧಿಕಾರಿಗಳು ನೀವಿರುವ ಸ್ಥಳಕ್ಕೆ ಬಂದು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಂತಹ ಕೆಲಸ ಮಾಡುವಂತೆ ಸೂಚನೆ ನೀಡಿದ್ದೇನೆ. ಅಲ್ಲದೆ, ನಾನು ಸಹ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಮುಂದಿನ ನಾಲ್ಕು ವರ್ಷಗಳಲ್ಲಿ ಹೆಚ್ಚಿನ ಅನುದಾನ ತಂದು ಅಭಿವೃದ್ಧಿ ಕಾರ್ಯ ನಡೆಸುವ ಮೂಲಕ ಕ್ಷೇತ್ರದ ಜನರಿಗೆ ಅನುಕೂಲ ಕಲ್ಪಿಸುವುದಾಗಿ ಭರವಸೆ ನೀಡಿದರು.

ಕಾಂಗ್ರೆಸ್ ಚುನಾವಣೆ ಪೂರ್ವದಲ್ಲಿ ನೀಡಿದ್ದ ಎಲ್ಲಾ ಭರವಸೆಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆದ ಸರ್ಕಾರ ಎಂದು ಖ್ಯಾತಿಗಳಿಸಿದೆ. ತಾಲೂಕಿನಲ್ಲಿ ಮಳೆ ಕೊರತೆಯಿಂದ ಬೆಳೆ ಹಾನಿಯಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಶೀಘ್ರವಾಗಿ ಸರ್ಕಾರದಿಂದ ದೊರಕುವ ಪರಿಹಾರವನ್ನು ನೀಡಲಾಗುವುದು. ಜನರ ಅಹವಾಲು ಸ್ವೀಕರಿಸಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಪರಿಹಾರ ಒದಗಿಸುವಂತೆ ನಿರ್ದೇಶನ ನೀಡಿದ್ದೇನೆ ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕುರಹಟ್ಟಿ ಮಹೇಶ್, ಸಿ.ಎಂ. ಶಂಕರ್, ಮುಖಂಡರಾದ ನಾಗೇಶ್‌ರಾಜ್, ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ್, ಮತ್ತಿತರರು ಇದ್ದರು.

ಹುಣಸೂರಿನಲ್ಲಿ ಎಬಿವಿಪಿ ಪ್ರತಿಭಟನೆ



ಹುಣಸುರು, ಅ.30– ರಾಜ್ಯ ಸರ್ಕಾರ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೆ, ಶಿಕ್ಷಣದಿಂದ ವಂಚಿತರಾಗುವಂತೆ ಮಾಡುತ್ತಿದೆ ಎಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕಾರ್ಯಕರ್ತರು ನಗರದ ತಹಶೀಲ್ದಾರ್ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಕರ್ನಾಟಕ ಉತ್ತಮ ಶಿಕ್ಷಣ ವ್ಯವಸ್ಥೆ ಹಾಗೂ ವಿಶ್ವವಿದ್ಯಾಲಯಗಳಿಂದ ಹೆಸರುವಾಸಿಯಾಗಿದೆ. ಇದರಿಂದ ಹೊರ ರಾಜ್ಯದ ಸಾವಿರಾರು ವಿದ್ಯಾರ್ಥಿಗಳು ಕರ್ನಾಟಕಕ್ಕೆ ಶಿಕ್ಷಣ ಪಡೆಯಲು ಬರುತ್ತಾರೆ. ಆದರೆ, ಸರ್ಕಾರ ರಾಜ್ಯದ ಅದೆಷ್ಟೋ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು ರಾಜಕೀಯ ಮುಂದುವರಿಸಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಎಸ್‌ಎಸ್‌ಪಿ ತಂತ್ರಾಂಶದ ಮೂಲಕ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೃಷಿ, ಸಮಾಜ ಕಲ್ಯಾಣ ಇಲಾಖೆ, ತಾಂತ್ರಿಕ ಶಿಕ್ಷಣ ಇಲಾಖೆ ಹಾಗೂ ಇತರ ಇಲಾಖೆಯಡಿಯಲ್ಲಿ ಲಕ್ಷಾಂತರ ವಿದ್ಯಾರ್ಥಿಗಳು ಪದವಿ ಮತ್ತು ಸ್ನಾತಕೋತ್ತರ ಶಿಕ್ಷಣಕ್ಕಾಗಿ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಆದರೆ, ಸರ್ಕಾರ ಸಮಯಕ್ಕೆ ಸರಿಯಾಗಿ ವಿದ್ಯಾರ್ಥಿ ವೇತನ ನೀಡದೆ ವಿದ್ಯಾರ್ಥಿಗಳ ಶಿಕ್ಷಣವನ್ನು ಅತಂತ್ರ ಸ್ಥಿತಿಗೆ ತರುವ ಕೆಲಸ ಮಾಡುತ್ತಿದೆ ಎಂದು ದೂರಿದರು.

ಇದಕ್ಕೂ ಮುನ್ನ ನಗರದ ಜ್ಞಾನಧಾರ ಕಾಲೇಜಿನಿಂದ ಮೆರವಣಿಗೆಯಲ್ಲಿ ಸಾಗಿದ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಕಾರ್ಯಕರ್ತರು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ನಂತರ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಎಬಿವಿಪಿ ಜಿಲ್ಲಾ ಕಾರ್ಯ ಸಮಿತಿ ಸದಸ್ಯ ಶ್ರೀಕಂಠಮೂರ್ತಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಚಂದ್ರಶೇಖರ, ಕಾರ್ಯಕರ್ತರಾದ ವರುಣ್, ಸಾಗರ್, ರಕ್ಷಿತಾ, ಚಾಂದಿನಿ, ಮಧು, ಸೂರ್ಯ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ನೀರಾವರಿ ಪಂಪ್‌ಗಳಿಗೆ ಸೌರಶಕ್ತಿ ಒದಗಿಸುವ ಯೋಜನೆಗೆ ರಾಜ್ಯ ಸರ್ಕಾರದ ಚಾಲನೆ



ಬೆಂಗಳೂರು: ಲಕ್ಷಾಂತರ ಸಂಖ್ಯೆಯಲ್ಲಿರುವ ನೀರಾವರಿ ಪಂಪ್‌ಸೆಟ್‌ಗಳನ್ನು ಸೌರಶಕ್ತಿ ಚಾಲಿತ ಪಂಪ್‌ಸೆಟ್‌ಗಳನ್ನಾಗಿ ಪರಿವರ್ತಿಸುವ ಯೋಜನೆಗೆ ಕರ್ನಾಟಕ ಸರ್ಕಾರ ಚಾಲನೆ ನೀಡಿದೆ. ಪಂಪ್‌ಸೆಟ್‌ಗಳಿಗೆ ನೀಡಲಾಗುವ ವಿದ್ಯುತ್ ಸಬ್ಸಿಡಿಯ ಹೊರೆಯನ್ನು ತಗ್ಗಿಸಲು ಈ ಯೋಜನೆ ಸಹಕಾರಿಯಾಗಲಿದೆ.

ಸೌರಶಕ್ತೀಕರಣದ ಯೋಜನೆಯಡಿ, ನೀರಾವರಿ ಪಂಪ್‌ಗಳಿಗೆ ವಿದ್ಯುತ್ ಪೂರೈಕೆ ಮಾಡಲು ಸಬ್ ಸ್ಟೇಷನ್‌ಗಳ ಬಳಿ ಸೋಲಾರ್ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಜಾಗಗಳನ್ನು ಗುರುತಿಸಲು ಮುಂದಾಗಿದೆ.

ಇದಕ್ಕಾಗಿ ಕಂದಾಯ ಭೂಮಿಗಳನ್ನು ಪ್ರತಿ ಎಕರೆಗೆ 1 ರೂಪಾಯಿಯಂತೆ ಗುತ್ತಿಗೆ ಆಧಾರದ ಮೇಲೆ ಹಾಗೂ ಮಾರುಕಟ್ಟೆ ಬೆಲೆಯಲ್ಲಿ ಖಾಸಗಿ ಭೂಮಿಯನ್ನು ಪಡೆಯಲು ಸರ್ಕಾರ ಮುಂದಾಗಿದೆ. ಸರ್ಕಾರ ಎರಡು ಹಂತಗಳಲ್ಲಿ ಸೋಲಾರೈಸೇಶನ್ ನತ್ತ ಕೆಲಸ ಮಾಡುತ್ತಿದೆ. ಇದರಲ್ಲಿ ಮೊದಲನೆಯದ್ದಾಗಿ ಒಂದು ರೈತರ ಮಾಲಿಕತ್ವದ ನೀರಾವರಿ ಪಂಪ್ ಸೆಟ್ (ಐಪಿ) ಹಾಗೂ ಸಬ್ ಸ್ಟೇಷನ್‌ಗಳಾಗಿವೆ. ಈ ಯೋಜನೆಯಲ್ಲಿ, ಐಪಿ ಸೆಟ್‌ಗಳಿಗೆ ಶೇ.70–80 ರಷ್ಟು ವಿದ್ಯುತ್ ಪೂರೈಕೆ ಮಾಡುವ ಸಬ್ ಸ್ಟೇಷನ್‌ಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ರಾಜ್ಯದಲ್ಲಿ 34 ಲಕ್ಷ ಐಪಿ ಸೆಟ್‌ಗಳಿದ್ದು, ಇದಕ್ಕೆ ವಿದ್ಯುತ್ ಸಬ್ಸಿಡಿಗಾಗಿ ಸರ್ಕಾರ ವಾರ್ಷಿಕ 15,000 ಕೋಟಿ ರೂಪಾಯಿ ಖರ್ಚು ಮಾಡುತ್ತಿದೆ. ಈಗ ವಾರ್ಷಿಕ ಒಂದು ಲಕ್ಷ ಐಪಿ ಸೆಟ್‌ಗಳನ್ನು ಸೌರ ವಿದ್ಯುತ್ ವ್ಯಾಪ್ತಿಗೆ ತರುವ ಗುರಿ ಹೊಂದಲಾಗಿದೆ. ಈ ವರ್ಷ ಡಿಸೆಂಬರ್‌ನಿಂದ ಮಾರ್ಚ್‌ವರೆಗೆ 30,000 ಐಪಿ ಸೆಟ್‌ಗಳನ್ನು ಸೌರ ವಿದ್ಯುತ್ ವ್ಯಾಪ್ತಿಗೆ ತರುವ ಗುರಿ ಇದೆ. ಈ ಪ್ರಕ್ರಿಯೆಯನ್ನು ನಿರ್ವಹಿಸಿ, ನಿಗಾ ವಹಿಸುವುದಕ್ಕಾಗಿ ಮೀಸಲಾದ ಸಾಫ್ಟ್‌ವೇರ್‌ನ್ನು ಸೃಷ್ಟಿಸಲಾಗುತ್ತಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಸೌರ ವಿದ್ಯುತ್ ಉತ್ಪಾದನೆಯನ್ನು ವಿಕೇಂದ್ರೀಕರಿಸುವುದು ಮತ್ತು ಉಷ್ಣ ಸ್ಥಾವರಗಳ ಮೇಲಿನ ಅವಲಂಬನೆಯನ್ನು ಕಡಿತಗೊಳಿಸುವ ಮೂಲಕ ಒಟ್ಟಾರೆ ವಿದ್ಯುತ್ ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡುವುದು ಯೋಜನೆಯ ಎರಡನೇ ಗುರಿಯಾಗಿದೆ. ಈ ಪ್ರಯತ್ನದ ಭಾಗವಾಗಿ ಪಾವಗಡ ಸೋಲಾರ್ ಪಾರ್ಕ್‌ನತ್ತ ಗಮನ ಹರಿಸಲಾಗುತ್ತದೆ. ಪ್ರಸ್ತುತ ಶಾಖೋತ್ಪನ್ನ ವಿದ್ಯುತ್ ಉತ್ಪಾದನೆಗೆ ಪ್ರತಿ ಯೂನಿಟ್‌ಗೆ 5 ರೂ ವೆಚ್ಚವಾಗುತ್ತಿದೆ. ಆದರೆ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ (ಕೆಇಆರ್‌ಸಿ) ಪ್ರಕಾರ ಸೌರಶಕ್ತಿಯನ್ನು ಪ್ರತಿ ಯೂನಿಟ್ ಉತ್ಪಾದನೆಗೆ ಕೇವಲ 3.17 ರೂ. ಖರ್ಚಾಗಲಿದೆ. ಸ್ವಾಧೀನ ಪಡಿಸಿಕೊಳ್ಳಲು ಜಮೀನು ಗುರುತಿಸಲು ಜಿಲ್ಲಾ ಮಟ್ಟದಲ್ಲಿ ತಂಡಗಳನ್ನು ರಚಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಕಂದಾಯ ಭೂಮಿ ಅಕ್ರಮ ಸಕ್ರಮದಿಂದ ಮುಕ್ತವಾಗಿರಬೇಕು, ಫಲವತ್ತಾಗಿರಬಾರದು ಮತ್ತು ಗ್ರಿಡ್‌ನಿಂದ 500 ಮೀಟರ್ ಒಳಗೆ ಇರಬೇಕು ಎಂದು ಅವರು ತಿಳಿಸಿದ್ದಾರೆ.

ಕೆಎಸ್‌ಆರ್‌ಟಿಸಿ ನೌಕರರಿಗೆ ನೀಡುವ ಪರಿಹಾರ ಮೊತ್ತ ರೂ.3 ಲಕ್ಷದಿಂದ ರೂ.10 ಲಕ್ಷಕ್ಕೆ ಏರಿಕೆ



ಬೆಂಗಳೂರು: ಕೆಎಸ್‌ಆರ್‌ಟಿಸಿ ನೌಕರರಿಗೆ ನೀಡುವ ಕುಟುಂಬ ಕಲ್ಯಾಣ ಯೋಜನೆಯ ಪರಿಹಾರ ಮೊತ್ತವನ್ನು ರೂ. 3 ಲಕ್ಷದಿಂದ ರೂ. 10 ಲಕ್ಷಕ್ಕೆ ಏರಿಸಲಾಗಿದೆ. ಅಪಘಾತ ಹೊರತುಪಡಿಸಿ ಅನ್ಯ ಕಾರಣದಿಂದ ಸಿಬ್ಬಂದಿ ಮೃತಪಟ್ಟರೆ ಅವರ ಕುಟುಂಬಕ್ಕೆ ಈ ಪರಿಹಾರ ಸಿಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಪಘಾತದಲ್ಲಿ ಸಿಬ್ಬಂದಿ ಮೃತಪಟ್ಟರೆ ಅವರ ಕುಟುಂಬಸ್ಥರಿಗೆ ಅಪಘಾತ ವಿಮಾ ಪರಿಹಾರ ಯೋಜನೆಯಡಿ ರೂ. 1 ಕೋಟಿ ನೀಡುವ ಯೋಜನೆ ಈಗಾಗಲೇ ಜಾರಿಯಲ್ಲಿದೆ. ಅಪಘಾತ ಹೊರತುಪಡಿಸಿ ಇತರೆ ಕಾರಣಗಳಿಂದ ಅಂದರೆ ಕ್ಯಾನ್ಸರ್, ಪಾರ್ಶ್ವವಾಯು, ಹೃದಯಾಘಾತ, ಮೂತ್ರಪಿಂಡ ವೈಫಲ್ಯ ಸೇರಿದಂತೆ ಇತರೆ ಕಾಯಿಲೆಗಳಿಗೆ ತುತ್ತಾಗಿ ಸಾವಿಗೀಡಾದರೆ ಕಲ್ಯಾಣ ಯೋಜನೆಯ ಪರಿಹಾರ ಸಿಗಲಿದೆ.

ಯೋಜನೆಗೆ ನೌಕರರ ತಿಂಗಳ ವಂತಿಕೆ ರೂ. 100 ಅನ್ನು ರೂ. 200ಕ್ಕೆ ಹಾಗೂ ನಿಗಮದ ವತಿಯಿಂದ ಪ್ರತಿ ನೌಕರರ ಪರವಾಗಿ ನೀಡಲಾಗುತ್ತಿರುವ ರೂ. 50 ವಂತಿಕೆಯನ್ನು ರೂ. 100ಕ್ಕೆ ಹೆಚ್ಚಿಸಿ ಪರಿಷ್ಕರಿಸಲಾಗಿದೆ. ಪರಿಷ್ಕೃತ ಆದೇಶವು ನವೆಂಬರ್ 1ರಿಂದ ಜಾರಿಯಾಗಲಿದೆ ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸ ಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು